23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 340 | ನವದೆಹಲಿ | ಬೆಲೆ ₹10 | ಜೂನ್ 14 2026, ಭಾನುವಾರ

## ಒಳಪುಟಗಳಲ್ಲಿ

ಪ್ರಕೃತಿ ಸಮತೋಲನ ಸುಧಾರಿಸದಿದ್ದರೆ ಭವಿಷ್ಯದಲ್ಲಿ ಭಾರಿ ಸಮಸ್ಯೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಎಚ್ಚರಿಕೆ - ಪು.5

ತೈಲೋತ್ಪನ್ನಗಳ ಬೆಲೆ ಏರಿಕೆ ಖಂಡಿಸಿ ಜಿಲ್ಲಾ ಕಾಂಗ್ರೆಸ್ ಪ್ರತಿಭಟನೆ - ಪು.6

ಕೋವಿಡ್ ಲಸಿಕೆಯಿಂದಲೂ ಹೃದಯ ಸಂಬಂಧಿ ಕಾಯಿಲೆಗಳ ಹೆಚ್ಚಳ: ಡಾ. ಎ.ಗೌತಮ್ - ಪು.7

# ಪ್ರಧಾನಿ ಮೋದಿ 6 ದಿನಗಳ ಫ್ರಾನ್ಸ್, ಸ್ಲೋವಾಕಿಯಾ ಪ್ರವಾಸ ಆರಂಭ

**ನವದೆಹಲಿ, ಜೂ.13:** ಪ್ರಧಾನಿ ನರೇಂದ್ರ ಮೋದಿ ಅವರು 6 ದಿನಗಳ ಅಧಿಕೃತ ಭೇಟಿಗಾಗಿ ಫ್ರಾನ್ಸ್ ಮತ್ತು ಸ್ಲೋವಾಕಿಯಾ ದೇಶಗಳಿಗೆ ಶನಿವಾರ ಪ್ರಯಾಣ ಬೆಳೆಸಿದರು.

ಈ ಭೇಟಿಯ ವೇಳೆ ಮೋದಿ ಅವರು ಜಿ7 ಸಮ್ಮೇಳನದಲ್ಲಿ ಭಾಗವಹಿಸುವುದರ ಜೊತೆಗೆ ಹಲವು ದೇಶದ ನಾಯಕರ ಜೊತೆಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಇದೀಗ ಅವರು ಫ್ರಾನ್ಸ್‌ನ ನೈಸ್‌ನಗರ ತಲುಪಿದ್ದಾರೆ.

ಫ್ರಾನ್ಸ್‌ಗೆ ತೆರಳುವ ಮುನ್ನ, ಫ್ರಾನ್ಸ್ ಮತ್ತು ಭಾರತದ ಪಾಲುದಾರಿಕೆ ಬಗ್ಗೆ ವಿವರಿಸಿದರು.ಅಧ್ಯಕ್ಷ ಎಮ್ಮಾನ್ಯುವೆಲ್ ಮ್ಯಾಕ್ರಾನ್ ಜೊತೆಗೆ ನಡೆಯುವ ಮಾತುಕತೆ ಯಲ್ಲಿ ಎರಡು ದೇಶಗಳ ಪಾಲುದಾರಿಕೆ ಪ್ರಗತಿಯನ್ನು ಪರಿಶೀಲಿಸಲಾಗುವುದು ಇದರ ಜೊತೆಗೆ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದರು.

ಮೊದಲು ಜೂನ್ 14–15ರಂದು ಸ್ಲೋವಾಕಿಯಾ ಭೇಟಿ ಬಗ್ಗೆ ಮಾತನಾಡಿದ ಪ್ರಧಾನಿ ಮೋದಿ, ಸ್ಲೋವಾಕಿಯಾ ಸ್ವತಂತ್ರಗೊಂಡ ನಂತರ ಭೇಟಿ ನೀಡುತ್ತಿರುವ ಭಾರತದ ಮೊದಲ ಪ್ರಧಾನಮಂತ್ರಿಯಾಗಿದ್ದು ಅಲ್ಲಿ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಮತ್ತು ಪ್ರಧಾನಿ ರಾಬರ್ಟ್ ಫಿಕೊ ಅವರೊಂದಿಗೆ ಮಾತುಕತೆ ನಡೆಸುವುದರ ಜೊತೆಗೆ ಉದ್ಯಮಿಗಳನ್ನು ಭೇಟಿ ಮಾಡಲಾಗುವುದು, ಈ ಭೇಟಿಯನ್ನು ದ್ವಿಪಕ್ಷೀಯ ಸಂಬಂಧಗಳಲ್ಲಿ ಐತಿಹಾಸಿಕ ಮೈಲುಗಲ್ಲು ಎಂದು ವರ್ಣಿಸಿದ್ದಾರೆ.

ನಂತರ ಜೂನ್ 16–17ರಂದು ಫ್ರಾನ್ಸ್‌ನ ಎವಿಯನ್‌ನಲ್ಲಿ ನಡೆಯುವ ಜಿ7 ಸಮ್ಮೇಳನದಲ್ಲಿ ಪ್ರಧಾನಿ ಮೋದಿ ಭಾಗಿಯಾಗಲಿದ್ದಾರೆ. ಇದು ಭಾರತಕ್ಕೆ 8ನೇ ಆಹ್ವಾನವಾಗಿದೆ. ಈ ವೇಳೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜೊತೆ ಅವರು ಮಾತನಾಡುವ ಸಾಧ್ಯತೆ ಇದೆ. ಜಿ7ನಲ್ಲಿ ಭಾರತವು ತನ್ನ ವತಿಯಿಂದ ಮಾತ್ರ ಮಾತನಾಡುವುದಿಲ್ಲ, ಜಾಗತಿಕ ದಕ್ಷಿಣದ ಆಕಾಂಕ್ಷೆಗಳಿಗೂ ಧ್ವನಿ ನೀಡುತ್ತದೆ ಎಂದು ಪ್ರಧಾನಿ ಹೇಳಿದ್ದಾರೆ.

ಜೂನ್ 18ರಂದು ಪ್ಯಾರಿಸ್‌ನಲ್ಲಿ ಫ್ರಾನ್ಸ್ ಅಧ್ಯಕ್ಷರೊಂದಿಗೆ ವಿವಾಟೆಕ್‌ನಲ್ಲಿ ಮೋದಿ ಭಾಗಿಯಾಗಲಿದ್ದಾರೆ. ಇದರ ಜೊತೆಗೆ ಫ್ರಾನ್ಸ್‌ನಲ್ಲಿರುವ ಭಾರತೀಯ ಸಮುದಾಯ ದೊಂದಿಗೆ ಸಂವಾದ ನಡೆಸಲಿದ್ದಾರೆ. ನೈಸ್‌ನಲ್ಲಿ ಭಾರತ್ ಇನ್ನೋವೇಟ್ಸ್ ಕಾರ್ಯಕ್ರಮದಲ್ಲಿ ಭಾಗವಹಿಸುವರು.



### ಪ್ರವಾಸದ ಪ್ರಮುಖ ಉದ್ದೇಶ

2014ರ ನಂತರ ಪ್ರಧಾನಿ ಮೋದಿಯವರ 7ನೇ ಫ್ರಾನ್ಸ್ ಭೇಟಿ ಇದಾಗಿದೆ. ಈ ವರ್ಷದ ಜನವರಿಯಲ್ಲಿ ಸಹಿ ಹಾಕಲಾದ ಐತಿಹಾಸಿಕ ಭಾರತ–ಯುರೋಪಿಯನ್ ಯೂನಿಯನ್ ಮುಕ್ತ ವ್ಯಾಪಾರ ಒಪ್ಪಂದದ (India-EU FTA) ಬಳಿಕ ಅವರು ಯುರೋಪ್ ಖಂಡಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ಈ ವರ್ಷದ ಆರಂಭದಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಭಾರತಕ್ಕೆ ಭೇಟಿ ನೀಡಿದ್ದಾಗ, ಉಭಯ ದೇಶಗಳ ಬಾಂಧವ್ಯವನ್ನು 'ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆ'ಗೆ ಪ್ರವರ್ಧಮಾನಕ್ಕೆ ತರಲಾಗಿತ್ತು.

ಪ್ರಧಾನಿ ಮೋದಿ ಮತ್ತು ಅಧ್ಯಕ್ಷ ಮ್ಯಾಕ್ರಾನ್ ಅವರು ಜಂಟಿಯಾಗಿ ಯುರೋಪ್‌ನಲ್ಲಿ ಭಾರತದ ಹೆಮ್ಮೆಯ ಡೀಪ್–ಟೆಕ್ ಪ್ರದರ್ಶನವಾದ 'ಭಾರತ್ ಇನ್ನೋವೇಟ್ಸ್' ಉದ್ಘಾಟಿಸಲಿದ್ದಾರೆ.

ಭಾರತ–ಫ್ರಾನ್ಸ್ ನಾವೀನ್ಯತೆ ವರ್ಷದ ಅಂಗವಾಗಿ ನಡೆಯುತ್ತಿರುವ ಈ ಕಾರ್ಯಕ್ರಮದಲ್ಲಿ ಭಾರತದ 120ಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳು, ಜಾಗತಿಕ ಹೂಡಿಕೆದಾರರು ಮತ್ತು ತಂತ್ರಜ್ಞಾನ ಕ್ಷೇತ್ರದ ಮುಖಂಡರು ಭಾಗವಹಿಸಲಿದ್ದಾರೆ.

ಉಭಯ ನಾಯಕರ ನಡುವೆ ರಕ್ಷಣೆ, ಕೃತಕ ಬುದ್ಧಿಮತ್ತೆ, ಬಾಹ್ಯಾಕಾಶ, ವ್ಯಾಪಾರ, ಶಿಕ್ಷಣ ಮತ್ತು ಜಾಗತಿಕ ಸವಾಲುಗಳ ಕುರಿತು ಪ್ರಮುಖ ಚರ್ಚೆಗಳು ನಡೆಯಲಿವೆ.

ಈ ಭೇಟಿಯು ಭಾರತದ ಅತ್ಯಂತ ವಿಶ್ವಾಸಾರ್ಹ ಕಾರ್ಯತಂತ್ರದ ಪಾಲುದಾರಿಕೆಗೆ ಹೊಸ ವೇಗವನ್ನು ನೀಡಲಿದ್ದು, ಯುರೋಪ್ ಜೊತೆಗಿನ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ ಎಂದು ನಿರೀಕ್ಷಿಸಲಾಗಿದೆ

# ಜನರಲ್ ಧೀರಜ್ ಸೇಠ್ ನೂತನ ಸೇನಾ ಮುಖ್ಯಸ್ಥ

ನವದೆಹಲಿ, ಜೂ.13: ಪ್ರಸ್ತುತ ಸೇನಾ ಸಿಬ್ಬಂದಿ ಉಪ ಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿರುವ ಲೆಫ್ಟಿನೆಂಟ್ ಜನರಲ್ ಧೀರಜ್ ಸೇಠ್ ಅವರನ್ನು ಮುಂದಿನ ಸೇನಾ ಮುಖ್ಯಸ್ಥರನ್ನಾಗಿ ನೇಮಿಸಲಾಗಿದೆ. ಜೂನ್ 30 ರ ಮಧ್ಯಾಹ್ನ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಅದೇ ದಿನ ಸೇವೆಯಿಂದ ನಿವೃತ್ತರಾಗಲಿರುವ ಜನರಲ್ ಉಪೇಂದ್ರ ದ್ವಿವೇದಿ ಅವರ ಉತ್ತರಾಧಿಕಾರಿ ಆಗಲಿದ್ದಾರೆ.



ಜೂನ್ 30ರಂದು ಅಧಿಕಾರ ಸ್ವೀಕಾರ

ಭಾರತೀಯ ಸೇನೆಯಾದ್ಯಂತ ಹಲವಾರು ಪ್ರಮುಖ ಕಾರ್ಯಾಚರಣೆ, ಕಮಾಂಡ್ ಮತ್ತು ಕಾರ್ಯತಂತ್ರದ ನಿಯೋಜನೆಗಳನ್ನು ನಿರ್ವಹಿಸಿರುವ ಸಶಸ್ತ್ರಪಡೆಗಳ ಅಧಿಕಾರಿಯ ನಾಲ್ಕು ದಶಕಗಳ ವಿಶಿಷ್ಟ ಮಿಲಿಟರಿ ವೃತ್ತಿಜೀವನದ ಪರಾಕಾಷ್ಠೆಯನ್ನು ಈ ನೇಮಕಾತಿ ಸೂಚಿಸುತ್ತದೆ. ರಾಷ್ಟ್ರೀಯ ರಕ್ಷಣಾ ಅಕಾಡೆಮಿಯ ಹಳೆಯ ವಿದ್ಯಾರ್ಥಿ, ಲೆಫ್ಟಿನೆಂಟ್ ಜನರಲ್ ಸೇಥ್ ಅವರನ್ನು ಡಿಸೆಂಬರ್ 1986 ರಲ್ಲಿ ಆರ್ಮರ್ಡ್ ಕಾರ್ಪ್ಸ್‌ಗೆ ನಿಯೋಜಿಸಲಾಯಿತು. ಲೆಫ್ಟಿನೆಂಟ್ ಜನರಲ್ ಸೇಥ್ ಏಪ್ರಿಲ್ 1, 2026 ರಂದು ಸೇನಾ ಸಿಬ್ಬಂದಿಯ ಉಪ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡರು. ಅವರ ವಿಶಿಷ್ಟ ಸೇವೆಯನ್ನು ಗುರುತಿಸಿ ಅವರಿಗೆ ಪರಮ ವಿಶಿಷ್ಟ ಸೇವಾ ಪದಕ (ಪಿವಿಎಸ್‌ಎಂ), ಉತ್ತಮ ಯುದ್ಧ ಸೇವಾ ಪದಕ (ಯುವೈಎಸ್‌ಎಂ) ಮತ್ತು ಅತಿ ವಿಶಿಷ್ಟ ಸೇವಾ ಪದಕ (ಎವಿಎಸ್‌ಎಂ) ನೀಡಲಾಗಿದೆ. ಸೇನಾ ಮುಖ್ಯಸ್ಥರಾಗಿ ನೇಮಕಗೊಳ್ಳುವುದರೊಂದಿಗೆ, ಪ್ರಾದೇಶಿಕ ಮತ್ತು ಜಾಗತಿಕ ಭದ್ರತಾ ಸವಾಲುಗಳ ನಡುವೆ ಲೆಫ್ಟಿನೆಂಟ್ ಜನರಲ್ ಸೇಥ್ ಅವರು ಪರಿವರ್ತನೆ, ಆಧುನೀಕರಣ ಮತ್ತು ಸಾಮರ್ಥ್ಯ ವರ್ಧನೆಯ ನಿರಂತರ ಹಂತದ ಮೂಲಕ ಪಡೆಯನ್ನು ಮುನ್ನಡೆಸುವ ನಿರೀಕ್ಷೆಯಿದೆ.

# ಕೃಷಿಗೆ ರಸಗೊಬ್ಬರ, ಬಿತ್ತನೆಬೀಜ ಕೊರತೆಯಾಗದಂತೆ ಎಚ್ಚರವಹಿಸಿ

■ ಕುಡಿಯುವ ನೀರಿಗೆ ಅಭಾವ ಉಂಟಾಗದಂತೆ ನಿಗಾವಹಿಸಿ

■ ಅಧಿಕಾರಿಗಳ ಸಭೆಯಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಸೂಚನೆ

**ಬೆಂಗಳೂರು, ಜೂ.13:** ಕೃಷಿ ಚಟುವಟಿಕೆಗೆ ರಸಗೊಬ್ಬರ ಹಾಗೂ ಬಿತ್ತನೆ ಬೀಜದ ಕೊರತೆಯಾಗಬಾರದು, ಜಲಾಶಯಗಳಲ್ಲಿ ನೀರಿನ ಸಂಗ್ರಹವನ್ನು ಸಮರ್ಪಕವಾಗಿ ಕಾಯ್ದುಕೊಳ್ಳುವ ಮೂಲಕ ಕುಡಿಯುವ ನೀರಿಗೆ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು. ಶೈಕ್ಷಣಿಕ ಚಟುವಟಿಕೆಗಳ ವಿಚಾರದಲ್ಲಿ ನಿಗಾವಹಿಸಬೇಕೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ ನೀಡಿದ್ದಾರೆ.

ವಿಧಾನಸೌಧದ ಸಮೇಳನ ಸಭಾಂಗಣದಲ್ಲಿ ಶನಿವಾರ ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳು ಸೇರಿ ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿದ ಅವರು, ಆಡಳಿತ ಯಂತ್ರವನ್ನು ಮತ್ತಷ್ಟು ಚುರುಕುಗೊಳಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವಂತೆ ನಿರ್ದೇಶನ ನೀಡಿದ್ದಾರೆ. ಇತ್ತೀಚೆಗೆ ಸರ್ಕಾರದ ವಿವಿಧ ಇಲಾಖೆಗಳ ಅಪರ ಮುಖ್ಯಕಾರ್ಯದರ್ಶಿಗಳು, ಕಾರ್ಯದರ್ಶಿಗಳ ಜೊತೆ ಸಭೆ ನಡೆಸಿದ ಮುಖ್ಯಮಂತ್ರಿಯವರು ಹಲವು ರೀತಿಯ ಸೂಚನೆಗಳನ್ನು ನೀಡಿದ್ದರು. ಮುಂದುವರೆದು ಇಂದು ಜಿಲ್ಲಾ ಕೇಂದ್ರಗಳ ಮುಖ್ಯಸ್ಥರಾಗಿರುವ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳ ಜೊತೆ ಮಹತ್ವದ ಚರ್ಚೆ ನಡೆಸಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ಮುಂಗಾರು ಕೊರತೆಯ ಮುನ್ಸೂಚನೆ ಇದೆ. ಹವಾಮಾನ ವರದಿಗೆ ಅನುಗುಣವಾಗಿ ಕೃಷಿ ಬೆಳೆಗಳನ್ನು ಬೆಳೆಯಲು ಕೃಷಿಕರಿಗೆ ಮಾರ್ಗದರ್ಶನ ನೀಡಬೇಕು ಎಂದು ಸಲಹೆ ನೀಡಿದ್ದಾರೆ.ಕೈಗಾರಿಕೆಗಳಿಗೆ ಪೂರಕವಾದ ವಾತಾವರಣ ನಿರ್ಮಾಣವಾಗಬೇಕು. ಅನಗತ್ಯವಾಗಿ ನಿಯಮಗಳ ನೆಪ ಹೇಳಿ ತೊಂದರೆ ಕೊಡಬಾರದು, ಭೂ ಪರಿವರ್ತನೆ, ಮಂಜೂರಾತಿ ಸೇರಿದಂತೆ ಹಲವಾರು ವಿಚಾರಗಳಲ್ಲಿ ವಿಳಂಬ ಸರಿಯಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು.

ಅನರ್ಹರನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದ ಮುಖ್ಯಮಂತ್ರಿಯವರು, ರಸ್ತೆ ಸುಧಾರಣೆ, ಮೂಲ ಸೌಲಭ್ಯಗಳ ಸೃಷ್ಟಿ, ಮಳೆ ಅನಾಹುತಗಳ ಮುನ್ನೆಚ್ಚರಿಕೆ ಸೇರಿದಂತೆ ಹಲವಾರು ವಿಚಾರಗಳಲ್ಲಿ ಕಾಳಜಿವಹಿಸುವಂತೆ ಆದೇಶಿಸಿದ್ದಾರೆ.

ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವರಾದ ಪ್ರಿಯಾಂಕ್ ಖರ್ಗೆ, ಕೃಷ್ಣಭೈರೇಗೌಡ, ಯು.ಟಿ.ಖಾದರ್ ಸೇರಿ ಹಲವರು ಸಭೆಯಲ್ಲಿ ಭಾಗವಹಿಸಿದ್ದರು.



### ಜನಪರ ಆಡಳಿತ ಎಂಬುದನ್ನು ಖಚಿತಪಡಿಸಿ

ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮೂಲಕ ಆಡಳಿತ ಜನಪರವಾಗಿದೆ ಎಂಬುದನ್ನು ಖಚಿತಪಡಿಸಬೇಕು. ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಜೊತೆಗೆ ಸಮಸ್ಯೆಗಳಿಗೂ ತ್ವರಿತವಾಗಿ ಸ್ಪಂದಿಸುವಂತೆ ಸೂಚಿಸಿದ್ದಾರೆ.ರಸ ಗೊಬ್ಬರದ ಪೂರೈಕೆಯಲ್ಲಿ ವ್ಯತ್ಯಯವಾಗಿದೆ. ಕೆಲವು ಕಡೆ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಪರಿಸ್ಥಿತಿಯನ್ನು ಜಿಲ್ಲಾಡಳಿತ ಸೂಕ್ಷ್ಮವಾಗಿ ನಿಭಾಯಿಸಬೇಕು. ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಬೇಕೆಂದು ಡಿ.ಕೆ. ಶಿವಕುಮಾರ್ ಸಲಹೆ ನೀಡಿದ್ದಾರೆ.

# ಪ್ರಶ್ನೆಪತ್ರಿಕೆ ಸೋರಿಕೆ, ನಿರುದ್ಯೋಗ ಖಂಡಿಸಿ ದೇಶವ್ಯಾಪಿ ಅಭಿಯಾನ

**ನವದೆಹಲಿ, ಜೂ. 13:** ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳು ಹಾಗೂ ನಿರುದ್ಯೋಗ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಕೇಂದ್ರದ ನರೇಂದ್ರ ಮೋದಿ ಸರ್ಕಾರದ ವಿರುದ್ಧ ದೇಶವ್ಯಾಪಿ ಬೃಹತ್ ಅಭಿಯಾನವನ್ನು ಹಮ್ಮಿಕೊಳ್ಳಲು ಕಾಂಗ್ರೆಸ್ ಪಕ್ಷ ನಿರ್ಧರಿಸಿದೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಈ ಹೋರಾಟ ನಡೆಯಲಿದ್ದು, ಯುವಜನರಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ಧ್ವನಿಯೆತ್ತಲು ಮುಂಬರುವ ಒಂದು ತಿಂಗಳ ಅವಧಿಯಲ್ಲಿ ದೇಶದ ವಿವಿಧೆಡೆ ನಾಲ್ಕು ಬೃಹತ್ ವಿದ್ಯಾರ್ಥಿ ಸಮಾವೇಶಗಳನ್ನು ಆಯೋಜಿಸಲು ಯೋಜನೆ ರೂಪಿಸಲಾಗಿದೆ.

ದೇಶದ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರವಾಗಿರುವ ರಾಜಸ್ಥಾನದ ಕೋಟಾದಲ್ಲಿ ಜೂನ್ 17ರಂದು ಮೊದಲ ವಿದ್ಯಾರ್ಥಿ ಸಮಾವೇಶ ನಡೆಯಲಿದೆ. ತದನಂತರ, ಜುಲೈ 10ರಂದು ಅಲಹಾಬಾದ್, ಜುಲೈ 11ರಂದು ಪಟನಾ ಹಾಗೂ ಜುಲೈ 14ರಂದು ನವದೆಹಲಿಯಲ್ಲಿ ಸಮಾವೇಶಗಳನ್ನು ಆಯೋಜಿಸಲಾಗಿದೆ. ಎನ್.ಎಸ್.ಯು.ಐ, ಯುವ ಕಾಂಗ್ರೆಸ್ ಹಾಗೂ ಪಕ್ಷದ ರಾಜ್ಯ ಮತ್ತು ಜಿಲ್ಲಾ ಘಟಕಗಳ ಮೂಲಕ ವಿದ್ಯಾರ್ಥಿಗಳು ಮತ್ತು ಯುವಜನರನ್ನು ಈ ಹೋರಾಟದಲ್ಲಿ ಒಗ್ಗೂಡಿಸಲು ಕಾಂಗ್ರೆಸ್ ಭರ್ಜರಿ ಸಿದ್ಧತೆ ನಡೆಸಿದೆ.

ಈ ಅಭಿಯಾನದ ಮೂಲಕ ರಾಹುಲ್ ಗಾಂಧಿಯವರು ವಿದ್ಯಾರ್ಥಿಗಳ ಪರವಾದ ಪ್ರಮುಖ ಬೇಡಿಕೆಗಳನ್ನು ಕೇಂದ್ರ ಸರ್ಕಾರದ ಮುಂದಿಡಲಿದ್ದಾರೆ. ನೀಟ್ ಪರೀಕ್ಷೆಯ ವಿಕೇಂದ್ರೀಕರಣ, ಪರೀಕ್ಷಾ ಶುಲ್ಕ ರದ್ದತಿ, ಪ್ರಶ್ನೆಪತ್ರಿಕೆ ಸೋರಿಕೆ ಜಾಲದಲ್ಲಿ ಭಾಗಿಯಾದವರ ವಿರುದ್ಧ ಕಠಿಣ ಕ್ರಮ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಸೇರಿದಂತೆ ಸರ್ಕಾರದ ಉನ್ನತಮಟ್ಟದಲ್ಲಿ ಹೊಣೆಗಾರಿಕೆ ನಿಗದಿಪಡಿಸಬೇಕು ಎಂದು ಕಾಂಗ್ರೆಸ್ ಈ ವೇಳೆ ತೀವ್ರವಾಗಿ ಆಗ್ರಹಿಸಲಿದೆ.

ಜೂನ್ 11ರಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷತೆಯಲ್ಲಿ ಹಾಗೂ ರಾಹುಲ್ ಗಾಂಧಿ ಉಪಸ್ಥಿತಿಯಲ್ಲಿ ನಡೆದ ಪಕ್ಷದ ಪ್ರಧಾನ ಕಾರ್ಯದರ್ಶಿಗಳು, ಉಸ್ತುವಾರಿಗಳು ಮತ್ತು ರಾಜ್ಯಾಧ್ಯಕ್ಷರ ಸಭೆಯಲ್ಲಿ ಈ ದೇಶವ್ಯಾಪಿ ಹೋರಾಟದ ನಿರ್ಧಾರವನ್ನು ಕೈಗೊಳ್ಳಲಾಗಿದೆ.

ಈ ಕುರಿತು ಮಾಹಿತಿ ನೀಡಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್, ದೇಶದ ಯುವಜನರ ಭವಿಷ್ಯದ ಜೊತೆ ಕೇಂದ್ರ ಸರ್ಕಾರ ಪದೇ ಪದೇ ಚೆಲ್ಲಾಟವಾಡುತ್ತಿದೆ. ಯುವಜನರು ಎದುರಿಸುತ್ತಿರುವ ಬಿಕ್ಕಟ್ಟಿನ ಬಗ್ಗೆ ಸಂಸತ್ತಿನಲ್ಲೂ ಸಮಗ್ರ ಚರ್ಚೆಗೆ ಪಟ್ಟು ಹಿಡಿಯಲಾಗುವುದು ಹಾಗೂ ವಿದ್ಯಾರ್ಥಿಗಳ ಭವಿಷ್ಯ ಮತ್ತು ಹಕ್ಕುಗಳ ರಕ್ಷಣೆಗೆ ಶಾಸನಾತ್ಮಕ ಕ್ರಮಗಳನ್ನು ಕೈಗೊಳ್ಳುವಂತೆ ಒತ್ತಾಯಿಸಲಾಗುವುದು ಎಂದು ತಿಳಿಸಿದ್ದಾರೆ.


### ಯುವಜನತೆಗೆ ಆಗುತ್ತಿರುವ ಅನ್ಯಾಯದ ವಿರುದ್ಧ ರಾಹುಲ್ ಗಾಂಧಿ ನೇತೃತ್ವದಲ್ಲಿ ಹೋರಾಟ



# ನೀಟ್–ಯುಜಿ ಮರುಪರೀಕ್ಷೆ ವೇಳಾಪಟ್ಟಿ ಪ್ರಕಟ

**ನವದೆಹಲಿ, ಜೂ.13:** ನೀಟ್ ಯುಜಿ 2026ರ ಮರು ಪರೀಕ್ಷೆಯು ಜೂನ್ 21 ರಂದು ನಡೆಯಲಿದ್ದು ಇದಕ್ಕೂ ಮೊದಲು ಅಭ್ಯರ್ಥಿಗಳಿಗೆ ಪರೀಕ್ಷಾ ದಿನದ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದೆ.

ಪರೀಕ್ಷಾ ಕೇಂದ್ರಗಳಲ್ಲಿ ಪ್ರವೇಶ ಮತ್ತು ಭದ್ರತಾ ತಪಾಸಣೆ ಬೆಳಗ್ಗೆ 11:00 ಗಂಟೆಗೆ ಪ್ರಾರಂಭವಾಗಲಿದ್ದು, ಮಧ್ಯಾಹ್ನ 1:30 ರ ನಂತರ ಯಾವುದೇ ಅಭ್ಯರ್ಥಿಗಳನ್ನು ಪರೀಕ್ಷಾ ಕೇಂದ್ರಕ್ಕೆ ಪ್ರವೇಶಿಸಲು ಅನುಮತಿಸಲಾಗುವುದಿಲ್ಲ ಎಂದು ಸಂಸ್ಥೆ ತಿಳಿಸಿದೆ. ಎಲ್ಲ ಅಭ್ಯರ್ಥಿಗಳು ಸಮಯಕ್ಕೆ ಸರಿಯಾಗಿ ಕೇಂದ್ರವನ್ನು ತಲುಪಲು ಮತ್ತು ಪ್ರವೇಶ ಪತ್ರದಲ್ಲಿ ಸೂಚಿಸಲಾದ ಇತರೆ ಸಮಯವನ್ನು ಪಾಲಿಸಲು **NTA** ಸೂಚಿಸಿದೆ. NTA ಬಿಡುಗಡೆ ಮಾಡಿದ ಮಾಹಿತಿ ಪ್ರಕಾರ, ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳ ಪ್ರವೇಶ ಮತ್ತು ತಪಾಸಣೆ ಬೆಳಗ್ಗೆ 11:00 ಗಂಟೆಗೆ ಪ್ರಾರಂಭವಾಗುತ್ತವೆ. ಪರೀಕ್ಷಾ ದಿನದಂದು ಹೆಚ್ಚಿನ ಸಂಖ್ಯೆಯ ಅಭ್ಯರ್ಥಿಗಳು ಆಗಮಿಸುವುದರಿಂದ, ಸ್ಕ್ರೀನಿಂಗ್ ಪ್ರಕ್ರಿಯೆಗೆ ಸಮಯ ತೆಗೆದುಕೊಳ್ಳಬಹುದು. ಕೊನೆಯ ನಿಮಿಷದವರೆಗೆ ಕಾಯುವ ಬದಲು ಅಭ್ಯರ್ಥಿಗಳು ಬೇಗನೇ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಲು ಸೂಚಿಸಲಾಗಿದೆ.




ಪರೀಕ್ಷಾ ಕೇಂದ್ರದ ದ್ವಾರಗಳನ್ನು ಮಧ್ಯಾಹ್ನ 1:30 ಕ್ಕೆ ಮುಚ್ಚಲಾಗುತ್ತದೆ. ಇದಾದ ನಂತರ, ಯಾವುದೇ ಅಭ್ಯರ್ಥಿಗಳನ್ನು ಕೇಂದ್ರದೊಳಗೆ ಪ್ರವೇಶಿಸಲು ಅನುಮತಿಸಲಾಗುವುದಿಲ್ಲ. ಅಭ್ಯರ್ಥಿಗಳು ಮಧ್ಯಾಹ್ನ 1:40 ರೊಳಗೆ ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಬೇಕು. ಇದಾದ ನಂತರ, ಅವರು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.

ಈ ನಿಯಮವು ಎಲ್ಲಾ ಅಭ್ಯರ್ಥಿಗಳಿಗೂ ಸಮಾನವಾಗಿ ಅನ್ವಯಿಸುತ್ತದೆ. ಆದ್ದರಿಂದ ಟ್ರಾಫಿಕ್, ಹವಾಮಾನ ಅಥವಾ ಇತರ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಅಭ್ಯರ್ಥಿಗಳು ತಮ್ಮ ಪ್ರಯಾಣವನ್ನು ಮುಂಚಿತವಾಗಿ ಯೋಜಿಸಲು ಸೂಚಿಸಲಾಗಿದೆ.

# ಎಚ್‌ಎಂಟಿಗೆ ಮರುಜೀವ ನೀಡುವ ಯೋಜನೆ ಅಂತಿಮ ಹಂತದಲ್ಲಿ: ಎಚ್.ಡಿ. ಕುಮಾರಸ್ವಾಮಿ

**ಬೆಂಗಳೂರು, ಜೂ.13:** ಸಂಕಷ್ಟದಲ್ಲಿರುವ ಹಿಂದೂಸ್ತಾನ್ ಮಷಿನ್ ಟೂಲ್ಸ್ (ಎಚ್‌ಎಂಟಿ)ಗೆ ಕಾಯಕಲ್ಪ ನೀಡುವ ಯೋಜನೆ ಅಂತಿಮ ಹಂತದಲ್ಲಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.

ಬೆಂಗಳೂರಿನ ಕೇಂದ್ರೀಯ ಕೈಗಾರಿಕಾ ಸಂಸ್ಥೆ (ಇಎಂಟಿಐ) 65ನೇ ಸಂಸ್ಥಾಪನ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಉತ್ಪಾದನೆ ಆಧರಿತ ಕೈಗಾರಿಕೆಗಳಿಗೆ ಉತ್ತೇಜನ ನೀಡುವ ಪ್ರಧಾನಿ ನರೇಂದ್ರ ಮೋದಿಯವರು ದೂರದೃಷ್ಟಿ ಹೊಂದಿದ್ದಾರೆ. ಈ ಹಿನ್ನೆಲೆಯಲ್ಲಿ ಎಚ್‌ಎಂಟಿ ಕಂಪನಿಗೆ ಮರುಜೀವ ನೀಡುವ ಯೋಜನೆ ಅಂತಿಮ ಅಂತದಲ್ಲಿ ಇದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಉತ್ಪಾದನೆ ಆಧಾರಿತ ಬೆಳವಣಿಗೆ ಮತ್ತು ಉದ್ಯೋಗ ಸೃಷ್ಟಿಸುವ ಕೈಗಾರಿಕೆಗಳಿಗೆ ಕೇಂದ್ರ ಸರ್ಕಾರ ಅಭೂತಪೂರ್ವ ಒತ್ತು ನೀಡಿದೆ ಎಂದರು.

### ಉತ್ಪಾದನೆ ಆಧಾರಿತ ಬೆಳವಣಿಗೆ, ಉದ್ಯೋಗ ಸೃಷ್ಟಿಸುವ ಕೈಗಾರಿಕೆಗಳಿಗೆ ಕೇಂದ್ರ ಸರ್ಕಾರ ಆದ್ಯತೆ




ಮೋದಿ ಸರ್ಕಾರ ಉತ್ಪಾದನೆ ಮತ್ತು ಸಂಶೋಧನಾ ಪರಿಸರ ವ್ಯವಸ್ಥೆಗಳನ್ನು ಬಲಪಡಿಸುವತ್ತ ಸರ್ಕಾರ ಗಮನಹರಿಸಿದೆ. ಈ ಪ್ರಯತ್ನಗಳು ಕೈಗಾರಿಕಾ ಬೆಳವಣಿಗೆಯನ್ನು ವೇಗಗೊಳಿಸಿವೆ ಮತ್ತು ವಿವಿಧ ಕ್ಷೇತ್ರಗಳಲ್ಲಿ ದೊಡ್ಡ ಪ್ರಮಾಣದ ಉದ್ಯೋಗಾವಕಾಶಗಳನ್ನು ಸೃಷ್ಟಿಸಿವೆ ಎಂದು ಅವರು ಹೇಳಿದರು.

ಎಂಜಿನಿಯರಿಂಗ್ ಮತ್ತು ಡಿಪ್ಲೊಮಾ ಪದವೀಧರರಿಗೆ ಉದ್ಯೋಗಾವಕಾಶಗಳ ಬಗ್ಗೆ ಕಳವಳವಿರುವ ಸಮಯದಲ್ಲಿ, ತಾಂತ್ರಿಕವಾಗಿ ಅರ್ಹ ಯುವಕರಿಗೆ ಉತ್ತಮ ಗುಣಮಟ್ಟದ, ಕೌಶಲ್ಯ ಆಧಾರಿತ ಉದ್ಯೋಗವನ್ನು ಉತ್ಪಾದಿಸುವ ದೃಢವಾದ ಪರಿಸರ ವ್ಯವಸ್ಥೆಯನ್ನು ರಚಿಸಲು ಸರ್ಕಾರ ಕೆಲಸ ಮಾಡಿದೆ ಎಂದು ಮಾಹಿತಿ ನೀಡಿದರು.ಕೇಂದ್ರ ಉತ್ಪಾದನಾ ತಂತ್ರಜ್ಞಾನ ಸಂಸ್ಥೆಯನ್ನು ಭಾರತದ ಅತ್ಯಂತ ವಿಶಿಷ್ಟ ಕೈಗಾರಿಕಾ ಸಂಶೋಧನಾ ಸಂಸ್ಥೆಗಳಲ್ಲಿ ಒಂದೆಂದು ಬಣ್ಣಿಸಿದ ಕುಮಾರಸ್ವಾಮಿ, ಏರೋಸ್ಪೇಸ್ ಮತ್ತು ರಕ್ಷಣಾ ಸೇರಿದಂತೆ ಹಲವಾರು ಕ್ಷೇತ್ರಗಳಿಗೆ ಸುಧಾರಿತ ತಂತ್ರಜ್ಞಾನಗಳು ಮತ್ತು ಉಪಕರಣಗಳನ್ನು ಅಭಿವೃದ್ಧಿಪಡಿಸುವ ಮೂಲಕ ಸಂಸ್ಥೆ ಕೊಡುಗೆ ನೀಡುತ್ತಿದೆ ಎಂದು ಹೇಳಿದರು.

ಬೆಂಗಳೂರು ಸೇರಿದಂತೆ ಭಾರತದ ವಿವಿಧ ಭಾಗಗಳಲ್ಲಿ ಕಾರ್ಯಾಚರಣೆ ಮಾಡುತ್ತಿರುವ ಎಚ್‌ಎಂಟಿಯ ಎಲ್ಲ ಘಟಕಗಳನ್ನೂ ಪುನರುಜ್ಜೀವನಗೊಳಿಸುವ ಉದ್ದೇಶವನ್ನು ಕೇಂದ್ರ ಸರಕಾರ ಹೊಂದಿದೆ.

ಕಳೆದ 2 ವರ್ಷಗಳಿಂದ ಎಚ್‌ಎಂಟಿ ಕಂಪನಿಗೆ ಕಾಯಕಲ್ಪ ನೀಡುವ ಉದ್ದೇಶದಿಂದ ಸರ್ಕಾರ ಕೆಲಸ ಮಾಡುತ್ತಿದೆ.ನೀತಿ ಆಯೋಗದ ಸದಸ್ಯರಾದ ಡಾ. ವಿ. ಕೆ. ಸಾರಸ್ವತ ಅವರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಿ ವರದಿ ಪಡೆದುಕೊಳ್ಳಲಾಗಿದೆ. ಸಮಿತಿಯು ಮೌಲಿಕವಾದ ಅನೇಕ ಶಿಫಾರಸುಗಳನ್ನು ಮಾಡಿದೆ. ಆ ಆಧಾರದ ಮೇಲೆ ಕಂಪೆನಿಯನ್ನು ಮೇಲೆತ್ತುವ ಯೋಜನೆ ಹಾಕಿಕೊಳ್ಳಲಾಗಿದೆ ಎಂದು ಕುಮಾರಸ್ವಾಮಿ ತಿಳಿಸಿದರು.

## ನಿತ್ಯ ಪಂಚಾಂಗ 14.06.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಬಹುಳ, ಚತುರ್ದಶಿ,
ರೋಹಿಣಿ ನಕ್ಷತ್ರ,
ವಿಶ್ವ ರಕ್ತದಾನಿಗಳ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# 10 ಗಂಟೆಗೆ ಕಚೇರಿಯಲ್ಲಿ ಹಾಜರಾತಿ ಕಡ್ಡಾಯ: ಸಿಎಂ ಸೂಚನೆ



**ಬೆಂಗಳೂರು, ಜೂ.13:** ಎಲ್ಲ ಇಲಾಖೆಗಳ ಅಧಿಕಾರಿಗಳು ಪ್ರತಿದಿನ 10 ಗಂಟೆಗೆ ಕರ್ತವ್ಯಕ್ಕೆ ಹಾಜರಾಗಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಖಡಕ್ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಅಧೀಕ್ಷಕರು, ಜಿಪಂ ಸಿಇಒಗಳ ಜೊತೆಗೆ ಸಭೆ ನಡೆಸಿದ ಸಿಎಂ ನಂತರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ರಾಜ್ಯದ ಜನರು ನಮ್ಮ ಮೇಲೆ ಬಹಳ ನಿರೀಕ್ಷೆ ಇಟ್ಟಿದ್ದಾರೆ. ಕಚೇರಿ ಬರುವ ಸಾರ್ವಜನಿಕರಿಗೆ ಅಧಿಕಾರಿಗಳು ಸ್ಪಂದಿಸಬೇಕು. ಎಲ್ಲ ಇಲಾಖೆ ಅಧಿಕಾರಿಗಳು ಬೆಳಗ್ಗೆ 10 ಗಂಟೆಗೆ ಕಚೇರಿಗೆ ಹಾಜರಾಗಬೇಕು.

ಹಾಜರಾದ ಕೂಡಲೇ ಮೆಸೇಜ್ ಕಳಿಸಬೇಕು. ತಾಲೂಕು ಮಟ್ಟದಲ್ಲೂ ಅಧಿಕಾರಿಗಳ ಹಾಜರಾತಿ ಬಗ್ಗೆ ಮಾಹಿತಿ ನೀಡುವಂತೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಮತ ಉಳಿಸಿಕೊಳ್ಳಲು ಅರ್ಜಿ ಭರ್ತಿ ಮಾಡಿ

ರಾಜ್ಯದಲ್ಲಿ ಎಸ್‌ಐಆರ್ ಪ್ರಾರಂಭವಾಗುತ್ತಿದೆ. ಮತ ಉಳಿಸಿಕೊಳ್ಳಬೇಕಾದರೆ ಅರ್ಜಿ ಫಾರಂ ತುಂಬಬೇಕು. ಅರ್ಜಿ ಫಾರಂ ತುಂಬಿದರೆ ಮಾತ್ರ ಮತ ಉಳಿಯುತ್ತದೆ. ಮೂರು ಸಲ ಬಿಎಲ್‌ಒಗಳು ನಿಮ್ಮ ಮನೆಗೆ ಬರುತ್ತಾರೆ. ಎಲ್ಲಾ ದಾಖಲೆಗಳನ್ನು ನೀಡಿ ಅರ್ಜಿ ತುಂಬಿ ಪ್ರತಿಯೊಬ್ಬ ಮತದಾರರು ಮತಗಳನ್ನು ಉಳಿಸಿಕೊಳ್ಳಲಿ. ಮತದಾನದ ಹಕ್ಕು ಕಳೆದುಕೊಂಡರೆ ಸರ್ಕಾರಿ ಸೌಲಭ್ಯಗಳು ಸಿಗುವುದಿಲ್ಲ. ಸರ್ಕಾರಿ ಸೌಲಭ್ಯಗಳು ಸಿಗುವುದು ಕಷ್ಟವಾಗುತ್ತದೆ ಎಂದು ಸಿಎಂ ಹೇಳಿದ್ದಾರೆ.

**ಗೃಹಲಕ್ಷ್ಮೀ, ಗೃಹಜ್ಯೋತಿ ನಿಲ್ಲಲ್ಲ, ಮತ್ತೆ ಅರ್ಜಿ ಸಲ್ಲಿಸಿ**

ಗೃಹಲಕ್ಷ್ಮಿ ಯೋಜನೆಯನ್ನು ನಿಲ್ಲಿಸಲ್ಲ. ಯೋಜನೆಗೆ ಮತ್ತೆ ಅರ್ಜಿಯನ್ನು ಸಲ್ಲಿಸಬೇಕು. ಗೃಹಜ್ಯೋತಿಗೂ ಕೂಡ ಮತ್ತೆ ಅರ್ಜಿ ಸಲ್ಲಿಸಬೇಕು. ಯೋಜನೆಯ ಸೌಲಭ್ಯ ಅರ್ಹರಿಗೆ ತಲುಪಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

# ಬಿಜೆಪಿ ತೊರೆದಿದ್ದು ಅಣ್ಣಾಮಲೈ ವೈಯಕ್ತಿಕ ನಿರ್ಧಾರ

## ಬಿಜೆಪಿಗೆ ದೇಶದ ಹಿತದೃಷ್ಟಿ ಮುಖ್ಯ: ರಾಧಾಮೋಹನ್‌ದಾಸ್ ಅಗರ್‌ವಾಲ್



ಬೆಂಗಳೂರು, ಜೂ.13: ಬಿಜೆಪಿ ಒಂದು ದೊಡ್ಡ ರಾಷ್ಟ್ರೀಯ ಪಕ್ಷ. ನಾವು ದೇಶದ ಭವಿಷ್ಯವನ್ನು ದೃಷ್ಟಿಯಲ್ಲಿಟ್ಟುಕೊಂಡು ರಾಜಕೀಯವಾಗಿ ಮುನ್ನಡೆಯುತ್ತಿದ್ದೇವೆ. ಅಣ್ಣಾಮಲೈ ಪಕ್ಷ ತೊರೆದಿರುವುದು ಅವರ ವೈಯಕ್ತಿಕ ನಿರ್ಧಾರವಾಗಿದೆ ಎಂದು ಬಿಜೆಪಿ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಅಗರವಾಲ್ ಹೇಳಿದ್ದಾರೆ. ದಕ್ಷಿಣ ಕನ್ನಡ ಪ್ರವಾಸದಲ್ಲಿರುವ ಅವರು ಪ್ರಸಕ್ತ ರಾಜಕೀಯ ಬೆಳವಣಿಗೆಗಳ ಕುರಿತು ಶನಿವಾರ ಮಹತ್ವದ ಹೇಳಿಕೆಗಳನ್ನು ನೀಡಿರುವ ಅವರು, ಮಂಡ್ಯದ ಮಾಜಿ ಸಂಸದೆ ಸುಮಲತಾ ಅಂಬರೀಶ್ ಅವರ ರಾಜಕೀಯ ಭವಿಷ್ಯದ ಬಗ್ಗೆಯೂ ಅಗರವಾಲ್ ಮಾತನಾಡಿದ್ದಾರೆ. ಸುಮಲತಾ ಅವರು ಸದ್ಯದಲ್ಲೇ ಬಿಜೆಪಿಯ ಅಧಿಕೃತ ಸದಸ್ಯತ್ವ ಪಡೆದುಕೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ಮಂಡ್ಯ ಕ್ಷೇತ್ರವನ್ನು ಮೈತ್ರಿ ಪಕ್ಷವಾದ ಜೆಡಿಎಸ್‌ಗೆ ಬಿಟ್ಟುಕೊಟ್ಟ ಹಿನ್ನೆಲೆಯಲ್ಲಿ ಅವರಿಗೆ ಸೂಕ್ತ ಸ್ಥಾನಮಾನ ಸಿಗಲಿಲ್ಲ ಎಂಬ ಚರ್ಚೆ ಇತ್ತು. ಆದರೆ ಮುಂಬರುವ ದಿನಗಳಲ್ಲಿ ಅವರಿಗೆ ಪಕ್ಷದಲ್ಲಿ ಅತ್ಯುನ್ನತ ಹಾಗೂ ಗೌರವಾನ್ವಿತ ಜವಾಬ್ದಾರಿ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ.

ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಕುರಿತು ಪಕ್ಷದ ರಾಷ್ಟ್ರೀಯ ಅಧ್ಯಕ್ಷರು ನಿರ್ಧಾರ ಕೈಗೊಳ್ಳಲಿದ್ದಾರೆ. ಕರ್ನಾಟಕದ ಪ್ರಸ್ತುತ ರಾಜಕೀಯ ಸ್ಥಿತಿಗತಿಗಳ ಬಗ್ಗೆ ಪಕ್ಷದ ಹೈಕಮಾಂಡ್‌ಗೆ ಸಂಪೂರ್ಣ ಮಾಹಿತಿ ಇದೆ. ವಿಜಯೇಂದ್ರ ಒಳ್ಳೆಯ ಕೆಲಸಗಳು ಹಾಗೂ ಅವರ ಕಾರ್ಯವೈಖರಿಯ ಬಗ್ಗೆಯೂ ವರಿಷ್ಠರಿಗೆ ತಿಳಿದಿದೆ. ಜೊತೆಗೆ ಮುಂಬರುವ ವಿಧಾನಸಭಾ ಚುನಾವಣೆಯ ದೃಷ್ಟಿಯಿಂದ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಮುಂದುವರಿಯುವ ಕುರಿತು ಸುಳಿವು ನೀಡಿದ್ದಾರೆ. 2028ರ ಕರ್ನಾಟಕ ಚುನಾವಣೆಯನ್ನು ಜೆಡಿಎಸ್ ಜೊತೆಗೂಡಿ ಎದುರಿಸುವ ಸಾಧ್ಯತೆಗಳಿದ್ದು, ಈ ಮೈತ್ರಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸಲು ಸಹಕಾರಿಯಾಗಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ.

# ಪರಿಷತ್ ಚುನಾವಣೆ ಶಾಸಕರಿಗೆ ಕಾಂಗ್ರೆಸ್‌ನಿಂದ ಗಾಳ ಹಾಕುವ ಆತಂಕ



## ಶಾಸಕರನ್ನು ಹಿಡಿದಿಟ್ಟುಕೊಳ್ಳಲು ರೆಸಾರ್ಟ್‌ಗೆ ಸ್ಥಳಾಂತರ ಮಾಡಲು ಜೆಡಿಎಸ್ ನಿರ್ಧಾರ

**ಬೆಂಗಳೂರು, ಜೂ.13:** ರಾಜ್ಯ ವಿಧಾನ ಪರಿಷತ್ ಚುನಾವಣೆಗೆ ದಿನಾಂಕ ಸಮೀಪಿಸುತ್ತಿದ್ದಂತೆ ರಾಜಕೀಯ ವಲಯದಲ್ಲಿ ಮತ್ತೆ ಕುದುರೆ ವ್ಯಾಪಾರದ ಭೀತಿ ತೀವ್ರಗೊಂಡಿದೆ. ಕಾಂಗ್ರೆಸ್ ಆಪರೇಷನ್ ಹಸ್ತ ನಡೆಸಬಹುದು ಎಂಬ ಆತಂಕದ ನಡುವೆ ಜೆಡಿಎಸ್ ತನ್ನ ಶಾಸಕರನ್ನು ಹಿಡಿದಿಟ್ಟುಕೊಳ್ಳಲು ರೆಸಾರ್ಟ್ ರಾಜಕಾರಣದ ಮೊರೆ ಹೋಗಲು ಸಜ್ಜಾಗಿದೆ. ಜೂ. 18ರಂದು ಚುನಾವಣೆ ನಡೆಯಲಿದ್ದು, ಅದಕ್ಕೂ ಎರಡು ದಿನ ಮುಂಚಿತವಾಗಿ, ಜೂ. 16ರಂದೇ ದಳಪತಿಗಳು ತಮ್ಮ ಶಾಸಕರನ್ನು ಸುರಕ್ಷಿತವಾಗಿ ರೆಸಾರ್ಟ್ ಅಥವಾ ಹೋಟೆಲ್‌ಗಳಿಗೆ ಶಿಫ್ಟ್ ಮಾಡಲು ಗಂಭೀರ ತೀರ್ಮಾನ ಕೈಗೊಂಡಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಸದ್ಯದ ಸಂಖ್ಯಾಬಲದ ಲೆಕ್ಕಾಚಾರದ ಪ್ರಕಾರ, ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್‌ನ 5ನೇ ಅಭ್ಯರ್ಥಿಯ ಸುಲಭ ಗೆಲುವಿಗೆ ಕೇವಲ 2 ಮತಗಳ ಕೊರತೆಯಿದೆ. ಈ ಕೊರತೆಯನ್ನು ನೀಗಿಸಲು ಕಾಂಗ್ರೆಸ್ ನಾಯಕರು ಪ್ರತಿಪಕ್ಷಗಳ ಶಾಸಕರಿಗೆ ಗಾಳ ಹಾಕುವ ಸಾಧ್ಯತೆಯಿದೆ ಎಂಬುದು ಜೆಡಿಎಸ್‌ನ ಆರೋಪವಾಗಿದೆ. ಹೀಗಾಗಿ ಯಾವುದೇ ರಿಸ್ಕ್ ತೆಗೆದುಕೊಳ್ಳಲು ಸಿದ್ಧವಿಲ್ಲದ ಜೆಡಿಎಸ್, ಈಗಿನಿಂದಲೇ ತನ್ನ ಶಾಸಕರಿಗೆ ಬಿಗಿ ಕಾವಲು ಹಾಕಲು ಮುಂದಾಗಿದೆ.

ಕಾಂಗ್ರೆಸ್‌ನ ಈ ತಂತ್ರಕ್ಕೆ ಪ್ರತಿತಂತ್ರ ಹೂಡಲು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ನೇತತ್ವದಲ್ಲೇ ಜೆಡಿಎಸ್ ಶಾಸಕರನ್ನು ಒಟ್ಟಾಗಿ ರೆಸಾರ್ಟ್‌ಗೆ ಕರೆದೊಯ್ಯಲು ನಿರ್ಧರಿಸಲಾಗಿದೆ.

# ದೇಶದ ಆರ್ಥಿಕತೆ ಸದೃಢ: ಪ್ರತಿಪಕ್ಷಗಳ ಅಪಪ್ರಚಾರಕ್ಕೆ ನಿರ್ಮಲಾ ಸೀತಾರಾಮನ್ ಕಿಡಿ

## ಸರ್ಕಾರದ ಸಾಧನೆ, ಅಧಿಕೃತ ದಾಖಲೆಗಳನ್ನು ಜನರ ಮುಂದಿಡುವ ಬಿಜೆಪಿ ಕಾಯಕರ್ತರಿಗೆ ಕರೆ

**ಉಡುಪಿ, ಜೂ.13:** ದೇಶದ ಆರ್ಥಿಕ ವ್ಯವಸ್ಥೆ ಸದೃಢವಾಗಿದ್ದು, ಯಾವುದೇ ಸಂಕಷ್ಟ ಅಥವಾ ಅಪಾಯ ಇಲ್ಲ. ಆದರೆ ವಿರೋಧ ಪಕ್ಷಗಳು ಸಾಮಾಜಿಕ ಜಾಲತಾಣಗಳ ಮೂಲಕ ಸರ್ಕಾರದ ವಿರುದ್ಧ ಅಪಪ್ರಚಾರ ನಡೆಸುತ್ತಿವೆ.

ಬಿಜೆಪಿ ಕಾರ್ಯಕರ್ತರು ಸರ್ಕಾರದ ಸಾಧನೆಗಳು ಹಾಗೂ ಅಧಿಕೃತ ದಾಖಲೆಗಳನ್ನು ಜನರ ಮುಂದಿಡುವ ಮೂಲಕ ವಾಸ್ತವಾಂಶಗಳನ್ನು ತಲುಪಿಸುವ ಕೆಲಸ ಮಾಡಬೇಕು ಎಂದು ಕೇಂದ್ರ ಹಣಕಾಸು ಸಚಿವೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

ಉಡುಪಿ ಜಿಲ್ಲಾ ಬಿಜೆಪಿ ವತಿಯಿಂದ ಉಚ್ಚಿಲ ಶ್ರೀ ಮಹಾಲಕ್ಷ್ಮಿ ದೇವಸ್ಥಾನದ ಸಭಾಭವನದಲ್ಲಿ ಶನಿವಾರ ಆಯೋಜಿಸಿದ್ದ 'ಬಿಜೆಪಿ ಜಿಲ್ಲಾ ಪ್ರಶಿಕ್ಷಣ ವರ್ಗ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ದೇಶದ ಆರ್ಥಿಕ ಬೆಳವಣಿಗೆ, ಅಭಿವೃದ್ಧಿ ಯೋಜನೆಗಳು ಹಾಗೂ ಕೇಂದ್ರ ಸರ್ಕಾರದ ವಿವಿಧ ಜನಪರ ಕಾರ್ಯಕ್ರಮಗಳ ಕುರಿತು ಕಾರ್ಯಕರ್ತರು ಜನರಿಗೆ ಮಾಹಿತಿ ನೀಡಬೇಕು.

ಸಾಮಾಜಿಕ ಜಾಲತಾಣಗಳಲ್ಲಿ ಹರಡುವ ಸುಳ್ಳು ಮಾಹಿತಿಗಳಿಗೆ ವಾಸ್ತವಾಂಶಗಳ ಮೂಲಕ ಉತ್ತರ ನೀಡುವ ಅಗತ್ಯವಿದೆ ಎಂದು ತಿಳಿಸಿದರು.

ಉಡುಪಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಕುತ್ಯಾರು ನವೀನ್ ಶೆಟ್ಟಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಉಡುಪಿ– ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ, ಶಾಸಕರಾದ ಸುನಿಲ್ ಕುಮಾರ್, ಯಶಪಾಲ್ ಸುವರ್ಣ, ಗುರ್ಮೆ ಸುರೇಶ್ ಶೆಟ್ಟಿ, ಕಿರಣ್ ಕುಮಾರ್ ಕೊಡ್ಗಿ, ಗುರುರಾಜ್ ಗಂಟಿಹೊಳೆ, ವಿಧಾನ ಪರಿಷತ್ ಸದಸ್ಯ ಡಾ. ಧನಂಜಯ ಸರ್ಜಿ, ಮುಖಂಡರಾದ ಉದಯಕುಮಾರ್ ಶೆಟ್ಟಿ, ಶ್ರೀಕಾಂತ್ ಶೆಟ್ಟಿ, ಶಿಲ್ಪಾ ಜಿ. ಸುವರ್ಣ ಮೊದಲಾದವರು ಇದ್ದರು.

## ಉಡುಪಿ ಶ್ರೀಕೃಷ್ಣನ ದರ್ಶನ ಪಡೆದ ನಿರ್ಮಲಾ ಸೀತಾರಾಮನ್



**ಉಡುಪಿ, ಜೂ.13:** ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶನಿವಾರ ಉಡುಪಿಯ ಶ್ರೀ ಕೃಷ್ಣ ಮಠಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದ್ದಾರೆ. ಕರ್ನಾಟಕ ಪ್ರವಾಸದ ಭಾಗವಾಗಿ ಸೀತಾರಾಮನ್ ಅವರು ಉಡುಪಿಗೆ ಆಗಮಿಸಿ ಶ್ರೀಕೃಷ್ಣನ ದರ್ಶನ ಪಡೆದಿದ್ದಾರೆ. ಸದ್ಯ ಕೃಷ್ಣ ಮಠದ ಪರ್ಯಾಯ ಪೀಠವನ್ನು ಅಲಂಕರಿಸಿರುವ ಶಿರೂರು ಮಠದ ಶ್ರೀ ವೇದವರ್ಧನ ತೀರ್ಥ ಸ್ವಾಮೀಜಿಯನ್ನು ಭೇಟಿಯಾದರು ಮತ್ತು ಭೇಟಿಯ ಸಮಯದಲ್ಲಿ ಅವರ ಆಶೀರ್ವಾದ ಪಡೆದರು. ಇಬ್ಬರೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

ಉಚ್ಚಿಲದ ಶ್ರೀ ಮಹಾಲಕ್ಷ್ಮಿ ದೇವಸ್ಥಾನ ಮತ್ತು ಶ್ರೀ ಹೊಸ ಮಾರಿಗುಡಿ ದೇವಸ್ಥಾನಕ್ಕೂ ಭೇಟಿ ನೀಡಿ, ಪ್ರಾರ್ಥನೆ ಸಲ್ಲಿಸಿದರು.ಈ ಪ್ರದೇಶದಲ್ಲಿ ಅವರು ತಮ್ಮ ವಾಸ್ತವ್ಯದ ಸಮಯದಲ್ಲಿ ಬಿಜೆಪಿಗೆ ಸಂಬಂಧಿಸಿದ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಈ ಭೇಟಿ ಭಕ್ತರು ಮತ್ತು ಪಕ್ಷದ ಕಾರ್ಯಕರ್ತರ ಗಮನ ಸೆಳೆಯಿತು.

ದೇವಾಲಯದ ಆವರಣದ ಸುತ್ತಲೂ ಬಿಗಿ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಸೀತಾರಾಮನ್ ಅವರು ಮಠದ ಸಂಕೀರ್ಣದಲ್ಲಿ ಸ್ವಲ್ಪ ಸಮಯ ಕಳೆದರು ಮತ್ತು ದೇವಾಲಯದ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದರು. ನಂತರ ಅವರ ನಂತರದ ಕಾರ್ಯಕ್ರಮಗಳಿಗೆ ತೆರಳಿದರು.

# ಕರ್ನಾಟಕ ಪರ ಗೊತ್ತುವಳಿ ಅಂಗೀಕಾರಕ್ಕೆ ಸಮಸ್ಯೆ ಇಲ್ಲ

## ಬೆಳಗಾವಿ ಪಾಲಿಕೆ ಮಹಾಪೌರರು, ಉಪಮಹಾಪೌರರ ಜತೆ ಚರ್ಚಿಸುವೆ: ಸಂಸದ ಜಗದೀಶ ಶೆಟ್ಟರ್



**ಬೆಳಗಾವಿ, ಜೂ.13:** ಮಹಾನಗರ ಪಾಲಿಕೆಯಲ್ಲಿ ಕರ್ನಾಟಕದ ಪರ ಗೊತ್ತುವಳಿ ಅಂಗೀಕರಿಸುವ ಸಂಬಂಧ ಮಹಾಪೌರರು ಹಾಗೂ ಉಪಮಹಾಪೌರರ ಜೊತೆ ಸಮಾಲೋಚನೆ ಮಾಡಲಾಗುವುದು ಎಂದು ಸಂಸದ ಜಗದೀಶ್ ಶೆಟ್ಟರ್ ಹೇಳಿದರು.

ಬೆಳಗಾವಿಯಲ್ಲಿ ಮಾತನಾಡಿದ ಅವರು, ಕರ್ನಾಟಕದ ಪರ ಗೊತ್ತುವಳಿ ಅಂಗೀಕಾರಕ್ಕೆ ಯಾವುದೇ ಸಮಸ್ಯೆ ಇಲ್ಲ. ರಾಜ್ಯ ಸರ್ಕಾರವು ಸಹ ಇದೇ ವಿಷಯ ಕಾರಣವಾಗಿಟ್ಟುಕೊಂಡು ಪಾಲಿಕೆಯನ್ನು ಸೂಪರ್‌ಸೀಡ್ ಮಾಡುವುದಿಲ್ಲ ಎಂದರು.

ಕನ್ನಡ ಮತ್ತು ಮರಾಠಿ ಭಾಷಿಕರ ಮಧ್ಯೆ ಯಾವುದೇ ಸಮಸ್ಯೆ ಇಲ್ಲ. ಸಹೋದರತ್ವ ಭಾವನೆ ಇದೆ. ಇಬ್ಬರೂ ಅನ್ಯೋನ್ಯವಾಗಿದ್ದರೆ ಮಾತ್ರ ಬೆಳಗಾವಿ ಅಭಿವೃದ್ಧಿ ಸಾಧ್ಯ ಎಂದು ಜಗದೀಶ್ ಶೆಟ್ಟರ್ ಹೇಳಿದರು.

ಮರಾಠಿ ಭಾಷಿಕರೇನು ಪಾಕಿಸ್ತಾನದಲ್ಲಿ ಇಲ್ಲ. ಹಾಗೆಯೇ ಬೆಳಗಾವಿ ಯಾವಾಗಲೂ ಕರ್ನಾಟಕದ ಅವಿಭಾಜ್ಯ ಅಂಗ. ಇದನ್ನು ಪದೇ ಪದೇ ಹೇಳುವ ಅಗತ್ಯ ಇಲ್ಲ ಎಂದರು.

# ಸಂವಿಧಾನ ಉಳಿಸುವವರಿಗೆ ಸ್ವಂತಜಿಲ್ಲೆಯ ಶಾಲೆ ಕೊಠಡಿಯ ಮೇಲ್ಛಾವಣಿ ರಕ್ಷಿಸುವ ಯೋಗ್ಯತೆ ಇಲ್ಲ

## ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ್ ಕಿಡಿ

### ಶಾಲೆಯ ದುಸ್ಥಿತಿ ವೀಕ್ಷಿಸಲು ಪುರುಸೊತ್ತಿಲ್ಲವೇ ಎಂದು ಪ್ರಶ್ನೆ



**ಬೆಂಗಳೂರು, ಜೂ.13:** ಟ್ವಿಟರ್‌ನಲ್ಲಿ ಸಂವಿಧಾನ ಉಳಿಸುವ ಗೃಹಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ, ತಮ್ಮ ಸ್ವಂತ ಜಿಲ್ಲೆಯ ಕಾಲೇಜಿನ ಮೇಲ್ಛಾವಣಿಯನ್ನೂ ರಕ್ಷಿಸುವ ಯೋಗ್ಯತೆಯೂ ಇಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಕೆಂಡಕಾರಿದ್ದಾರೆ.

ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ದಿನಬೆಳಗಾದರೆ ಸಾಮಾಜಿಕ ಜಾಲತಾಣಗಳಲ್ಲಿ, ಮಾಧ್ಯಮಗಳ ಮುಂದೆ ಜ್ಞಾನ ಬೋಧನೆ, ಬೆಳಗ್ಗೆಯಿಂದ ಸಂಜೆವರೆಗೆ ಬಿಜೆಪಿ, ಆರ್‌ಎಸ್‌ಎಸ್, ಇತಿಹಾಸ, ಕೇಂದ್ರ ಸರ್ಕಾರ, ಸಂವಿಧಾನ, ಪ್ರಜಾಪ್ರಭುತ್ವದ ಬಗ್ಗೆ ದೊಡ್ಡ ದೊಡ್ಡ ಭಾಷಣ. ಆದರೆ ನಿಮದೇ ಸ್ವಂತ ಜಿಲ್ಲೆಯಾದ ಕಲಬುರಗಿಯ ಸರ್ಕಾರಿ ಕಾಲೇಜಿನ ದುಸ್ಥಿತಿ ನೋಡಲು ಮಾತ್ರ ನಿಮಗೆ ಪುರುಸೊತ್ತಿಲ್ಲವೇ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ಕಲಬುರಗಿ ನಗರದ ಸರ್ಕಾರಿ ಪದವಿಪೂರ್ವ ಬಾಲಕಿಯರ ಕಾಲೇಜಿನಲ್ಲಿ ತರಗತಿ ನಡೆಯುತ್ತಿದ್ದಾಗಲೇ ಮೇಲ್ಛಾವಣಿಯ ಸಿಮೆಂಟ್ ಪದರು ಕುಸಿದು ಬಿದ್ದು 5 ವಿದ್ಯಾರ್ಥಿನಿಯರು ತೀವ್ರವಾಗಿ ಗಾಯ ಗೊಂಡಿದ್ದಾರೆ. 80ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ತರಗತಿಯಲ್ಲಿದ್ದ ಸಂದರ್ಭದಲ್ಲಿ ಈ ಭೀಕರ ಘಟನೆ ನಡೆದಿದೆ ಎಂದರೆ ಇದು ಕೇವಲ ಅಪಘಾತವಲ್ಲ, ಇದು ನಿಮ ಕಾಂಗ್ರೆಸ್ ಸರ್ಕಾರದ ಜವಾಬ್ದಾರಿರಹಿತ ನಿರ್ಲಕ್ಷ್ಯದ ಪರಮಾವಧಿ. ಅಸಲಿಗೆ ನಿಮ್ಮ ಆದ್ಯತೆಯಾದರೂ ಏನು ಪ್ರಿಯಾಂಕ್ ಖರ್ಗೆ ಅವರೇ, ಬರೀ ಚಿಲ್ಲರೆ ರಾಜಕೀಯವೋ ಅಥವಾ ಆಡಳಿತ ಮಾಡುವ ಆಸಕ್ತಿ ಏನಾದರೂ ಇದೆಯೋ ಎಂದು ಪ್ರಶ್ನೆ ಮಾಡಿದ್ದಾರೆ.

ಸ್ವಂತ ಜಿಲ್ಲೆಯ ಕಾಲೇಜು ಕಟ್ಟಡಗಳು ಕಣ್ಣೆದುರೇ ಕುಸಿಯುತ್ತಿವೆ. ನಿಮ್ಮ ನಿರ್ಲಕ್ಷ್ಯದಿಂದ ವಿದ್ಯಾರ್ಥಿನಿಯರು ತರಗತಿಯಲ್ಲೇ ಗಾಯಗೊಂಡು ಆಸ್ಪತ್ರೆ ಸೇರುತ್ತಿದ್ದಾರೆ. ಆದರೆ ನೀವು ಮಾತ್ರ ಸದಾಕಾಲ ಸಾಮಾಜಿಕ ಜಾಲತಾಣದಲ್ಲಿ ಹೊಸ ಹೊಸ ರಾಜಕೀಯ ವಿವಾದಗಳ ಹುಡುಕಾಟದಲ್ಲಿ ನಿರತರಾಗಿದ್ದೀರಿ. ಸ್ವಂತ ಜಿಲ್ಲೆಯ ಹೆಣ್ಣುಮಕ್ಕಳು ಕಲಿಯುವ ಕಾಲೇಜಿನ ಮೇಲ್ಛಾವಣಿಯನ್ನೇ ಭದ್ರವಾಗಿ ಉಳಿಸಿಕೊಳ್ಳಲಾಗದವರು, ಇಡೀ ರಾಜ್ಯದ, ದೇಶದ, ಸಂವಿಧಾನದ ಭವಿಷ್ಯದ ಬಗ್ಗೆ ಭಾಷಣ ಬಿಗಿಯುವುದು ಎಷ್ಟು ದೊಡ್ಡ ವಿಪರ್ಯಾಸ ಎಂದು ವಿಷಾದಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರೇ,ಇದು ಕೇವಲ ಕಟ್ಟಡದ ಮೇಲ್ಛಾವಣಿ ಕುಸಿದ ಘಟನೆ ಅಲ್ಲ, ಇದು ನಿಮ ಕಾಂಗ್ರೆಸ್ ಸರ್ಕಾರದ ಆಡಳಿತವೇ ಸಂಪೂರ್ಣವಾಗಿ ಕುಸಿದು ಬಿದ್ದಿರುವುದರ ಜೀವಂತ ಸಂಕೇತ! ನಮ್ಮ ಆಗ್ರಹ ಇಷ್ಟೇ. ಈಗಲಾದರೂ ಸರ್ಕಾರ ಎಚ್ಚೆತ್ತುಕೊಂಡು ಗಾಯಗೊಂಡ ವಿದ್ಯಾರ್ಥಿನಿಯರಿಗೆ ತಕ್ಷಣ ಉನ್ನತಮಟ್ಟದ ಉಚಿತ ಚಿಕಿತ್ಸೆ ನೀಡಬೇಕು. ಈ ಗಂಭೀರ ನಿರ್ಲಕ್ಷ್ಯಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ತಕ್ಷಣ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು.ರಾಜ್ಯದ ಎಲ್ಲಾ ಸರ್ಕಾರಿ ಶಾಲಾ–ಕಾಲೇಜುಗಳ ಸುರಕ್ಷತಾ ಲೆಕ್ಕಪರಿಶೋಧನೆಯನ್ನು ತಕ್ಷಣವೇ ನಡೆಸಬೇಕು. ಇಲ್ಲವಾದರೆ, ಮಕ್ಕಳ ಜೀವದ ಚೆಲ್ಲಾಟ ವಾಡುತ್ತಿರುವ ಕಾಂಗ್ರೆಸ್ ಪಕ್ಷವನ್ನು ಜನತೆ ಎಂದಿಗೂ ಕ್ಷಮಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

### ಅಕ್ಕಿ ಕಳ್ಳರನ್ನು ಜೈಲಿಗಟ್ಟಿ

ಬಡವರ ಹೊಟ್ಟೆಯ ಮೇಲೆ ಹೊಡೆಯುತ್ತಿರುವ ಈ ಲೂಟಿ ಸರ್ಕಾರದ ವಿರುದ್ಧ ಜನ ದಂಗೆ ಏಳುವ ದಿನ ಬಹಳ ದೂರವಿಲ್ಲ. ಮುಖ್ಯಮಂತ್ರಿಗಳೇ, ನಿಮ್ಮ ಮೂಗಿನ ಕೆಳಗೆ ನಡೆಯುತ್ತಿರುವ ಈ ಹಗರಣಕ್ಕೆ ನಿಮ ಉತ್ತರವೇನು ಸ್ವಾಮಿ? ಇದೇನಾ ನಿಮ ಪಚಾರದರ್ಶಕತೆ? ಇದೇನಾ ನಿಮ ಕಾರ್ಯವೈಖರಿ? ನಿಮಗೆ ಕಿಂಚಿತ್ತಾದರೂ ಆತಸಾಕ್ಷಿ ಇದ್ದರೆ ತಕ್ಷಣವೇ ಈ ಅಕ್ಕಿ ಮಾಫಿಯಾದ ಸೂತ್ರಧಾರರನ್ನು ಜೈಲಿಗಟ್ಟಿ ಎಂದು ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶಾಂತಿನಗರದ ನಿಗಮದ ಗೋದಾಮಿನಲ್ಲೇ ದಾಖಲೆ ಇಲ್ಲದ ನೂರಾರು ಚೀಲ ಅಕ್ಕಿ ಪತ್ತೆ. ಗೋದಾಮುಗಳಲ್ಲಿ ಸಿಸಿಟಿವಿ ಇಲ್ಲ, ಸುರಕ್ಷತೆಯೂ ಇಲ್ಲ ಇದೆಲ್ಲವೂ ವ್ಯವಸ್ಥಿತ ಲೂಟಿಗೆ ಸರ್ಕಾರವೇ ಮಾಡಿಕೊಟ್ಟ ದಾರಿಯಲ್ಲವೇ?

ಬಡವರ ಪಡಿತರ ಅಕ್ಕಿಯನ್ನು ಪಾಲಿಶ್ ಮಾಡಿ, ಬೇರೆ ಚೀಲಗಳಿಗೆ ತುಂಬಿಸಿ ಮುಕ್ತ ಮಾರುಕಟ್ಟೆಯಲ್ಲಿ ಮಾರಿ ಲೂಟಿ ಹೊಡೆಯುತ್ತಿರುವ ಮಾಫಿಯಾಕ್ಕೆ ಸರ್ಕಾರದ ಶ್ರೀರಕ್ಷೆ ಇಲ್ಲದೆ ನಡೆಯಲು ಸಾಧ್ಯವೇ ಎಂದು ಅಶೋಕ್ ಪ್ರಶ್ನಿಸಿದ್ದಾರೆ.

# ನಿಷ್ಠಾವಂತ ಕಾರ್ಯಕರ್ತರಿಗೆ ಉತ್ತಮ ಅವಕಾಶ ದೊರೆಯುವುದು ಖಚಿತ




## ಪಕ್ಷದ ಹಿತಕ್ಕಾಗಿ ಒಗ್ಗಟ್ಟಿನಿಂದ ದುಡಿಯಬೇಕು: ಸಚಿವ ಯು.ಟಿ. ಖಾದರ್

**ಮಂಗಳೂರು, ಜೂ.13:** ಕಾಂಗ್ರೆಸ್ ಪಕ್ಷಕ್ಕಾಗಿ ದುಡಿದ ಪ್ರತಿಯೊಬ್ಬ ನಿಷ್ಠಾವಂತ ಕಾರ್ಯಕರ್ತರಿಗೂ ಒಂದಲ್ಲಾ ಒಂದುದಿನ ಉತ್ತಮ ಅವಕಾಶ ದೊರೆಯುವುದು ಖಚಿತ. ಹೀಗಾಗಿ ಪ್ರತಿಯೊಬ್ಬರು ಪಕ್ಷದ ಹಿತಕ್ಕಾಗಿ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಹೇಳಿದ್ದಾರೆ.

ಸಚಿವರಾದ ನಂತರ ಮೊದಲ ಬಾರಿ ಕಾಂಗ್ರೆಸ್ ಜಿಲ್ಲಾ ಕರ್ಚೇರಿಗೆ ಶನಿವಾರ ಭೇಟಿ ನೀಡಿದ ಅವರು ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ಸಚಿವ ಸ್ಥಾನ ಅಥವಾ ಇನ್ನಾವುದೇ ಹುದ್ದೆಗಾಗಲಿ ಯಾವುದೇ ಸಂಸ್ಥೆ, ಧಾರ್ಮಿಕ, ಸಾಮಾಜಿಕ ಮುಖಂಡರು, ಕಾಂಗ್ರೆಸ್ ಜಿಲ್ಲಾ ಸಮಿತಿಯಿಂದ ಶಿಫಾರಸು, ಲಾಬಿ ಮಾಡಿಸಿದ ಇತಿಹಾಸ ಇಲ್ಲ. ನಾನು ಮಾಡಿರುವ ಕೆಲಸವನ್ನು ಅವಲೋಕಿಸಿ, ಪಕ್ಷ ನನಗೆ ವಿಧಾನ ಸಭಾಧ್ಯಕ್ಷ ಸ್ಥಾನ ಹಾಗೂ ಸಚಿವ ಸ್ಥಾನ ನೀಡಿದೆ ಎಂದು ಹೇಳಿದರು.

ಉದ್ಯೋಗಕ್ಕಾಗಿ ವಿದೇಶಕ್ಕೆ ಹೋಗಿ ಮೂರು ವರ್ಷಗಳ ನಂತರ ಮನೆಗೆ ಮರಳಿದ ಅನುಭವ ಆಗುತ್ತಿದೆ. ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಸ್ತಿತ್ವಕ್ಕೆ ಬಂದಾಗ, ಸಚಿವ ಸಂಪುಟ ರಚನೆಯ ವೇಳೆ ಮೊದಲ ಪಟ್ಟಿಯಲ್ಲಿ ನನ್ನ ಹೆಸರು ಇತ್ತು. ಈ ನಡುವೆ ರಾಹುಲ್ ಗಾಂಧಿ, ಕೆ.ಸಿ.ವೇಣುಗೋಪಾಲ ಸೇರಿದಂತೆ ಪಕ್ಷದ ಕೆಲ ಮುಖಂಡರನ್ನು ಭೇಟಿ ಮಾಡುವಂತೆ ಪಕ್ಷದಿಂದ ಕರೆ ಬಂತು.ರಾತ್ರಿ 9 ಗಂಟೆಗೆ ಅವರನ್ನು ಭೇಟಿ ಮಾಡಿದಾಗ, ಈ ಬಾರಿ ಅಲ್ಪಸಂಖ್ಯಾತರಿಗೆ ಸ್ಪೀಕರ್ ಸ್ಥಾನ ಕೊಡಲು ನಿರ್ಧರಿಸಿದ್ದೇವೆ. ನೀವು ಸ್ಪೀಕರ್ ಆಗಬೇಕು ಎಂದು ಅವರು ಹೇಳಿದಾಗ, ತಕ್ಷಣ ಒಪ್ಪಿಕೊಂಡೆ. ಪಕ್ಷ ಯಾವ ಹೊಣೆ ವಹಿಸಿದರೂ ಒಪ್ಪಿಕೊಳ್ಳಲು ಸಿದ್ಧ. ಆದರೆ, ಕಾಂಗ್ರೆಸ್ ಕಚೇರಿಗೆ ಹೋಗಲು ಆಗದು ಎನ್ನುವುದೊಂದೇ ಬೇಸರ ಎಂದು ಅವರ ಬಳಿ ಹೇಳಿಕೊಂಡಿದ್ದೆ ಎಂದು ಮೂರು ವರ್ಷಗಳ ಹಿಂದಿನ ಘಟನೆಯನ್ನು ನೆನಪಿಸಿಕೊಂಡರು.

### ಎಸ್‌ಐಆರ್ ಆತಂಕ ಬೇಡ

ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಆತಂಕ ಪಡಬೇಕಾಗಿಲ್ಲ. ಕಾರ್ಯಕರ್ತರು ಎಚ್ಚರದಿಂದಿದ್ದರೆ ಯಾವುದೇ ಸಮಸ್ಯೆಯನ್ನು ಸಮರ್ಥವಾಗಿ ಎದುರಿಸಬಹುದು. ಪ್ರತಿ ಬೂತ್‌ನಲ್ಲಿರುವ ಮತದಾರರನ್ನು ಗುರುತಿಸಿ, ಅವರ ಎಲ್ಲ ದಾಖಲೆಗಳನ್ನು ಸಮರ್ಪಕವಾಗಿ ಸಂಗ್ರಹಿಸಿಕೊಟ್ಟರೆ, ಮತದಾರರ ಪಟ್ಟಿಯಿಂದ ಹೆಸರು ತಪ್ಪಿಹೋಗಲು ಸಾಧ್ಯವಿಲ್ಲ ಎಂದು ಯು.ಟಿ. ಖಾದರ್ ತಿಳಿಸಿದರು.

# ಭಾರತದ 4ನೇ ಹಡಗಿನ ಮೇಲೆ ದಾಳಿ ವರದಿ ನಿರಾಕರಿಸಿದ ವಿದೇಶಾಂಗ ಸಚಿವಾಲಯ



**ನವದೆಹಲಿ, ಜೂ. 13:** ಓಮನ್ ಕರಾವಳಿಯ ಬಳಿ ಭಾರತೀಯ ಸಿಬ್ಬಂದಿಯ ಹಡಗಿನ ಮೇಲೆ ಹೊಸ ದಾಳಿ ನಡೆದಿದೆ ಎಂಬ ವರದಿಗಳನ್ನು ವಿದೇಶಾಂಗ ಸಚಿವಾಲಯ ಶನಿವಾರ ತಳ್ಳಿಹಾಕಿದ್ದು, ಆ ಮಾಹಿತಿ ಸುಳ್ಳು ಎಂದು ಹೇಳಿದೆ. ಹಾರ್ಮುಜ್ ಜಲಸಂಧಿಯ ಬಳಿ ವಾಣಿಜ್ಯ ಹಡಗುಗಳ ಮೇಲೆ ಇತ್ತೀಚೆಗೆ ಸರಣಿ ದಾಳಿಗಳು ನಡೆದ ನಂತರ ಗಲ್ಫ್ ಪ್ರದೇಶದಲ್ಲಿ ಹೊಸ ದಾಳಿ ನಡೆದಿರುವ ವರದಿಗಳು ಮತ್ತು ಭಾರತೀಯ ನಾವಿಕರ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತವಾಗಿರುವ ಮಧ್ಯೆ ಈ ಸ್ಪಷ್ಟೀಕರಣ ಬಂದಿದೆ.

ಪರಿಸ್ಥಿತಿಯನ್ನು ಪರಿಶೀಲಿಸಲು ಸರ್ಕಾರವು ಲಿಯಾಕಿ ಫ್ರೀಡಂ ಹಡಗಿನ ಮಾಸ್ಟರ್ ಅವರನ್ನು ನೇರವಾಗಿ ಸಂಪರ್ಕಿಸಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಮಾಧ್ಯಮಕ್ಕೆ ತಿಳಿಸಿದ್ದಾರೆ. ನಾವು ಹಡಗಿನ ಮಾಸ್ಟರ್ ಲಿಯಾಕಿ ಫ್ರೀಡಂ ಅವರೊಂದಿಗೆ ಮಾತನಾಡಿದ್ದೇವೆ, ಅವರು ಎಲ್ಲಾ ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಮತ್ತು ವರದಿಯಾದ ಮಾಹಿತಿ ಸುಳ್ಳು ಎಂದು ದೃಢಪಡಿಸಿದ್ದಾರೆ ಎಂದು ಜೈಸ್ವಾಲ್ ಹೇಳಿದರು.

ಭಾರತೀಯ ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ಲಿಯಾಕಿ ಫ್ರೀಡಂ ಹಡಗಿನ ಮೇಲೆ ಓಮಾನಿ ಕರಾವಳಿಯಲ್ಲಿ ಅಮೆರಿಕ ದಾಳಿ ನಡೆಸಿದೆ ಎಂದು ಈ ಹಿಂದೆ ವರದಿಗಳು ಹೇಳಿದ್ದವು.

ವಿದೇಶಾಂಗ ಸಚಿವಾಲಯದ ಸ್ಪಷ್ಟೀಕರಣಕ್ಕೂ ಮುನ್ನ, ಫಾರ್ವರ್ಡ್ ಸೀಮೆನ್ಸ್ ಯೂನಿಯನ್ ಆಫ್ ಇಂಡಿಯಾ, ಹಡಗಿನ ಅತಿ ಹೆಚ್ಚಿನ ಆವರ್ತನ (ಗಿಉಈ) ರೇಡಿಯೋ ಪ್ರತಿಕ್ರಿಯಿಸದ ಕಾರಣ ಅದರೊಂದಿಗೆ ಸಂವಹನ ನಡೆಸಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿತ್ತು. ಆದಾಗ್ಯೂ, ಹಡಗಿನ ಸ್ಥಳವನ್ನು ಪತ್ತೆಹಚ್ಚಲು ಸಾಧ್ಯವಾಯಿತು ಎಂದು ಒಕ್ಕೂಟ ಹೇಳಿದೆ.

ಜೂನ್ 2026 ರಲ್ಲಿ ಒಮಾನ್ ಕೊಲ್ಲಿ ಮತ್ತು ಹಾರ್ಮುಜ್ ಜಲಸಂಧಿಯಲ್ಲಿ ಭಾರತೀಯ ಸಿಬ್ಬಂದಿಯ ಟ್ಯಾಂಕರ್‌ಗಳ ಮೇಲೆ ನಡೆದ ಅನೇಕ ದಾಳಿಗಳ ಹಿನ್ನೆಲೆಯಲ್ಲಿ ಈ ಸ್ಪಷ್ಟೀಕರಣ ಬಂದಿದೆ. ಜೂನ್ 10 ರಂದು, ಅಮೆರಿಕದ ಕ್ಷಿಪಣಿಗಳು ಅದರ ಎಂಜಿನ್ ವಿಭಾಗವನ್ನು ಹೊಡೆದಾಗ ಟ್ಯಾಂಕರ್ ಎಂಟಿ ಸೆಟ್ಟೆಲ್ಲೊ ಡಿಕ್ಕಿ ಹೊಡೆದಿದೆ. ಮೂವರು ಭಾರತೀಯ ನಾವಿಕರು ಸಾವನ್ನಪ್ಪಿದರು ಮತ್ತು 21 ಸಿಬ್ಬಂದಿಯನ್ನು ರಕ್ಷಿಸಲಾಯಿತು.

ಒಂದು ದಿನದ ನಂತರ, ಅಮೆರಿಕದ ಜೆಟ್ ತನ್ನ ಎಂಜಿನ್ ಕೋಣೆಗೆ ಎರಡು ಕ್ಷಿಪಣಿಗಳನ್ನು ಹಾರಿಸಿದ ನಂತರ ಎಂಟಿ ಜಲವೀರ್ ಮೇಲೆ ದಾಳಿ ನಡೆಸಲಾಯಿತು. ಎಲ್ಲಾ 20 ಸಿಬ್ಬಂದಿ ಸುರಕ್ಷಿತರಾಗಿದ್ದಾರೆ ಎಂದು ವರದಿಯಾಗಿದೆ. ಇದಕ್ಕೂ ಮೊದಲು, ಜೂನ್ 8 ರಂದು, ಟ್ಯಾಂಕರ್ ಮಾರಿಸಿವಕ್ಸ್‌ಗೆ ಅಮೆರಿಕದ ಫೈಟರ್ ಜೆಟ್ ಡಿಕ್ಕಿ ಹೊಡೆದಿದ್ದು, ಬೆಂಕಿ ಹೊತ್ತಿಕೊಂಡು ಸಿಬ್ಬಂದಿಯನ್ನು ಸ್ಥಳಾಂತರಿಸಬೇಕಾಯಿತು.

ಹಡಗುಗಳು ಇರಾನಿನ ಬಂದರುಗಳ ಮೇಲಿನ ದಿಗ್ಬಂಧನವನ್ನು ಉಲ್ಲಂಘಿಸುತ್ತಿವೆ ಮತ್ತು ಸೂಚನೆಗಳನ್ನು ಪಾಲಿಸಲು ವಿಫಲವಾಗಿವೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ ಹೇಳಿದೆ. ಏಪ್ರಿಲ್ 2026 ರಲ್ಲಿ, ಒಮಾನ್ ಉತ್ತರಕ್ಕೆ ಇರಾನಿನ ನೌಕಾಪಡೆಯು ಎರಡು ಭಾರತೀಯ ಕಚ್ಚಾತೈಲ ಟ್ಯಾಂಕರ್‌ಗಳ ಮೇಲೆ ಗುಂಡು ಹಾರಿಸಿತು.

ಯಾವುದೇ ಸಾವುನೋವುಗಳು ವರದಿಯಾಗಿಲ್ಲ, ಆದರೂ ಒಂದು ಕ್ಯಾಬಿನ್ ಗಾಜು ಒಡೆದು ಎರಡೂ ಹಡಗುಗಳು ಹಾರ್ಮುಜ್ ಜಲಸಂಧಿಯಿಂದ ಹಿಂತಿರುಗಬೇಕಾಯಿತು. ಆ ಹಡಗುಗಳಲ್ಲಿ ಒಂದು ಸನ್ಮಾರ್ ಹೆರಾಲ್ಡ್, ಇದು ಎರಡು ದಶಲಕ್ಷ ಬ್ಯಾರೆಲ್‌ಗಳಷ್ಟು ಇರಾಕಿ ತೈಲವನ್ನು ಸಾಗಿಸುತ್ತಿದ್ದ ಭಾರತೀಯ ಧ್ವಜವನ್ನು ಹೊಂದಿರುವ VLCC ಸೂಪರ್‌ಟ್ಯಾಂಕರ್ ಆಗಿತ್ತು. ಘಟನೆಗಳ ನಂತರ ಭಾರತವು ವಾಷಿಂಗ್ಟನ್‌ಗೆ ಬಲವಾದ ಪ್ರತಿಭಟನೆಯನ್ನು ಸಲ್ಲಿಸಿತು ಮತ್ತು ದಾಳಿಗಳ ಪರಿಣಾಮಗಳ ಬಗ್ಗೆ ಇರಾನ್‌ಗೆ ಎಚ್ಚರಿಕೆ ನೀಡಿತು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಭೂದಂಧೆ ನಡೆಸಲಷ್ಟೇ ಬಿಡದಿ ಟೌನ್‌ಶಿಪ್: ಎಚ್‌ಡಿಕೆ ವಾಗ್ದಾಳಿ

**ರೈತರ ಭೂಮಿ ವಶಪಡಿಸಿಕೊಳ್ಳುವ ನಿರ್ಧಾರಕ್ಕೆ ವಿರೋಧ**

**ನನ್ನ ಯೋಜನೆಗೂ, ಸರ್ಕಾರದ ಈಗಿನ ಉದ್ದೇಶಕ್ಕೂ ವ್ಯತ್ಯಾಸವಿದೆ**



**ಬೆಂಗಳೂರು, ಜೂ.13:** ಬಿಡದಿ ಟೌನ್‌ಶಿಪ್ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆ ಇದೀಗ ರಾಜ್ಯ ರಾಜಕಾರಣದಲ್ಲಿ ತೀವ್ರ ಸಂಚಲನ ಮೂಡಿಸಿದೆ. ಈ ಯೋಜನೆಗೆ ಸಂಬಂಧಿಸಿದಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ನಡುವಿನ ವಾಕ್ಸಮರ ತಾರಕಕ್ಕೇರಿದ್ದು, ರೈತರ ಭೂಮಿ ವಶಪಡಿಸಿಕೊಳ್ಳುವ ಸರ್ಕಾರದ ನಿರ್ಧಾರಕ್ಕೆ ಕುಮಾರಸ್ವಾಮಿ ವಿರೋಧ ವ್ಯಕ್ತಪಡಿಸಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ಯೋಜನೆ ಮೂಲತಃ ನನ್ನ ಕನಸಿನ ಕೂಸೇ ಹೊರತು ಬೇರೆಯವರದಲ್ಲ ಎಂದು ಸ್ಪಷ್ಟಪಡಿಸಿದರು. ರೈತರನ್ನು ಒಕ್ಕಲೆಬ್ಬಿಸಿ ಎಂದು ನಿಮ್ಮ ಅಜ್ಜಯ್ಯ ಹೇಳಿದ್ದಾರಾ? ನಿಮಗೆ ಯಾವ ರೀತಿ ಬದುಕಬೇಕು ಎಂಬ ಕರುಣೆಯನ್ನು ಅವರು ತೋರಿಸಿಲ್ಲವೇ" ಎಂದು ಡಿ.ಕೆ. ಶಿವಕುಮಾರ್ ವಿರುದ್ಧ ಪರೋಕ್ಷವಾಗಿ ತೀವ್ರ ಆಕ್ರೋಶ ಹೊರಹಾಕಿದ್ದಾರೆ.

ಯೋಜನೆಯ ಹಿನ್ನೆಲೆಯನ್ನು ನೆನಪಿಸಿಕೊಂಡ ಕುಮಾರಸ್ವಾಮಿ, ಈ ಹಿಂದೆ ತಾವು ಮುಖ್ಯಮಂತ್ರಿಯಾಗಿದ್ದಾಗ ಹೊಂದಿದ್ದ ಉದ್ದೇಶಕ್ಕೂ, ಈಗಿನ ಸರ್ಕಾರದ ಉದ್ದೇಶಕ್ಕೂ ಭಾರಿ ವ್ಯತ್ಯಾಸವಿದೆ. ಅಂದು ತಾವು ಜನಪರ ಉದ್ದೇಶದಿಂದ ಈ ಯೋಜನೆ ರೂಪಿಸಿದ್ದೆ. ಆದರೆ ಇಂದು ಟೌನ್‌ಶಿಪ್ ಮಾಡುತ್ತಿರುವುದು ಕೇವಲ ಲ್ಯಾಂಡ್ ದಂಧೆ ನಡೆಸಲು ಮಾತ್ರ ಎಂದು ನೇರ ವಾಗ್ದಾಳಿ ನಡೆಸಿದ್ದಾರೆ.

ರೈತರ ಫಲವತ್ತಾದ ಭೂಮಿಯನ್ನು ವಶಪಡಿಸಿಕೊಳ್ಳುತ್ತಿರುವುದನ್ನು ಪ್ರಶ್ನಿಸಿದ ಎಚ್‌ಡಿಕೆ, ಇಂತಹ ಅತ್ಯಂತ ಫಲವತ್ತಾದ ಜಮೀನನ್ನು ಭೂಸ್ವಾಧೀನ ಮಾಡಿಕೊಂಡು ನೀವು ಸಾಧನೆ ಮಾಡಲು ಹೊರಟಿರುವುದಾದರೂ ಏನು? ಪ್ರಸ್ತುತ ಯೋಜನೆಯ ಅವಶ್ಯಕತೆಯಾದರೂ ಏನಿದೆ ಎಂದು ಸರ್ಕಾರದ ನಡೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ಬೆಂಗಳೂರು ನಗರ ಎದುರಿಸುತ್ತಿರುವ ಮೂಲಭೂತ ಸೌಕರ್ಯಗಳ ಕೊರತೆಯನ್ನು ಪ್ರಸ್ತಾಪಿಸಿದ ಹೆಚ್‌ಡಿಕೆ, ರಾಜಧಾನಿಯನ್ನೇ ಸರಿಯಾಗಿ ನಿರ್ವಹಿಸಲಾಗದ ಸರ್ಕಾರ ಬಿಡದಿಯಲ್ಲಿ ಏನು ಮಾಡಲು ಹೊರಟಿದೆ ಎಂದು ಟೀಕಿಸಿದರು. "ಬೆಂಗಳೂರು ನಗರದಲ್ಲೇ ಇವತ್ತು ಸರಿಯಾದ ಮೂಲಭೂತ ಸೌಕರ್ಯಗಳನ್ನು ಕೊಡಲು ಇವರಿಂದ ಸಾಧ್ಯವಾಗುತ್ತಿಲ್ಲ. ಇನ್ನು ಅಲ್ಲಿ ಯಾವ ಮೂಲಭೂತ ಸೌಕರ್ಯ ಕೊಡುತ್ತೇವೆ ಎಂದು ಭೂಸ್ವಾಧೀನ ಮಾಡಲು ಹೊರಟಿದ್ದಾರೆ ಎಂದು ಪ್ರಶ್ನಿಸಿದ್ದಾರೆ. ಇಡೀ ಯೋಜನೆಯ ಹಿಂದೆ ದೊಡ್ಡಮಟ್ಟದ ಲೂಟಿ ಅಡಗಿದೆ ಎಂದು ಆರೋಪಿಸಿದ ಕೇಂದ್ರ ಸಚಿವರು, ಕೇವಲ ರಿಯಲ್ ಎಸ್ಟೇಟ್ ದಂಧೆ ಮತ್ತು ಲೂಟಿ ಮಾಡುವ ಏಕೈಕ ಉದ್ದೇಶದಿಂದ ರೈತರನ್ನು ಒಕ್ಕಲೆಬ್ಬಿಸಲು ಸರ್ಕಾರ ಸಂಚು ರೂಪಿಸಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

### ಬಿಡದಿ ಟೌನ್‌ಶಿಪ್ ನಗರೋತ್ಥಾನ ನೀಲನಕ್ಷೆ ಸಿದ್ಧವಾಗಿದ್ದೇ ಎಚ್‌ಡಿಕೆ ಆಡಳಿತದಲ್ಲಿ: ಡಿ.ಕೆ. ಸುರೇಶ್ ತಿರುಗೇಟು



ಬಿಡದಿ ಟೌನ್‌ಶಿಪ್ ನಿರ್ಮಿಸುವ ಸರ್ಕಾರದ ನಿರ್ಧಾರವನ್ನು ವಿರೋಧಿಸಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಮಾಜಿ ಸಂಸದ ಡಿ.ಕೆ. ಸುರೇಶ್ ತಿರುಗೇಟು ನೀಡಿದ್ದಾರೆ. ರಾಜ್ಯ ಸರ್ಕಾರ ಈಗಾಗಲೇ ಈ ಸಂಬಂಧ ಅಧಿಸೂಚನೆ ಹೊರಡಿಸಿದ್ದು ಈ ಯೋಜನೆಯ ರೂವಾರಿಯೇ ಕುಮಾರಸ್ವಾಮಿ ಅವರಾಗಿದ್ದರು. ಅವರ ಆಡಳಿತಾವಧಿಯಲ್ಲೇ ಈ ನಗರೋತ್ಥಾನದ ನೀಲನಕ್ಷೆ ಸಿದ್ಧವಾಗಿತ್ತು ಮತ್ತು ಅವರೇ ಇದನ್ನು ಜಾರಿಗೆ ತರಲು ಉತ್ಸುಕರಾಗಿದ್ದರು ಎಂಬುದೇ ಸತ್ಯ ಎಂದಿದ್ದಾರೆ. ಇನ್ನು ಟೌನ್‌ಶಿಪ್‌ಗಾಗಿ ಭೂಮಿ ಕಳೆದುಕೊಳ್ಳುತ್ತಿರುವ ಅನ್ನದಾತರ ಪ್ರತಿಭಟನೆಯ ಬಗ್ಗೆ ಮಾತನಾಡಿದ ಅವರು, ಯಾರಿಗೂ ಅನ್ಯಾಯವಾಗುತ್ತಿಲ್ಲ ಎಂದಿದ್ದಾರೆ. ಸಂತ್ರಸ್ತ ರೈತರಿಗೆ ಮಾರುಕಟ್ಟೆ ದರಕ್ಕೆ ಅನುಗುಣವಾಗಿ ನ್ಯಾಯಸಮ್ಮತ ಹಾಗೂ ಸೂಕ್ತವಾದ ಪರಿಹಾರ ಧನವನ್ನೇ ವಿತರಿಸಲಾಗುತ್ತಿದೆ ಎಂದು ಡಿ.ಕೆ. ಸುರೇಶ್ ಸ್ಪಷ್ಟಪಡಿಸಿದ್ದಾರೆ.



ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿದ್ದು, ಧುರ್ವಾ ಪ್ರದೇಶದ ಇಬ್ಬರು ಬುಡಕಟ್ಟು ಮಕ್ಕಳಾದ 'ಕರಣ್ ಮತ್ತು ಅರ್ಜುನ್' ನಾಪತ್ತೆಯಾಗಿರುವ ಬಗ್ಗೆ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ವಿರುದ್ಧ ಶನಿವಾರ ರಾಂಚಿಯಲ್ಲಿ ನಡೆದ ಪ್ರತಿಭಟನಾ ರ‍್ಯಾಲಿಯಲ್ಲಿ ಬಿಜೆಪಿ ಕಾರ್ಯಕರ್ತರು ಪಂಜಿನ ಮೆರವಣಿಗೆ ನಡೆಸಿ ಪ್ರತಿಭಟನೆ ನಡೆಸಿದರು.


# ಎಸ್‌ಟಿ ಸಮುದಾಯಕ್ಕೆ ಮತ್ತೆರಡು ಸಚಿವ ಸ್ಥಾನಕ್ಕೆ ಬೇಡಿಕೆ

## ಶೀಘ್ರದಲ್ಲೇ ಮುಖ್ಯಮಂತ್ರಿಗಳ ಭೇಟಿ: ಸಚಿವ ಸತೀಶ್ ಜಾರಕಿಹೊಳಿ

**ಬೆಂಗಳೂರು, ಜೂ.13:** ಎಸ್‌ಟಿ (ಪರಿಶಿಷ್ಟ ಪಂಗಡ) ಸಮುದಾಯಕ್ಕೆ ಸಚಿವ ಸಂಪುಟದಲ್ಲಿ ಮತ್ತಷ್ಟು ಪ್ರಾತಿನಿಧ್ಯ ನೀಡಬೇಕು ಹಾಗೂ ಮೀಸಲಾತಿ ಸೇರಿ ಸಮುದಾಯದ ಪ್ರಮುಖ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿ ಶೀಘ್ರದಲ್ಲೇ ಮುಖ್ಯಮಂತ್ರಿಗಳನ್ನು ಭೇಟಿ ಮಾಡುವುದಾಗಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಮಾಧ್ಯಮಗಳೊಂದಿಗೆ ಶನಿವಾರ ಮಾತನಾಡಿದ ಅವರು, ನಮ್ಮ ಸಮುದಾಯಕ್ಕೆ ಮತ್ತೆ ಎರಡು ಸಚಿವ ಸ್ಥಾನಗಳನ್ನು ನೀಡಬೇಕು ಎನ್ನುವುದು ಬೇಡಿಕೆಯಾಗಿದೆ. ಹಿಂದೆ ಎಸ್‌ಟಿ ಸಮುದಾಯದ ಮೂವರು ಸಚಿವರಿದ್ದರು. ಅದೇ ರೀತಿ ಈಗಲೂ ಮೂರು ಸಚಿವ ಸ್ಥಾನ ನೀಡಬೇಕು. ಇದೇನೂ ಹೆಚ್ಚುವರಿ ಬೇಡಿಕೆಯಲ್ಲ, ಹಳೆಯ ಪ್ರಾತಿನಿಧ್ಯದ ಮುಂದುವರಿಕೆಯಷ್ಟೇ ಎಂದಿದ್ದಾರೆ.

ವಿಶ್ವವಿದ್ಯಾಲಯಗಳಲ್ಲಿ ಎಸ್‌ಟಿ ಸಮುದಾಯದ ಉಪಕುಲಪತಿಗಳ (ವಿಸಿ) ನೇಮಕವಾಗಿಲ್ಲ. ತಕ್ಷಣವೇ ಸಮುದಾಯದ ವಿಸಿಗಳನ್ನು ನೇಮಕ ಮಾಡಬೇಕು. ಎರಡು ಮೂರು ಸಮುದಾಯಗಳ ಮೀಸಲಾತಿ ವಿಷಯ ಸದ್ಯ ಚರ್ಚೆಯಲ್ಲಿದೆ. ಮೀಸಲಾತಿ ವಿಚಾರದಲ್ಲಿ ನ್ಯಾಯಾಲಯ ನೀಡಿರುವ ತಡೆಯಾಜ್ಞೆಯನ್ನು ತೆರವುಗೊಳಿಸಬೇಕಿದೆ. ಇದಕ್ಕಾಗಿ ಸರ್ಕಾರ ಹಿರಿಯ ವಕೀಲರನ್ನು ನೇಮಕ ಮಾಡಬೇಕು. ಕೋರ್ಟ್ ಮುಖಾಂತರವೇ ಮೀಸಲಾತಿ ಸಮಸ್ಯೆಯನ್ನು ಸಂಪೂರ್ಣವಾಗಿ ಬಗೆಹರಿಸಿಕೊಳ್ಳಬೇಕಿದೆ. ಈ ಎಲ್ಲ ವಿಷಯಗಳ ಕುರಿತು ಚರ್ಚಿಸಲು ಎಸ್‌ಟಿ ಸಮುದಾಯದ ಶಾಸಕರ ನಿಯೋಗದೊಂದಿಗೆ ಶೀಘ್ರದಲ್ಲೇ ಸಿಎಂ ಅವರನ್ನು ಭೇಟಿ ಮಾಡಲಿದ್ದೇವೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.



ಸಚಿವ ಸತೀಶ್ ಜಾರಕಿಹೊಳಿ ನೇತೃತ್ವದ ವಾಲ್ಮೀಕಿ ಸಮುದಾಯದ ನಿಯೋಗವು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ವಿಧಾನಸೌಧದ ಕಚೇರಿಯಲ್ಲಿ ಶನಿವಾರ ಭೇಟಿಮಾಡಿ ಮನವಿ ಸಲ್ಲಿಸಿತು. ವಾಲ್ಮೀಕಿ ಗುರುಪೀಠ ಮಹಾ ಸಂಸ್ಥಾನದ ಪೀಠಾಧ್ಯಕ್ಷ ಶ್ರೀ ಪ್ರಸನ್ನಾನಂದ ಪುರಿ ಸ್ವಾಮೀಜಿ, ಶಾಸಕರಾದ ಬಸನಗೌಡ ದದ್ದಲ್, ಕಂಪ್ಲಿ ಗಣೇಶ್, ಕೂಡ್ಲಿಗಿ ಶ್ರೀನಿವಾಸ್, ರಘುಮೂರ್ತಿ ಮತ್ತಿತರರು ಇದ್ದರು.

**ಶಾಸಕರಿಗೆ ತರಬೇತಿ ನೀಡಲು ಸಭೆ**

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಅವರು, ಈ ಸಭೆಯನ್ನು ಕೇವಲ ಶಾಸಕರಿಗೆ ತರಬೇತಿ ನೀಡಲು ಕರೆಯಲಾಗಿದೆ. ಮತದಾನ ಮಾಡುವಾಗ ಶಾಸಕರಿಂದ ತಪ್ಪುಗಳಾಗಬಾರದು. ಅದಕ್ಕಾಗಿ ಸರಿಯಾಗಿ ಪ್ರ್ಯಾಕ್ಟೀಸ್ ಮಾಡಬೇಕಾಗುತ್ತದೆ. ಎರಡು–ಮೂರು ಮತಗಳು ತಪ್ಪಾದರೂ ಅಭ್ಯರ್ಥಿ ಔಟ್ ಆಗುವ ಸಾಧ್ಯತೆ ಇರುತ್ತದೆ. ಹೀಗಾಗಿ ಸುರಕ್ಷತೆ ಮತ್ತು ಸ್ಟ್ರಾಟಜಿ (ತಂತ್ರಗಾರಿಕೆ) ರೂಪಿಸಲು ಶಾಸಕರನ್ನು ಕರೆದುಕೊಂಡು ಹೋಗಲಾಗುತ್ತಿದೆ. ನಮ್ಮಲ್ಲಿ ಗರಿಷ್ಠ ಮತಗಳಿರುವುದರಿಂದ ನಾವು ನೂರಕ್ಕೆ ನೂರರಷ್ಟು ಗೆಲ್ಲುತ್ತೇವೆ, ಯಾವುದೇ ಸಮಸ್ಯೆ ಇಲ್ಲ ಎಂದು ಜಾರಕಿಹೊಳಿ ವಿಶ್ವಾಸ ವ್ಯಕ್ತಪಡಿಸಿದರು.

# ಜವಾಬ್ದಾರಿ ಸ್ಪಷ್ಟವಾಗಿದ್ದರೆ ಫಲಿತಾಂಶ ಉತ್ತಮವಾಗಿರುತ್ತದೆ

**ಖಾತೆ ಬಗ್ಗೆ ಅಸಮಾಧಾನವಿಲ್ಲ: ಸಚಿವ ಕೃಷ್ಣಭೈರೇಗೌಡ ಪ್ರತಿಕ್ರಿಯೆ**



ಬೆಂಗಳೂರು, ಜೂ.13: ಗ್ರೇಟರ್ ಬೆಂಗಳೂರು ಅಭಿವೃದ್ಧಿ ಖಾತೆಯ ಬಗ್ಗೆ ತಮಗೆ ಯಾವುದೇ ಅಸಮಾಧಾನವಿಲ್ಲ. ಆದರೆ ಜವಾಬ್ದಾರಿ ಹಂಚಿಕೆಯಲ್ಲಿ ಸ್ಪಷ್ಟತೆ ಇರಬೇಕೆಂದು ಮುಖ್ಯಮಂತ್ರಿಯವರಿಗೆ ಮನವರಿಕೆ ಮಾಡಿಕೊಟ್ಟಿರುವುದಾಗಿ ಸಚಿವ ಕೃಷ್ಣಭೈರೇಗೌಡ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಜನ, ಪಕ್ಷ ಹಾಗೂ ಮುಖ್ಯಮಂತ್ರಿಯವರ ನಿರೀಕ್ಷೆ ಅಪಾರವಾಗಿದೆ. ನಿರೀಕ್ಷೆಗಳಿಗೆ ತಕ್ಕ ಹಾಗೇ ಜನಪರವಾದ ಸುಧಾರಣೆಯಾಗ ಬೇಕಾದರೆ, ಜವಾಬ್ದಾರಿಯ ಬಗ್ಗೆ ಸ್ಪಷ್ಟತೆ ಅಗತ್ಯ ಇದೆ ಎಂದು ಹೇಳಿದ್ದಾರೆ.

ತಾವು ಯಾವುದೇ ಜವಾಬ್ದಾರಿ ತೆಗೆದುಕೊಂಡರು ಅದಕ್ಕೆ ಉತ್ತಮ ಫಲಿತಾಂಶ ನೀಡುವ ಉತ್ತರದಾಹಿತ್ವವನ್ನು ರೂಢಿಸಿಕೊಂಡು ಬಂದಿದ್ದೇನೆ. ನನಗೆ ಯಾವುದೇ ರೀತಿಯ ಅಸಮಾಧಾನಗಳಿಲ್ಲ, ಬೆಂಗಳೂರು ನಗರಾಭಿವೃದ್ಧಿ ಸಚಿವ ಸ್ಥಾನ ಎಂಬುವುದು ಅಧಿಕಾರವಲ್ಲ ಕಠಿಣ ಸವಾಲಿನ ಜವಾಬ್ದಾರಿ ಎಂದರು.

ಬಿಡಿಎ ಮತ್ತು ಬಿಎಂಆರ್‌ಡಿಎ ಹೊರತಾದ ಗ್ರೇಟರ್ ಬೆಂಗಳೂರು ನಗರಾಭಿವೃದ್ಧಿಯ ಬಗ್ಗೆ ಮುಖ್ಯಮಂತ್ರಿಯವರ ಜೊತೆ ಚರ್ಚೆ ಮಾಡಿದ್ದೇನೆ. ಸಂಪೂರ್ಣವಾದ ಮತ್ತು ಸ್ಪಷ್ಟವಾದ ಜವಾಬ್ದಾರಿ ಇದ್ದರೆ, ಉತ್ತಮವಾಗಿ ಕೆಲಸ ಮಾಡಲು ಸಾಧ್ಯ. ಇಲ್ಲವಾದರೆ ನಿರೀಕ್ಷಿತ ಹಾಗೂ ಫಲಿತಾಂಶ ಆಧಾರಿತವಾಗಿ ಕೆಲಸ ಮಾಡಲು ಸಾಧ್ಯವಾಗುವುದಿಲ್ಲ. ಇದನ್ನು ಮುಖ್ಯಮಂತ್ರಿ ಯವರಿಗೆ ಮನವರಿಕೆ ಮಾಡಿ ಕೊಟ್ಟಿದ್ದು, ಶೀಘ್ರವೇ ತೀರ್ಮಾನ ಮಾಡುತ್ತೇನೆ. ಅವರ ನಿರ್ಧಾರದ ಬಳಿಕ ಮುಂದಿನ ಕೆಲಸಗಳನ್ನು ನಿರ್ವಹಿಸುತ್ತೇನೆ ಎಂದಿದ್ದಾರೆ.

ಮುಖ್ಯಮಂತ್ರಿಯವರು ದೆಹಲಿಯಲ್ಲಿ ನಿರಂತರವಾದ ಸಭೆಗಳನ್ನು ನಡೆಸಿದ್ದರು. ನಾನೂ ಕೂಡ ಅವರೊಂದಿಗೆ ಕೆಲ ಸಭೆಗಳಲ್ಲಿ ಭಾಗವಹಿಸಿದ್ದೇನೆ ಎಂದು ತಿಳಿಸಿದರು.

**ಗೊಂದಲ:**

ಗ್ರೇಟರ್ ಬೆಂಗಳೂರು ನಗರಾಭಿವೃದ್ಧಿಯ ಖಾತೆ ತಮಗೆ ಬೇಕು ಎಂದು ಹಿರಿಯ ಸಚಿವ ರಾಮಲಿಂಗಾರೆಡ್ಡಿ ಪಟ್ಟುಹಿಡಿದಿದ್ದಾರೆ. ಕೃಷ್ಣಭೈರೇಗೌಡ ಅವರಿಗೆ ಬಿಎಂಆರ್‌ಡಿಎ ಮತ್ತು ಬಿಡಿಎ ಹೊರತಾದ ಖಾತೆಗಳನ್ನು ನೀಡಲಾಗಿದೆ. ಬೆಂಗಳೂರು ನಗರಾಭಿವೃದ್ಧಿ ಖಾತೆ ತಮ ಬಳಿಯೇ ಇರಲಿದೆಯೇ? ಅಥವಾ ಬದಲಾವಣೆ ಮಾಡಲಾಗಿದೆಯೇ ಎಂಬ ಬಗ್ಗೆ ಸ್ಪಷ್ಟನೆ ನೀಡುವಂತೆ ಕೃಷ್ಣಭೈರೇಗೌಡ ಅವರು ಒತ್ತಾಯಿಸಿರುವುದಾಗಿ ತಿಳಿದು ಬಂದಿದೆ. ಒಂದು ವೇಳೆ ಇದೇ ಖಾತೆಯಲ್ಲಿ ಮುಂದುವರೆಯಬೇಕು ಎಂದಾದರೆ, ತಮಗೆ ಬಿಡಿಎ ಹಾಗೂ ಬಿಎಂಆರ್‌ಡಿಎ ಖಾತೆ ಸಹಿತವಾಗಿ ಜವಾಬ್ದಾರಿ ನೀಡಬೇಕೆಂದು ಕೃಷ್ಣಭೈರೇಗೌಡ ಪಟ್ಟುಹಿಡಿದಿರುವುದಾಗಿ ತಿಳಿದು ಬಂದಿದೆ. ರಾಮಲಿಂಗಾರೆಡ್ಡಿಯವರ ಮನವೊಲಿಸುವ ಪ್ರಯತ್ನಗಳು ನಡೆದಿದ್ದು, ಹೈಕಮಾಂಡ್ ಕೂಡ ಈ ವಿಚಾರವಾಗಿ ಮಧ್ಯಪ್ರವೇಶಿಸಿದೆ ಎನ್ನಲಾಗಿದೆ. ಒಂದೆರಡು ದಿನಗಳಲ್ಲಿ ಸ್ಪಷ್ಟತೆಯೊಂದಿಗೆ ಈ ಬಗ್ಗೆ ನಿರ್ಧಾರ ತಿಳಿಸುವುದಾಗಿ ಮುಖ್ಯಮಂತ್ರಿಯವರು ಹೇಳಿರುವುದಾಗಿ ತಿಳಿದು ಬಂದಿದೆ.

# ದೇಶದ ವ್ಯವಸ್ಥೆಯನ್ನೇ ಛಿದ್ರಗೊಳಿಸಿರುವ ಬಿಜೆಪಿ: ರಾಹುಲ್ ಗಾಂಧಿ



**ನವದೆಹಲಿ, ಜೂ. 13:** ಇಂಡಿಯಾ ಮೈತ್ರಿಕೂಟದ ಸಭೆಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಮಮತಾ ಬ್ಯಾನರ್ಜಿ, ಅಖಿಲೇಶ್ ಯಾದವ್ ಸೇರಿದಂತೆ ಮೈತ್ರಿಕೂಟದ ಇತರ ಪಾಲುದಾರರನ್ನು ಗೊಂದಲದಲ್ಲಿದ್ದಾರೆ ಎಂದು ಕರೆದಿದ್ದಾರೆ. ಸಮಾಜವಾದಿ ಪಕ್ಷ, ತೃಣಮೂಲ ಕಾಂಗ್ರೆಸ್ ಮತ್ತು ರಾಷ್ಟ್ರೀಯ ಜನತಾ ದಳ ಪಕ್ಷಗಳು ತಾವು ಇದುವರೆಗೆ ಬಳಸುತ್ತಾ ಬಂದಿರುವ ಸಾಂಪ್ರದಾಯಿಕ ರಾಜಕೀಯ ತಂತ್ರಗಳು ಮುಂದೆಯೂ ಕೆಲಸ ಮಾಡುತ್ತವೆ ಎಂದು ನಂಬಿರುವುದು ಅವರ ಗೊಂದಲಕ್ಕೆ ಕಾರಣ ಎಂದು ರಾಹುಲ್ ಗಾಂಧಿ ತಿಳಿಸಿರುವುದಾಗಿ ವರದಿಯಾಗಿದೆ.

ದೇಶದ ಆಡಳಿತ ವ್ಯವಸ್ಥೆಯು ನಿಷ್ಪಕ್ಷಪಾತವಾಗಿ ಕೆಲಸ ಮಾಡಲು ಮುಕ್ತ ಅವಕಾಶ ನೀಡಿದಾಗ ಮಾತ್ರ ಈ ಹಳೆಯ ತಂತ್ರಗಳು ಯಶಸ್ವಿಯಾಗುತ್ತಿದ್ದವು. ಆದರೆ ಈಗ ಅಂತಹ ಪರಿಸ್ಥಿತಿ ಇಲ್ಲ ಎಂದು ರಾಹುಲ್ ಅಭಿಪ್ರಾಯಪಟ್ಟಿದ್ದಾರೆ. ಬಿಜೆಪಿಯು ದೇಶದ ಕಾನೂನು ವ್ಯವಸ್ಥೆ, ಅಧಿಕಾರಶಾಹಿ, ಗುಪ್ತಚರ ಸಂಸ್ಥೆಗಳು ಮತ್ತು ಚುನಾವಣಾ ಆಯೋಗ ಸೇರಿದಂತೆ ಸರ್ಕಾರದ ಎಲ್ಲಾ ಪ್ರಮುಖ ಸಾಂಸ್ಥಿಕ ವ್ಯವಸ್ಥೆಗಳನ್ನು ತನ್ನ ನಿಯಂತ್ರಣದಲ್ಲಿಟ್ಟುಕೊಂಡಿದೆ ಎಂದು ರಾಹುಲ್ ಗಾಂಧಿ ಗಂಭೀರವಾಗಿ ಆರೋಪಿಸಿದ್ದಾರೆ. ಈ ಮೈತ್ರಿಕೂಟದಲ್ಲಿ ಒಂದು ರೀತಿಯ ಗೊಂದಲ ಇರುವುದಕ್ಕೆ ವಿಷಾದಿಸಿದ ಅವರು, ಬಿಜೆಪಿ ಎಲ್ಲವನ್ನೂ ನಿಯಂತ್ರಿಸುತ್ತಿರುವುದರಿಂದ ಹಳೆಯ ರಾಜಕೀಯ ಲೆಕ್ಕಾಚಾರ ಈಗ ಫಲ ನೀಡುತ್ತಿಲ್ಲ ಎಂದಿದ್ದಾರೆ.

ಟಿಎಂಸಿ ಪಕ್ಷದಲ್ಲಿ ತಮಗೆ ಅನೇಕ ಸ್ನೇಹಿತರಿದ್ದು, ತಾವು ಚುನಾವಣೆಯಲ್ಲಿ ಭರ್ಜರಿ ಜಯ ಸಾಧಿಸಲಿದ್ದೇವೆ ಎಂಬ ಭ್ರಮೆಯಲ್ಲಿದ್ದ ಅವರಿಗೆ, ನೀವೆಲ್ಲ ಕನಸಿನ ಲೋಕದಲ್ಲಿದ್ದೀರಿ ಎಂದು ತಾವು ಮೊದಲೇ ಎಚ್ಚರಿಸಿದ್ದಾಗಿ ರಾಹುಲ್ ನೆನಪಿಸಿಕೊಂಡಿದ್ದಾರೆ. ಗುಜರಾತ್, ಮಧ್ಯಪ್ರದೇಶ, ಛತ್ತೀಸ್‌ಗಢ, ಹರಿಯಾಣ ಮತ್ತು ಮಹಾರಾಷ್ಟ್ರಗಳಲ್ಲಿ ಏನಾಯಿತು ಎಂಬುದನ್ನು ತಾವು ಕಣ್ಣಾರೆ ಕಂಡಿರುವುದಾಗಿ ಹೇಳಿದ ಅವರು, ಆದರೂ ಮೈತ್ರಿಕೂಟದ ಅನೇಕ ನಾಯಕರು ಇನ್ನು ಇದನ್ನು ಒಪ್ಪಿಕೊಳ್ಳಲು ಸಿದ್ಧರಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ಪಕ್ಷವು ಕೇವಲ ರಾಜಕೀಯ ಮಾಡಲು ಇಲ್ಲ, ಅದು ಜನರ ಹಕ್ಕುಗಳಿಗಾಗಿ ಹೋರಾಡುವ ಒಂದು ಚಳವಳಿ, ಬಿಜೆಪಿಯವರು ಸರ್ಕಾರಿ ಸಂಸ್ಥೆಗಳನ್ನು ಎಷ್ಟು ಹತ್ತಿಕ್ಕುತ್ತಾರೋ, ಕಾಂಗ್ರೆಸ್ ಅಷ್ಟೇ ಜೋರಾಗಿ ಸಂವಿಧಾನದ ರಕ್ಷಣೆಗಾಗಿ ಹೋರಾಡಲಿದೆ, ನಮ್ಮ ಪಕ್ಷ ತನ್ನ ಮೇಲೆ ಬರುವ ಎಲ್ಲಾ ಟೀಕೆಗಳನ್ನು ವಿಷಕಂಠನಂತೆ ನುಂಗಲು ಸಿದ್ಧವಿದ್ದು, ಎಲ್ಲವನ್ನೂ ನಗುಮುಖದಿಂದಲೇ ಸ್ವೀಕರಿಸುವುದಾಗಿ ತಿಳಿಸಿದ್ದಾರೆ.

ತಮಗೆ ಮೈತ್ರಿಕೂಟದ ಸ್ನೇಹಿತರ ಜೊತೆ ಜಗಳವಾಡುವ ಯಾವುದೇ ಆಸೆ ಇಲ್ಲ ಮತ್ತು ಬಿಹಾರ ಮಾಜಿ ಸಿಎಂ ನಿತೀಶ್ ಕುಮಾರ್ ಅವರು ಮೈತ್ರಿಕೂಟ ತೊರೆದಿದ್ದಕ್ಕೆ ಕಾಂಗ್ರೆಸ್ ಕಾರಣವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಮುಂದಿನ ಚುನಾವಣೆಯನ್ನು ಗೆಲ್ಲುವುದೇ ದೊಡ್ಡ ಸವಾಲು ಎಂದು ಮೈತ್ರಿಕೂಟದ ನಾಯಕರು ಭಾವಿಸುತ್ತಿದ್ದಾರೆ, ಆದರೆ ದೇಶದ ಜನರಲ್ಲಿ ಸದ್ಯ ಇರುವ ಆಕ್ರೋಶವನ್ನು ನೋಡಿದರೆ ಮುಂದಿನ ಚುನಾವಣೆ ಈಗಾಗಲೇ ಮುಗಿದುಹೋಗಿದೆ ಮತ್ತು ನಾವು ಗೆದ್ದಾಗಿದೆ ಎಂದು ರಾಹುಲ್ ಭವಿಷ್ಯ ನುಡಿದಿದ್ದಾರೆ. ನಿಜವಾದ ಸಮಸ್ಯೆ ಇರುವುದು ಆರ್‌ಎಸ್‌ಎಸ್ ದೇಶದ ಎಲ್ಲಾ ಸಾಂಸ್ಥಿಕ ವ್ಯವಸ್ಥೆಗಳನ್ನು ವಶಪಡಿಸಿಕೊಂಡಿರುವುದರಲ್ಲಿ ಅಡಗಿದೆ. ಹೀಗಾಗಿ ಮುಂದೆ ನಮಗೆ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ಎದುರಿಸಲು ಸಿಗುವುದೇ ಕಷ್ಟ ಎಂಬುದು ಅಸಲಿ ಸವಾಲಾಗಿದೆ ಎಂದಿದ್ದಾರೆ.

ವಿರೋಧ ಪಕ್ಷಗಳ ನಡುವೆ ಹೊಂದಾಣಿಕೆ ಇಲ್ಲ ಎಂಬುದು ಕೇವಲ ಬಿಜೆಪಿಯ ಅಪಪ್ರಚಾರ ವಾಗಿದ್ದು, ತಮಿಳುನಾಡಿನ ಡಿಎಂಕೆ ಸೇರಿದಂತೆ ಇಡೀ ಮೈತ್ರಿಕೂಟವು ಭಾರತದ ಅಸ್ಮಿತೆಯನ್ನು ರಕ್ಷಿಸಲು ಒಂದಾಗಿ ನಿಲ್ಲಲಿದೆ ಎಂದು ಅವರು ಭರವಸೆ ನೀಡಿದ್ದಾರೆ.

ಕೇರಳದ ಮಾಜಿ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಜೊತೆ ರಾಜಕೀಯ ಹೋರಾಟ ಮುಂದುವರಿದಿರುವುದರಿಂದ ಅವರ ಜೊತೆ ತಾವೀಗ ಹಸ್ತಲಾಘವ ಮಾಡಲು ಸಾಧ್ಯವಿಲ್ಲ ಎಂದ ಅವರು, ಪರಿಸ್ಥಿತಿಗೆ ತಕ್ಕಂತೆ ನಾವು ನಮ್ಯತೆಯನ್ನು ಹೊಂದಿರಬೇಕು ಮತ್ತು ವಿರೋಧ ಪಕ್ಷಗಳು ದುರ್ಬಲವಾಗಿವೆ ಎಂದು ಬಿಂಬಿಸಲು ನಡೆಯುತ್ತಿರುವ ವ್ಯವಸ್ಥಿತ ಪಿತೂರಿಯನ್ನು ಅರ್ಥಮಾಡಿ ಕೊಳ್ಳಬೇಕು ಎಂದು ರಾಹುಲ್ ಗಾಂಧಿ ಕರೆ ನೀಡಿದ್ದಾರೆ.




ನವದೆಹಲಿಯಲ್ಲಿ ಅಖಿಲ ಭಾರತೀಯ ರಾಷ್ಟ್ರೀಯ ಶೈಕ್ಷಿಕ್ ಮಹಾಸಂಘ ಮತ್ತು ಭಾರತೀಯ ಕೃಷಿ ಸಂಶೋಧನಾ ಮಂಡಳಿ ಆಯೋಜಿಸಿದ್ದ ವಿಕಸಿತ ಭಾರತಕ್ಕಾಗಿ ಸುಸ್ಥಿರ ಕೃಷಿಯ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ@2047: ಸಂಪ್ರದಾಯ, ತಂತ್ರಜ್ಞಾನ ಮತ್ತು ಸ್ಪಷ್ಟ ಫಲಿತಾಂಶಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸದಸ್ಯರೊಂದಿಗೆ ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಸಮೂಹ ಛಾಯಾಚಿತ್ರದಲ್ಲಿ ಪಾಲ್ಗೊಂಡಿದ್ದರು.

# ಅವಶ್ಯಕತೆಗೆ ತಕ್ಕಂತೆ ರಸಗೊಬ್ಬರ ಪೂರೈಸುವುದು ಕೇಂದ್ರದ ಜವಾಬ್ದಾರಿ: ಸಚಿವ ಈಶ್ವರ ಖಂಡ್ರೆ



**ಬೆಂಗಳೂರು, ಜೂ.13:** ರೈತರ ಅವಶ್ಯಕತೆಗೆ ಅನುಗುಣವಾಗಿ ರಾಜ್ಯಗಳಿಗೆ ರಸಗೊಬ್ಬರ ಪೂರೈಸಬೇಕಾದ್ದು ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯಕ್ಕೆ ಬೇಡಿಕೆಗೆ ಪ್ರತಿಯಾಗಿ ಕೇವಲ 30ರಷ್ಟು ಮಾತ್ರ ರಸಗೊಬ್ಬರ ಪೂರೈಸಿದ್ದು, ಇದರಿಂದ ರಾಜ್ಯದಲ್ಲಿ ರಸಗೊಬ್ಬರದ ತೀವ್ರ ಕೊರತೆ ಉದ್ಭವಿಸಿದೆ ಎಂದರು. ಕೇಂದ್ರ ಸರ್ಕಾರ ತಾರತಮ್ಯ ಮಾಡದೆ ಕರ್ನಾಟಕ ರಾಜ್ಯದ ರೈತರ ಹಿತಕಾಯಲು ಪೂರ್ಣ ಪ್ರಮಾಣದಲ್ಲಿ ರಸಗೊಬ್ಬರ ಪೂರೈಕೆ ಮಾಡುವಂತೆ ಅವರು ಒತ್ತಾಯಿಸಿದರು.ಬೀದರ್ ಜಿಲ್ಲೆಯಲ್ಲಿ ರಸಗೊಬ್ಬರವನ್ನು ಹೆಚ್ಚಿನ ದರಕ್ಕೆ ಮತ್ತು ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲು ಮತ್ತು ಅಂತಹ ಮಳಿಗೆಗಳ ಮೇಲೆ ದಾಳಿ ಮಾಡಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಿರುವುದಾಗಿಯೂ ಈಶ್ವರ ಖಂಡ್ರೆ ತಿಳಿಸಿದರು.

### ಹೊಣೆಗಾರಿಕೆಯನ್ನು ದಕ್ಷತೆ, ಪ್ರಾಮಾಣಿಕತೆಯಿಂದ ನಿಭಾಯಿಸುವುದೇ ನಮ್ಮ ಬದ್ಧತೆ

ನಾವೆಲ್ಲರೂ ಜನಸೇವೆ ಮಾಡಲು ಬಂದವರಾಗಿದ್ದು, ಆ ಖಾತೆ, ಈ ಖಾತೆ ಎಂಬ ಭೇದಭಾವ ನಮ್ಮಲ್ಲಿಲ್ಲ. ನೀಡಲಾದ ಜವಾಬ್ದಾರಿಯನ್ನು ದಕ್ಷತೆ ಮತ್ತು ಪ್ರಾಮಾಣಿಕತೆಯಿಂದ ನಿಭಾಯಿಸುವುದಷ್ಟೇ ನಮ್ಮ ಬದ್ಧತೆ ಎಂದು ಅರಣ್ಯ ಮತ್ತು ಜೀವಿಶಾಸ್ತ್ರ ಸಚಿವ ಈಶ್ವರ್ ಖಂಡ್ರೆ ಸ್ಪಷ್ಟಪಡಿಸಿದ್ದಾರೆ. ವಿಧಾನಸೌಧದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಶನಿವಾರ ಮಾತನಾಡಿದ ಅವರು, ಸಚಿವ ಸಂಪುಟದಲ್ಲಿ ಖಾತೆ ಹಂಚಿಕೆ ಕುರಿತು ಎದ್ದಿರುವ ಕೆಲವರ ಅಸಮಾಧಾನದ ವದಂತಿಗಳನ್ನು ಸಂಪೂರ್ಣವಾಗಿ ತಳ್ಳಿಹಾಕಿದರು. ಕೆಲ ಸಚಿವರಿಗೆ ಖಾತೆ ಬದಲಾವಣೆ ಕುರಿತು ಉಂಟಾಗಿದ್ದ ಅಸಮಾಧಾನದ ಪ್ರಶ್ನೆಗೆ ಉತ್ತರಿಸಿದ ಖಂಡ್ರೆ, ಈಗಾಗಲೇ ಹಿರಿಯ ನಾಯಕರಾದ ರಾಮಲಿಂಗಾರೆಡ್ಡಿಯವರು ತಮ್ಮ ಇಲಾಖೆಯ ಅಧಿಕಾರ ವಹಿಸಿಕೊಂಡಿದ್ದಾರೆ. ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಿ ಕೆಲಸವನ್ನೂ ಆರಂಭಿಸಿದ್ದಾರೆ. ಸಂಪುಟದ ಎಲ್ಲಾ ಸಚಿವರು ತಮಗೆ ವಹಿಸಲಾದ ಖಾತೆಗಳ ಜವಾಬ್ದಾರಿಯನ್ನು ಅತ್ಯಂತ ಉತ್ತಮವಾಗಿ ನಿರ್ವಹಿಸುತ್ತಿದ್ದಾರೆ. ಇದರಲ್ಲಿ ಯಾವುದೇ ಗೊಂದಲಗಳಿಲ್ಲ ಎಂದರು.

ತಮ್ಮ ಖಾತೆಯ ಬಗ್ಗೆ ತೃಪ್ತಿ ಇದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, ಕಳೆದ ಅವಧಿಯಲ್ಲಿ ಅರಣ್ಯ ಇಲಾಖೆಯಲ್ಲಿ ಅತ್ಯಂತ ಉತ್ತಮ ಕೆಲಸ ಮಾಡಿದ ತೃಪ್ತಿ ನನಗಿದೆ. ಈಗ ನೀಡಿರುವ ಖಾತೆಯನ್ನೂ ಅಷ್ಟೇ ಜವಾಬ್ದಾರಿಯಿಂದ ಮತ್ತು ಚೆನ್ನಾಗಿ ನಿಭಾಯಿಸುತ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಅನ್ನದಾತರ ಹೊಟ್ಟೆಗೆ ಹೊಡೆದು ಕಟ್ಟುವ ಯಾವುದೇ ಟೌನ್‌ಶಿಪ್ ಅಭಿವೃದ್ಧಿಯಲ್ಲ, ರೈತರ ಭವಿಷ್ಯದ ಸಮಾಧಿ: ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಕ್ರೋಶ



**ಬೆಂಗಳೂರು, ಜೂ.13:** ರೈತರ ಜಮೀನಿನ ಮೇಲೆ ಬುಲ್ಡೋಜರ್ ಓಡಿಸಿ, ರಿಯಲ್ ಎಸ್ಟೇಟ್ ಸಾಮ್ರಾಜ್ಯ ಕಟ್ಟಲು ಹೊರಟಿರುವ ಸಿಎಂ ಡಿ.ಕೆ.ಶಿವಕುಮಾರ್ ಅವರೇ, ಅನ್ನದಾತರ ಆಕ್ರೋಶದ ಜ್ವಾಲೆಯಲ್ಲಿ ಕಾಂಗ್ರೆಸ್ ಸರಕಾರ ಭಸ್ಮವಾಗಬೇಕಾಗುತ್ತದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಸುಮಾರು 470 ದಿನಗಳಿಂದ ಅನ್ನದಾತರು ನಡೆಸುತ್ತಿರುವ ಹೋರಾಟ, ಕಣ್ಣೀರು ಮತ್ತು ಆಕ್ರೋಶವನ್ನು ಲೆಕ್ಕಿಸದೆ, ಬಿಡದಿ ಟೌನ್‌ಶಿಪ್ ಹೆಸರಿನಲ್ಲಿ 499 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಕಬಳಿಸಲು ಅಂತಿಮ ಅಧಿಸೂಚನೆ ಹೊರಡಿಸಿರುವುದು ಕಾಂಗ್ರೆಸ್ ಸರಕಾರದ ನಿಜವಾದ ಮುಖವನ್ನು ಬಯಲು ಮಾಡಿದೆ ಎಂದು ಹೇಳಿದ್ದಾರೆ.

ಮುಖ್ಯಮಂತ್ರಿಗಳೇ, ರಾಜ್ಯದ ರೈತರನ್ನು ನೀವು ದುರ್ಬಲರೆಂದು ಭಾವಿಸಿದ್ದರೆ ಅದು ದೊಡ್ಡತಪ್ಪು. ಇನ್ನು ಕೇವಲ ಒಂದೂವರೆ ವರ್ಷದಲ್ಲಿ ನಿಮ್ಮ ಈ ಜನವಿರೋಧಿ ಸರ್ಕಾರ ಇತಿಹಾಸದ ಪುಟ ಸೇರಲಿದೆ. 2028ರಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣವೇ ಈ ಇಡೀ ಅಕ್ರಮ ಭೂಸ್ವಾಧೀನ ಪ್ರಕ್ರಿಯೆಯನ್ನು ಅಧಿಕೃತವಾಗಿ ರದ್ದುಪಡಿಸಲಾಗುವುದು. ರೈತರಿಗೆ ಕೊಟ್ಟಿರುವ ಮಾತನ್ನು ಖಂಡಿತ ಉಳಿಸಿಕೊಳ್ಳುತ್ತೇವೆ. ರೈತರ ತೀವ್ರ ವಿರೋಧದ ನಡುವೆಯೂ ಇಷ್ಟೊಂದು ಆತುರಾತುರವಾಗಿ ಭೂಮಿ ಕಬಳಿಸಲು ಹೊರಟಿರುವುದರ ಹಿಂದಿನ ಅಸಲಿ ರಹಸ್ಯವೇನು ನಿಮ್ಮ ಬಿಲ್ಡರ್ ಮಾಫಿಯಾದ ಜೇಬು ತುಂಬಿಸುವ ರಿಯಲ್ ಎಸ್ಟೇಟ್ ಅಜೆಂಡಾವೇ ಇದಕ್ಕೆ ಕಾರಣವಲ್ಲವೇ ಎಂದು ಪ್ರಶ್ನಿಸಿದ್ದಾರೆ.

### ಸಿಎಂ ಎಂದರೆ ಚೀಫ್ ಮಿನಿಸ್ಟರ್ ಅಲ್ಲ, ಕಮಿಷನ್, ಕರಪ್ಷನ್ ಮಿನಿಸ್ಟರ್

ಬೆಂಗಳೂರಿನ ಕಸದ ಟೆಂಡರ್‌ನಲ್ಲೂ ಸಾವಿರಾರು ಕೋಟಿ ಕಮೀಷನ್ ವಾಸನೆ ಹೊಡೆದ ಈ ಲಜ್ಜೆಗೆಟ್ಟ ಕಾಂಗ್ರೆಸ್ ಸರ್ಕಾರ, ಈಗ ಅನ್ನದಾತರ ಜಮೀನಿನಲ್ಲೂ ರಿಯಲ್ ಎಸ್ಟೇಟ್ ಬಂಗಾರ ಹುಡುಕಲು ಹೊರಟಿದೆ. ಡಿ.ಕೆ.ಶಿವಕುಮಾರ್ ಅವರೇ, ನಿಮ್ಮ ಆಡಳಿತದಲ್ಲಿ ಸಿಎಂ ಎಂದರೆ ಚೀಫ್ ಮಿನಿಸ್ಟರ್ ಅಲ್ಲ, ಅದು ಕಮಿಷನ್ ಮಿನಿಸ್ಟರ್, ಕರಪ್ಷನ್ ಮಿನಿಸ್ಟರ್ ಎಂಬ ಹೆಸರನ್ನು ನೀವೇ ಸ್ವತಃ ಸಂಪಾದಿಸಿಕೊಂಡಿದ್ದೀರಿ. ಅನ್ನದಾತರ ಹೊಟ್ಟೆಗೆ ಹೊಡೆದು ಕಟ್ಟುವ ಯಾವುದೇ ಟೌನ್‌ಶಿಪ್ ಅಭಿವೃದ್ಧಿಯಲ್ಲ, ಅದು ರೈತರ ಭವಿಷ್ಯದ ಸಮಾಧಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಹೋರಾಟ ಕೇವಲ 499 ಎಕರೆ ಜಮೀನಿಗಾಗಿ ಅಲ್ಲ; ಇದು ರೈತರ ಹಕ್ಕು, ಗೌರವ ಮತ್ತು ಬದುಕಿನ ಹೋರಾಟ. ಸರ್ಕಾರ ಕೂಡಲೇ ಈ ಭೂಸ್ವಾಧೀನ ಪ್ರಕ್ರಿಯೆಯನ್ನು ಹಿಂಪಡೆಯಬೇಕು. ಇಲ್ಲವಾದರೆ ರಾಜ್ಯದ ರೈತರ ಆಕ್ರೋಶದ ಜ್ವಾಲೆಯಲ್ಲಿ ಕಾಂಗ್ರೆಸ್ ಸರ್ಕಾರ ಭಸ್ಮವಾಗಬೇಕಾಗುತ್ತದೆ ಎಂದು ಆರ್.ಅಶೋಕ್ ಎಚ್ಚರಿಸಿದ್ದಾರೆ.

# ಸೇನಾ ಸಾರಿಗೆ ವಿಮಾನ ಪತನ ಪೈಲಟ್ ಸೇರಿ ಐವರ ದುರ್ಮರಣ

**ಜೋರ್ಹತ್, ಜೂ.13:** ಅಸ್ಸಾಂನ ಜೋರ್ಹತ್‌ನಲ್ಲಿರುವ ವಾಯುಪಡೆ ನಿಲ್ದಾಣದ ಬಳಿ ಭಾರತೀಯ ವಾಯುಪಡೆಯ ಸಾರಿಗೆ ವಿಮಾನವೊಂದು ಅಪಘಾತಕ್ಕೀಡಾಗಿದೆ ಎಂದು ರಕ್ಷಣಾ ಅಧಿಕಾರಿಗಳು ತಿಳಿಸಿದ್ದಾರೆ. ವಿಮಾನವನ್ನು ಎಎನ್ –32 ಎಂದು ಗುರುತಿಸಲಾಗಿದ್ದು, ರೌರಿಯಾ ಪ್ರದೇಶದಲ್ಲಿ ಇಳಿಯುವಾಗ ಅಪಘಾತಕ್ಕೀಡಾಗಿದೆ.

ಜೋರ್ಹತ್‌ನಲ್ಲಿ ಇಳಿಯುವಾಗ ಐಎಎಫ್ An–32 ವಿಮಾನ ಅಪಘಾತಕ್ಕೀಡಾಗಿದೆ. ಅಪಘಾತದ ಕಾರಣವನ್ನು ಕಂಡುಹಿಡಿಯಲು ತನಿಖಾ ಸಮಿತಿ ರಚಿಸಲಾದೆ .

ಘಟನೆಯಲ್ಲಿ ಫೈಲಟ್ ಸೇರಿ ಐವರು ಮೃತಪಟ್ಟಿದ್ದಾರೆ ಎನ್ನಲಾಗಿದೆ. ಒಂದು ವರ್ಷದಲ್ಲಿ ಅಪಘಾತಕ್ಕೀಡಾದ ಎರಡನೇ ವಿಮಾನ ಇದಾಗಿದೆ. ಕಳೆದ ವರ್ಷ ಮಾರ್ಚ್ 7 ರಂದು, ಪಶ್ಚಿಮ ಬಂಗಾಳದ ಡಾರ್ಜಿಲಿಂಗ್ ಜಿಲ್ಲೆಯ ಬಾಗ್ಡೋಗ್ರಾದಲ್ಲಿ AN-32 ಅಪಘಾತಕ್ಕೀಡಾಯಿತು. ಆದಾಗ್ಯೂ, ಸಿಬ್ಬಂದಿ ಸುರಕ್ಷಿತವಾಗಿದ್ದರು ಮತ್ತು ಆ ಘಟನೆಯಲ್ಲಿ ಯಾರೂ ಪ್ರಾಣ ಕಳೆದುಕೊಂಡಿರಲಿಲ್ಲ



1980 ರ ದಶಕದ ಸೋವಿಯತ್ ಯುಗದ ಅವಳಿ–ಎಂಜಿನ್ ಟರ್ಬೋಪ್ರೊಪ್ ಮತ್ತು ಸಾರಿಗೆ ವಿಮಾನ, ಅತ್ಯಂತ ಕಠಿಣ ವಾತಾವರಣದಲ್ಲಿ ಸರಬರಾಜುಗಳನ್ನು ಸಾಗಿಸಲು ಹೆಚ್ಚಾಗಿ ಬಳಸಲಾಗುವ ಈ ವಿಮಾನವು ಸುಮಾರು 40 ರಿಂದ 50 ಪ್ರಯಾಣಿಕರನ್ನು ಮತ್ತು 7.5 ಟನ್‌ಗಳಷ್ಟು ಸರಕುಗಳನ್ನು ಸಾಗಿಸಬಲ್ಲದು

ಭಾರತವು ಸರಿಸುಮಾರು 105 AN–32 ವಿಮಾನಗಳನ್ನು ಸೇವೆಯಲ್ಲಿ ಹೊಂದಿದ್ದು, ಅವುಗಳನ್ನು ಆಧುನೀಕರಿಸಲಾಗುತ್ತಿದೆ. ಅವುಗಳಲ್ಲಿ 35 ವಿಮಾನಗಳನ್ನು ಉಕ್ರೇನ್ ಮೂಲದ ಸಂಸ್ಥೆ ನವೀಕರಿಸಿದೆ ಎಂದು ವರದಿಯಾಗಿದೆ ಮತ್ತು ಉಳಿದವುಗಳನ್ನು ಭಾರತದಲ್ಲಿ ಸ್ಥಳೀಯವಾಗಿ ಆಧುನೀಕರಿಸಲಾಗುತ್ತಿದೆ. ಆದಾಗ್ಯೂ, ಭಾರತವು ತನ್ನ ಮಧ್ಯಮ ಸಾರಿಗೆ ವಿಮಾನ ಕಾರ್ಯಕ್ರಮದ ಅಡಿಯಲ್ಲಿ ಹಳೆಯದಾದ AN–32 ಗಳನ್ನು ಬದಲಾಯಿಸಲು ಯೋಜಿಸುತ್ತಿದೆ. ವರದಿಗಳ ಪ್ರಕಾರ ಭಾರತವು IAF ಗಾಗಿ 60 ವಿಮಾನಗಳನ್ನು ಖರೀದಿಸುವ ಸಾಧ್ಯತೆಯಿದೆ, ಆದರೆ ರಕ್ಷಣಾ ಸ್ವಾಧೀನ ಮಂಡಳಿ ಮತ್ತು ಭದ್ರತೆಯ ಕ್ಯಾಬಿನೆಟ್ ಸಮಿತಿಯಿಂದ ಅನುಮೋದನೆಗಾಗಿ ಕಾಯಲಾಗುತ್ತಿದೆ.

**ಅಸ್ಸಾಂನಲ್ಲಿ ನಡೆದ ವಿಮಾನ ಅಪಘಾತದಲ್ಲಿ ಭಾರತೀಯ ವಾಯುಪಡೆಯ ಐದು ಸಿಬ್ಬಂದಿ ಸಾವನ್ನಪ್ಪಿದ್ದಕ್ಕೆ ಕಾಂಗ್ರೆಸ್ ನಾಯಕ ರಾಹುಲ್ ಶನಿವಾರ ದುಃಖ ವ್ಯಕ್ತಪಡಿಸಿದ್ದಾರೆ, ಈ ನಷ್ಟವು ಅತ್ಯಂತ ದುಃಖಕರ ಮತ್ತು ರಾಷ್ಟ್ರದ ಸೇವೆಯಲ್ಲಿ ಸೈನಿಕರ ಅತ್ಯುನ್ನತ ತ್ಯಾಗಕ್ಕೆ ಗೌರವ ಸಲ್ಲಿಸುತ್ತಿದೆ ಎಂದು ಬಣ್ಣಿಸಿದ್ದಾರೆ. ಮೃತ ಸಿಬ್ಬಂದಿಯ ಕುಟುಂಬಗಳಿಗೆ ಗಾಂಧಿ ತಮ್ಮ ಸಂತಾಪ ಸೂಚಿಸಿದ್ದಾರೆ ಮತ್ತು ಅವರ ಧೈರ್ಯ ಮತ್ತು ಸಮರ್ಪಣೆಯನ್ನು ದೇಶವು ಯಾವಾಗಲೂ ನೆನಪಿಸಿಕೊಳ್ಳುತ್ತದೆ ಎಂದು ಹೇಳಿದರು.**

## ಮಧ್ಯರಾತ್ರಿ 2.30ಕ್ಕೆ ಅಭಿಷೇಕ್ ಬ್ಯಾನರ್ಜಿ ಮನೆಗೆ ಪೊಲೀಸರ ದಾಳಿ

**ಕೋಲ್ಕತ್ತಾ, ಜೂ. 13:** ಸುಲಿಗೆ ಪ್ರಕರಣವೊಂದರ ತನಿಖೆಯ ಭಾಗವಾಗಿ ಶನಿವಾರ (ಜೂ. 13) ಮಧ್ಯರಾತ್ರಿ 2.30ಕ್ಕೆ ಟಿಎಂಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಅವರ ಕೋಲ್ಕತ್ತಾದ ಮನೆಗೆ ಪೊಲೀಸರು ನುಗ್ಗಿದ್ದು, ಈ ವೇಳೆ ಸ್ಥಳದಲ್ಲಿ ಬ್ಯಾನರ್ಜಿ ಅವರ ಭದ್ರತಾ ಸಿಬ್ಬಂದಿ ಮತ್ತು ಪೊಲೀಸರ ನಡುವೆ ವಾಗ್ವಾದ ನಡೆದು ಭಾರೀ ಹೈಡ್ರಾಮಾ ನಡೆದಿದೆ ಎಂದು ವರದಿಯಾಗಿದೆ. ಅಭಿಷೇಕ್ ಬ್ಯಾನರ್ಜಿ ಅವರ ಆಪ್ತ ಕಾರ್ಯದರ್ಶಿ ಸುಮಿತ್ ರಾಯ್ ವಿರುದ್ಧ ಸುಲಿಗೆ ಪ್ರಕರಣ ದಾಖಲಾಗಿದ್ದು, ಅವರನ್ನು ಬಂಧಿಸಲು ಪಶ್ಚಿಮ ಮೇದಿನಿಪುರ ಪೊಲೀಸರು ಮಧ್ಯರಾತ್ರಿ ದಾಳಿ ನಡೆಸಿದ್ದರು ಎಂದು ಮೂಲಗಳು ತಿಳಿಸಿವೆ. ಪೊಲೀಸರು ಅಭಿಷೇಕ್ ಬ್ಯಾನರ್ಜಿ ಮನೆಗೆ ಬೆಳಗಿನಜಾವ 2:30ಕ್ಕೆ ಭೇಟಿ ನೀಡಿ ಶೋಧ ನಡೆಸಲು ಮುಂದಾಗಿದ್ದು, ಈ ವೇಳೆ ಮನೆಯೊಳಗಿದ್ದ ಬ್ಯಾನರ್ಜಿ ಅವರ ಭದ್ರತಾ ಸಿಬ್ಬಂದಿ ಪೊಲೀಸರ ತಂಡವನ್ನು ತಡೆದಿದ್ದಾರೆ. ಈ ವೇಳೆ ಎರಡು ಕಡೆ ವಾಗ್ವಾದ ನಡೆದಿದ್ದು, ಬಳಿಕ ಪೊಲೀಸರು ಮನೆಗೆ ನುಗ್ಗಿ ಶೋಧ ನಡೆಸಿದ್ದಾರೆ. ಪೊಲೀಸರ ದಾಳಿ ಮಾಹಿತಿ ತಿಳಿಯುತ್ತಿದ್ದಂತೆ ರಾತ್ರಿಯೇ ಮಾಜಿ ಸಿಎಂ ಮಮತಾ ಬ್ಯಾನರ್ಜಿ ಅವರು ಅಳಿಯನ ನಿವಾಸಕ್ಕೆ ಆಗಮಿಸಿ ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು ಎನ್ನಲಾಗಿದೆ. ಬಳಿಕ ಸ್ವಲ್ಪ ಹೊತ್ತು ಬಿಟ್ಟು ಪೊಲೀಸರು ವಾಪಸ್ ಹೋಗಿದ್ದಾರೆ ಎಂದು ತಿಳಿದು ಬಂದಿದೆ. ಘಟನೆ ಬಗ್ಗೆ ಪ್ರತಿಕ್ರಿಯಿಸಿರುವ ಅಭಿಷೇಕ್ ಬ್ಯಾನರ್ಜಿ, ಅವರು ಬೀಗ ಮುರಿದು ಇಡೀ ಮನೆಯನ್ನು ಶೋಧಿಸಿದರು. ಯಾಕೆ ದಾಳಿ ಮಾಡಿದ್ರೂ, ಏನಾಯ್ತು ಎಂಬ ಬಗ್ಗೆ ತನಿಖಾ ಸಂಸ್ಥೆಗಳನ್ನೇ ಕೇಳಿ



ಎಂದು ಹೇಳಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಪೊಲೀಸ್ ಅಧಿಕಾರಿಗಳು, ಪಶ್ಚಿಮ ಮೇದಿನಿಪುರ ಜಿಲ್ಲೆಯ ಸಲ್ಬೋನಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಆರ್ಥಿಕ ವಂಚನೆ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ಈ ಶೋಧ ನಡೆದಿದೆ. ಆರೋಪಗಳ ಸ್ವರೂಪ ಅಥವಾ ನಿರ್ದಿಷ್ಟ ಪುರಾವೆಗಳ ಕುರಿತು ಹೆಚ್ಚಿನ ವಿವರ ಈಗಲೇ ನೀಡಲಾಗುವುದಿಲ್ಲ ಎಂದು ತಿಳಿಸಿದ್ದಾರೆ.

**ತೃಣಮೂಲ ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಅವರ ಕಾಳಿಘಾಟ್ ನಿವಾಸದ ಬೀಗ ಮುರಿದು ಮನೆಯೊಳಗೆ ಶೋಧ ಕಾರ್ಯಾಚರಣೆ ನಡೆಸಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಶನಿವಾರ ಆರೋಪಿಸಿದ್ದಾರೆ. "ಪೊಲೀಸರು ಬೀಗವನ್ನು ಮುರಿದು ಇಡೀ ಮನೆಯನ್ನು ಶೋಧಿಸಿದ್ದಾರೆ. ಇದು ಅಭೂತಪೂರ್ವ. ನ್ಯಾಯಾಲಯದ ನಿರ್ದೇಶನಗಳನ್ನು ಲೆಕ್ಕಿಸದೆ ಅವರು ಪ್ರವೇಶಿಸಿ ದಾಳಿ ನಡೆಸಿದ್ದಾರೆ. ಈ ಕ್ರಮವನ್ನು ನಾವು ಬಲವಾಗಿ ಖಂಡಿಸುತ್ತೇವೆ" ಎಂದು ಬ್ಯಾನರ್ಜಿ ನಿವಾಸದ ಹೊರಗೆ ವರದಿಗಾರರೊಂದಿಗೆ ಮಾತನಾಡುತ್ತಾ ಆರೋಪಿಸಿದ್ದಾರೆ.**

## ಸುದೀಪ್–ಭೂಪೇಂದರ್ ಭೇಟಿ: ಟಿಎಂಸಿ ಬಿಕ್ಕಟ್ಟು ಮತ್ತಷ್ಟು ತೀವ್ರ

**ನವದೆಹಲಿ, ಜೂ.13:** ತೃಣಮೂಲ ಕಾಂಗ್ರೆಸ್ನ ಹಿರಿಯ ನಾಯಕ ಮತ್ತು ಹಿರಿಯ ಸಂಸದೀಯ ಸದಸ್ಯ ಸುದೀಪ್ ಬಂದೋಪಾಧ್ಯಾಯ ಅವರು ಕೇಂದ್ರ ಸಚಿವ ಮತ್ತು ಭಾರತೀಯ ಜನತಾ ಪಕ್ಷದ (ಬಿಜೆಪಿ) ನಾಯಕ ಭೂಪೇಂದರ್ ಯಾದವ್ ಅವರನ್ನು ನವದೆಹಲಿಯಲ್ಲಿ ಭೇಟಿಯಾದ ನಂತರ ಪಕ್ಷದೊಳಗಿನ ಆಂತರಿಕ ಬಿಕ್ಕಟ್ಟು ಇಂದು ತೀವ್ರಗೊಂಡಿದೆ. ಇದು ಮಮತಾ ಬ್ಯಾನರ್ಜಿ ನಾಯಕತ್ವದ ವಿರುದ್ಧ ವ್ಯಾಪಕ ದಂಗೆಯ ಊಹಾಪೋಹಗಳಿಗೆ ಕಾರಣವಾಯಿತು.

ಬ್ಯಾನರ್ಜಿ ಅವರ ಆಪ್ತರಲ್ಲಿ ಒಬ್ಬರು ಮತ್ತು ಪಕ್ಷದ ಸಂಸದೀಯ ಕಾರ್ಯತಂತ್ರದಲ್ಲಿ ಪ್ರಮುಖ ವ್ಯಕ್ತಿ ಎಂದು ಪರಿಗಣಿಸಲಾದ ಬಂದೋಪಾಧ್ಯಾಯ ಅವರೊಂದಿಗೆ ಟಿಎಂಸಿಯ ಭಿನ್ನಮತೀಯ ಸಂಸದ ಶತಾಬ್ದಿ ರಾಯ್ ಕೂಡ ಇದ್ದರು. ಟಿಎಂಸಿಯ ಬಂಡಾಯ ಶಾಸಕರು ಮತ್ತು ಬಿಜೆಪಿ ನಾಯಕತ್ವದ ಕೆಲವು ವಿಭಾಗಗಳ ನಡುವೆ ಹೆಚ್ಚುತ್ತಿರುವ ಸಮನ್ವಯಕ್ಕೆ ಸಾಕ್ಷಿಯಾಗಿ ಈ ಬೆಳವಣಿಗೆ ಕಂಡುಬಂದಿದೆ.

ಟಿಎಂಸಿಯ ಲೋಕಸಭೆಯಲ್ಲಿ 28 ಸದಸ್ಯರ ತಂಡದಿಂದ 19 ರಿಂದ 20 ಸಂಸದರ ಬೆಂಬಲವನ್ನು ಹೊಂದಿದೆ ಎಂದು ಭಿನ್ನಮತೀಯ ಪಾಳಯ ಹೇಳಿಕೊಂಡ ನಡುವೆಯೇ ಈ ಬೆಳವಣಿಗೆ ನಡೆದಿದೆ. ಸ್ವತಂತ್ರವಾಗಿ ಸಂಖ್ಯೆಗಳನ್ನು ಪರಿಶೀಲಿಸಲಾಗಿಲ್ಲವಾದರೂ, ಪಕ್ಷದ ಸಂಸದೀಯ ವಿಭಾಗದ ಒಂದು ಗಮನಾರ್ಹ ಭಾಗವು ಪ್ರಸ್ತುತ ನಾಯಕತ್ವದ ಬಗ್ಗೆ ಅತೃಪ್ತರಾಗಿದ್ದು, ಅವರು ಸ್ವತಂತ್ರ ರಾಜಕೀಯ ಮಾರ್ಗವನ್ನು ಅನ್ವೇಷಿಸುತ್ತಿದ್ದಾರೆ ಎಂದು ಬಂಡಾಯ ನಾಯಕರು ಒತ್ತಾಯಿಸುತ್ತಾರೆ. ರಾಯ್ ಮತ್ತು ಬರಾಸತ್ ಸಂಸದ ಕಾಕೋಲಿ ಘೋಷ್ ದಸ್ತಿದಾರ್ ಇತ್ತೀಚಿನ ವಾರಗಳಲ್ಲಿ ವೇಗವನ್ನು ಪಡೆದಿರುವ ಬಂಡಾಯದ ಪ್ರಮುಖ ಮುಖಗಳಾಗಿ ಹೊರಹೊಮ್ಮಿದ್ದಾರೆ. ಭಿನ್ನಮತೀಯ ಬಣವು ಪ್ರತ್ಯೇಕ ಸಂಸದೀಯ ಗುಂಪಾಗಿ ಮಾನ್ಯತೆ ಪಡೆಯಲು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರನ್ನು ಸಂಪರ್ಕಿಸಲು ಸಿದ್ಧತೆ ನಡೆಸುತ್ತಿದೆ ಎಂದು ವರದಿಯಾಗಿದೆ. ಮೂಲಗಳ ಪ್ರಕಾರ, ಬಂಡುಕೋರರು ತಾವು "ನಿಜವಾದ ಟಿಎಂಸಿ"ಯನ್ನು ಪ್ರತಿನಿಧಿಸುತ್ತೇವೆ ಮತ್ತು ಆದ್ದರಿಂದ ಸಂಸತ್ತಿನಲ್ಲಿ ಅಧಿಕೃತ ಸ್ಥಾನಮಾನವನ್ನು ನೀಡಬೇಕು ಎಂದು ವಾದಿಸಲು ಉದ್ದೇಶಿಸಿದ್ದಾರೆ. ಸಂಖ್ಯೆಗಳು ನಮ್ಮ ಪರವಾಗಿವೆ, ಮತ್ತು ನಾವು ಸತ್ಯಗಳನ್ನು ಸ್ಪೀಕರ್ ಮುಂದೆ ಇಡುತ್ತೇವೆ" ಎಂದು ಭಿನ್ನಮತೀಯ ಬಣದೊಂದಿಗೆ ಸಂಬಂಧ ಹೊಂದಿರುವ ನಾಯಕರೊಬ್ಬರು ಹೇಳಿದರು, ಗುಂಪು ಸಾಂಸ್ಥಿಕ ಮಾನ್ಯತೆಯನ್ನು ಪಡೆಯುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಬಂಡಾಯ ಸಂಸದರು ಲೋಕಸಭೆಯಲ್ಲಿ ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಯೋಜಿಸುತ್ತಿದ್ದರೂ, ಪ್ರಮುಖ ಶಾಸಕಾಂಗ ವಿಷಯಗಳಲ್ಲಿ ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ ಸರ್ಕಾರಕ್ಕೆ ಹೊರಗಿನ ಬೆಂಬಲವನ್ನು ನೀಡಲು ಸಿದ್ಧರಿದ್ದಾರೆ ಎಂದು ಸೂಚಿಸಿದ್ದಾರೆ. ಅಂತಹ ಬೆಂಬಲವನ್ನು ಔಪಚಾರಿಕಗೊಳಿಸಿದರೆ, ಕೆಳಮನೆಯಲ್ಲಿ ಆಡಳಿತ ಒಕ್ಕೂಟದ ಸ್ಥಾನವನ್ನು ಬಲಪಡಿಸಬಹುದು ಮತ್ತು ಪ್ರಮುಖ ಶಾಸನದ ಅಂಗೀಕಾರದ ಮೇಲೆ ಪ್ರಭಾವ ಬೀರಬಹುದು.

ರಾಜಕೀಯ ಒಳಸಂಚುಗೆ ಹೆಚ್ಚುವರಿಯಾಗಿ, ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಭಾನುವಾರ ನವದೆಹಲಿಗೆ ಆಗಮಿಸುವ ನಿರೀಕ್ಷೆಯಿದೆ. ಲೋಕಸಭಾ ಸ್ಪೀಕರ್ ಜೊತೆಗಿನ ಪ್ರಸ್ತಾವಿತ ಸಂವಾದಕ್ಕೆ ಮುಂಚಿತವಾಗಿ ಅವರು ಬಂಡಾಯ ಟಿಎಂಸಿ ಸಂಸದರನ್ನು ಭೇಟಿ ಮಾಡುವ ಸಾಧ್ಯತೆಯಿದೆ, ಇದು ಭಿನ್ನಮತೀಯರು ಮತ್ತು ಬಿಜೆಪಿ ನಡುವಿನ ಸಮನ್ವಯದ ಬಗ್ಗೆ ಊಹಾಪೋಹಗಳನ್ನು ಮತ್ತಷ್ಟು ತೀವ್ರಗೊಳಿಸಿದೆ.

ಮುಂಬರುವ ಮಳೆಗಾಲದ ಅಧಿವೇಶನಕ್ಕೂ ಮುನ್ನ ಸಂಸದೀಯ ಸಮೀಕರಣಗಳ ಮೇಲೆ ಅವುಗಳ ಸಂಭಾವ್ಯ ಪರಿಣಾಮದಿಂದಾಗಿ ಈ ಬೆಳವಣಿಗೆಗಳು ಗಣನೀಯ ಗಮನ ಸೆಳೆದಿವೆ. ಸರ್ಕಾರವು ಸೀಮಾ ನಿರ್ಣಯಕ್ಕೆ ಸಂಬಂಧಿಸಿದ ಸಾಂವಿಧಾನಿಕ ತಿದ್ದುಪಡಿಯನ್ನು ಅನುಸರಿಸಬಹುದು ಎಂಬ ವರದಿಗಳ ನಡುವೆ ಬಿಜೆಪಿ ಲೋಕಸಭೆಯಲ್ಲಿ ಬೆಂಬಲವನ್ನು ಕ್ರೋಢೀಕರಿಸಲು ಪ್ರಯತ್ನಿಸುತ್ತಿದೆ ಎಂದು ರಾಜಕೀಯ ವೀಕ್ಷಕರು ಹೇಳಿದ್ದಾರೆ.

ಯಾವುದೇ ಸಾಂವಿಧಾನಿಕ ತಿದ್ದುಪಡಿಗೆ ಸಂಸತ್ತಿನ ಎರಡೂ ಸದನಗಳಲ್ಲಿ ವಿಶೇಷ ಬಹುಮತದ ಅನುಮೋದನೆಯ ಅಗತ್ಯವಿದೆ. ಹಿಂದಿನ ಅಧಿವೇಶನದಲ್ಲಿ, ಗಡಿ ನಿರ್ಣಯಕ್ಕೆ ಸಂಬಂಧಿಸಿದ ಸಾಂವಿಧಾನಿಕ ತಿದ್ದುಪಡಿಯನ್ನು ಅಂಗೀಕರಿಸಲು ಅಗತ್ಯವಿರುವ ಸಂಖ್ಯೆಯ ಕೊರತೆಯನ್ನು ಎನ್‌ಡಿಎ ಹೊಂದಿತ್ತು ಎಂದು ವರದಿಯಾಗಿದೆ, ಇದು ಸದನದಲ್ಲಿ ಹೆಚ್ಚುವರಿ ಬೆಂಬಲದ ಮಹತ್ವವನ್ನು ಒತ್ತಿಹೇಳುತ್ತದೆ.

ಈ ಹಿನ್ನೆಲೆಯಲ್ಲಿ, ಟಿಎಂಸಿಯೊಳಗೆ ಗಣನೀಯ ಭಿನ್ನಮತೀಯ ಬಣದ ಹೊರಹೊಮ್ಮುವಿಕೆಯು ನವದೆಹಲಿ ಮತ್ತು ಕೋಲ್ಕತ್ತಾ ಎರಡರಲ್ಲೂ ತೀವ್ರವಾದ ರಾಜಕೀಯ ಲೆಕ್ಕಾಚಾರಗಳನ್ನು ಹುಟ್ಟುಹಾಕಿದೆ. ಬಂಡಾಯ ಸಂಸದರ ಬೆಂಬಲವು ವಿವಾದಾತ್ಮಕ ಶಾಸನದ ಮೇಲಿನ ನಿರ್ಣಾಯಕ ಸಂಖ್ಯಾತ್ಮಕ ಅಡೆತಡೆಗಳನ್ನು ನಿವಾರಿಸಲು ಬಿಜೆಪಿಗೆ ಸಹಾಯ ಮಾಡಬಹುದಾದರೂ, ಬಂಡಾಯವು ಇತ್ತೀಚಿನ ವರ್ಷಗಳಲ್ಲಿ ಮಮತಾ ಬ್ಯಾನರ್ಜಿ ಅವರ ಪಕ್ಷ ಎದುರಿಸುತ್ತಿರುವ ಅತ್ಯಂತ ಗಂಭೀರ ಆಂತರಿಕ ಸವಾಲುಗಳಲ್ಲಿ ಒಂದನ್ನು ಒಡ್ಡುತ್ತದೆ.

ಇಂದಿನ ಸಭೆಯ ಪರಿಣಾಮಗಳ ಬಗ್ಗೆ ಟಿಎಂಸಿ ನಾಯಕತ್ವ ಅಥವಾ ಬಿಜೆಪಿ ಅಧಿಕೃತವಾಗಿ ಪ್ರತಿಕ್ರಿಯಿಸಿಲ್ಲ. ಆದಾಗ್ಯೂ, ಬಂದೋಪಾಧ್ಯಾಯ ಅವರಂತಹ ಹಿರಿಯ ಟಿಎಂಸಿ ನಾಯಕ ಬಂಡಾಯ ಸಂಸದರ ಜೊತೆಯಲ್ಲಿ ಹಿರಿಯ ಬಿಜೆಪಿ ಸಚಿವರನ್ನು ಭೇಟಿಯಾಗುತ್ತಿರುವುದು ಪಶ್ಚಿಮ ಬಂಗಾಳದ ಆಡಳಿತ ಪಕ್ಷದೊಳಗೆ ಕಳವಳವನ್ನು ಹೆಚ್ಚಿಸುವ ಸಾಧ್ಯತೆಯಿದೆ.

ಭಿನ್ನಮತೀಯ ಶಿಬಿರವು ಲೋಕಸಭಾ ಸ್ಪೀಕರ್ ಮುಂದೆ ತನ್ನ ಹಕ್ಕನ್ನು ಮಂಡಿಸಲು ಸಿದ್ಧತೆ ನಡೆಸುತ್ತಿರುವುದರಿಂದ, ಈಗ ಗಮನವು ಅದು ಹೊಂದಿರುವ ಸಂಖ್ಯಾ ಬಲವನ್ನು ಪ್ರದರ್ಶಿಸಬಹುದೇ ಮತ್ತು ಸಂಸತ್ತು ಅದಕ್ಕೆ ಪ್ರತ್ಯೇಕ ಮಾನ್ಯತೆಯನ್ನು ನೀಡುತ್ತದೆಯೇ ಎಂಬುದರ ಮೇಲೆ ಇರುತ್ತದೆ. ಈ ಫಲಿತಾಂಶವು ತೃಣಮೂಲ ಕಾಂಗ್ರೆಸ್ ಭವಿಷ್ಯಕ್ಕೆ ಮಾತ್ರವಲ್ಲದೆ ಪ್ರಸ್ತುತ ಲೋಕಸಭೆಯ ಶಾಸಕಾಂಗ ಚಲನಶೀಲತೆಗೂ ದೂರಗಾಮಿ ಪರಿಣಾಮಗಳನ್ನು ಬೀರಬಹುದು.



ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಶನಿವಾರ ದುಂಡಿಗಲ್‌ನಲ್ಲಿರುವ ವಾಯುಪಡೆ ಅಕಾಡೆಮಿಯಲ್ಲಿ ವಾಯುಪಡೆಯ ಫ್ಲೈಯಿಂಗ್ ಮತ್ತು ಗ್ರೌಂಡ್ ಡ್ಯೂಟಿ ಶಾಖೆಗಳಿಗೆ ಕೆಡೆಟ್‌ಗಳ ಪೂರ್ವನಿಯೋಜನಾ ತರಬೇತಿಯ ಪರಾಕಾಷ್ಠೆಯನ್ನು ಗುರುತಿಸಲು ಪದವಿ ಪಡೆದ ಕೆಡೆಟ್‌ಗಳಿಗೆ 'ಅಧ್ಯಕ್ಷರ ಆಯೋಗ'ವನ್ನು ಪ್ರದಾನ ಮಾಡಿದರು.

## ಪುರಸಭೆ ನೇಮಕಾತಿ ಹಗರಣ ಟಿಎಂಸಿ ಶಾಸಕರ ಮೇಲೆ ಇ.ಡಿ ದಾಳಿ

**ನವದೆಹಲಿ, ಜೂನ್ 13:** ಪುರಸಭೆ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಟಿಎಂಸಿ ಶಾಸಕ ಮತ್ತು ಮಾಜಿ ಸಚಿವ ಮದನ್ ಮಿತ್ರ ಅವರಿಗೆ ಸಂಬಂಧಿಸಿದ ಏಳು ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ (ಇ.ಡಿ) ದಾಳಿ ನಡೆಸುತ್ತಿದೆ. ಮಾಹಿತಿಯ ಪ್ರಕಾರ, ಕಮರ್ಹತಿ ಪುರಸಭೆ ಸೇರಿದಂತೆ ವಿವಿಧ ಪುರಸಭೆಯ ಹುದ್ದೆಗಳಿಗೆ ಅನರ್ಹ ಅಭ್ಯರ್ಥಿಗಳ ನೇಮಕಾತಿಗೆ ಅನುಕೂಲವಾಗುವಂತೆ ಮಿತ್ರ ಮಧ್ಯವರ್ತಿಗಳ ಮೂಲಕ ನಗದು ಮತ್ತು ಚಿನ್ನದ ರೂಪದಲ್ಲಿ ಲಂಚ ಪಡೆದಿದ್ದಾರೆ ಎಂದು ತನಿಖೆಯಿಂದ ತಿಳಿದುಬಂದಿದೆ. ಇಡಿ ಮದನ್‌ಮಿತ್ರ ಅವರನ್ನು 125 ಕ್ಕೂ ಹೆಚ್ಚು ಅಕ್ರಮ ನೇಮಕಾತಿಗಳೊಂದಿಗೆ ಸಂಬಂಧ ಹೊಂದಿದೆ ಎಂದು ಆರೋಪಿಸಿದೆ.

## ಕೇರಳ ಸಿಎಂ ಕುಟುಂಬಕ್ಕೆ ಕೊಲೆ ಬೆದರಿಕೆ: ಬಂಧನ

**ತಿರುವನಂತಪುರಂ:** ಕೇರಳ ಮುಖ್ಯಮಂತ್ರಿ ವಿ.ಡಿ. ಸತೀಶನ್ ಮತ್ತು ಅವರ ಕುಟುಂಬದ ಸದಸ್ಯರನ್ನು ಕೊಲ್ಲುವುದಾಗಿ ದೂರವಾಣಿ ಮೂಲಕ ಬೆದರಿಕೆ ಹಾಕಿದ ಆರೋಪದ ಮೇಲೆ ಒಬ್ಬ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ವ್ಯಕ್ತಿ ಅತ್ತಿಂಗಲ್‌ನ ಸೋನಿ ಥಾಮಸ್ ಎಂದು ಗುರುತಿಸಲಾಗಿದೆ.

ಶುಕ್ರವಾರ ಸಂಜೆ ತಿರುವನಂತಪುರಂ ನಗರ ಜಿಲ್ಲಾ ಪೊಲೀಸ್ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರಕ್ಕೆ ಕರೆ ಮಾಡಿ, ಸಿಎಂ ಮತ್ತು ಕುಟುಂಬವನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿದ್ದಾನೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಕಾರಣ ಕೇಳಿದಾಗ ಸಿಎಂ ಸತೀಶನ್ ತನಗೆ ಇಷ್ಟವಿಲ್ಲ ಎಂದು ಆರೋಪಿ ಹೇಳಿದ್ದಾನೆ ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ಸಂಜೆ 6.53ಕ್ಕೆ ಮತ್ತೊಮ್ಮೆ ಕರೆ ಮಾಡಿ ಬೆದರಿಕೆ ಹಾಕಿದ್ದಾನೆ. ಪೊಲೀಸ್ ಅಧಿಕಾರಿಯನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಲ್ಲದೆ, ಮುಖ್ಯಮಂತ್ರಿಗೆ ಭದ್ರತಾ ವ್ಯವಸ್ಥೆ ಎಷ್ಟಿದೆ ಎಂದು ಪ್ರಶ್ನಿಸಿದ್ದಾನೆ.

ಕಂಟೋನ್ಮೆಂಟ್ ಪೊಲೀಸರು ತಕ್ಷಣ ಪ್ರಕರಣ ದಾಖಲಿಸಿಕೊಂಡು ಫೋನ್ ಸಂಖ್ಯೆಯನ್ನು ಪತ್ತೆಹಚ್ಚಿ ಆರೋಪಿಯನ್ನು ಬಂಧಿಸಿದ್ದಾರೆ. ಶನಿವಾರ ಬೆಳಗ್ಗೆ ಅತ್ತಿಂಗಲ್ನಲ್ಲಿ ಸೋನಿ ಥಾಮಸ್ನನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿ ಕರೆಗಳನ್ನು ಮಾಡುವಾಗ ಮದ್ಯದ ಅಮಲಿನಲ್ಲಿದ್ದ ಎಂದು ಪೊಲೀಸರು ಹೇಳಿದ್ದಾರೆ, ಪ್ರಕರಣದ ಬಗ್ಗೆ ಹೆಚ್ಚಿನ ತನಿಖೆ ನಡೆಯುತ್ತಿದೆ.

## ಕೈಲಾಸ ಮಾನಸ ಸರೋವರ ಯಾತ್ರೆ ಮೊದಲ ತಂಡಕ್ಕೆ ನವದೆಹಲಿಯಲ್ಲಿ ಚಾಲನೆ



ನವದೆಹಲಿ, ಜೂನ್ 13: ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವೆ ಪಬಿತ್ರ ಮಾರ್ಗರಿಟಾ ಅವರು ಶನಿವಾರ ನವದೆಹಲಿಯ ಜವಾಹರಲಾಲ್ ನೆಹರು ಭವನದಲ್ಲಿ ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಕೈಗೊಳ್ಳುವ ಯಾತ್ರಿಕರ ಉದ್ಘಾಟನಾ ತಂಡದ ಧ್ವಜಾರೋಹಣ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಯಾತ್ರಿಕರ ಮೊದಲ ಗುಂಪು ನಾಥು ಲಾ ಮಾರ್ಗದ ಮೂಲಕ ಪ್ರಯಾಣಿಸಲಿದ್ದು, ಜೂನ್ 15, 2026 ರಂದು ದೆಹಲಿಯಿಂದ ತನ್ನ ಮುಂದಿನ ಪ್ರಯಾಣವನ್ನು ಪ್ರಾರಂಭಿಸಲಿದೆ. ಯಾತ್ರಿಕರನ್ನು ಉದ್ದೇಶಿಸಿ ಮಾತನಾಡಿದ ಮಾರ್ಗರಿಟಾ, ಪೂಜ್ಯ ತೀರ್ಥಯಾತ್ರೆಗೆ ಆಯ್ಕೆಯಾದ ಅವರನ್ನು ಅಭಿನಂದಿಸಿದರು ಮತ್ತು ಸುರಕ್ಷಿತ ಮತ್ತು ಆರಾಮದಾಯಕ ಪ್ರಯಾಣವನ್ನು ಖಚಿತಪಡಿಸಿಕೊಳ್ಳಲು ಸರ್ಕಾರದ ಪ್ರಯತ್ನಗಳನ್ನು ಎತ್ತಿ ತೋರಿಸಿದರು. ಇತ್ತೀಚೆಗೆ ಪ್ರಧಾನಿ ಮೋದಿ ಅವರು ವರ್ಚುವಲ್ ಆಗಿ ಉದ್ಘಾಟಿಸಿದ ಹೊಸದಾಗಿ ಸ್ಥಾಪಿಸಲಾದ ಒಗ್ಗಿಸುವಿಕೆ ಕೇಂದ್ರಗಳಲ್ಲಿ ವಸತಿ ಒದಗಿಸಲಾಗುವುದು ಎಂದು ಅವರು ಯಾತ್ರಿಕರಿಗೆ ತಿಳಿಸಿದರು. ತೀರ್ಥಯಾತ್ರೆಗೆ ಅನುಕೂಲ ಮಾಡಿಕೊಡುವಲ್ಲಿ ಉತ್ತರಾಖಂಡ, ಸಿಕ್ಕಿಂ ಮತ್ತು ಉತ್ತರ ಪ್ರದೇಶ ರಾಜ್ಯ ಸರ್ಕಾರಗಳ ಜೊತೆಗೆ ವಿವಿಧ ಕೇಂದ್ರ ಸರ್ಕಾರದ ಸಚಿವಾಲಯಗಳು ಮತ್ತು ಇಲಾಖೆಗಳ ಸಂಘಟಿತ ಪ್ರಯತ್ನಗಳನ್ನು ಸಚಿವರು ಶ್ಲಾಘಿಸಿದರು. ಈ ಸಾಮೂಹಿಕ ಪ್ರಯತ್ನಗಳು ಪವಿತ್ರ ಪ್ರಯಾಣವನ್ನು ಕೈಗೊಳ್ಳುವ ಭಾರತೀಯ ನಾಗರಿಕರಿಗೆ ಸಮೃದ್ಧ, ಸುಗಮ ಮತ್ತು ತೃಪ್ತಿಕರ ಅನುಭವವನ್ನು ಒದಗಿಸುವ ಗುರಿಯನ್ನು ಹೊಂದಿವೆ ಎಂದು ಅವರು ಹೇಳಿದರು. ಕೈಲಾಸ ಮಾನಸ ಸರೋವರ ಯಾತ್ರೆಯು ಭಕ್ತರಿಗೆ ಅತ್ಯಂತ ಮಹತ್ವದ ಆಧ್ಯಾತ್ಮಿಕ ತೀರ್ಥಯಾತ್ರೆಗಳಲ್ಲಿ ಒಂದಾಗಿದೆ, ಹಿಂದೂ ಧರ್ಮ, ಬೌದ್ಧಧರ್ಮ, ಜೈನ ಮತ್ತು ಬಾನ್ ಸಂಪ್ರದಾಯಗಳಲ್ಲಿ ಪೂಜಿಸಲ್ಪಡುವ ಕೈಲಾಸ ಪರ್ವತ ಮತ್ತು ಮಾನಸ ಸರೋವರಕ್ಕೆ ಭೇಟಿ ನೀಡಲು ಬಯಸುವ ಸಾವಿರಾರು ಯಾತ್ರಿಕರನ್ನು ಪ್ರತಿವರ್ಷ ಆಕರ್ಷಿಸುತ್ತದೆ.

**ಸ್ವಸ್ತಿಶ್ರೀ ಜೈನ ವಸತಿ ಪದವಿಪೂರ್ವ ಕಾಲೇಜ್‌ನ ವಿದ್ಯಾರ್ಥಿಗಳಿಗೆ ಪುಸ್ತಕ ವಿತರಣೆ**

## ಶಿಕ್ಷಣದ ಮಹತ್ವ ಅರಿತು ಬದುಕು ರೂಪಿಸಿರಿ ಡಾ.ಭಟ್ಟಾರಕ ಚಾರುಕೀರ್ತಿ ಸ್ವಾಮೀಜಿ ಕರೆ



**ಮುಂಬಯಿ, ಜೂ.13:** ಸ್ವಸ್ತಿಶ್ರೀ ಜೈನ ವಸತಿ ಪದವಿಪೂರ್ವ ಕಾಲೇಜ್‌ನ ಪ್ರಥಮ ಹಾಗೂ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಧವಳತ್ರಯ ಜೈನಕಾಶಿ ಟ್ರಸ್ಟ್ ಹಾಗೂ ಮೂಡಬಿದ್ರಿ ಜೈನ ಮಠ ಟ್ರಸ್ಟ್ ಸಹಯೋಗದಲ್ಲಿ ಹುಬ್ಬಳ್ಳಿ ಇಂದ್ರ ಕುಮಾರ್ ಸಹಕಾರದಲ್ಲಿ ಉಚಿತವಾಗಿ ನೀಡಿದ ಪುಸ್ತಕಗಳನ್ನು ಸ್ವಸ್ತಿಶ್ರೀ ಕಾಲೇಜುವಿನ ಎಲ್ಲಾ ವಿದ್ಯಾರ್ಥಿಗಳಿಗೆ ಕಳೆದ ಶುಕ್ರವಾರ ಶ್ರೀ ಮಠದಲ್ಲಿ ಮಧ್ಯಾಹ್ನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜ್‌ನ ಅಧ್ಯಕ್ಷ ಶ್ರೀ ದಿಗಂಬರ ಜೈನಮಠ, ಜೈನಕಾಶಿ ಮೂಡಬಿದಿರೆ ಮಹಾಕ್ಷೇತ್ರದ ಜೈನ ಮಹಾಸಂಸ್ಥಾನದ ಪೀಠಾಧ್ಯಕ್ಷ ಭಾರತ ಭೂಷಣ ಜಗದ್ಗುರು ಸ್ವಸ್ತಿಶ್ರೀ ಜಗದ್ಗುರು ಸ್ವಸ್ತಿಶ್ರೀ ಡಾ। ಭಟ್ಟಾರಕ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಮಹಾ ಸ್ವಾಮೀಜಿ ಗೌರವ ಉಪಸ್ಥಿತಿಯಲ್ಲಿದ್ದು ಆಶೀರ್ವಾದ ನೀಡಿ, ಶಿಕ್ಷಣದ ಮಹತ್ವ ಅರಿತು ಕಲಿತು ಉತ್ತಮ ವಿದ್ಯಾರ್ಥಿಗಳಾಗಿ ಎಂದು ಅನುಗ್ರಹಿಸಿ ಬರೆಯುವ ಪುಸ್ತಕಗಳನ್ನು ವಿತರಿಸಿದರು ಹಾಗೂ ಶಿಕ್ಷಣಪ್ರೇಮಿ, ಕೊಡುಗೈದಾನಿಗಳಿಗೆ ಕೃತಜ್ಞತೆ ಸಲ್ಲಿಸಿದರು.

ಕೆನರಾ ಬ್ಯಾಂಕ್‌ನ ನಿವೃತ್ತ ಪ್ರಬಂಧಕ ಶಂಭವ ಕುಮಾರ್ ಮೂಡುಬಿದಿರೆ ಇವರು ಅತಿಥಿಯಾಗಿದ್ದು ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನ ವಿತರಿಸಿ ಶುಭಾರೈಸಿದರು. ಕಾಲೇಜ್‌ನ ಪ್ರಾಂಶುಪಾಲೆ ಸೌಮ್ಯಶ್ರೀ, ಉಪನ್ಯಾಸಕರು ಉಪಸ್ಥಿತರಿದ್ದರು.

## ಜಗಜ್ಯೋತಿ ಕಲಾವೃಂದ ಸಂಸ್ಥೆಯಿಂದ ಸುಶೀಲಾ ಸೀತಾರಾಮ ಶೆಟ್ಟಿ ಸ್ಮರಣಾರ್ಥ ಅಖಿಲ ಭಾರತ ಮಟ್ಟದ ಕಥೆ, ಕವಿತಾ ಪ್ರಶಸ್ತಿಗಳ ಸ್ಪರ್ಧೆಗೆ ಆಹ್ವಾನ

**ಮುಂಬಯಿ, ಜೂ.13:** ಮುಂಬಯಿ ಸಾಹಿತ್ಯ, ಸಾಂಸ್ಕೃತಿಕ, ಸಾಂಘಿಕ ಚಟುವಟಿಕೆಗಳಲ್ಲಿ ಸದಾ ಕ್ರಿಯಾಶೀಲರಾ ಗಿದ್ದು ಮುಂಬಯಿಯ ಕನ್ನಡ ಸಾಹಿತ್ಯ ಲೋಕ ಬಹಳಷ್ಟನ್ನು ನಿರೀಕ್ಷಿಸುತ್ತಿದ್ದಾಗಲೇ ಇಹಯಾತ್ರೆಯನ್ನು ಮುಗಿಸಿದ ಶ್ರೀಮತಿ ಸುಶೀಲಾ ಸೀತಾರಾಮ ಶೆಟ್ಟಿ ಅವರ ಸ್ಮರಣಾರ್ಥ ಬೃಹನ್ಮುಂಬಯಿ ಇದರ ಉಪನಗರ ಡೊಂಬಿವಿಲಿ ಇಲ್ಲಿನ ಜಗಜ್ಯೋತಿ ಕಲಾವೃಂದ ನಾಡಿನ ಕನ್ನಡದ ಸಮಸ್ತ ಮಹಿಳೆಯರಿಗಾಗಿ ಕಳೆದ 28 ವರ್ಷಗಳಿಂದ ಸುಶೀಲಾ ಸೀತಾರಾಮ ಶೆಟ್ಟಿ ಸ್ಮಾರಕ ಕಥಾ ಮತ್ತು ಕವಿತಾ ಪ್ರಶಸ್ತಿ–2026 ಸ್ಪರ್ಧೆ ಆಯೋಜಿಸುತ್ತಿದ್ದು, ವರ್ಷಂಪ್ರತಿಯಂತೆ ಈ ಬಾರಿಯೂ ಅಖಿಲ ಭಾರತ ಮಟ್ಟದ ಸ್ಪರ್ಧೆಯನ್ನು ಏರ್ಪಾಡಿಸಿದೆ.

ಕಥೆ ಹಾಗೂ ಕವಿತಾ ಪ್ರಶಸ್ತಿಗಳ ಎರಡು ವಿಭಾಗಗಳಲ್ಲೂ ಪ್ರತ್ಯೇಕವಾಗಿ ರೂಪಾಯಿ 10,000/– ನಗದು ಬಹುಮಾನ, ಪ್ರಶಸ್ತಿ ಫಲಕ ಮತ್ತು ಪ್ರಶಸ್ತಿ ಪತ್ರಗಳು ಒಳಗೊಂಡಿರುತ್ತದೆ. ಸ್ಪರ್ಧೆ ರಾಷ್ಟ್ರದಾದ್ಯಂತದ ಸಮಸ್ತ ಕನ್ನಡದ ಮಹಿಳೆಯರಿಗಾಗಿ ಮುಕ್ತವಾಗಿದ್ದು ಸ್ಪರ್ಧೆಯಲ್ಲಿ ಪಾಲ್ಗೊಳ್ಳುವವರು ಸಂಸ್ಥೆಯ ನಿಯಮಗಳಂತೆ ಭಾಗವಹಿಸಲು ಕೋರಲಾಗಿದೆ.

ಪ್ರಕಟಣೆಗೆ ಸಿದ್ಧವಾದ ಸ್ವರಚಿತ ಕಥಾ ಯಾ ಕವಿತಾ ಸಂಗ್ರಹವಾಗಿರಬೇಕು. ಸ್ಪರ್ಧೆಗಳಲ್ಲಿ ಭಾಗವಹಿಸುವವರು ಕಥಾ ಪ್ರಶಸ್ತಿಗೆ ಒಂದು ಕಥಾ ಸಂಕಲನ ಅಥವಾ ಕವಿತಾ ಪ್ರಶಸ್ತಿಗೆ ಒಂದು ಕವನ ಸಂಕಲನವನ್ನು ಕಳುಹಿಸಬೇಕು. ಒಬ್ಬರೇ ಎರಡೂ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು. ಕಥೆ ಯಾ ಕವಿತೆಗಳನ್ನು ಹಾಳೆಯ ಒಂದೇ ಮಗ್ಗುಲಲ್ಲಿ ಸ್ಫುಟವಾಗಿ ಬರೆದಿರಬೇಕು ಅಥವಾ ಟೈಪ್ ಮಾಡಿರಬೇಕು. ಕಾರ್ಬನ್ ಪ್ರತಿ, ಜೆರಾಕ್ಸ್ ಹಾಗೂ ಪ್ರಕಟಗೊಂಡ ಹಾಳೆಯ ಪ್ರತಿಗಳನ್ನು ಸ್ವೀಕರಿಸಲಾಗುವುದಿಲ್ಲ. ಕಥಾ ಪ್ರಶಸ್ತಿಗೆ ಹಸ್ತಪ್ರತಿಯು ಫುಲ್‌ಸ್ಕೆಪ್ ಹಾಳೆಯಲ್ಲಿ 100 ಪುಟಗಳಿಂದ 130 ಪುಟಗಳ ಮಿತಿಯಲ್ಲಿರಬೇಕು. ಕವನ ಸಂಕಲನದಲ್ಲಿ ಕಡಿಮೆಯೆಂದರೂ 30 ಕವಿತೆಗಳಿರಬೇಕು. ಖಂಡಕಾವ್ಯ ಅಥವಾ ಚುಟುಕು ಯಾ ಹನಿಗವನ ಅಥವಾ ಕವಿತೆಗಳಾಗಿರಬಾರದು. ಹಸ್ತ ಪ್ರತಿಯಲ್ಲಿ ಹೆಸರು ನಮೂದಿಸಿರಬಾರದು. ಹೆಸರು, ವಿಳಾಸ, ಪರಿಚಯ, ದೂರವಾಣಿ ಸಂಖ್ಯೆ, ಇತ್ತೀಚಿನ ಭಾವಚಿತ್ರದೊಂದಿಗೆ ಹಸ್ತಪ್ರತಿಯ ಜೊತೆಗೆ ಪ್ರತ್ಯೇಕವಾಗಿ ಕಳುಹಿಸಬೇಕು. ಪ್ರವೇಶ ಶುಲ್ಕವಿರುವುದಿಲ್ಲ.

ಸ್ಪರ್ಧೆಗೆ ಬಂದ ಕೃತಿಗಳನ್ನು ಹಿಂತಿರುಗಿಸಲಾಗುವುದಿಲ್ಲ. ಪ್ರಶಸ್ತಿ ಪಡೆದ ಪ್ರತಿಗಳನ್ನು ಮುದ್ರಿಸುವಾಗ ರಕ್ಷಾ ಪುಟದ ಮೇಲ್ಗಡೆ ಹಾಗೂ ಪ್ರಥಮ ಒಳಪುಟದಲ್ಲಿ ಜಗಜ್ಯೋತಿ ಕಲಾವೃಂದದ ಸುಶೀಲಾ ಸೀತಾರಾಮ ಶೆಟ್ಟಿ ಸ್ಮಾರಕ ಕಥಾ ಯಾ ಕವಿತಾ ಪ್ರಶಸ್ತಿ ವಿಜೇತ ಕೃತಿ 2026 ಎಂದು ಮುದ್ರಿಸತಕ್ಕದ್ದು.

ಒಮ್ಮೆ ಒಂದು ವಿಭಾಗದಲ್ಲಿ ಪ್ರಶಸ್ತಿ ಪಡೆದವರು ಅದೇ ವಿಭಾಗದ ಸ್ಪರ್ಧೆಗೆ ಮತ್ತೆ ಭಾಗವಹಿಸುವಂತಿಲ್ಲ. ಸ್ಪರ್ಧೆಯ ಬಗ್ಗೆ ಯಾವುದೇ ತೀರ್ಮಾನವನ್ನು ಕೈಗೊಳ್ಳುವ ಹಕ್ಕನ್ನು ವೃಂದವು ಕಾಯ್ದಿರಿಸಿಕೊಂಡಿದೆ. ಅನಾವಶ್ಯಕ ಪತ್ರ ವ್ಯವಹಾರಕ್ಕೆ ಅವಕಾಶವಿಲ್ಲ ಹಾಗೂ ನಿರ್ಣಾಯಕರ ತೀರ್ಮಾನವೇ ಅಂತಿಮ ಆಗಿದ್ದು, ಕೃತಿಗಳನ್ನು ದಿನಾಂಕ 30.09.2026 ಒಳಗಾಗಿ ಕಳುಹಿಸಿ ಕೊಡುವಂತೆ ಕೋರಲಾಗಿದೆ.

ತಿಳಿಸಿದ ವಿಳಾಸವನ್ನು ಇಂಗ್ಲೀಷನಲ್ಲೇ ಸ್ಪುಟವಾಗಿ ಬರೆದು ಕಳುಹಿಸತಕ್ಕದ್ದು. SUKUMAR N.SHETTY, C/o. S.N Shetty Associates, Room No.5, Ground Floor, Neelkanth Sagar CHS, Mahatma Phule Road, Opp. Jadhavwadi, Dombivli West, Maharashtra – 421202. ಸಂಪರ್ಕ: 9892110826 ಯಾ 9869824709 (Santosh P.Shetty), 9892833623 (Vasant Suvarna), ಅಥವಾ ಇ–ಮೇಯ್ಲ್: mail.sukumar@yahoo.in CxÀªÁ santoshpshetty@gmail.com ಪ್ರಶಸ್ತಿ ಪ್ರದಾನ ಸಮಾರಂಭ ವೃಂದದ ವಾರ್ಷಿಕೋತ್ಸವದಂದು ನೆರವೇರಲಿರುವುದು ಪ್ರಶಸ್ತಿ ವಿಜೇತರನ್ನು ದೂರವಾಣಿ ಯಾ ಪತ್ರದ ಮೂಲಕ ಸಂಪರ್ಕಿಸಲಾಗುವುದು ಎಂದು ತಿಳಿಸಲಾಗಿದೆ.

### ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ 5 ಕೋಟಿ ಸಸಿ ನೆಡುವ ಅಭಿಯಾನಕ್ಕೆ ಚಾಲನೆ

# ಪ್ರಕೃತಿ ಸಮತೋಲನ ಸುಧಾರಿಸದಿದ್ದರೆ ಭವಿಷ್ಯದಲ್ಲಿ ಭಾರಿ ಸಮಸ್ಯೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಎಚ್ಚರಿಕೆ

**ಬೆಂಗಳೂರು, ಜೂ.13:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ರಾಜ್ಯದಾದ್ಯಂತ ಹಮ್ಮಿಕೊಂಡಿರುವ 5 ಕೋಟಿ ಸಸಿ ನೆಡುವ ಅಭಿಯಾನಕ್ಕೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಅವರು ಚಿಕ್ಕಬಳ್ಳಾಪುರ ತಾಲ್ಲೂಕಿನ ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ ಶನಿವಾರ ಚಾಲನೆ ನೀಡಿದರು.

ನಂತರ ಮಾತನಾಡಿದ ಮುಖ್ಯ ನ್ಯಾಯಮೂರ್ತಿ ಅವರು, ರಾಜ್ಯದಾದ್ಯಂತ ಐದು ಕೋಟಿಗೂ ಹೆಚ್ಚು ಸಸಿಗಳನ್ನು ನೆಡುವ ಬೃಹತ್ ಕಾರ್ಯಕ್ರಮಕ್ಕೆ ಚಾಲನೆ ನೀಡಲು ನನಗೆ ಅತ್ಯಂತ ಸಂತೋಷವಾಗುತ್ತಿದೆ. ಇದು ನನಗೆ ಸಂದಿರುವ ಸೌಭಾಗ್ಯ ಎಂದರು.

ವಾತಾವರಣದಲ್ಲಿನ ಬದಲಾವಣೆ, ನೈಸರ್ಗಿಕ ಸಂಪತ್ತಿನ ಇಳಿಕೆ ಹಾಗೂ ದಿನೇ ದಿನೇ ಹೆಚ್ಚುತ್ತಿರುವ ಜಲಕ್ಷಾಮಗಳು ಮುಂದಿನ ಪೀಳಿಗೆಗೆ ಸವಾಲಾಗಿವೆ. ಈ ಎಲ್ಲಾ ಕೊರತೆಗಳನ್ನು ನೀಗಿಸುವಲ್ಲಿ ಸರ್ಕಾರದ ಕ್ರಮಗಳಷ್ಟೇ ಸಾಲದು. ಜನರ ಕ್ರಿಯಾಶೀಲ ಪಾಲ್ಗೊಳ್ಳುವಿಕೆಯೂ ಅಗತ್ಯ ಎಂದು ಪ್ರತಿಪಾದಿಸಿದರು.

ಗಾಳಿ, ನೀರು ಹಾಗೂ ಅರಣ್ಯ ಸಂಪತ್ತು ಪ್ರಕೃತಿಯ ಸಮತೋಲನವನ್ನು ಕಾಪಾಡುವಲ್ಲಿ ಮಹತ್ವದ ಪಾತ್ರವಹಿಸುತ್ತದೆ. ದೇಶ ಹಾಗೂ ವಿಶ್ವದಲ್ಲಿ ತಾಪಮಾನ ಹೆಚ್ಚುತ್ತಿದೆ. ಅಕಾಲಿಕ ಹಾಗೂ ಅನಿಯಮಿತ ಮಳೆ ಮತ್ತು ಅಂತರ್ಜಲ ಪ್ರಮಾಣದ ಇಳಿಕೆಯ ಸಮಸ್ಯೆಗಳು ಎದುರಾಗಿವೆ. ಇದನ್ನು ಸುಧಾರಿಸದಿದ್ದಲ್ಲಿ ಮುಂದಿನ ಪೀಳಿಗೆಗೆ ಇದು ಬೃಹತ್ ಸಮಸ್ಯೆ ಆಗಲಿದೆ ಎಂದು ಮುಖ್ಯ ನ್ಯಾಯಮೂರ್ತಿ ಎಚ್ಚರಿಸಿದರು.




ಹವಾಮಾನ ಬದಲಾವಣೆಗಳು ಮತ್ತು ಪರಿಸರ ಅಸಮತೋಲನವನ್ನು ಕೇವಲ ವೈಜ್ಞಾನಿಕ ವೇದಿಕೆಗಳಲ್ಲಷ್ಟೇ ಚರ್ಚಿಸಲಾಗುತ್ತಿದೆ. ಇದನ್ನು ಎಲ್ಲಾ ಹಂತಗಳಲ್ಲಿ ಸಮಗ್ರವಾಗಿ ಚರ್ಚಿಸಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು ಎಂದು ಸಲಹೆ ನೀಡಿದರು.

ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾಯಮೂರ್ತಿ ಅನು ಶಿವರಾಮನ್, ನ್ಯಾಯಮೂರ್ತಿ ಹಂಚಾಟೆ ಸಂಜೀವ ಕುಮಾರ್, ಅನು ಶಿವರಾಮನ್, ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಚ್. ಶಶಿಧರಶೆಟ್ಟಿ ಮತ್ತಿತರರು ಪಾಲ್ಗೊಂಡಿದ್ದರು.



ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶನಿವಾರ ಬೆಂಗಳೂರಿನಲ್ಲಿ ಸುಮಂಗಲಿ ಸೇವಾ ಆಶ್ರಮದ ಸಂಸ್ಥಾಪಕಿ ಡಾ.ಎಸ್.ಜಿ.ಸುಶೀಲಮ್ಮ ಅವರೊಂದಿಗೆ ಸಂವಾದ ನಡೆಸಿದರು.

# ಅಕ್ಕಿ ದರದಲ್ಲೂ ಗಣನೀಯ ಹೆಚ್ಚಳ

**ಬೆಂಗಳೂರು, ಜೂ. 13–** ಅಗತ್ಯ ವಸ್ತುಗಳ ಬೆಲೆ ಏರಿಕೆ ಮತ್ತೆ ಮುಂದುವರೆದಿದೆ. ಹಲವಾರು ವಸ್ತುಗಳ ಬೆಲೆ ಏರಿಕೆ ನಡುವೆಯೇ ಇದೀಗ ಅಕ್ಕಿ ದರದಲ್ಲೂ ಗಣನೀಯ ಹೆಚ್ಚಳ ಕಂಡುಬಂದಿದ್ದು, ಗ್ರಾಹಕರಿಗೆ ಮತ್ತೊಂದು ಆರ್ಥಿಕ ಹೊರೆ ಎದುರಾಗಿದೆ.

ರಾಜ್ಯದ ಹಲವು ಭಾಗಗಳಲ್ಲಿ ವಿವಿಧ ತಳಿಯ ಅಕ್ಕಿಗಳ ಬೆಲೆ ಕೆಜಿಗೆ 5 ರಿಂದ 10 ರೂ.ವರೆಗೆ ಏರಿಕೆಯಾಗಿದೆ. ಮಾರುಕಟ್ಟೆಯಲ್ಲಿ ಅಕ್ಕಿಯ ಲಭ್ಯತೆ ಕಡಿಮೆಯಾಗಿರುವುದು ಹಾಗೂ ಬೇಡಿಕೆ ಹೆಚ್ಚಿರುವುದು ದರ ಏರಿಕೆಗೆ ಪ್ರಮುಖ ಕಾರಣ ಎನ್ನಲಾಗುತ್ತಿದೆ.

ವ್ಯಾಪಾರಿಗಳ ಪ್ರಕಾರ ಪ್ರಸ್ತುತ ಇರುವ ಸಂಗ್ರಹವು ನವೆಂಬರ್‌ವರೆಗೆ ಮಾತ್ರ ಸಾಕಾಗುವ ಸಾಧ್ಯತೆ ಇದ್ದು, ಹೊಸ ಬೆಳೆ ಮಾರುಕಟ್ಟೆಗೆ ಬರುವವರೆಗೂ ಬೆಲೆ ಇಳಿಕೆಯಾಗುವ ಲಕ್ಷಣಗಳು ಕಾಣುತ್ತಿಲ್ಲ.ದರ ಏರಿಕೆಯಿಂದ ಗೃಹ ಬಳಕೆದಾರರಷ್ಟೇ ಅಲ್ಲದೆ ಹೋಟೆಲ್, ಕ್ಯಾಂಟೀನ್ ಹಾಗೂ ಆಹಾರ ಉದ್ಯಮಗಳ ಮೇಲೂ ಪರಿಣಾಮ ಬೀರಿದೆ. ಅಕ್ಕಿ ಖರೀದಿಗೆ ಗ್ರಾಹಕರು ಮುಗಿಬೀಳುತ್ತಿರುವುದರಿಂದ ಕೆಲವು ಪ್ರದೇಶಗಳಲ್ಲಿ ಬೇಡಿಕೆ ಮತ್ತಷ್ಟು ಹೆಚ್ಚಾಗಿದೆ.



| ಅಕ್ಕಿ | ಹಿಂದಿನ ದರ (ರೂ./ಕೆಜಿ) | ಸದ್ಯದ ದರ (ರೂ./ಕೆಜಿ) |
|---|---|---|
| ಸೋನಾಮಸುರಿ | 54 | 64 |
| ಕಾವೇರಿ ಸ್ಟೀಮ್ | 42 | 55 |
| ಸ್ಟೀಮ್ | 48 | 60 |
| ಸ್ಟೀಮ್ | 53 | 65 |
| ಕೊಲ್ಲಂ ಸ್ಟೀಮ್ | 58 | 68 |

ಮೇಲಿನ ಅಕ್ಕಿ ತಳಿಗಳ ದರಗಳಲ್ಲಿ ಪ್ರತಿ ಕೆಜಿಗೆ 10 ರಿಂದ 13 ರೂ.ರವರೆಗೆ ಏರಿಕೆಯಾಗಿದ್ದು, ಹೊಸ ದರಗಳು ಜಾರಿಗೆ ಬಂದಿವೆ.ವ್ಯಾಪಾರಿಗಳ ಪ್ರಕಾರ 26 ಕೆಜಿ ಅಕ್ಕಿ ಚೀಲದ ಮೇಲೆ 150ರವರೆಗೆ ದರ ಹೆಚ್ಚಳ ದಾಖಲಾಗಿದ್ದು, ಮುಂದಿನ ದಿನಗಳಲ್ಲಿ ಪೂರೈಕೆ ಪರಿಸ್ಥಿತಿ ಸುಧಾರಿಸದಿದ್ದರೆ ಬೆಲೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆಯಿದೆ.

# ಸಾಮಾಜಿಕ ಜಾಲತಾಣದಲ್ಲಿ ಪ್ರಿಯಾಂಕ್ ಖರ್ಗೆ ವಿರುದ್ಧ ಟ್ರೋಲ್ ಮಾಡುವವರು ಜೈಲಿಗೆ: ಛಲವಾದಿ ನಾರಾಯಣಸ್ವಾಮಿ ಆರೋಪ

**ಬೆಂಗಳೂರು, ಜೂ.13:** ಪ್ರತಿ ತಾಲ್ಲೂಕು, ಪ್ರತಿ ಜಿಲ್ಲೆಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಸಕ್ರಿಯರಾಗಿರುವವರ ಮೇಲೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನಿಗಾ ಇಟ್ಟಿದ್ದು, ಸಚಿವರ ಬಗ್ಗೆ ಮಾತನಾಡುವವರನ್ನು, ಟ್ರೋಲ್ ಮಾಡುವವರನ್ನು ಪಟ್ಟಿ ಮಾಡಿ ಜೈಲಿಗೆ ಅಟ್ಟಲಾಗುತ್ತಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.

ಕೋಲಾರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ದ್ವೇಷ ಭಾಷಣ ಮಾಡುವವರು, ತಪ್ಪು ಮಾಹಿತಿ ನೀಡುವವರ ಮೇಲೆ ಕ್ರಮಕ್ಕೆ ರಾಜ್ಯ ಸರ್ಕಾರ ಈಗಾಗಲೇ ಮಸೂದೆ ಕೂಡ ರೂಪಿಸಿದೆ. ಪ್ರಿಯಾಂಕ್ ಖರ್ಗೆ ಅವರಿಗೆ ತಾಕತ್ತಿದ್ದರೆ, ಗೃಹ ಸಚಿವರಾಗಿರಲು ದಮ್ಮು ಇದ್ದರೆ ಬಿಜೆಪಿ ಕಾರ್ಯಕರ್ತರ ಬಗ್ಗೆ ಕೆಟ್ಟದಾಗಿ ಮಾತನಾಡಿರುವ ಚಿಕ್ಕಬಳ್ಳಾಪುರ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಅವರನ್ನು ಮೊದಲು ಜೈಲಿಗೆ ಕಳುಹಿಸಲಿ. ಆಮೇಲೆ ಬೇರೆಯವರ ಮೇಲೆ ಪ್ರಕರಣ ದಾಖಲಿಸಿ ಎಂದು ಸವಾಲು ಹಾಕಿದರು.

ಈಗಾಗಲೇ ಗೃಹ ಸಚಿವರಿಗೆ ಪತ್ರ ಕೂಡ ಬರೆದಿದ್ದೇನೆ. ಪ್ರಿಯಾಂಕ್ ಅವರು ಆರ್‌ಎಸ್‌ಎಸ್ ಬಗ್ಗೆ ಮಾತನಾಡುವುದನ್ನು ಬಿಟ್ಟು ಗೃಹ ಸಚಿವರ ಕೆಲಸ ಮಾಡಲಿ. ಅವರನ್ನು ಸಚಿವನ್ನರಾಗಿಸಿರುವುದು ಬಿಜೆಪಿಯನ್ನು ಗುರಿಯಾಗಿಸಲು ಅಲ್ಲ; ಜನರ ಕೆಲಸ ಮಾಡಲು. ಈ ಕೆಲಸ ಮಾಡದಿದ್ದರೆ ಗೃಹ ಸಚಿವರಾಗಿರಲು ಅವರಿಗೆ ಯೋಗ್ಯತೆ ಇಲ್ಲವೆಂದು ಭಾವಿಸ ಬೇಕಾಗುತ್ತದೆ ಎಂದರು.

**ನೋಂದಣಿ ಆರ್‌ಎಸ್‌ಎಸ್ ವೈಯಕ್ತಿಕ ವಿಚಾರ:**

ಆರ್‌ಎಸ್‌ಎಸ್ ನೋಂದಣಿ ಆಗಬೇಕೆಂಬ ಗೃಹ ಸಚಿವರ ಹೇಳಿಕೆಗೆ ಪ್ರತಿಕ್ರಿಯಿಸಿ, 'ಆರ್‌ಎಸ್‌ಎಸ್ ಇವತ್ತು ಹುಟ್ಟಿದ್ದಲ್ಲ. ಪ್ರಿಯಾಂಕ್ ಖರ್ಗೆ ಅವರ ತಂದೆ ಹುಟ್ಟುವ ಮೊದಲೇ ಸ್ಥಾಪನೆಯಾಗಿತ್ತು. ಈಗಾಗಲೇ 100 ವರ್ಷ ಆಗಿದೆ. ಆರ್‌ಎಸ್‌ಎಸ್‌ನಲ್ಲಿ ಸದಸ್ಯತ್ವ ಎಂಬುದೇ ಇಲ್ಲ. ಸ್ವಇಚ್ಛೆಯಿಂದ ಆಗುವಂಥದ್ದು.



ನೋಂದಣಿ ಎಂಬುದು ಆರ್‌ಎಸ್‌ಎಸ್‌ನ ವೈಯಕ್ತಿಕ ವಿಚಾರ. ಹೀಗಾಗಿ, ನೋಂದಣಿ ಮಾಡಿಸಬೇಕೆಂದು ಆವತ್ತೂ ಇರಲಿಲ್ಲ, ಇವತ್ತಿಗೂ ಇಲ್ಲ ಎನ್ನುವುದನ್ನು ಸಚಿವರು ಅರಿತುಕೊಳ್ಳಬೇಕು ಎಂದು ಛಲವಾದಿ ನಾರಾಯಣಸ್ವಾಮಿ ತಿರುಗೇಟು ನೀಡಿದರು.

**ಬುರುಡೆ ಗ್ಯಾಂಗ್ ಜತೆ ಬುರುಡೆ ಸರ್ಕಾರ ಸೇರಿ ಧರ್ಮಸ್ಥಳ ವಿರುದ್ಧ ಷಡ್ಯಂತ್ರ ಸೃಷ್ಟಿ**

ಬುರುಡೆ ಗ್ಯಾಂಗ್ ಜೊತೆ ಬುರುಡೆ ಸರ್ಕಾರ ಸೇರಿ ನಡೆಸಿದ ಷಡ್ಯಂತ್ರದಿಂದಾಗಿ ಧರ್ಮಸ್ಥಳ ಪ್ರಕರಣ ಸೃಷ್ಟಿಯಾಯಿತು. ದೈವ ಸ್ಥಳಕ್ಕೆ ಕಳಂಕ ತರಲು ಪಣತೊಟ್ಟು, ಕೇರಳದಿಂದ ಷಡ್ಯಂತ್ರ ರೂಪಿಸಲಾಯಿತು.

ಎಸ್‌ಐಟಿ ವರದಿಯಲ್ಲಿ ಏನಿದೆ ಎನ್ನುವುದನ್ನು ಜನರ ಮುಂದಿಡಲಿ. ಹಿಂದೂಗಳಿಗೆ, ಹಿಂದುತ್ವಕ್ಕೆ, ದೇವಾಲಯಗಳಿಗೆ ಕಳಂಕ ತಂದರೆ ಸರ್ಕಾರ ಸರ್ವನಾಶವಾಗುವುದು ಖಚಿತ. ಈಗಿನ ಮುಖ್ಯಮಂತ್ರಿ ದೈವಭಕ್ತರಿದ್ದಾರೆ. ಬುರುಡೆ ಗ್ಯಾಂಗ್‌ನ ತಪ್ಪಿತಸ್ಥರನ್ನು ಜೈಲಿಗಟ್ಟಿದರೆ ಅವರಿಗೆ ಒಳ್ಳೆಯದಾಗುತ್ತದೆ.

ನಟ ಪ್ರಕಾಶ್ ರಾಜ್ ಬುರುಡೆ ಗ್ಯಾಂಗ್‌ನ ನಾಯಕ. ಅವರು ಸಿನಿಮಾ ಹಾಗೂ ನಿಜ ಜೀವನದಲ್ಲೂ ವಿಲನ್ ಆಗಿದ್ದು, ಜನರ ಆಕ್ರೋಶ ಎದುರಿಸುವುದು ತಪ್ಪಲ್ಲ ಎಂದು ಛಲವಾದಿ ನಾರಾಯಣಸ್ವಾಮಿ ಹೇಳಿದರು.

# ಧರ್ಮಸ್ಥಳ ಬುರುಡೆ ಪ್ರಕರಣ: ಕೋರ್ಟ್ ವರದಿ ಬೆನ್ನಲ್ಲೇ ಗೃಹ ಸಚಿವರ ಜತೆ ಎಸ್‌ಐಟಿ ಮುಖ್ಯಸ್ಥ ಪ್ರಣಬ್ ಮೊಹಂತಿ ಚರ್ಚೆ

**ಬೆಂಗಳೂರು, ಜೂ.13:** ರಾಜ್ಯದಲ್ಲಿ ಭಾರಿ ಸಂಚಲನ ಮೂಡಿಸಿರುವ ಧರ್ಮಸ್ಥಳ ಬುರುಡೆ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ನ್ಯಾಯಾಲಯವು ವರದಿ ಕೇಳಿರುವ ಬೆನ್ನಲ್ಲೇ ತನಿಖಾ ಪ್ರಕ್ರಿಯೆ ತೀವ್ರಗೊಂಡಿದೆ.

ಈ ಪ್ರಮುಖ ಬೆಳವಣಿಗೆಯ ನಡುವೆ, ವಿಶೇಷ ತನಿಖಾ ದಳದ ಮುಖ್ಯಸ್ಥರಾದ ಪ್ರಣಬ್ ಮೊಹಂತಿ ಅವರು ಗೃಹ ಸಚಿವರನ್ನು ಶನಿವಾರ ಭೇಟಿಯಾಗಿ ಸುದೀರ್ಘ ಚರ್ಚೆ ನಡೆಸಿರುವುದು ಈಗ ತನಿಖಾ ವಲಯದಲ್ಲಿ ಭಾರಿ ಕುತೂಹಲಕ್ಕೆ ಕಾರಣವಾಗಿದೆ.

ಬೆಂಗಳೂರಿನಲ್ಲಿ ನಡೆದ ಈ ಉನ್ನತ ಮಟ್ಟದ ಮಹತ್ವದ ಸಭೆಯು ಸುಮಾರು 20 ನಿಮಿಷಗಳ ಕಾಲ ಜರುಗಿತು. ಈ ವೇಳೆ ಎಸ್‌ಐಟಿ ಮುಖ್ಯಸ್ಥ ಪ್ರಣಬ್ ಮೊಹಂತಿ ಅವರು ಪ್ರಕರಣದ ಇದುವರೆಗಿನ ತನಿಖಾ ಪ್ರಗತಿಯ ಸಂಪೂರ್ಣ ವಿವರಗಳನ್ನು ಗೃಹ ಸಚಿವರಿಗೆ ಮನವರಿಕೆ ಮಾಡಿಕೊಟ್ಟರು. ಮುಖ್ಯವಾಗಿ ನ್ಯಾಯಾಲಯಕ್ಕೆ ಸಲ್ಲಿಸಬೇಕಾದ ವರದಿಯ ಸಿದ್ಧತೆಗಳ ಕುರಿತು ಸಚಿವರೊಂದಿಗೆ ಪ್ರಮುಖವಾಗಿ ಸಮಾಲೋಚನೆ ನಡೆಸಲಾಯಿತು.



ವಿಶೇಷವೆಂದರೆ, ಎಸ್‌ಐಟಿ ಮುಖ್ಯಸ್ಥರು ಕೇವಲ ಮೌಖಿಕ ಮಾಹಿತಿ ನೀಡದೆ, ಪ್ರಕರಣಕ್ಕೆ ಸಂಬಂಧಿಸಿದ ಕೆಲವು ಅತ್ಯಂತ ಪ್ರಮುಖ ಹಾಗೂ ಗೌಪ್ಯ ದಾಖಲೆಗಳೊಂದಿಗೆ ಗೃಹ ಸಚಿವರನ್ನು ಭೇಟಿಯಾಗಿದ್ದರು. ಈ ಪ್ರಮುಖ ದಾಖಲೆಗಳನ್ನು ಪರಿಶೀಲಿಸಿದ ಬಳಿಕ, ಪ್ರಕರಣದ ಮುಂದಿನ ತನಿಖೆಯು ಯಾವ ದಿಕ್ಕಿನಲ್ಲಿ ಸಾಗಬೇಕು ಮತ್ತು ಕಾನೂನು ಪ್ರಕ್ರಿಯೆಗಳನ್ನು ಹೇಗೆ ಮುನ್ನಡೆಸಬೇಕು ಎಂಬ ಬಗ್ಗೆ ಇಬ್ಬರ ನಡುವೆ ಮಹತ್ವದ ಸಮಾಲೋಚನೆ ನಡೆದಿದೆ ಎಂದು ತಿಳಿದುಬಂದಿದೆ.ಇದೇ ಸಂದರ್ಭದಲ್ಲಿ, ಪ್ರಕರಣಕ್ಕೆ ಸಂಬಂಧಿಸಿದಂತೆ ಚಿನ್ನಯ್ಯ ಎಂಬುವವರು ಮಾಡಿರುವ ಗಂಭೀರ ಸ್ವರೂಪದ ಆರೋಪಗಳ ಕುರಿತೂ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆದಿದೆ ಎನ್ನಲಾಗಿದೆ. ಚಿನ್ನಯ್ಯ ಅವರ ಆರೋಪಗಳಲ್ಲಿರುವ ಸತ್ಯಾಸತ್ಯತೆ ಮತ್ತು ಆ ನಿಟ್ಟಿನಲ್ಲಿ ನಡೆದಿರುವ ತನಿಖೆಯ ಹಂತಗಳ ಬಗ್ಗೆ ಎಸ್‌ಐಟಿ ಮುಖ್ಯಸ್ಥರು ಗೃಹ ಸಚಿವರಿಗೆ ಸವಿವರವಾದ ಮಾಹಿತಿ ನೀಡಿದ್ದಾರೆ ಎನ್ನಲಾಗಿದೆ.

ನ್ಯಾಯಾಲಯವು ವರದಿ ಕೇಳಿದ ತಕ್ಷಣವೇ ಎಸ್‌ಐಟಿ ಇಷ್ಟೊಂದು ಚುರುಕಾಗಿ ಕಾರ್ಯಪ್ರವೃತ್ತವಾಗಿರುವುದು ಮತ್ತು ಉನ್ನತಾಧಿಕಾರಿಗಳು ನೇರವಾಗಿ ಗೃಹ ಸಚಿವರನ್ನು ಭೇಟಿ ಮಾಡಿ ಗೌಪ್ಯ ಚರ್ಚೆ ನಡೆಸಿರುವುದು ಈ ಪ್ರಕರಣಕ್ಕೆ ಸರ್ಕಾರ ಮತ್ತು ತನಿಖಾ ಸಂಸ್ಥೆ ನೀಡುತ್ತಿರುವ ಗಂಭೀರತೆಯನ್ನು ಎತ್ತಿ ತೋರಿಸುತ್ತದೆ. ಮುಂಬರುವ ದಿನಗಳಲ್ಲಿ ಈ ಭೇಟಿಯ ಆಧಾರದ ಮೇಲೆ ತನಿಖೆ ಯಾವ ತಿರುವು ಪಡೆದುಕೊಳ್ಳಲಿದೆ ಎಂಬುದು ಸಾರ್ವಜನಿಕ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ.

## ಸಿದ್ದಗಂಗಾ ಮಠಕ್ಕೆ 14.25 ಎಕರೆ: ಸರ್ಕಾರದ ಕ್ರಮ ಎತ್ತಿಹಿಡಿದ ಹೈಕೋರ್ಟ್

**ಬೆಂಗಳೂರು, ಜೂ.13:** ತುಮಕೂರಿನ ಸಿದ್ದಗಂಗಾ ಮಠದ ದಾಸೋಹ ಪ್ರಸಾದ ವಿತರಣಾ ಕೇಂದ್ರಕ್ಕೆ ಬೆಂಗಳೂರು ಉತ್ತರ ತಾಲೂಕಿನ ಕದರನಹಳ್ಳಿ ಗ್ರಾಮದಲ್ಲಿ 14 ಎಕರೆ 25 ಗುಂಟೆ ಜಮೀನು ಮಂಜೂರು ಮಾಡಿದ್ದ ರಾಜ್ಯ ಸರ್ಕಾರದ ಕ್ರಮವನ್ನು ಹೈಕೋರ್ಟ್ ಎತ್ತಿಹಿಡಿದಿದೆ.

ಜಮೀನು ಮಂಜೂರಾತಿ ರದ್ದುಪಡಿಸಿದ್ದ ಏಕಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ಮಠದ ಆಡಳಿತಾಧಿಕಾರಿ ಎಸ್.ವಿಶ್ವನಾಥಯ್ಯ ಹಾಗೂ ರಾಜ್ಯ ಕಂದಾಯ ಇಲಾಖೆ ಸಲ್ಲಿಸಿದ್ದ ಮೇಲ್ಮನವಿಗಳನ್ನು ನ್ಯಾ. ಡಿ.ಕೆ.ಸಿಂಗ್ ಹಾಗೂ ನ್ಯಾ.ಟಿ.ಎಂ. ನದಾಫ್ ಅವರಿದ್ದ ವಿಭಾಗೀಯ ನ್ಯಾಯಪೀಠ ಪುರಸ್ಕರಿಸಿದೆ.

ಮಂಜೂರಾತಿ ರದ್ದುಪಡಿಸಿ 2025ರ ಜುಲೈ 15ರಂದು ಏಕಸದಸ್ಯ ನ್ಯಾಯಪೀಠ ಹೊರಡಿಸಿದ್ದ ಆದೇಶ ರದ್ದುಪಡಿಸಿರುವ ವಿಭಾಗೀಯ ನ್ಯಾಯಪೀಠ, ಪ್ರಕರಣದಲ್ಲಿ ಮಠದ ಪರವಾಗಿ ಕರ್ನಾಟಕ ಮೇಲ್ಮನವಿ ನ್ಯಾಯಮಂಡಳಿ 2018ರ ಏಪ್ರಿಲ್ 27ರಂದು ಹೊರಡಿಸಿದ್ದ ಆದೇಶವನ್ನು ಎತ್ತಿಹಿಡಿದಿದೆ.

# ಚಿನ್ನಯ್ಯನನ್ನು ಬ್ರೈನ್ ಮ್ಯಾಪಿಂಗ್ ಮಾಡಿ ಗಿರೀಶ್‌ಮಟ್ಟಣ್ಣವರ್, ಜಯಂತ್ ತಂಡದಿಂದ ದೂರು

ಧರ್ಮಸ್ಥಳ ಪ್ರಕರಣದ ಚಿನ್ನಯ್ಯ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿರುವ ಬೆನ್ನಲ್ಲೇ ಗಿರೀಶ್ ಮಟ್ಟಣ್ಣವರ್, ಜಯಂತ್ ಟಿ. ತಂಡ ಬೆಳ್ತಂಗಡಿ ಎಸ್‌ಐಟಿ ಕಚೇರಿಗೆ ಆಗಮಿಸಿ ದೂರು ನೀಡಿದ್ದಾರೆ.

ಬೆಳ್ತಂಗಡಿಯಲ್ಲಿರುವ ಎಸ್‌ಐಟಿ ಕಚೇರಿಗೆ ಇಂದು (ಜೂನ್.13) ಭೇಟಿ ನೀಡಿದ ಅವರು, ಪ್ರಕರಣದ ಆರೋಪಿ ಚಿನ್ನಯ್ಯನಿಗೆ ಪೊಲೀಸ್



ಭದ್ರತೆ ನೀಡಬೇಕು, ಚಿನ್ನಯ್ಯನನ್ನು ಬ್ರೈನ್ ಮ್ಯಾಪಿಂಗ್ ಮಾಡಬೇಕು. ಹೈಕೋರ್ಟ್‌ಗೆ ನೀಡಿದ ಹೇಳಿಕೆಯನ್ನು ಮಾಧ್ಯಮಗಳಿಗೆ, ಸಾಮಾಜಿಕ ಜಾಲತಾಣಗಳಿಗೆ ಕೊಡಬಾರದು ಎಂಬ ಜಾಮೀನು ಷರತ್ತು ಉಲ್ಲಂಘನೆಯಾಗಿರುತ್ತದೆ. ಹೀಗಾಗಿ ಎಸ್‌ಐಟಿ ತಂಡದ ನ್ಯಾಯವಾದಿಗಳು ಚಿನ್ನಯ್ಯನ ಜಾಮೀನು ರದ್ದತಿ ಅರ್ಜಿ ಸಲ್ಲಿಸಬೇಕು ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಜೊತೆಗೆ ನೇರಪ್ರಸಾರದ ಮೂಲಕ ನನ್ನನ್ನು ಕೂಡ ಬ್ರೈನ್ ಮ್ಯಾಪಿಂಗ್‌ಗೆ ಒಳಪಡಿಸಲಿ ಎಂದು ಮಾಧ್ಯಮಗಳಿಗೆ ಗಿರೀಶ್ ಮಟ್ಟಣ್ಣವರ್ ಪ್ರತಿಕ್ರಿಯಿಸಿದ್ದಾರೆ.

### ಪಡಿತರ ಅಕ್ಕಿ, ಆಹಾರಧಾನ್ಯಗಳ ವಿತರಣೆಯಲ್ಲಿ ಅಕ್ರಮ, ಕಳ್ಳಾಟ ಬಹಿರಂಗ

# ಲೋಕಾಯುಕ್ತ ಪೊಲೀಸರಿಂದ 27 ಕಡೆ ದಾಳಿ

**ಬೆಂಗಳೂರು, ಜೂ.13:** ಪಡಿತರ ಅಕ್ಕಿ ಮತ್ತು ಆಹಾರಧಾನ್ಯಗಳ ವಿತರಣೆಯಲ್ಲಿ ನಡೆಯುತ್ತಿದ್ದ ಅಕ್ರಮ ಹಾಗೂ ಕಳ್ಳಾಟವನ್ನು ಲೋಕಾಯುಕ್ತ ಪೊಲೀಸರು ಪತ್ತೆಹಚ್ಚಿದ್ದಾರೆ. ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಹಾಗೂ ಉಪಲೋಕಾಯುಕ್ತರಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ನೇತೃತ್ವದಲ್ಲಿ ಬೆಂಗಳೂರಿನ 22 ಹಾಗೂ ಬೆಂಗಳೂರು ಗ್ರಾಮಾಂತರದ 5 ಸೇರಿ ಒಟ್ಟು 27 ಕಡೆಗಳಲ್ಲಿ ಶುಕ್ರವಾರ ಏಕಕಾಲದಲ್ಲಿ ಆಹಾರ ಸರಬರಾಜು ನಿಗಮದ ಗೋದಾಮುಗಳ ಮೇಲೆ ದಾಳಿ ನಡೆಸಲಾಗಿದೆ.

ಸಾವಿರಾರು ಮೂಟೆ ಪಡಿತರ ಅಕ್ಕಿ ನಾಪತ್ತೆಯಾಗಿದ್ದು, ಅಧಿಕಾರಿಗಳ ಭಾರಿ ಕಳ್ಳಾಟ ಬಯಲಾಗಿದೆ. ಗೋದಾಮುಗಳಲ್ಲಿ ಹಮಾಲಿ ಕಾರ್ಮಿಕರಿಗೆ ಜೀವ ವಿಮೆ ಮತ್ತು ಇಎಸ್‌ಐ ನೀಡದೆ ವಂಚಿಸಿರುವುದು ಬೆಳಕಿಗೆ ಬಂದಿದೆ.

# ದಿವಾಳಿ ಘೋಷಣೆ ವಿರುದ್ಧ ಕಾನೂನು ಹೋರಾಟ ಪರಿಷತ್ ಸದಸ್ಯ ನಸೀರ್ ಅಹಮದ್ ಘೋಷಣೆ

**ಬೆಂಗಳೂರು, ಜೂ.13:** ಮೆಸರ್ಸ್ ಸ್ಟಾಕ್ಸ್ ಗಾರ್ಮೆಂಟ್ಸ್ ಲಿಮಿಟೆಡ್‌ನ ಬಾಕಿ ಸಾಲವನ್ನು ಮರುಪಾವತಿಸಲು ವಿಫಲರಾಗಿದ್ದಾರೆ ಎಂಬ ಕಾರಣ ನೀಡಿ ಕಾಂಗ್ರೆಸ್‌ನ ವಿಧಾನ ಪರಿಷತ್ ಸದಸ್ಯ ನಸೀರ್ ಅಹ್ಮದ್ ಅವರನ್ನು ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಮಂಡಳಿಯ ಬೆಂಗಳೂರು ಪೀಠ ದಿವಾಳಿ ಎಂದು ಘೋಷಿಸಿದೆ. ಆದರೆ ವಾಸ್ತವವೇ ಬೇರೆ ಇದೆ. ಈ ವಿಚಾರದಲ್ಲಿ ಕಾನೂನು ಹೋರಾಟ ನಡೆಸುತ್ತೇನೆ ಎಂದು ನಸೀರ್ ಅಹ್ಮದ್ ಹೇಳಿದ್ದಾರೆ.

ಸುನಿಲ್ ಕುಮಾರ್ ಅಗರ್ವಾಲ್ (ನ್ಯಾಯಾಂಗ ಸದಸ್ಯ) ಮತ್ತು ರಾಧಾಕೃಷ್ಣ ಶ್ರೀಪಾದ (ತಾಂತ್ರಿಕ ಸದಸ್ಯ) ಅವರನ್ನೊಳಗೊಂಡ ಎನ್.ಸಿ.ಎಲ್.ಟಿಯ ಬೆಂಗಳೂರು ಪೀಠವು ಜೂನ್ 8ರಂದು ಐಬಿಸಿ–2016ರ ಅಡಿಯಲ್ಲಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕೆನರಾ ಬ್ಯಾಂಕ್ ಮತ್ತು ಐಡಿಬಿಐ ಬ್ಯಾಂಕ್ ಸಲ್ಲಿಸಿದ ಅರ್ಜಿಯ ಮೇರೆಗೆ ಈ ಆದೇಶವನ್ನು ಹೊರಡಿಸಿದೆ. ನಸೀರ್ ಅವರು ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಕಂಪನಿಯ ಹಿಂದಿನ ನಿರ್ದೇಶಕರಾಗಿ ಸಾಲಕ್ಕೆ ವೈಯಕ್ತಿಕ ನಾಮಿನಿಗಳಾಗಿದ್ದ ಅವರ ಪತ್ನಿ ನುಝುತ್ ಆಯಿಷಾ ನಸೀರ್ ಮತ್ತು ಮಗ ಅವೈಜ್ ಅಹ್ಮದ್ ಅವರನ್ನೂ ಎನ್.ಸಿ.ಎಲ್.ಟಿ ದಿವಾಳಿ ಎಂದು ಘೋಷಿಸಿದೆ.

ಹಾಗೆಯೇ ನಸೀರ್ 1,454 ಕೋಟಿ ರೂ. ಬಾಕಿ ಸಾಲವನ್ನು ಮರುಪಾವತಿಸಲು ವಿಫಲರಾಗಿದ್ದಾರೆ ಎಂದು ವಿವಿಧ ಮಾಧ್ಯಮಗಳು ವರದಿ ಮಾಡಿವೆ. ನಸೀರ್ ದಿವಾಳಿ ಎಂದು ಘೋಷಿಸಲಾಗಿರುವ ಕಾರಣ ಐಬಿಸಿಯ ಸೆಕ್ಷನ್ 140 ಮತ್ತು ಸಂವಿಧಾನದ ಆರ್ಟಿಕಲ್ 191(1)(ಸಿ) ಅಡಿಯಲ್ಲಿ ಅವರು ಎಂಎಲ್‌ಸಿ ಹುದ್ದೆಯಿಂದ ಅನರ್ಹರಾಗುತ್ತಾರೆ ಎಂದೂ ವರದಿಯಾಗಿತ್ತು.

ನಾನು ಸ್ಟಾಕ್ಸ್ ಗಾರ್ಮೆಂಟ್ ಕಂಪೆನಿಯನ್ನು ನಡೆಸುತ್ತಿದ್ದದ್ದು ಮತ್ತು ಅದು ನಷ್ಟಕ್ಕೆ ಒಳಗಾಗಿದ್ದು ನಿಜ. ಆದರೆ, ಈ ಬೆಳವಣಿಗೆಗಳು ನನಗೆ ಬೇಸರವನ್ನುಂಟು ಮಾಡಿದೆ. 16,000 ಕಾರ್ಮಿಕರಿಗೆ, ಅದರಲ್ಲೂ ಮಹಿಳೆಯರಿಗೆ ಉದ್ಯೋಗ ಕೊಟ್ಟ ಸಂತೃಪ್ತಿ ನನಗಿತ್ತು. ನನ್ನ ಕಂಪೆನಿಗೆ ಅತ್ಯುತ್ಕೃಷ್ಟ ಕಂಪೆನಿ ಎಂಬ ಹೆಸರೂ ಇತ್ತು. ಉದ್ದಿಮೆಯಲ್ಲಾದ ವ್ಯತ್ಯಾಸದಿಂದ ನಷ್ಟಕ್ಕೆ ಗುರಿಯಾಯಿತು. ಆಗ ಎಸ್‌ಬಿಐ ಟ್ರಸ್ಟಿಗೆ ನಿಯಮಾನುಸಾರ ಪರ್ಸನಲ್ ಗ್ಯಾರಂಟಿಯನ್ನು ನೀಡಲಾಯಿತು. ಆ ಗ್ಯಾರಂಟಿಯನ್ನು ಬಳಸಿಕೊಂಡು ಈ ಸಮಸ್ಯೆಯನ್ನು ಪರಿಹರಿಸುವುದು ಸರಿಯಾದ ವಿಧಾನ ಎಂಬುದು ನಮ್ಮ ವಾದವಾಗಿತ್ತು. ಆದರೆ, ಅದನ್ನು ಸಂಬಂಧಪಟ್ಟ ಪ್ರಾಧಿಕಾರವು ಒಪ್ಪಿಲ್ಲ. ಲಿಕ್ವಿಡೇಷನ್ ನಂತರ ಆ ಸಂಪನ್ಮೂಲವೆಲ್ಲವೂ ಬ್ಯಾಂಕಿಗೇ ಸೇರಿತು ಎಂದು ಹೇಳಿದ್ದಾರೆ. ನಸೀರ್ 1,454 ಕೋಟಿ ಸಾಲ ಬಾಕಿ ಹೊಂದಿದ್ದಾರೆ ಎಂಬ ಬಗ್ಗೆ ಪ್ರತಿಕ್ರಿಯಿಸಿದ್ದು, ಈಗ ಬಂದಿರುವ ವರದಿಗಳಲ್ಲಿ ಸಾವಿರಾರು ಕೋಟಿ ರೂ.ಗಳ ಸಂಖ್ಯೆಯನ್ನು ನಮೂದಿಸಿರುವುದು ನೋಡಿ, ನಾನೇ ಹೌಹಾರಿದೆ. ಅದೆಲ್ಲವೂ ಅಂಕೆ–ಸಂಖ್ಯೆಗಳ ಲೆಕ್ಕಾಚಾರ ಅಷ್ಟೇ. ಆ ಪ್ರಮಾಣದ ಸಾಲವನ್ನು ಪಡೆಯಲು ನನ್ನಂಥವನಿಗೆ ಸಾಧ್ಯವೇ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ನನ್ನ ರಾಜಕೀಯ ಜೀವನದುದ್ದಕ್ಕೂ ಹಣಕಾಸಿನ ವಿಚಾರದಲ್ಲಿ ಪ್ರಾಮಾಣಿಕವಾಗಿ



ನಡೆದುಕೊಂಡು ಬಂದಿದ್ದೇನೆ. ಆಸ್ತಿ, ಹಣ ಮಾಡುವುದರ ಹಿಂದೆ ಹೋಗಿಲ್ಲ. ಅಧಿಕಾರದ ಕೇಂದ್ರಕ್ಕೆ ಹತ್ತಿರದಲ್ಲಿದ್ದಾಗಲೂ ಜನರು, ಸಮುದಾಯ, ಪಕ್ಷ, ಸರ್ಕಾರದ ಹಿತವನ್ನಷ್ಟೇ ಮನಸ್ಸಿನಲ್ಲಿ ಇಟ್ಟುಕೊಂಡಿದ್ದೇನೆ ಎಂದು ತಿಳಿಸಿದ್ದಾರೆ. ಈ ಆದೇಶದ ವಿರುದ್ಧ ಕಾನೂನು ಪ್ರಕಾರ ಮೇಲ್ಮನವಿ ಸಲ್ಲಿಸಲಿದ್ದೇನೆ. ನಾನು ಇದುವರೆಗೆ ಮಾಡಿರುವ ಕೆಲಸ ಮತ್ತು ಕಾನೂನಿನ ಬಲದಿಂದ ಗೆದ್ದು ಬರುವ ವಿಶ್ವಾಸವಿದೆ ಎಂದು ನಸೀರ್ ಹೇಳಿದ್ದಾರೆ.

### ಎಲ್‌ನಿನೋ ಪರಿಣಾಮದಿಂದ ಜಾಗತಿಕ ಹವಾಮಾನದಲ್ಲಿ ಬದಲಾವಣೆ, ಮುಂಗಾರು ಮಳೆ ಪ್ರಮಾಣ ಮತ್ತು ಹಂಚಿಕೆಯಲ್ಲಿ ವ್ಯತ್ಯಾಸ

# ಮುಂದಿನ ದಿನಗಳಲ್ಲಿ ನಿರೀಕ್ಷೆಗಿಂತ ಕಡಿಮೆ ಮಳೆ: ಹವಾಮಾನ ತಜ್ಞರ ಅಭಿಮತ

**ಬೆಂಗಳೂರು, ಜೂ.13:** ಮುಂಗಾರು ಮಳೆ ಆರಂಭವಾಗುತ್ತಿದ್ದಂತೆಯೇ ಉತ್ತಮ ಮಳೆಯ ನಿರೀಕ್ಷೆಯಲ್ಲಿದ್ದ ಜನರಿಗೆ ಇದೀಗ ನಿರಾಸೆಯ ಸುದ್ದಿ ಎದುರಾಗಿದೆ. ರಾಜ್ಯದಲ್ಲಿ ಜೂನ್ ಮೊದಲ ವಾರದಲ್ಲಿ ಮುಂಗಾರು ಪ್ರವೇಶಿಸಿದರೂ, ಆರಂಭಿಕ ಚುರುಕಿನ ನಂತರ ಮಳೆಯ ಪ್ರಮಾಣದಲ್ಲಿ ಕುಸಿತ ಕಂಡುಬಂದಿದ್ದು, ಮುಂದಿನ ದಿನಗಳಲ್ಲಿಯೂ ನಿರೀಕ್ಷೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ.

ಜೂ.4ರಿಂದ ರಾಜ್ಯದಲ್ಲಿ ಮುಂಗಾರು ಮಳೆ ಆರಂಭವಾಗಿದ್ದು, ಈ ಬಾರಿ ಉತ್ತಮ ಮಳೆಯ ನಿರೀಕ್ಷೆಯಲ್ಲಿ ರೈತರು ಬಿತ್ತನೆ ಕಾರ್ಯಗಳಿಗೆ ಸಿದ್ಧತೆ ನಡೆಸಿದ್ದರು. ಆದರೆ ಮುಂಗಾರು ಆರಂಭವಾಗಿ ಕೇವಲ ಒಂದು ವಾರ ಕಳೆದಿದ್ದರೂ ಮಳೆಯ ತೀವ್ರತೆ ಕಡಿಮೆಯಾಗಿದ್ದು, ಹಲವು ಜಿಲ್ಲೆಗಳಲ್ಲಿ ಮಳೆ ವಿರಳವಾಗಿದೆ.



ಇದರಿಂದ ರೈತಾಪಿ ವರ್ಗದಲ್ಲಿ ಆತಂಕ ಹೆಚ್ಚಾಗಿದೆ.

ತಜ್ಞರ ಪ್ರಕಾರ, ಪೆಸಿಫಿಕ್ ಮಹಾಸಾಗರದ ಮಧ್ಯ ಹಾಗೂ ಪೂರ್ವ ಭಾಗಗಳಲ್ಲಿ ಸಮುದ್ರದ ಮೇಲ್ಮೈ ತಾಪಮಾನ ಅಸಹಜವಾಗಿ ಏರಿಕೆಯಾಗುತ್ತಿರುವುದು ಪ್ರಮುಖ ಕಾರಣವಾಗಿದೆ. ಈ ಹವಾಮಾನ ಸ್ಥಿತಿಯನ್ನು "ಎಲ್‌ನಿನೋ" ಎಂದು ಕರೆಯಲಾಗುತ್ತದೆ.

ಎಲ್‌ನಿನೋ ಪರಿಣಾಮದಿಂದ ಜಾಗತಿಕ ಹವಾಮಾನ ವ್ಯವಸ್ಥೆಯಲ್ಲಿ ಬದಲಾವಣೆ ಉಂಟಾಗಿ, ಭಾರತದ ಮುಂಗಾರು ಮಳೆಯ ಪ್ರಮಾಣ ಮತ್ತು ಹಂಚಿಕೆಯಲ್ಲಿ ವ್ಯತ್ಯಾಸ ಕಂಡುಬರುತ್ತದೆ. ಸಾಮಾನ್ಯವಾಗಿ ಎಲ್‌ನಿನೋ ಸಂಭವಿಸುವ ವರ್ಷಗಳಲ್ಲಿ ಮಳೆ ಪ್ರಮಾಣ ಕಡಿಮೆ ಯಾಗುವ ಸಾಧ್ಯತೆ ಹೆಚ್ಚಿರುತ್ತದೆ ಎಂದು ಹವಾಮಾನ ತಜ್ಞರು ವಿವರಿಸುತ್ತಾರೆ.

# ರಾಜ್ಯ ಸರ್ಕಾರಿ ಅಭಿಯೋಜಕರಾಗಿ ಬಿ.ಎನ್. ಜಗದೀಶ್ ನೇಮಕ

**ಬೆಂಗಳೂರು, ಜೂ.13:** ಹೆಚ್ಚುವರಿ ಸರ್ಕಾರಿ ಅಭಿಯೋಜಕರಾಗಿದ್ದ ಬಿ.ಎನ್. ಜಗದೀಶ್ ಅವರನ್ನು ರಾಜ್ಯ ಸರ್ಕಾರಿ ಅಭಿಯೋಜಕರ ಹುದ್ದೆಗೆ ಬಡ್ತಿ ನೀಡಿ, ಕರ್ನಾಟಕ ಸರ್ಕಾರ ನೇಮಕ ಮಾಡಿದೆ. ರಾಜ್ಯ ಸರ್ಕಾರಿ ಅಭಿಯೋಜಕ–1 ಆಗಿದ್ದ ಬಿ.ಎ. ಬೆಳ್ಳಿಯಪ್ಪ ಅವರ ಹುದ್ದೆಗೆ ಜಗದೀಶ್ ಅವರನ್ನು ನೇಮಿಸಲಾಗಿದೆ. ಈ ಹಿಂದೆ ಇದ್ದ ವಿಜಯಕುಮಾರ್ ಮಜಗೆ ಅವರನ್ನು ಸರ್ಕಾರಿ ಅಭಿಯೋಜಕ II ಹುದ್ದೆಯಲ್ಲಿ ಮುಂದುವರಿಸಲಾಗಿದೆ.

ಮೊಹಮ್ಮದ್ ಆಯುಬ್ ಅಲಿ ಖಾನ್ ಅವರನ್ನು ಹೆಚ್ಚುವರಿ ರಾಜ್ಯ ಸರ್ಕಾರಿ ಅಭಿಯೋಜಕರನ್ನಾಗಿ ನೇಮಿಸಲಾಗಿದೆ. ಕರ್ನಾಟಕ ಕಾನೂನು ಅಧಿಕಾರಿಗಳು (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು 1977ರ ನಿಯಮ 23ರ ಅಡಿ ನೇಮಕಾತಿ



ಮಾಡಲಾಗಿದ್ದು, ನೇಮಕಾತಿಯು ಒಂದು ವರ್ಷ ಅಥವಾ ಮುಂದಿನ ಆದೇಶದವರೆಗೆ ಇರಲಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.




ಪ್ರಾಣಿ ಹಕ್ಕುಗಳ ಕಾರ್ಯಕರ್ತರು ಶನಿವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ರಾಷ್ಟ್ರೀಯ ಪ್ರಾಣಿ ಹಕ್ಕುಗಳ ದಿನವನ್ನು ಆಚರಿಸಿದರು.

# ನಾನೂ ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿ: ಡಾ.ಅಜಯಸಿಂಗ್

**ಕಲಬುರಗಿ, ಜೂ. 13:** ನಾನೂ ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿಯಾಗಿದ್ದು, ಶೀಘ್ರದಲ್ಲಿ ನಡೆಯಲಿರುವ 2ನೇ ಹಂತದ ಸಂಪುಟ ವಿಸ್ತರಣೆಯಲ್ಲಿ ಮಂತ್ರಿ ಪದವಿ ಸಿಗುವ ವಿಶ್ವಾಸವಿದೆ. ತಾಳ್ಮೆಯಿಂದಿರು ಎಂದು ಸಿಎಂ ಡಿಕೆ ಶಿವಕುಮಾರ ಅವರೇ ಹೇಳಿದ್ದಾರೆ. ಅದರಂತೆ ಹಿಂದೆ ನಾನು ಅವಸರಪಡಲಿಲ್ಲ. ಈಗ ಅವಕಾಶ ದೊರೆಯುವ ಪೂರ್ಣ ವಿಶ್ವಾಸವಿದೆ ಎಂದು ಕೆಕೆಆರ್‌ಡಿಬಿ ಅಧ್ಯರೂ ಆದ ಜಿಲ್ಲೆಯ ಜೇವರ್ಗಿ ಶಾಸಕ ಡಾ.ಅಜಯ್ ಸಿಂಗ್ ಹೇಳಿದರು.



ಜಿಲ್ಲೆಯ ಪವಿತ್ರ ಕ್ಷೇತ್ರ ದೇವಲಗಾಣಗಾಪುರದಲ್ಲಿ ಶ್ರೀ ದತ್ತಾತ್ರೇಯ ಮಹಾರಾಜರಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಅವರನ್ನು ಭೇಟಿಯದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬದುಕಿರೋ ವರೆಗೂ ಸಂಘರ್ಷ ಇದ್ದದ್ದೇ. ಹೀಗಾಗಿ ಯಾವುದಕ್ಕೂ ಆತುರ ಪಡೋದಿಲ್ಲ.

ತಾಳ್ಮೆಯಿಂದ ಕಾಯುತ್ತೇನೆ. ವಿಳಂಬವಾದರೂ ಅತ್ಯುತ್ತಮವಾದ ಸಚಿವ ಖಾತೆ ದೊರಕುವ ಆತ್ಮವಿಶ್ವಾಸವಿದೆ. ಮೂರು ಬಾರಿ ಶಾಸಕನಾಗಿದ್ದೇನೆ. ಮಂತ್ರಿಗಿರಿಗಾಗಿ 14 ವರ್ಷ ಕಾದಿದ್ದೇನೆ. ಇನ್ನು 15, 20 ದಿನ ತಾಳ್ಮೆಯಿಂದ ಕಾಯೋಣ. ಹೈಕಮಾಂಡ್ ನನ್ನ ಪಕ್ಷ ನಿಷ್ಠೆ, ಕೆಲಸ ಗುರುತಿಸಿದೆ. ಸಚಿವ ಸ್ಥಾನ ಕೊಟ್ಟೇ ಕೊಡುತ್ತಾರೆಂಬ ವಿಶ್ವಾಸವಿದೆ. ಈಗ ಸಿಎಂ, ಡಿಸಿಎಂ ಸೇರಿ 13 ಜನ ಸಚಿವರಾಗಿದ್ದಾರೆ. ಇನ್ನೂ 20 ಸ್ಥಾನಗಳಿವೆ. ಇದರಲ್ಲಿ ನನಗೂ ಅವಕಾಶ ಖಂಡಿತ ಸಿಗಲಿದೆ ಎಂದರು.

ಕೆಕೆಆರ್‌ಡಿಬಿ ಅಧ್ಯಕ್ಷ ಮುಖ್ಯ ಸಚೇತಕ, ದೆಹಲಿಯಲ್ಲಿ ವಿಶೇಷ ಪ್ರತಿನಿಧಿಯಾಗಿ ಹೇಗೆ ಕೆಲಸ ಮಾಡಿದ್ದೇನೆ ಎನ್ನುವುದು ನಮ್ಮ ಹೈಕಮಾಂಡ್ ಹತ್ತಿರದಿಂದ ನೋಡಿದೆ. "ದೇರ್ ಹುವಾ ಲೇಕಿನ್ ದುರಸ್ತ ಹುವಾ' ಅನ್ನೋ ಮಾತಿನಂತೆ ತಡವಾಗಿಯಾದರೂ ಪರವಾಗಿಲ್ಲ, ಹೈಕಮಾಂಡ್ ನನಗೆ ಈ ಬಾರಿ ಸಚಿವ ಸ್ಥಾನ ನೀಡಲಿದೆ. ರಾಜ್ಯಸಭೆ, ಪರಿಷತ್ ಚುನಾವಣೆಯ ಎಲ್ಲ ಪ್ರಕ್ರಿಯೆಗಳು ಮುಗಿದ ನಂತರ 2ನೇ ಹಂತದ ಸಂಪುಟ ವಿಸ್ತರಣೆ ನಡೆಯಲಿದೆ. ಈ ಪಟ್ಟಿಯಲ್ಲಿ ನನ್ನ ಹೆಸರು ಬರಲಿದೆ ಎಂಬ ನಿರೀಕ್ಷೆಯಿದೆ ಎಂದು ತಿಳಿಸಿದರು. ಮೋದಿ ಸರ್ಕಾರ ವಿಪಕ್ಷಗಳನ್ನು ಮುಗಿಸಲು ಹೊರಟಿದೆ. ವಿಪಕ್ಷ, ಪ್ರಾದೇಶಿಕ ಪಕ್ಷಗಳ ಮೇಲೆ ಪ್ರಹಾರ ಮಾಡುತ್ತಿದೆ. ಇಡಿ, ಐಟಿ, ಚುನಾವಣಾ ಆಯೋಗ ಬಳಸಿ ವಿರೋಧಿ ಪಕ್ಷಗಳನ್ನು ಹತ್ತಿಕ್ಕುತ್ತಿರುವುದನ್ನು ಪಶ್ಚಿಮ ಬಂಗಾಳ, ಮಹಾರಾಷ್ಟ್ರ ಸೇರಿ ದೇಶದ ಹಲವೆಡೆ ಕಂಡಿದ್ದೇವೆ. ಮೋದಿ ಸರ್ಕಾರಕ್ಕೆ ವಿಪಕ್ಷಗಳೇ ಬೇಡ. ಪ್ರಜಾಪ್ರಭುತ್ವದ ಮೇಲೆ ಅವರಿಗೆ ನಂಬಿಕೆಯೇ ಇಲ್ಲ ಎಂದು ಟೀಕಿಸಿದರು.

> ಕಲಬುರಗಿ ಜಿಲ್ಲೆಯಲ್ಲಿ ಈಗಾಗಲೇ ಇಬ್ಬರು ಸಚಿವರಿದ್ದಾಗ ಮೂರನೇಯವರಿಗೆ ನೀಡಬಹುದೇ ಎಂದು ಪ್ರಶ್ನಿಸಿದಾಗ, ಹಿಂದೆ ಎಸ್.ಎಂ.ಕೃಷ್ಣ ಅವರ ಸಚಿವ ಸಂಪುಟದಲ್ಲಿ ಧರಂಸಿಂಗ್, ಡಾ.ಮಲ್ಲಿಕಾರ್ಜುನ ಖರ್ಗೆ, ಡಾ.ಎ.ಬಿ.ಮಾಲಕರೆಡ್ಡಿ, ಖಮರುಲ್ ಇಸ್ಲಾಂ, ಬಾಬುರಾವ್ ಚವ್ಹಾಣ್, ಬಾಬುರಾವ್ ಚಿಂಚನಸೂರ್ ಸೇರಿ ಒಂದೇ ಜಿಲ್ಲೆಯಲ್ಲಿ ಆರು ಜನ ಚಿವರಾಗಿದ್ದರು. ಹೀಗಾಗಿ ಸಂಪುಟದಲ್ಲಿ ಜಿಲ್ಲೆಗೆ ಎಷ್ಟು ಸಚಿವ ಸ್ಥಾನ ಸಿಕ್ಕಿದೆ ಎಂಬ ಸಂಖ್ಯೆ ಮುಖ್ಯವಲ್ಲ. ಯಾರಿಗೆ ಯಾವ ಸ್ಥಾನಮಾನ ನೀಡಬೇಕು ಎಂಬುದು ಮುಖ್ಯವಾಗಿದ್ದು, ಈ ಬಗ್ಗೆ ನಮ್ಮ ಹೈಕಮಾಂಡ್ ನಿರ್ಣಯ ಮಾಡುತ್ತದೆ. ಅದರಂತೆಯೇ ನನಗೆ ಸಚಿವ ಪಟ್ಟ ಸಿಗುವದು ಗ್ಯಾರಂಟಿ ಎಂದು ಡಾ.ಅಜಯಸಿಂಗ್ ವಿಶ್ವಾಸ ವ್ಯಕ್ತಪಡಿಸಿದರು.
>
> – ಡಾ.ಅಜಯಸಿಂಗ್, ಅಧ್ಯಕ್ಷರು, ಕೆಕೆಆರ್‌ಡಿಬಿ

# ತೈಲೋತ್ಪನ್ನಗಳ ಬೆಲೆ ಏರಿಕೆ ಖಂಡಿಸಿ ಜಿಲ್ಲಾ ಕಾಂಗ್ರೆಸ್ ಪ್ರತಿಭಟನೆ



ಕಲಬುರಗಿಯಲ್ಲಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ತೈಲೋತ್ಪನ್ನಗಳ ಬೆಲೆ ಏರಿಕೆ ವಿರೋಧಿಸಿ ಒಪ್ರತಿಭಟನಾ ಮೆರವಣಿಗೆ ನಡೆಸಿ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

**ಕಲಬುರಗಿ, ಜೂ . 13:** ಕೇಂದ್ರ ಬಿಜೆಪಿ ಸರ್ಕಾರ ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ದರಗಳನ್ನು ಹೆಚ್ಚಿಸಿರುವುದನ್ನು ಖಂಡಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಜಿಲ್ಲೆಯ ಏರ್‌ಪೋರ್ಟ್ ರಸ್ತೆಯಲ್ಲಿರುವ ಜಿಲ್ಲಾ ಕಾಂಗ್ರೆಸ್ ಭವನದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಅನ್ನ ಪೂರ್ಣ ಕ್ರಾಸ್ ತನಕ ನಡೆಯಿತು. ಕಾಂಗ್ರೆಸ್ ಮುಖಂಡರು 'ಬಿಜೆಪಿ ಸರ್ಕಾರಕ್ಕೆ ಧಿಕ್ಕಾರ', 'ಮಹಿಳಾ ವಿರೋಧಿ, ಬಡವರ ವಿರೋಧಿ ಬಿಜೆಪಿ ಸರ್ಕಾರಕ್ಕೆ ಹೇಳಿ ಧಿಕ್ಕಾರ', 'ಬಿಜೆಪಿ ಬೆಲೆಗಳನ್ನು ಇಳಿಸಲಿ, ಇಲ್ಲವೇ ಅಧಿಕಾರ ಬಿಟ್ಟು ತೊಲಗಲಿ' ಎಂದು ಘೋಷಣೆ ಮೊಳಗಿಸಿದರು.

ಅನ್ನಪೂರ್ಣ ಕ್ರಾಸ್‌ನಲ್ಲಿ ವಾಹನಗಳ ಸಂಚಾರ ತಡೆದು ಪ್ರತಿಭಟಿಸಲಾಯಿತು. ಈ ವೇಳೆ ಮಾತನಾಡಿದ ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ದರ ದಿನೇ ದಿನೇ ಹೆಚ್ಚಿಸುತ್ತಿದೆ. ಇದರಿಂದ ಬಡವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೇಂದ್ರ ಸರ್ಕಾರ ಕೂಡಲೇ ಎಲ್‌ಪಿಜಿ, ಪೆಟ್ರೋಲ್, ಡೀಸೆಲ್ ದರಗಳನ್ನು ಇಳಿಸಬೇಕು ಎಂದು ಆಗ್ರಹಿಸಿದರು.

ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ರೇಣುಕಾ ಸಿಂಗೆ, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಶಕೀಲಅಹ್ಮದ್ ಸರಡಗಿ, ಮುಖಂಡ ರಾದ ಡಾ.ಕಿರಣ ದೇಶಮುಖ, ಸುಭಾಷ ರಾಠೋಡ, ಪಪ್ಪು ಪಟೇಲ್, ಭೀಮರಾವ ಟಿ.ಟಿ, ಶಿವಾನಂದ ಹೊನಗುಂಟಿಕರ, ಸಮ್ರಿನ್ ಬಾನು, ಸಾಯಿರಾಬಾನು, ಧನರಾಜ ಹೇರೂರ, ಫಾರೂಕ್ ಮನಿಯಾರ್, ಗುರುರಾಜ ಸುಬೇದಾರ, ನಟರಾಜ ಕಲ್ಯಾಣ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

# ಹಕ್ಕಿಗಾಗಿ ಸಂಘಟನೆ ಸಂಘರ್ಷ ಅಗತ್ಯ




**ಕಲಬುರಗಿ, ಜೂ. 13:** ಅಂಗನವಾಡಿ ನೌಕರರ ಸಮಸ್ಯೆಗಳ ಪರಿಹಾರ ಹಾಗೂ ಹಕ್ಕುಗಳ ರಕ್ಷಣೆಗಾಗಿ ಸಂಘಟನೆ ಬಲಿಷ್ಠವಾಗಬೇಕು. ಈ ನಿಟ್ಟಿನಲ್ಲಿ ಹೋರಾಟದ ಮನೋಭಾವ ಬೆಳೆಸಿಕೊಳ್ಳಬೇಕು. ಹಕ್ಕುಗಳನ್ನು ಪಡೆಯಲು ಸಂಘರ್ಷ ಅನಿವಾರ್ಯ ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು) ರಾಜ್ಯ ಪ್ರಧಾನ ಕಾರ್ಯದರ್ಶಿ ಎಚ್.ಎಸ್.ಸುನಂದ ಹೇಳಿದರು.

ನಗರದ ಕನ್ನಡ ಭವನದಲ್ಲಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು) ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ವಿಭಾಗವಾರು ಸಂಘಟನಾ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ಅಂಗನವಾಡಿ ನೌಕರರು ಎದುರಿಸುತ್ತಿರುವ ವಿವಿಧ ಸಮಸ್ಯೆ ಪರಿಹಾರಕ್ಕಾಗಿ ಸಂಘಟನೆ ಇನ್ನಷ್ಟು ಸದೃಢಗೊಳ್ಳಬೇಕು. ಸರ್ಕಾರದ ಮಟ್ಟದಲ್ಲಿ ನೌಕರರ ಬೇಡಿಕೆ ಈಡೇರಿಸಿಕೊಳ್ಳಲು ಸಂಘಟಿತ ಹೋರಾಟವೇ ಪರಿಣಾಮಕಾರಿ ಮಾರ್ಗ ಎಂದು ಅಭಿಪ್ರಾಯಪಟ್ಟರು.

ಸಂಘಟನೆಯ ರಾಜ್ಯ ಖಜಾಂಚಿ ಜಿ. ಕಮಲಾ, ರಾಜ್ಯ ಕಾರ್ಯಾಧ್ಯೆ ಶಾಂತ ಒಟೆ, ರಾಜ್ಯ ಉಪಾಧ್ಯಕ್ಷೆ ಗೌರಮ್ಮ ಪಾಟೀಲ್ ಹಾಗೂ ಶ್ರೀದೇವಿ ಚುಡೆ, ಹೆಚ್.ಪದ್ಮ (ರಾಯಚೂರು), ಅನಿತಾ ಹಿರೇಮಠ್ (ಯಾದಗಿರಿ) ಇತರರಿದ್ದರು.ಕಲಬುರಗಿ, ರಾಯಚೂರು, ಬೀದರ್ ಹಾಗೂ ಯಾದಗಿರಿ ಜಿಲ್ಲೆಗಳ 21 ತಾಲೂಕುಗಳಿಂದ ಆಗಮಿಸಿದ್ದ 210 ಮಂದಿ ಮಹಿಳಾ ನಾಯಕಿಯರು ಮತ್ತು ಪದಾಧಿಕಾರಿಗಳು ಕಾರ್ಯಗಾರದಲ್ಲಿ ಭಾಗವಹಿಸಿ ಸಂಘಟನೆ ಬಲವರ್ಧನೆ, ಸದಸ್ಯತ್ವ ವೃದ್ಧಿ ಹಾಗೂ ನೌಕರರ ಹಕ್ಕುಗಳ ಕುರಿತಂತೆ ಚರ್ಚಿಸಿದರು.

ಶಾಲಾ ಮಕ್ಕಳಲ್ಲಿನ ಅಪೌಷ್ಟಿಕತೆ ನಿರ್ಮೂಲನೆಗೆ ವಿನೂತನ ಕಾರ್ಯಕ್ರಮ

# ಕಂಪ್ಲಿ ತಾಲೂಕಿನ ಎಲ್ಲ ಶಾಲೆಗಳಲ್ಲಿ ಸಂಜೆ ಪೌಷ್ಠಿಕ ಕಾಳುಗಳ ಪಲ್ಯ ವಿತರಣೆ

**ಬಳ್ಳಾರಿ, ಜೂ.13:** ಗಣಿಬಾಧಿತ ಬಳ್ಳಾರಿ ಜಿಲ್ಲೆಯ ಕಂಪ್ಲಿ ತಾಲೂಕಿನ ಶಾಲಾ ಮಕ್ಕಳಲ್ಲಿ ಅಪೌಷ್ಠಿಕತೆಯನ್ನು ಕಡಿಮೆ ಮಾಡಲು ಪೌಷ್ಠಿಕ ತಿಂಡಿ ನೀಡುವ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಲ್ಯಾಣ ಕರ್ನಾಟಕದ ಗಣಿ ಬಾಧಿತ 4 ಜಿಲ್ಲೆಗಳ ಪೈಕಿ ಬಳ್ಳಾರಿಯೂ ಕೂಡ ಒಂದಾಗಿದ್ದು, ಕಂಪ್ಲಿ ತಾಲೂಕಿನ ಎಲ್ಲಾ ಶಾಲೆಗಳಲ್ಲಿ ಮಕ್ಕಳಿಗೆ ಮಧ್ಯಾಹ್ನದ ನಂತರದ ತಿಂಡಿ ನೀಡುವ ಯೋಜನೆ ಯನ್ನು ಹಮ್ಮಿಕೊಳ್ಳುವ ಮೂಲಕ ಮಕ್ಕಳ ಉತ್ತಮ ಬ' ಳ' ವ' ಣಿ' ಗ' ಗ' ಶ್ರಮಿಸಲಾಗುತ್ತಿದೆ.



ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮದ ಅನುದಾನದ ಅಡಿಯಲ್ಲಿ ಶಾಲಾ ಮಕ್ಕಳಿಗೆ ಪೌಷ್ಠಿಕ ತಿಂಡಿ ಯನ್ನು ನೀಡಲಾಗುತ್ತಿದೆ. ಈಗಾಗಲೇ ಮಕ್ಕಳಿಗೆ ಹಾಲು, ಮೊಟ್ಟೆ, ಬಾಳೆಹಣ್ಣು ಪೂರೈಸಲಾಗುತ್ತಿದೆ. ಈ ವಿನೂತನ ಕಾರ್ಯಕ್ರಮದಡಿ ಸಂಜೆ 4 ಗಂಟೆಗೆ ಕಡಲೆ, ಹೆಸರುಕಾಳು ಅಥವಾ ಶೇಂಗಾ ಇವುಗಳ ಪೈಕಿ ಯಾವುದಾದರೂ ಒಂದು ಪಲ್ಯವನ್ನು ವಿತರಿಸಲಾಗುತ್ತಿದೆ.

ಬಳ್ಳಾರಿ ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಶಾಲಾ ಮಕ್ಕಳ ಅಪೌಷ್ಠಿಕತೆಯನ್ನು ನೀಗಿಸಲು ತಿಂಡಿಯನ್ನು ನೀಡುತ್ತಿರುವುದು ಶ್ಲಾಘನೀಯವಾಗಿದೆ. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೈರ್ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಮಕ್ಕಳಲ್ಲಿ ಅಪೌಷ್ಠಿಕತೆ ಹೆಚ್ಚಾಗಿರುವುದರಿಂದ ಕೆಎಂಇಆರ್ ಸಿ ಅನುದಾನದಡಿ ಶಾಲಾ ಮಕ್ಕಳಿಗೆ ಮಧ್ಯಾಹ್ನದ ನಂತರ ತಿಂಡಿಯನ್ನು ವಿತರಿಸಲಾಗುತ್ತಿದೆ. ಪ್ರತಿ ಶನಿವಾರ ಹಣ್ಣುಗಳನ್ನು ನೀಡಲಾಗುತ್ತೆ. ಮುಂದಿನ ದಿನಗಳಲ್ಲಿ ಈ ಯೋಜನೆಯನ್ನು ಎಲ್ಲಾ ತಾಲೂಕು ಗಳಿಗೂ ವಿಸ್ತರಿಸಲಾಗುತ್ತದೆ ಎಂದು ವಿವರಿಸಿದರು.

ಬಿಸಿಯೂಟದ ಜಿಲ್ಲಾ ಸಮನ್ವಯ ಅಧಿಕಾರಿ ಕಸ್ತೂರಿ ಮಾತನಾಡಿ, ಕರ್ನಾಟಕದ ಗಣಿ ಸಂತ್ರಸ್ತ 4 ಜಿಲ್ಲೆಗಳ ಶಾಲಾ ಮಕ್ಕಳಿಗೆ ಪೌಷ್ಠಿಕ ತಿಂಡಿಯನ್ನು ವಿತರಿಸಲಾಗುತ್ತಿದೆ ಎಂದರು. ವಿದ್ಯಾರ್ಥಿನಿ ನಂದಿನಿ, ನಮ್ಮ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿದ್ದು, ಇದರ ಜೊತೆಗೆ ಪೌಷ್ಠಿಕಾಂಶದ ತಿಂಡಿಯನ್ನು ಸಹ ನೀಡುತ್ತಿದ್ದಾರೆ ಎಂದು ತಿಳಿಸಿದರು. ಮತ್ತೊಬ್ಬ ವಿದ್ಯಾರ್ಥಿ ವೈಷ್ಣವಿ, ಶಾಲೆಯಲ್ಲಿ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಸಿಗುತ್ತಿದೆ ಎಂದು ಹೇಳಿದರು.

ಉಪ ಪ್ರಾಂಶುಪಾಲರಾದ ಬಸವರಾಜ್ ಪಾಟೀಲ್ ಮಾತನಾಡಿ, ಶಾಲೆಯಲ್ಲಿ ಕಳೆದ ಸಾಲಿನಲ್ಲಿ ಶೇಕಡಾ 99 ರಷ್ಟು ಫಲಿತಾಂಶದೊಂದಿಗೆ ಉತ್ತಮ ಸಾಧನೆ ಮಾಡಿರುವುದಾಗಿ ತಿಳಿಸಿದರು.

# ಲಂಚ ಸ್ವೀಕರಿಸುತ್ತಿರುವಾಗಲೇ ಲೋಕಾ ಬಲೆಗೆ ಬಿದ್ದ ಆರ್‌ಐ



**ಮಂಡ್ಯ, ಜೂ.13:** ಜಮೀನಿನ ಪೋಡಿ ಹಾಗೂ ಖಾತೆ ಮಾಡಿಕೊಡಲು ಸಾರ್ವಜನಿಕರಿಂದ ಲಂಚ ಪಡೆಯುತ್ತಿದ್ದ ಕಂದಾಯ ಇಲಾಖೆಯ ಅಧಿಕಾರಿಯೊಬ್ಬರು ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿರುವ ಘಟನೆ ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣದ ತಾಲೂಕು ಕಚೇರಿಯಲ್ಲಿ ಶನಿವಾರ ನಡೆದಿದೆ.

ಲಂಚದ ಹಣದೊಂದಿಗೆ ಸಿಕ್ಕಿಬಿದ್ದ ಅಧಿಕಾರಿಯನ್ನು ತೀವ್ರ ವಿಚಾರಣೆಗೆ ಒಳಪಡಿಸಲಾಗಿದೆ. ಮಳವಳ್ಳಿ ತಾಲೂಕಿನ ಹಲಗೂರು ಹೋಬಳಿಯ ರೆವಿನ್ಯೂ ಇನ್ಸ್‌ಪೆಕ್ಟರ್ (ಕಂದಾಯ ನಿರೀಕ್ಷಕ) ಮಧುಸೂದನ್ ಲೋಕಾಯುಕ್ತ ದಾಳಿಗೆ ಸಿಲುಕಿದ ಅಧಿಕಾರಿಯಾಗಿದ್ದಾರೆ. ಜಮೀನು ಕೆಲಸಕ್ಕಾಗಿ ಸಾರ್ವಜನಿಕರನ್ನು ಅಲೆದಾಡಿಸಿ, ಹಣಕ್ಕಾಗಿ ಪೀಡಿಸುತ್ತಿದ್ದ ಇವರು, ಇಂದು ಮುಂಗಡ ಹಣ ಪಡೆಯುವಾಗ ರಂಗು ರಂಗಾಗಿ ಸಿಕ್ಕಿಬಿದ್ದಿದ್ದಾರೆ. ದಳವಾಯಿಕೊಡಹಳ್ಳಿ ಗ್ರಾಮದ ನಿವಾಸಿ ನಂಜುಂಡಸ್ವಾಮಿ ಎಂಬುವವರಿಗೆ ಸೇರಿದ ದಳವಾಯಿಕೋಡಹಳ್ಳಿ ಗ್ರಾಮದ ಸರ್ವೇ ನಂಬರ್ 72ರಲ್ಲಿ 5 ಎಕರೆ 28 ಗುಂಟೆ ಇನಾಮಿ ಜಮೀನಿದೆ. ಈ ಜಮೀನನ್ನು ಪೋಡಿ ಮಾಡಿ, ಖಾತೆ ಮಾಡಿಕೊಡಲು ರೆವಿನ್ಯೂ ಇನ್ಸ್‌ಪೆಕ್ಟರ್ ಮಧುಸೂದನ್ ಅವರು ಬರೋಬ್ಬರಿ ಎಕರೆಗೆ 2 ಲಕ್ಷ ರೂಪಾಯಿ ಲಂಚ ನೀಡುವಂತೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಇದಷ್ಟೇ ಅಲ್ಲದೆ, ನಂಜುಂಡಸ್ವಾಮಿ ಅವರ ತಾಯಿ ಕೆಂಪಮ್ಮ ಅವರ ಹೆಸರಿನಲ್ಲಿರುವ ಮತ್ತೊಂದು 12 ಗುಂಟೆ ಜಮೀನನ್ನು ಪೋಡಿ ಮಾಡಿ ಖಾತೆ ಬದಲಾವಣೆ ಮಾಡಿಕೊಡಲು ಕೂಡ ಮಧುಸೂದನ್ ಲಂಚದ ಹಣಕ್ಕಾಗಿ ಪಟ್ಟು ಹಿಡಿದಿದ್ದರು. ಇಷ್ಟೊಂದು ದೊಡ್ಡ ಮೊತ್ತದ ಲಂಚ ನೀಡಲು ನಿರಾಕರಿಸಿದ ನಂಜುಂಡ ಸ್ವಾಮಿ, ಭ್ರಷ್ಟ ಅಧಿಕಾರಿಗೆ ತಕ್ಕ ಶಾಸ್ತಿ ಮಾಡಲು ನಿರ್ಧರಿಸಿ ಲೋಕಾಯುಕ್ತ ಪೊಲೀಸರ ಮೊರೆ ಹೋಗಿದ್ದರು. ನಂಜುಂಡಸ್ವಾಮಿ ಅವರು ನೀಡಿದ ಖಚಿತ ದೂರಿನ ಅನ್ವಯ ಲೋಕಾಯುಕ್ತ ಪೊಲೀಸರು ತಾಲೂಕು ಕಚೇರಿಯ ಸುತ್ತಮುತ್ತ ನಿಗಾ ವಹಿಸಿದ್ದರು.

ಇಂದು ಮಳವಳ್ಳಿ ತಾಲೂಕು ಕಚೇರಿಯಲ್ಲಿ ನಂಜುಂಡಸ್ವಾಮಿ ಅವರಿಂದ ಮಧುಸೂದನ್ 10 ಸಾವಿರ ರೂಪಾಯಿ ಮುಂಗಡ ಹಣವನ್ನು ಪಡೆಯುತ್ತಿದ್ದ ಸಕಾಲದಲ್ಲೇ ಲೋಕಾಯುಕ್ತ ಅಧಿಕಾರಿಗಳು ಮಿಂಚಿನ ದಾಳಿ ನಡೆಸಿ, ಆರೋಪಿಯನ್ನು ಲಂಚದ ಹಣದ ಸಮೇತ ರೆಡ್‌ಹ್ಯಾಂಡ್ ಆಗಿ ವಶಕ್ಕೆ ಪಡೆದಿದ್ದಾರೆ.

ಲೋಕಾಯುಕ್ತ ಎಸ್‌ಪಿ ಸುರೇಶ್ ಬಾಬು ಹಾಗೂ ಡಿವೈಎಸ್‌ಪಿ ಸುನೀಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಇನ್ಸ್‌ಪೆಕ್ಟರ್ ರವಿಕುಮಾರ್ ನೇತೃತ್ವ ವಹಿಸಿದ್ದರು. ತಂಡದಲ್ಲಿ ಇನ್ಸ್‌ಪೆಕ್ಟರ್ ಬ್ಯಾಡರ ಗೌಡ, ಸಿಬ್ಬಂದಿಗಳಾದ ಸಿದ್ದಲಿಂಗಸ್ವಾಮಿ, ಶರತ್, ಮಹದೇವ, ಮಾನಸ ಹಾಗೂ ಶ್ರೀದೇವಿ ಪಾಲ್ಗೊಂಡಿದ್ದರು. ಆರೋಪಿತ ಅಧಿಕಾರಿಯ ವಿರುದ್ಧ ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗಿದೆ.

# ಸೊಂಟಕ್ಕೆ ಉರುಳು ಬಿದ್ದಿದ್ದು, ನೋವಿನಿಂದ ಪರದಾಡುತ್ತಿರುವ ಹುಲಿ

**ಚಿಕ್ಕಮಗಳೂರು, ಜೂ.13:** ಪ್ರವಾಸಿಗರ ತಾಣ ಮುಳ್ಳಯ್ಯನಗಿರಿ ಬಳಿ ಉರುಳಿಗೆ ಸಿಲುಕಿ ಗಾಯಗೊಂಡ ಹುಲಿಯೊಂದು ನರಳಾಡುತ್ತಾ ಕೆರಳಿ ಓಡಾಡುತ್ತಿದ್ದು ಆತಂಕ ಹುಟ್ಟು ಹಾಕಿದೆ.

ಕಳೆದ ನಾಲ್ಕೈದು ದಿನದಿಂದ ಸೊಂಟದಲ್ಲಿ ನೇತಾಡುತ್ತಿರುವ ಉರುಳಿನ ಜತೆಯೇ ಹುಲಿ ಸಂಚರಿಸುತ್ತಿ ರುವುದು ಕಂಡು ಬಂದಿದೆ.

ನೋವಿನಲ್ಲೂ ಬೇಟೆಯಾಡುತ್ತಾ ಹುಲಿ ಸಂಚಾರ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಜಿಂಕೆ ಹಾಗೂ ಕಡವೆಯನ್ನು ಹುಲಿ ಬೇಟೆಯಾಡಿದೆ ಎಂದು ಹೇಳಲಾಗಿದೆ.

ಮೂರ್ನಾಲ್ಕು ದಿನದಿಂದ ಹುಲಿ ಸೆರೆಗೆ ಅರಣ್ಯ ಅಧಿಕಾರಿಗಳ ತಂಡ ಹರಸಾಹಸಪಡುತ್ತಿದೆ. ತೋಟಗಳಲ್ಲಿ ಕಾರ್ಮಿಕರು ಕೆಲಸಕ್ಕೆ ಹೋಗದಂತೆ ಅರಣ್ಯಾಧಿಕಾರಿಗಳು ಸೂಚನೆ ನೀಡಿದ್ದಾರೆ. ಪಂಡರವಳ್ಳಿ, ಕೊಳಗಾಮೆ, ಏಳುನೂರ್ ಖಾನ್ ಗ್ರಾಮಸ್ಥರಲ್ಲಿ ಆತಂಕ ಮನೆ ಮಾಡಿದೆ. ಕ್ಯಾಮರಾಗಳನ್ನು ಹಾಕಿ ಅರಣ್ಯ ಇಲಾಖೆ ಸಿಬಂದಿಗಳು ಕಾರ್ಯಾಚರಣೆ ಮುಂದುವರಿಸಿದ್ದಾರೆ.

# ಸತತ ಪರಿಶ್ರಮದಿಂದ ಜೀವನದಲ್ಲಿ ಯಶಸ್ಸು ಗಳಿಸಬಹುದು: ಉಮಾಕಾಂತ ನಾಗಮಾರಪಳ್ಳಿ

**ಬೀದರ, ಜೂ. 13:** ಛಲ, ಆತ್ಮವಿಶ್ವಾಸ ಹಾಗೂ ಸತತ ಪರಿಶ್ರಮದಿಂದ ಜೀವನದಲ್ಲಿ ಯಶಸ್ಸು ಗಳಿಸಬಹುದು. ಗುರಿ ಮತ್ತು ಪರಿಶ್ರಮವಿಲ್ಲದೇ ಯಶಸ್ಸು ಸಾಧ್ಯವಿಲ್ಲ. ಎಂದು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿರ್ದೇಶಕ ಉಮಾಕಾಂತ ನಾಗಮಾರಪಳ್ಳಿ ಹೇಳಿದರು.



ಬೀದರ್ ತಾಲ್ಲೂಕಿನ ಅಲಿಯಂಬರ್ ಗ್ರಾಮದಲ್ಲಿ ಕೇತಕಿ ಸಂಗಮೇಶ್ವರ ಹೈನುಗಾರಿಕೆ ಘಟಕವನ್ನು ಉದ್ಘಾಟಿಸಿ ಮಾತನಾಡಿದ ಅವರು, ಒಂದೆರಡು ಹಸುಗಳಿಂದ ಹೈನುಗಾರಿಕೆ ಆರಂಭಿಸಿದ ಕುಟುಂಬ ಈಗ ದೊಡ್ಡ ಮಟ್ಟದ ಹೈನುಗಾರಿಕೆ ಘಟಕ ಶುರು ಮಾಡಿರುವುದು ಶ್ಲಾಘನೀಯ. ಕುಟುಂಬದ ಸಾಧನೆ ರೈತರು ಹಾಗೂ ಯುವಕರಿಗೆ ಪ್ರೇರಣೆಯಾಗಿದೆ ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಹಲಬರ್ಗಾದ ರಾಚೋಟೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯ ಮಾತನಾಡಿ, ಮಹಾದೇವ ಬಿರಾದಾರ ಅವರು ಗ್ರಾಮೀಣ ಹೈನುಗಾರಿಕೆ ಕ್ಷೇತ್ರಕ್ಕೆ ಹೊಸ ದಿಕ್ಕು ತೋರಿದ್ದಾರೆ ಎಂದು ಹೇಳಿದರು.

ಜೈ ಭಾರತ ಸೇವಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜ, ಲಾಡಗೇರಿ ಹಿರೇಮಠದ ಗಂಗಾಧರ ಶಿವಾಚಾರ್ಯರು, ಚಾಂಬೋಳದ ರುದ್ರಮುನಿ ಶಿವಾಚಾರ್ಯರು, ಮಳಚಾಪುರದ ಸದ್ರೂಪಾನಂದ ಭಾರತಿ ಸ್ವಾಮೀಜಿ, ಕಪಲಾಪುರದ ಪೂರ್ಣಾನಂದ ಸ್ವಾಮೀಜಿ, ಅಲಿಯಂಬರ್ ವೀರಭದ್ರಪ್ಪ ಅಪ್ಪ ಸಂಸ್ಥಾನದ ಬಾಬುರಾವ್ ಗುರೂಜಿ ಮಾತನಾಡಿದರು.

ಘಟಕದ ಮುಖ್ಯಸ್ಥ ಮಹಾದೇವ ಬಿರಾದಾರ ಅಧ್ಯಕ್ಷತೆ ವಹಿಸಿದ್ದರು. ಬೀದರ್ ಮಹಾನಗರ ಪಾಲಿಕೆ ಸದಸ್ಯ ವೀರಶೆಟ್ಟಿ ಪಾಟೀಲ, ಮುಖಂಡರಾದ ಪ್ರಸನ್ನ ಖಂಡ್ರೆ, ತರುಣ ನಾಗಮಾರಪಳ್ಳಿ, ಮಹೇಶ ಮೈಲಾರಿ, ಎನ್.ಎಸ್.ಎಸ್.ಕೆ ನಿರ್ದೇಶಕ ಸಂಗಮೇಶ ಪಾಟೀಲ, ದೀಪಕ್ ಗಾದಗೆ, ಕಾಮಶೆಟ್ಟಿ ಘೋಡಂಪಳ್ಳಿ, ಬಸವರಾಜ ಬಿರಾದಾರ, ಬಸವರಾಜ ಲಸ್ಕರಿ, ಬಸವರಾಜ ಮಾಲಿಪಾಟೀಲ ಇದ್ದರು. ಚಂದ್ರಕಾಂತ ಹಳ್ಳಿಖೇಡಕರ್ ನಿರೂಪಿಸಿದರು. ಸಿದ್ದೋಬಾ ಲೌಟೆ ವಂದಿಸಿದರು.

# ಬಳ್ಳಾರಿಯಿಂದ ಫುಟ್ಬಾಲ್ ಕ್ರೀಡಾ ವಸತಿ ನಿಲಯ ಬೆಂಗಳೂರಿಗೆ ಸ್ಥಳಾಂತರ: ಗ್ರಾಮೀಣ ಪ್ರತಿಭೆಗಳ ಕನಸಿಗೆ ಅಡ್ಡಿ..?

**ಬಳ್ಳಾರಿ, ಜೂ.13:** ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಗ್ರಾಮೀಣ ಫುಟ್ಬಾಲ್ ಪ್ರತಿಭೆಗಳಿಗೆ ಆಶಾಕಿರಣ ವಾಗಿದ್ದ ಬಳ್ಳಾರಿಯ ಹಿರಿಯರ ಫುಟ್ಬಾಲ್ ಕ್ರೀಡಾ ವಸತಿ ನಿಲಯವನ್ನು ಬೆಂಗಳೂರಿಗೆ ಸ್ಥಳಾಂತರಿಸಿರುವ ಕ್ರಮವು ಕ್ರೀಡಾಪಟುಗಳು, ಪೋಷಕರು ಹಾಗೂ ಕ್ರೀಡಾಭಿಮಾನಿಗಳಲ್ಲಿ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ.




2018ರಲ್ಲಿ ಬಳ್ಳಾರಿಯ ರೇಡಿಯೋ ಪಾರ್ಕ್ ಪ್ರದೇಶದಲ್ಲಿ ಆರಂಭಗೊಂಡಿದ್ದ ಈ ಕ್ರೀಡಾ ವಸತಿ ನಿಲಯವು ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳ ಪ್ರತಿಭಾವಂತ ಫುಟ್ಬಾಲ್ ಆಟಗಾರರನ್ನು ಗುರುತಿಸಿ, ಅವರಿಗೆ ಉಚಿತ ಹಾಗೂ ಗುಣಮಟ್ಟದ ತರಬೇತಿ ನೀಡುವ ಉದ್ದೇಶದಿಂದ ಸ್ಥಾಪನೆಯಾಗಿತ್ತು. ಕಳೆದ ಎಂಟು ವರ್ಷಗಳಲ್ಲಿ ಈ ಕೇಂದ್ರ ಅನೇಕ ಕ್ರೀಡಾಪಟುಗಳನ್ನು ರಾಜ್ಯ ಮತ್ತು ರಾಷ್ಟ್ರಮಟ್ಟಕ್ಕೆ ಪರಿಚಯಿಸಿ ಗಮನಾರ್ಹ ಸಾಧನೆ ಮಾಡಿದೆ.

ರಾಜ್ಯಮಟ್ಟದ ವಿವಿಧ ಪಂದ್ಯಾವಳಿಗಳಲ್ಲಿ ಹಲವು ಚಿನ್ನ ಮತ್ತು ಬೆಳ್ಳಿ ಪದಕಗಳನ್ನು ಗೆದ್ದಿರುವ ಈ ತಂಡ, ಕರ್ನಾಟಕ ರಾಜ್ಯ ಫುಟ್ಬಾಲ್ ಸಂಸ್ಥೆ ಆಯೋಜಿಸಿದ ಸ್ಪರ್ಧೆಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ?ಬಿ? ವಿಭಾಗದಿಂದ ಪ್ರತಿಷ್ಠಿತ ?ಎ? ವಿಭಾಗಕ್ಕೆ ಪದೋನ್ನತಿ ಹೊಂದಿದೆ. ಅಲ್ಲದೆ, ಖೇಲೋ ಇಂಡಿಯಾ ಯೂತ್ ಗೇಮ್ಸ್, ಸ್ವಾಮಿ ವಿವೇಕಾನಂದ ರಾಷ್ಟ್ರೀಯ ಫುಟ್ಬಾಲ್ ಚಾಂಪಿಯನ್‌ಶಿಪ್, ಆಲ್ ಇಂಡಿಯಾ ಯುನಿವರ್ಸಿಟಿ ಗೇಮ್ಸ್ ಸೇರಿದಂತೆ ಅನೇಕ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಇಲ್ಲಿನ ಕ್ರೀಡಾಪಟುಗಳು ಕರ್ನಾಟಕವನ್ನು ಪ್ರತಿನಿಧಿಸಿ ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ.

ಇಷ್ಟೊಂದು ಸಾಧನೆ ಮಾಡಿರುವ ವಸತಿ ನಿಲಯವನ್ನು ಏಕಾಏಕಿ ಬೆಂಗಳೂರಿಗೆ ಸ್ಥಳಾಂತರಿಸಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಗಿದೆ. ಬಳ್ಳಾರಿಯಲ್ಲಿದ್ದ ವಿದ್ಯಾರ್ಥಿಗಳಿಗೆ ಬೆಂಗಳೂರಿನ ವಿದ್ಯಾನಗರ ಕ್ರೀಡಾ ವಸತಿ ಶಾಲೆಗೆ ಸೇರ್ಪಡೆಯಾಗುವಂತೆ ಸೂಚನೆ ನೀಡಲಾಗಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ.ಕಲ್ಯಾಣ ಕರ್ನಾಟಕ ಭಾಗದ ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು, ಯಾದಗಿರಿ, ಕಲಬುರಗಿ ಹಾಗೂ ಬೀದರ್ ಜಿಲ್ಲೆಗಳ ಅನೇಕ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಮಕ್ಕಳು ಈ ಕೇಂದ್ರದ ಮೂಲಕ ತಮ್ಮ ಕ್ರೀಡಾ ಕನಸುಗಳನ್ನು ಸಾಕಾರಗೊಳಿಸುತ್ತಿದ್ದರು. ಆದರೆ, ಬೆಂಗಳೂರಿನಂತಹ ಮಹಾನಗರದಲ್ಲಿ ವಾಸ್ತವ್ಯ, ಸಂಚಾರ ಹಾಗೂ ಇತರೆ ವೆಚ್ಚಗಳನ್ನು ಭರಿಸುವುದು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಕಷ್ಟಕರವಾಗಲಿದೆ. ಇದರಿಂದ ಅನೇಕ ಪ್ರತಿಭೆಗಳು ಆರಂಭದಲ್ಲೇ ಕ್ರೀಡಾ ಕ್ಷೇತ್ರದಿಂದ ದೂರವಾಗುವ ಆತಂಕ ವ್ಯಕ್ತವಾಗಿದೆ.


ಕ್ರೀಡಾ ಸೌಲಭ್ಯಗಳನ್ನು ಜಿಲ್ಲಾಮಟ್ಟದಲ್ಲಿ ವಿಸ್ತರಿಸುವ ಬದಲು ರಾಜಧಾನಿಗೆ ಕೇಂದ್ರೀಕರಿಸುವ ನೀತಿ ಪ್ರಾದೇಶಿಕ ಅಸಮಾನತೆಯನ್ನು ಹೆಚ್ಚಿಸಲಿದೆ ಎಂದು ಕ್ರೀಡಾಭಿಮಾನಿಗಳು ಅಭಿಪ್ರಾಯಪಟ್ಟಿದ್ದಾರೆ. ಜಿಲ್ಲೆಗೆ ಇಂತಹ ಅನ್ಯಾಯವಾಗುತ್ತಿದ್ದರೂ ಜನಪ್ರತಿನಿಧಿಗಳು ಮೌನ ವಹಿಸಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಸ್ಥಳೀಯ ಯುವ ಕ್ರೀಡಾಪಟುಗಳಾದ ಸೂರಜ್ ಕುಮಾರ್ ಹಾಗೂ ರಾಜೇಶ್ ಮಾತನಾಡಿ, ಬಳ್ಳಾರಿಯ ಕ್ರೀಡಾ ವಸತಿ ನಿಲಯವು ಸಾವಿರಾರು ಗ್ರಾಮೀಣ ಮಕ್ಕಳಿಗೆ ಅವಕಾಶ ಕಲ್ಪಿಸಿತ್ತು. ಈಗ ಅದನ್ನು ಬೆಂಗಳೂರಿಗೆ ಸ್ಥಳಾಂತರಿಸಿರುವುದರಿಂದ ಬಡ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆ ಉಂಟಾಗಲಿದೆ. ಜನಪ್ರತಿನಿಧಿಗಳು ಈ ಬಗ್ಗೆ ತಕ್ಷಣ ಗಮನ ಹರಿಸಬೇಕು ಎಂದು ಆಗ್ರಹಿಸಿದರು.

ಕಲ್ಯಾಣ ಕರ್ನಾಟಕ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘದ ಅಧ್ಯಕ್ಷ ಆರ್. ಸಂತೋಷ್ ರೆಡ್ಡಿ ಮಾತನಾಡಿ, 'ಫುಟ್ಬಾಲ್ ಕ್ರೀಡಾ ವಸತಿ ನಿಲಯವನ್ನು ಬೆಂಗಳೂರಿಗೆ ಸ್ಥಳಾಂತರಿಸಿರುವುದರಿಂದ ಈ ಭಾಗದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ. ಕ್ರೀಡಾಪಟುಗಳ ಹಿತದೃಷ್ಟಿಯಿಂದ ಕೇಂದ್ರವನ್ನು ಬಳ್ಳಾರಿಯಲ್ಲಿಯೇ ಮುಂದುವರಿಸಬೇಕು. ಈ ಕುರಿತು ಜಿಲ್ಲಾಡಳಿತ ಹಾಗೂ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು' ಎಂದು ತಿಳಿಸಿದ್ದಾರೆ.

# ಮೂರು ವರ್ಷಗಳಲ್ಲಿ 2,800 ಹೆಕ್ಟೇರ್‌ನಷ್ಟು ಕಾಡು ವೃದ್ಧಿ

**ರಾಯಚೂರು, ಜೂ. 13:** ಅರಣ್ಯ ವಿಭಾಗದ ಪ್ರಕಾರ ರಾಯಚೂರು ಜಿಲ್ಲೆಯ ಒಟ್ಟು ಭೌಗೋಳಿಕ ಪ್ರದೇಶದ (8,386 ಚ.ಕಿ.ಮೀ) ಕೇವಲ ಶೇ 3.9ರಷ್ಟು(ಅಂದಾಜು 32,747 ಹೆಕ್ಟೇರ್) ಮಾತ್ರ ದಾಖಲಿತ ಅರಣ್ಯ ಭೂಮಿಯನ್ನು ಹೊಂದಿದೆ. ಇಲಾಖೆಯ ಸಿಬ್ಬಂದಿ ಸತತ ಪರಿಶ್ರಮ ಹಾಗೂ ಕಾರ್ಯವಿಧಾನದಲ್ಲಿನ ಬದಲಾವಣೆಯಿಂದಾಗಿ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ ಹೆಚ್ಚುವರಿಯಾಗಿ 2,800 ಹೆಕ್ಟೇರ್ ಪ್ರದೇಶದಲ್ಲಿ ಕಾಡು ಬೆಳೆದಿದೆ.

ಕರ್ನಾಟಕದಲ್ಲಿಯೇ ಅತ್ಯಂತ ಕಡಿಮೆ ಅರಣ್ಯ ಪ್ರದೇಶವನ್ನು ಹೊಂದಿರುವ ಜಿಲ್ಲೆಗಳಲ್ಲಿ ರಾಯಚೂರು ಕೂಡ ಒಂದಾಗಿದೆ. ಜಿಲ್ಲೆಯಲ್ಲಿ ಬಹುತೇಕವಾಗಿ ಕುರುಚಲು ಕಾಡು ಹಾಗೂ ವಿರಳವಾದ ಒಣ ಮಿಶ್ರಿತ ಕಾಡು ಇದೆ. ಕಲ್ಲು ಬಂಡೆಗಳೇ ಅಧಿಕ ಇರುವ ಕಾರಣ ಅರಣ್ಯ ಅಭಿವೃದ್ಧಿಗೆ ಅಷ್ಟಾಗಿ ಪೂರಕವಾದ ವಾತಾವರಣ ಇಲ್ಲ. ಆದರೆ, ಇಲಾಖೆಯ ಸಿಬ್ಬಂದಿ ಹೊಸ ವಿಧಾನಗಳನ್ನು ಅನುಸರಿಸಿ ಕಾಡು ಪ್ರದೇಶವನ್ನು ಹೆಚ್ಚಿಸುವಲ್ಲಿ ಯಶ ಸಾಧಿಸಿದ್ದಾರೆ.



## ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯಲ್ಲೀಗ ಡಿಜಿಟಲ್ ಕ್ರಾಂತಿ,

# ಚಿಲ್ಲರೆ ಕಿರಿಕಿರಿಗೆ ಮುಕ್ತಿ, ಶೇ.100 ಬಸ್‌ಗಳಲ್ಲಿ ಯುಪಿಐ ಸ್ಮಾರ್ಟ್ ಸೇವೆ ಜಾರಿ...!

**ಕಲಬುರಗಿ, ಜೂ. 13:** ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸಹಯೋಗದಲ್ಲಿ ನಗದು ರಹಿತ ಪ್ರಯಾಣಕ್ಕೆ ಸಂಪೂರ್ಣ ಚಾಲನೆ ದೊರೆತಿದೆ. ಆರಂಭಿಕ ತಾಂತ್ರಿಕ ದೋಷಗಳನ್ನು ಬಗೆಹರಿಸಿದ ನಿಗಮ ಕೆಕೆಆರ್‌ಟಿಸಿ ಬಸ್‌ಗಳಲ್ಲೀಗ ಡಿಜಿಟಲ್ ಕ್ರಾಂತಿಗೆ ನಾಂದಿ ಹಾಡಿದೆ. ಖಾಲಿ ಜೇಬಿನಲ್ಲಿ ಬಸ್ ಹತ್ತಿದರೂ ಇನ್ಮುಂದೆ ಕಲ್ಯಾಣ ಕರ್ನಾಟಕದ ಉದ್ದಗಲಕ್ಕೂ ನಿಶ್ಚಿಂತೆಯಿಂದ ಪ್ರಯಾಣಿಸಬಹುದು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು (ಕೆಕೆಆರ್‌ಟಿಸಿ) ತನ್ನ ಇತಿಹಾಸದಲ್ಲೇ ಅತ್ಯಂತ ಪ್ರಮುಖ ತಾಂತ್ರಿಕ ಮೈಲಿಗಲ್ಲನ್ನು ಸ್ಥಾಪಿಸಿದೆ. ಆರಂಭಿಕ ಹಂತದಲ್ಲಿದ್ದ ಕೆಲವು ತಾಂತ್ರಿಕ ಅಡಚಣೆಗಳನ್ನು ಯಶಸ್ವಿಯಾಗಿ ಬಗೆಹರಿಸಿಕೊಂಡಿರುವ ನಿಗಮ, ಈಗ ತನ್ನ ವ್ಯಾಪ್ತಿಯ ಜಿಲ್ಲೆಗಳಲ್ಲಿ ಶೇ.100ರಷ್ಟು ಬಸ್‌ಗಳಲ್ಲಿ ನಗದುರಹಿತ ಯುಪಿಐ ಆಪ್ ಆಧಾರಿತ ಟಿಕೆಟ್ ವಿತರಣಾ ವ್ಯವಸ್ಥೆಯನ್ನು ಪೂರ್ಣ ಪ್ರಮಾಣದಲ್ಲಿ ಅಧಿಕೃತವಾಗಿ ಜಾರಿಗೆ ತಂದಿದೆ.

ನಿಗಮದ ಪ್ರಮುಖ ಕೇಂದ್ರ ಸ್ಥಾನವಾದ ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಬಳ್ಳಾರಿ, ಕೊಪ್ಪಳ ಹಾಗೂ ವಿಜಯನಗರ ಹಾಗೂ ವಿಜಯಪುರ ಸೇರಿದಂತೆ ಇಡೀ ಕಲ್ಯಾಣ ಕರ್ನಾಟಕದ ಎಲ್ಲ ಜಿಲ್ಲೆಗಳ ಗ್ರಾಮೀಣ ಮತ್ತು ನಗರ ಪ್ರದೇಶದ ಸಾರಿಗೆ ಜಾಲದಲ್ಲಿ ಈ ಸ್ಮಾರ್ಟ್ ಸೇವೆ ಈಗ ಸಂಪೂರ್ಣವಾಗಿ ಲಭ್ಯವಿದೆ.

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾದ ಈ ಬೃಹತ್ ಡಿಜಿಟಲ್ ಜಾಲದಲ್ಲಿ ಆರಂಭದಲ್ಲಿ ಕೆಲವು ನೆಟ್‌ವರ್ಕ್ ಹಾಗೂ ಸರ್ವರ್ ಸಮಸ್ಯೆಗಳು ಎದುರಾಗಿದ್ದವು. ಆದರೆ, ಸಾರಿಗೆ ಸಂಸ್ಥೆಯು ಆ ಎಲ್ಲ ದೋಷಗಳನ್ನು ಶೀಘ್ರವಾಗಿ ಬಗೆಹರಿಸಿ, ಇದೀಗ ನಿಗಮದ ಎಲ್ಲ ಬಸ್‌ಗಳಿಗೂ ಈ ಸೇವೆಯನ್ನು ಯಶಸ್ವಿಯಾಗಿ ವಿಸ್ತರಿಸಿಕೊಂಡಿದೆ. ಇದರಿಂದಾಗಿಗೂ ಗಗುಗಲ್ ಪೇ, ಫೋನ್ ಪೇ ಮೂಲಕ ಕೇವಲ ಒಂದು ಸ್ಕ್ಯಾನ್‌ನೊಂದಿಗೆ ಪ್ರಯಾಣಿಕರು ನೆಮ್ಮದಿಯ ನಿಟ್ಟುಸಿರು ಬಿಡುತ್ತಿದ್ದಾರೆ.

90 ಸೆಕೆಂಡ್‌ಗಳಲ್ಲೇ ಟಿಕೆಟ್ ಪಕ್ಕಾ: ಬಸ್ ಹತ್ತಿದ ಪ್ರಯಾಣಿಕರು ತಲುಪಬೇಕಾದ ಊರನ್ನು ತಿಳಿಸಿದ ತಕ್ಷಣ, ನಿರ್ವಾಹಕರು ಹೊಸ ಆಂಡ್ರಾಯ್ಡ್ ಇಟಿಎಂ ಮಷಿನ್‌ನಲ್ಲಿ ವಿವರ ದಾಖಲಿಸುತ್ತಾರೆ. ಆಗ ಪರದೆಯ ಮೇಲೆ ಕ್ಯೂಆರ್ ಕೋಡ್ ಮೂಡಲಿದ್ದು, ಮೊಬೈಲ್ ಮೂಲಕ ಸ್ಕ್ಯಾನ್ ಮಾಡಿ ಹಣ ಪಾವತಿಸಬಹುದು.

ನಗದು ವರ್ಗಾವಣೆ ಯಶಸ್ವಿಯಾದ ಕೇವಲ 90 ಸೆಕೆಂಡುಗಳ ಒಳಗೆ ಮುದ್ರಿತ ಟಿಕೆಟ್ ಪ್ರಯಾಣಿಕರ ಕೈ ಸೇರಲಿದೆ. ಪ್ರತಿದಿನ ಸಂಗ್ರಹವಾಗುವ ಸುಮಾರು 1 ಕೋಟಿ ರೂ ಆದಾಯದಲ್ಲಿ ಶೇ.50 ರಷ್ಟು 'ಶಕ್ತಿ ಯೋಜನೆ'ಯ ಉಚಿತ ಪ್ರಯಾಣದ ಮರುಪಾವತಿಯಾಗಿದ್ದರೆ, ಉಳಿದ ನಗದು ರಹಿತ ಆದಾಯವು ನೇರವಾಗಿ ಆಯಾ ಡಿಪೋ ವ್ಯವಸ್ಥಾಪಕರ ಬ್ಯಾಂಕ್ ಖಾತೆಗೆ ಜಮೆಯಾಗುತ್ತಿದೆ. ಇದು ಆಡಳಿತಾತ್ಮಕ ಪಾರದರ್ಶಕತೆ ಹೆಚ್ಚಿಸಿದ್ದು, ಸಿಬ್ಬಂದಿಗಳಿಗೆ ನಗದು ಕೌಂಟರ್‌ಗಳಲ್ಲಿ ಹಣ ಜಮಾ ಮಾಡುವ ಸಮಯ ಉಳಿಸಿದಂತಾಗಿದೆ.

ಟಿಕೆಟ್ ಹಿಂದೆ ಬರುವುದಕ್ಕೆ ಬೀಗ!: ಈ ಹಿಂದೆ ಪ್ರಯಾಣಿಕರು 100 ರೂ, 500 ರೂ ಮುಖಬೆಲೆಯ ನೋಟು ನೀಡಿದರೆ, ಚಿಲ್ಲರೆ ಇಲ್ಲದ ಕಾರಣಕ್ಕೆ ನಿರ್ವಾಹಕರು ಟಿಕೆಟ್ ಹಿಂಭಾಗದಲ್ಲಿ ಬಾಕಿ ಹಣವನ್ನು ಪೆನ್ನಿನಲ್ಲಿ ಬರೆದು ಕೊಡುತ್ತಿದ್ದರು. ಇದರಿಂದ ನಿತ್ಯ ಪ್ರಯಾಣಿಕರು ಮತ್ತು ಕಂಡಕ್ಟರ್‌ಗಳ ನಡುವೆ ಮಾತಿನ ಚಕಮಕಿ, ಜಗಳಗಳು ನಡೆಯುತ್ತಿದ್ದವು. ಅನೇಕ ಬಾರಿ ಪ್ರಯಣಿಕರು ಹಣ ಪಡೆಯಲು ಮರೆತು ಇಳಿದು ಹೋಗುತ್ತಿದ್ದರು. ಹೀಗಾಗಿ ಪ್ರಯಾಣಿಕ ಹಣ ಕಳೆದುಕೊಳ್ಳುತ್ತಿದ್ದ. ಆದರೆ ಈಗ ಟಿಕೆಟ್ ದರ ಎಷ್ಟಿದೆಯೋ ಅಷ್ಟನ್ನೇ ನಿಖರವಾಗಿ ಆನ್‌ಲೈನ್ ಮೂಲಕ ಪಾವತಿಯಾಗುವುದರಿಂದ ಚಿಲ್ಲರೆ ಕಿರಿಕಿರಿಗೆ ಶಾಶ್ವತ ಮುಕ್ತಿ ಸಿಕ್ಕಿದೆ.

**ತಾಂತ್ರಿಕ ದೋಷಗಳಿಗೆ ಒಟಿಪಿಎಲ್ ಕಂಪನಿಯೇ ಹೊಣೆ :** ನಿಗಮವು ಪ್ರತಿ ಡಿಜಿಟಲ್ ಮಷಿನ್‌ಗೆ ತಿಂಗಳಿಗೆ 450 ರೂ. ಬಾಡಿಗೆ ನೀಡುವ ಒಪ್ಪಂದದೊಂದಿಗೆ ಒಟಿಪಿಎಲ್ ಕಂಪನಿಯಿಂದ ಇಟಿಎಂಗಳನ್ನು ಪಡೆದಿದೆ.

ಆರಂಭದಲ್ಲಿ ಎದುರಾದ ನೆಟ್‌ವರ್ಕ್ ಸಮಸ್ಯೆ ಹಾಗೂ ಸಾಫ್ಟ್‌ವೇರ್ ಅಡಚಣೆಗಳನ್ನು ಕಂಪನಿಯು ತಕ್ಷಣವೇ ನಿವಾರಿಸಿದೆ.

ಗ್ರಾಮೀಣ ಭಾಗದಲ್ಲಿ ಮಷಿನ್ ಕೆಟ್ಟುಹೋದರೆ, ಅದನ್ನು ಉಚಿತವಾಗಿ ದುರಸ್ತಿ ಮಾಡುವ ಅಥವಾ ತಕ್ಷಣ ಹೊಸ ಮಷಿನ್ ಒದಗಿಸುವ ಸಂಪೂರ್ಣ ಜವಾಬ್ದಾರಿ ಕೂಡ ಕಂಪನಿಯೇ ವಹಿಸಿಕೊಂಡಿರುವುದರಿಂದ ಸಾರಿಗೆ ಸಂಸ್ಥೆಗೆ ಯಾವುದೇ ನಷ್ಟದ ಸಾಧ್ಯತೆಗಳಿಲ್ಲ.

> **ಆರಂಭದಲ್ಲಿ ಸಂಸ್ಥೆಯ 5000 ಬಸ್‌ಗಳಲ್ಲಿ ಪ್ರಾಯೋಗಿಕವಾಗಿ ಯುಪಿಐ ವ್ಯವಸ್ಥೆ ಜಾರಿಗೆ ತರಲಾಗಿತ್ತು. ಆಗ ಕಂಡುಬಂದ ಕೆಲವು ತಾಂತ್ರಿಕ ದೋಷಗಳನ್ನು ಈಗ ಸಂಪೂರ್ಣ ಸರಿಪಡಿಸಲಾಗಿದ್ದು, ನಿಗಮದ ಶೇ.100ರಷ್ಟು ಬಸ್‌ಗಳಲ್ಲೀಗ ಯುಪಿಐ ಪಾವತಿ ವ್ಯವಸ್ಥೆಯನ್ನು ಪೂರ್ಣ ಪ್ರಮಾಣದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಕೇವಲ 9 ರಿಂದ 12 ಸೆಕೆಂಡುಗಳಲ್ಲಿ ಹಣ ಪಾವತಿಯಾಗಿ ಟಿಕೆಟ್ ಜನರೇಟ್ ಆಗಲಿದ್ದು, ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಜನರಿಗೆ ಇದು ಅತ್ಯಂತ ಸಹಕಾರಿಯಾಗಲಿದೆ. ಈ ನೂತನ ತಂತ್ರಜ್ಞಾನ ಬಳಕೆಯ ಬಗ್ಗೆ ನಮ್ಮ ಸಾರಿಗೆ ನಿರ್ವಾಹಕರಿಗೂ ಈಗಾಗಲೇ ಸೂಕ್ತ ತರಬೇತಿ ನೀಡಲಾಗಿದೆ.**
>
> **–ಅರುಣಕುಮಾರ್ ಪಾಟೀಲ್, ಅಧ್ಯಕ್ಷರು ಕೆಕೆಆರ್‌ಟಿಸಿ ಕಲಬುರಗಿ.**

## ವಿಜಯಪುರ 10 ವರ್ಷಗಳ ಅಭಿವೃದ್ಧಿ ಪರ್ವ

# ಕ್ಷೇತ್ರದಲ್ಲಿ 3516.67 ಕೋಟಿ ಕೆಲಸ ಪೂರ್ಣ: ರಮೇಶ ಜಿಗಜಿಣಗಿ

**ವಿಜಯಪುರ, ಜೂ. 13:** ಕಳೆದ ಹತ್ತು ವರ್ಷಗಳಲ್ಲಿ ವಿಜಯಪುರ ಲೋಕ ಸಭಾ ಕ್ಷೇತ್ರದಲ್ಲಿ 3516.67 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ರಸ್ತೆ, ರೈಲ್ವೆ ಮೇಲ್ಸೇತುವೆ ಸೇರಿದಂತೆ ಮೂಲಸೌಕರ್ಯ ಕ್ಷೇತ್ರದಲ್ಲಿ ಮಹತ್ವದ ಪ್ರಗತಿ ಸಾಧಿಸಲಾಗಿದೆ ಎಂದು ಸಂಸದ ರಮೇಶ ಜಿಗಜಿಣಗಿ ತಿಳಿಸಿದ್ದಾರೆ.

ಸುದ್ದಿಗರರೊಂದಿಗೆ ಮಾತನಡಿದ ಅವರು, ಸಂಸದರ ಸಾಧನೆ ಏನು ಎಂದು ಪ್ರಶ್ನಿಸುವವರಿಗೆ ಅಭಿವೃದ್ಧಿ ಕಾರ್ಯಗಳೇ ಉತ್ತರವಾಗಿವೆ ಎಂದ ಅವರು, ಕ್ಷೇತ್ರದಲ್ಲಿ ಕೈಗೊಂಡಿರುವ ಪ್ರಮುಖ ಯೋಜನೆಗಳ ವಿವರವನ್ನು ನೀಡಿದರು. ವಿಜಯಪುರ ರಾಷ್ಟ್ರೀಯ ಹೆದ್ದಾರಿ ವಿಭಾಗದ ವ್ಯಾಪ್ತಿಯಲ್ಲಿ ನಾಲ್ಕು ಪ್ರಮುಖ ಹೆದ್ದಾರಿಗಳನ್ನು ಮೇಲ್ದರ್ಜೆಗೇ ರಿಸುವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಒಟ್ಟು 208.04 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿಗೆ 1668.88 ಕೋಟಿ ಅನುದಾನ ಮೀಸಲಿಡಲಾಗಿದ್ದು, ಇದರಲ್ಲಿ ಎರಡು ರೈಲ್ವೆ ಮೇಲ್ಸೇತುವೆ ಕಾಮಗಾರಿಗಳೂ ಸೇರಿವೆ ಎಂದರು.

ಕೇಂದ್ರ ರಸ್ತೆ ನಿಧಿ ಯೋಜನೆಯಡಿ 2016–17ನೇ ಸಾಲಿನಲ್ಲಿ 14 ಕಾಮಗಾರಿಗಳಿಗೆ ಅನುಮೋದನೆ ದೊರೆತಿದ್ದು, ಸುಮಾರು 60 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿ ಹಾಗೂ ಎರಡು ಸೇತುವೆ ನಿರ್ಮಾಣ ಸೇರಿದಂತೆ 72 ಕೋಟಿ ವೆಚ್ಚದ ಕಾಮಗಾರಿಗಳು ಪೂರ್ಣಗೊಂಡಿವೆ. ಅದೇ ರೀತಿ 2023–24ನೇ ಸಾಲಿನಲ್ಲಿ ಕೇಂದ್ರ ರಸ್ತೆ ಯೋಜನೆಯಡಿ 10 ಕಾಮಗಾರಿಗಳಿಗೆ ಮಂಜೂರಾತಿ ದೊರೆತಿದ್ದು, 81 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿ ಕಾಮಗಾರಿಗಳು 48 ಕೋಟಿ ವೆಚ್ಚದಲ್ಲಿ ಪೂರ್ಣಗೊಂಡಿವೆ. 2025–26ನೇ ಸಾಲಿನಲ್ಲಿ 9 ಕಾಮಗಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿ ಮಂಜೂರಾತಿ ಪಡೆದುಕೊಳ್ಳಲಾಗಿದ್ದು, 80.76 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿಗೆ 54 ಕೋಟಿ ಅನುದಾನ ನಿಗದಿಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.



ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ವಿಜಯಪುರ–ಸೋಲಾಪುರ ಹಾಗೂ ಮೋರಟಗಿ–ಆಲಮಟ್ಟಿ ಮಾರ್ಗಗಳ ಅಭಿವೃದ್ಧಿಗೆ ಒಟ್ಟು 200 ಕಿ.ಮೀ ಉದ್ದದ ಕಾಮಗಾರಿಗಳನ್ನು 1700 ಕೋಟಿ ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ. ಇದಲ್ಲದೆ ವಿಜಯಪುರ–ಹುಬ್ಬಳ್ಳಿ ಹಾಗೂ ವಿಜಯಪುರ–ಕಲಬುರಗಿ ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ವಿಸ್ತೃತ ಯೋಜನಾ ವರದಿ ತಯಾರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ 451.45 ಕಿ.ಮೀ ಉದ್ದದ ರಸ್ತೆ ಕಾಮಗಾರಿಗಳಿಗೆ 27.79 ಕೋಟಿ ಅನುದಾನ ನೀಡಲಾಗಿದೆ. ಒಟ್ಟಾರೆ ವಿಜಯಪುರ ಜಿಲ್ಲೆಯಲ್ಲಿ 1000.69 ಕಿ.ಮೀ ರಸ್ತೆ ಅಭಿವೃದ್ಧಿ ಹಾಗೂ ಎರಡು ರೈಲ್ವೆ ಮೇಲ್ಸೇತುವೆ ಕಾಮಗಾರಿಗಳನ್ನು ಒಳಗೊಂಡಂತೆ 3516.67 ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳು ನಡೆದಿವೆ ಎಂದು ಸಂಸದರು ವಿವರಿಸಿದರು.

ಕ್ಷೇತ್ರದ ಅಭಿವೃದ್ಧಿಯ ಕುರಿತು ಟೀಕೆ ಮಾಡುವವರು ಈ ಕಾಮಗಾರಿಗಳ ಪ್ರಗತಿಯನ್ನು ಗಮನಿಸಬೇಕು. ಜನರ ಅನುಕೂಲಕ್ಕಾಗಿ ಹಲವು ಬೃಹತ್ ಯೋಜನೆಗಳನ್ನು ಜಾರಿಗೆ ತರಲಾಗಿದ್ದು, ಅಭಿವೃದ್ಧಿಯೇ ತಮ್ಮ ಕಾರ್ಯಕ್ಕೆ ಸಾಕ್ಷಿಯಾಗಿದೆ ಎಂದು ರಮೇಶ ಜಿಗಜಿಣಗಿ ತಿಳಿಸಿದರು.



ರಾಜ್ಯದಲ್ಲಿ ಮುಂಗಾರು ಚುರುಕಾಗಿರುವುದರಿಂದ, ಶನಿವಾರ ಮೈಸೂರು ಬಳಿಯ ಶ್ರೀ ಚಾಮುಂಡಿ ಬೆಟ್ಟದಲ್ಲಿ ಮಳೆಯಾಗಿದೆ.

# ಕಾಂಗ್ರೆಸ್ ಸೇರುವ ಸುದ್ದಿ ಆಧಾರರಹಿತ ಮಾಜಿ ಸಚಿವ ಪ್ರಮೋದ್ ಮಧ್ವರಾಜ್ ಸ್ಪಷ್ಟನೆ

**ಉಡುಪಿ, ಜೂ.13:** ಮತ್ತೆ ಕಾಂಗ್ರೆಸ್ ಸೇರಲಿದ್ದೇನೆ ಎಂದು ಹರಿದಾಡುತ್ತಿರುವ ಸುದ್ದಿ ಆಧಾರರಹಿತ ಎಂದು ಮಾಜಿ ಸಚಿವ ಹಾಗೂ ಬಿಜೆಪಿ ನಾಯಕ ಪ್ರಮೋದ್ ಮಧ್ವರಾಜ್ ಸ್ಪಷ್ಟಪಡಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಶನಿವಾರ ಮಾಹಿತ ಹಂಚಿಕೊಂಡಿದ್ದಾರೆ.



ನನ್ನ ಬಗ್ಗೆ ಹರಿದಾಡುತ್ತಿರುವ ಕೆಲವು ಸುದ್ದಿಗಳು ಮತ್ತು ಊಹಾಪೋಹ. ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಲಿದ್ದೇನೆ ಎಂಬ ಸುದ್ದಿ ಸಂಪೂರ್ಣವಾಗಿ ಆಧಾರ ರಹಿತವಾಗಿದ್ದು, ಈ ಹಿಂದೆ ಕೂಡ ಸ್ಪಷ್ಟವಾಗಿ ಹೇಳಿದ್ದೇನೆ. ನಾನು ಭಾರತೀಯ ಜನತಾ ಪಕ್ಷವನ್ನು ಅಧಿಕಾರಕ್ಕಾಗಿ ಸೇರಿಲ್ಲ, ಜನಸೇವೆಯ ಉದ್ದೇಶದಿಂದ ಸೇರಿದ್ದೇನೆ. ಅಧಿಕಾರ ಅಥವಾ ಹುದ್ದೆಗಳು ಬಂದರೆ ಅದು ಹೆಚ್ಚುವರಿ ಜವಾಬ್ದಾರಿಯಷ್ಟೇ. ಆದರೆ ನನ್ನ ರಾಜಕೀಯ ಜೀವನದ ಮೂಲ ಉದ್ದೇಶ ಜನರ ಸೇವೆ ಮತ್ತು ಕರ್ನಾಟಕದ ಸಮಗ್ರ ಅಭಿವೃದ್ಧಿಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ನಾನು ಯಾವುದೇ ಅಧಿಕಾರ ಅಥವಾ ಹುದ್ದೆಗಾಗಿ ಪರಿತಪಿಸುತ್ತಿಲ್ಲ. ಹುದ್ದೆಗಳು ವ್ಯಕ್ತಿಯನ್ನು ದೊಡ್ಡವನನ್ನಾಗಿಸುವುದಿಲ್ಲ; ಜನರ ವಿಶ್ವಾಸ ಮತ್ತು ಸೇವೆಯೇ ವ್ಯಕ್ತಿಯ ನಿಜವಾದ ಶಕ್ತಿಯಾಗಿದೆ ಎಂಬ ನಂಬಿಕೆ ನನ್ನದು. ನನಗೆ ಅಧಿಕಾರ ಸಿಕ್ಕರೆ ಅದು ಕೇವಲ ಜನರ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಮಾತ್ರ. ಅಧಿಕಾರ ಎನ್ನುವುದು ನನ್ನ ಪಾಲಿಗೆ ಗೌರವ ಅಥವಾ ಸ್ಥಾನಮಾನವಲ್ಲ, ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಜವಾಬ್ದಾರಿ ಯಾಗಿದೆ. ಪಕ್ಷ ನನಗೆ ಯಾವುದೇ ಜವಾಬ್ದಾರಿ ನೀಡಿದರೆ ಅದನ್ನು ಪ್ರಾಮಾಣಿಕವಾಗಿ ನಿರ್ವಹಿಸುತ್ತೇನೆ. ಜವಾಬ್ದಾರಿ ಸಿಗದಿದ್ದರೂ ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿ ಜನರ ಮಧ್ಯೆ ಕೆಲಸ ಮಾಡುವುದನ್ನು ಮುಂದುವರಿಸುತ್ತೇನೆ. ಮುಂದಿನ ದಿನಗಳಲ್ಲಿ ಪಕ್ಷದ ನಾಯಕರುಗಳು ನನ್ನ ಕಾರ್ಯ, ಪಕ್ಷದ ಮೇಲಿನ ನಿಷ್ಠೆ ಹಾಗೂ ಜನಸೇವೆಯ ಬದ್ಧತೆಯನ್ನು ಖಂಡಿತವಾಗಿಯೂ ಗುರುತಿಸಿ ಸೂಕ್ತ ಹಾಗೂ ಉತ್ತಮ ನಿರ್ಧಾರವನ್ನು ಕೈಗೊಳ್ಳುತ್ತಾರೆ ಎಂಬ ಸಂಪೂರ್ಣ ವಿಶ್ವಾಸ ನನಗಿದೆ" ಎಂದು ಹೇಳಿಕೊಂಡಿದ್ದಾರೆ.

'ನನ್ನ ರಾಜಕೀಯ ಪಯಣದಲ್ಲಿ ನನ್ನ ಮೇಲೆ ವಿಶ್ವಾಸವಿಟ್ಟು ಬೆಂಬಲ ನೀಡುತ್ತಿರುವ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಜನತೆಗೆ ನಾನು ಸದಾ ಚಿರಋಣಿಯಾಗಿದ್ದೇನೆ. ಅವರ ಪ್ರೀತಿ, ವಿಶ್ವಾಸ ಮತ್ತು ಆಶೀರ್ವಾದವೇ ನನಗೆ ಮತ್ತಷ್ಟು ಶಕ್ತಿಯನ್ನು ನೀಡುತ್ತಿದೆ.ಆದ್ದರಿಂದ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುಳ್ಳು ಸುದ್ದಿ ಮತ್ತು ವದಂತಿಗಳಿಗೆ ಕಿವಿಗೊಡದೆ, ಅಧಿಕೃತ ಮಾಹಿತಿಯನ್ನಷ್ಟೇ ನಂಬುವಂತೆ ಎಲ್ಲರಿಗೂ ಮನವಿ ಮಾಡುತ್ತೇನೆ.

ಅಧಿಕಾರ ನನ್ನ ಗುರಿಯಲ್ಲ ಜನಸೇವೆಯೇ ನನ್ನ ಧ್ಯೇಯ. ಅಧಿಕಾರ ಸಿಕ್ಕರೆ ಜನರ ಸೇವೆಗೆ ಬಳಸುತ್ತೇನೆ, ಸಿಗದಿದ್ದರೂ ಜನರ ಸೇವೆಯನ್ನು ನಿಲ್ಲಿಸುವುದಿಲ್ಲ ಎಂದು ಗಾಳಿ ಸುದ್ದಿಗೆ ತೆರೆ ಎಳೆದಿದ್ದಾರೆ. ಉಡುಪಿ ಭಾಗದಲ್ಲಿ ಪ್ರಭಾವಿ ರಾಜಕಾರಣಿಯಾಗಿರುವ ಪ್ರಮೋದ್ ಮಧ್ವರಾಜ್ ಅವರ ಹೆಸರು ರಾಜ್ಯಸಭೆಗೂ ಕೇಳಿ ಬಂದಿತ್ತು. ಆದರೆ ಬಿಜೆಪಿ ಪರಿಗಣಿಸಿರಲಿಲ್ಲ. ಆ ಬಳಿಕ ಊಹಾಪೋಹಗಳು ಹುಟ್ಟಿ ಕೊಂಡಿದ್ದವು.

# ಸ್ವಾಮಿಹಳ್ಳಿ ಪ್ರಾಥಮಿಕ ಅರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ಡಿ.ಎಚ್.ಓ

**ಬಳ್ಳಾರಿ ಜೂ 12.** ಸಂಡೂರು ತಾಲೂಕಿನ ಸ್ವಾಮಿಹಳ್ಳಿ ಪ್ರಾಥಮಿಕ ಅರೋಗ್ಯ ಕೇಂದ್ರಕ್ಕೆ ಇಂದು ಮಾನ್ಯ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಹಾಗೂ ತಾಲೂಕ ಆರೋಗ್ಯ ಅಧಿಕಾರಿಗಳಾದ ಡಾಕ್ಟರ್ ವೀರೇಂದ್ರ ಕುಮಾರ್ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದಾಧಿಕಾರಿಗಳಾದ ಡಾ ಅಕ್ಷಯ್ ರವರು ಸಾರ್ವಜನಿಕರ ದೂರು ಬಂದಿರುವ ಹಿನ್ನೆಲೆಯಲ್ಲಿ ಭೇಟಿ ನೀಡಿ ಪರಿಶೀಲಿಸದಾಗ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವಿದ್ದು ಸಾರ್ವಜನಿಕರ ಹಿತಾಸಕ್ತಿಯಿಂದ ಬೆಳಿಗ್ಗೆಯಿಂದ ಸಂಜೆವರೆಗೆ ಎಂಎಂಯು ಯೂನಿಟ್ ಅನ್ನು ತಾತ್ಕಾಲಿಕವಾಗಿ ನಿಯೋಜಿಸ ಲಾಗಿದೆ.




ಎಂಎಂಯು ನಿಟ್‌ನಲ್ಲಿ ವೈದಾಧಿಕಾರಿಗಳು ನರ್ಸಿಂಗ್ ಅಧಿಕಾರಿಗಳು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಹಾಗೂ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿಗಳಿಗೆ ಕರ್ತವ್ಯ ನಿರ್ವಹಿಸಲು ಮಾನ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಸೂಚಿಸಿರುತ್ತಾರೆ, ಮುಂದುವರೆದು ಅಲ್ಲಿರುವ ಉಪ ಕೇಂದ್ರಗಳ ಸಿಬ್ಬಂದಿ ವರ್ಗದವರರು ಅಲ್ಲಿ ತಾತ್ಕಾಲಿಕವಾಗಿ ಪಿಹೆಚ್‌ಸಿಯಲ್ಲಿ ಸಾರ್ವಜನಿಕರಿಗೆ ಏನು ಸಮಸ್ಯೆ ಆಗದ ಹಾಗೆ ಆರೋಗ್ಯ ಚಿಕಿತ್ಸೆ ನೀಡಲು ತಿಳಿಸಿದರು.

# ಪ್ರವಾಸಿತಾಣ ಯಾಣಕ್ಕೆ ಪ್ರವಾಸಿಗರಿಗೆ ನಿರ್ಬಂಧ ಹೇರಿ ಉತ್ತರ ಕನ್ನಡ ಜಿಲ್ಲಾಡಳಿತ ಆದೇಶ

**ಕಾರವಾರ, ಜೂ.13:** ಉತ್ತರ ಕನ್ನಡ ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣ ಯಾಣಕ್ಕೆ ಪ್ರವಾಸಿಗರಿಗೆ ನಿರ್ಬಂಧ ವಿಧಿಸಿ ಜಿಲ್ಲಾಡಳಿತ ಆದೇಶ ಹೊರಡಿಸಿದೆ.




ಉತ್ತರ ಕನ್ನಡ ಜಿಲ್ಲೆಯಾದ್ಯಂತ ಭಾರಿ ಮಳೆ ಹಿನ್ನೆಲೆಯಲ್ಲಿ ಮುಂಜಾ ಗೃತಾ ಕ್ರಮವಾಗಿ ಯಾಣ ಪ್ರವಾಸಿ ತಾಣಕ್ಕೆ ತಾತ್ಕಾಲಿಕ ನಿರ್ಬಂಧ ವಿಧಿಸಲಾಗಿದೆ.

ಕರಾವಳಿಯ ಯಲ್ಲಾಪುರ, ಕುಮಟಾ, ಹೊನ್ನಾವರ, ಭಟ್ಕಳ ಭಾಗದಲ್ಲಿ ಗುಡುಗು ಸಹಿತ ವ್ಯಾಪಕ ಮಳೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಪ್ರಸಿದ್ಧ ಪ್ರವಾಸಿ ತಾಣ ಯಾಣದ ಸುತ್ತಮುತ್ತ ಸ್ಥಳಗಳಲಿ ಭೂಕುಸಿತದ ಆತಂಕ ಹಾಗೂ ಚಂಡಿಕಾ ನದಿಯ ಹಳ್ಳ ತುಂಬಿ ಹರಿಯುತ್ತಿರುವುದರಿಂದ ಪ್ರವಾಸಿಗರಿಗೆ ಯಾಣಕ್ಕೆ ತೆರಳದಂತೆ ತಾತ್ಕಾಲಿಕ ನಿರ್ಬಂಧ ವಿಧಿಸಲಾಗಿದೆ.

ಕಳೆದ ಎರಡು ವರ್ಷದ ಹಿಂದೆ ಯಾಣದ ಬಳಿ ಭೂ ಕುಸಿತವಾಗಿತ್ತು. ಇದಲ್ಲದೇ ಜಿಯಾಲಜಿಕಲ್ ಸರ್ವೆ ಆಫ್ ಇಂಡಿಯಾ ಸಹ ಮತ್ತೆ ಈ ಭಾಗದಲ್ಲಿ ಹೆಚ್ಚಿನ ಮಳೆಯಾದರೆ ಭೂಕುಸಿತವಾಗುವ ಎಚ್ಚರಿಕೆ ಸಹ ನೀಡಿತ್ತು. ನಿರಂತರ ಮಳೆ ಹಾಗೂ ಪ್ರಾಕೃತಿಕ ವಿಕೋಪದ ಹಿನ್ನೆಲೆ ಚಂಡಿಕಾ ನದಿ ತುಂಬಿ ಹರಿಯುತ್ತಿರುವ ಕಾರಣ, ಪ್ರವಾಸಿಗರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಯಾಣ ಪ್ರವಾಸಿ ತಾಣವನ್ನು ತಾತ್ಕಾಲಿಕವಾಗಿ ಬಂದ್ ಮಾಡಲಾಗಿದೆ ಎಂದು ಅರಣ್ಯ ಇಲಾಖೆ ಪ್ರಕಟಣೆ ಹೊರಡಿಸಿದೆ.

ಪರಿಸ್ಥಿತಿ ಸುಧಾರಿಸುವವರೆಗೆ ಸಾರ್ವಜನಿಕರು ಯಾಣಕ್ಕೆ ಭೇಟಿ ನೀಡದಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ಅರಣ್ಯ ಇಲಾಖೆ ಹಾಗೂ ಶ್ರೀ ಮಹಾಗಣಪತಿ ಗ್ರಾಮ ಅರಣ್ಯ ಸಮಿತಿ ಯಾಣದ ವತಿಯಿಂದ ಹೊರಡಿಸಿರುವ ಸೂಚನೆಯಲ್ಲಿ, ನಿಷೇಧದ ಅವಧಿಯಲ್ಲಿ ಅಕ್ರಮವಾಗಿ ಪ್ರವೇಶಿಸುವವರ ವಿರುದ್ಧ ಅರಣ್ಯ ಕಾಯ್ದೆಯಡಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

# ವೈಮನಸ್ಸು ಬದಿಗಿಟ್ಟು ಸಂಘ ಮುನ್ನಡೆಸಿ ಅಧ್ಯಕ್ಷ ಶಿವಾನಂದ ತಗಡೂರು



**ಬೀದರ್, ಜೂ. 13:** ಸಂಘ ಎಂದರೆ ಅದೊಂದು ಕುಟುಂಬವಿದ್ದಂತೆ. ಪ್ರತಿ ಕುಟುಂಬದಲ್ಲಿ ಭಿನ್ನಾಭಿಪ್ರಾಯಗಳು ಇದ್ದೇ ಇರುತ್ತವೆ. ಆದರೆ ವೈ ಮನಸ್ಸುಗಳು ಇರಬಾರದು. ಕುಟುಂಬ ಸುರಳೀತ ನಡೆಯಲು ವೈಮನಸ್ಸು, ಭಿನ್ನಾಭಿಪ್ರಾಯ ಬದಿಗಿಟ್ಟು ಸಂಘಕ್ಕೆ ಕಳಂಕ ಬಾರದಂತೆ ಎಲ್ಲರೂ ಸೇರಿ ಯಶಸ್ವಿಯಗಿ ಮುನ್ನಡೆಸಿಕೊಂಡು ಹೋಗಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಕರೆ ನೀಡಿದರು.

2025–28ನೇ ಸಾಲಿಗಾಗಿ ನೂತನವಾಗಿ ಆಯ್ಕೆಯಾದ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳ ಪದಗ್ರಹಣ ಹಾಗೂ ಪ್ರಥಮ ಜಿಲ್ಲಾ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಸಂಘವಿದ್ದರೆ ಮಾತ್ರ ನಾವು. ನೂರು ವರ್ಷಗಳ ಹಿಂದೆ ಡಿ.ವಿ. ಗುಂಡಪ್ಪ ಅವರು ಕಟ್ಟಿದ ಸಂಘ ಇದಾಗಿದೆ. ಎಲ್ಲ ಪತ್ರಕರ್ತರು ಸಂಘದ ನಿಯಮಗಳಿಗೆ ಬದ್ಧರಾಗಿ ನಡೆದುಕೊಳ್ಳಬೇಕು ಎಂದರು.ನೂತನ ಪದಾಧಿಕಾರಿಗಳು ಇದೊಂದು ಹುದ್ದೆ ಎಂದು ಭಾವಿಸದೆ ಜವಾಬ್ದಾರಿ, ಕರ್ತವ್ಯವೆಂದು ನಂಬಿ ಸಂಘವನ್ನು ಮುನ್ನಡೆಸಿಕೊಂಡು ಹೋಗಬೇಕು. ನಕಲಿ ಪತ್ರಕರ್ತರಿಗೆ ಕಡಿವಾಣ ಹಾಕುವ ಜತೆಗೆ ಸಂಘದ ಗುರುತಿನ ಚೀಟಿಯನ್ನು ನಕಲು ಮಾಡಿ ಓಡಾಡುವವರ ಮೇಲೆ ನಿಗಾ ವಹಿಸಬೇಕು ಎಂದು ಹೇಳಿದರು.

ನೂತನ ಜಿಲ್ಲಾಧ್ಯಕ್ಷ ಸೇರಿದಂತೆ ಪದಾಧಿಕಾರಿಗಳಿಗೆ ಸಂಘಟನೆ ಸಂದರ್ಭದಲ್ಲಿ ಅವಮಾನ, ನಿಂದನೆಗಳು ಸಹಜ. ಆದರೆ ಅವುಗಳನ್ನು ಮೆಟ್ಟಿನಿಂತು ಸಂಘಟಿಸಿದಾಗ ಬಹುಮಾನಗಳು ನಮ್ಮ ಮನೆಬಾಗಿಲಿಗೆ ಬರುತ್ತವೆ. ಬೀದರ್ ಸಂಘವನ್ನು ರಾಜ್ಯದಲ್ಲಿಯೇ ಮಾದರಿಯಾಗುವ ನಿಟ್ಟಿನಲ್ಲಿ ಸಂಘಟಿಸಬೇಕು ಎಂದು ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ ಮಾತನಾಡಿ, ಪತ್ರಕರ್ತರ ಸಂಘವು ವಾರ್ತಾ ಇಲಾಖೆಯ ಸಹಯೋಗದೊಂದಿಗೆ ರಾಜ್ಯಾದ್ಯಂತ ಕಾರ್ಯ ನಿರ್ವಹಿಸುವ ಏಕೈಕ ಸಂಘವಾಗಿದ್ದು, ಬಹುತೇಕ ಜಿಲ್ಲೆಗಳಲ್ಲಿ ಅಲ್ಲಿಯ ಪತ್ರಿಕಾ ಭವನಗಳನ್ನು ಸಂಘವೇ ಮುನ್ನಡೆಸಿಕೊಂಡು ಹೋಗುತ್ತಿದೆ. ಮುಂಬರುವ ದಿನಗಳಲ್ಲಿ ಬೀದರ್ ನಲ್ಲಿಯೂ ಇಂಥ ಮಾದರಿಯ ಕಾರ್ಯ ನಡೆಯಲಿ ಎಂದು ಹೇಳಿದರು.

### ಭವನ ಸಂಘದ ಸುಪರ್ದಿಗೆ ನೀಡಿ

**ಸಭೆಯಲ್ಲಿ ಕೆಲ ನಿರ್ಣಯಗಳನ್ನು ಕೈಗೊಳ್ಳಲಾಯಿತು. ಬೀದರ್ ನಗರದಲ್ಲಿನ ಜಿಲ್ಲಾ ಪತ್ರಿಕಾ ಭವನವನ್ನು ಕಾರ್ಯನಿರತ ಪತ್ರಕರ್ತರ ಸಂಘದ ಸುಪರ್ದಿಗೆ ನೀಡಬೇಕು ಎಂಬಿತ್ಯಾದಿ ನಿರ್ಣಯವನ್ನು ತೆಗೆದುಕೊಳ್ಳಲಾಯಿತು. 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಬಜೆಟ್‌ಗೆ ಒಮ್ಮತದಿಂದ ಸಭೆ ಸಮ್ಮತಿಸಿದರು ಹಾಗೂ ಸಮ್ಮೇಳನಕ್ಕೆ ಸಹಕರಿಸಿದ ಜನಪ್ರತಿನಿಧಿಗಳು, ಜಿಲ್ಲಾಡಳಿತ, ರಾಜಕೀಯ ಮುಖಂಡರಿಗೆ ಸರ್ವ ಸಮ್ಮತದಿಂದ ಅಭಿನಂದಿಸುವ ಅಂಗೀಕಾರ ಕೈಗೊಳ್ಳಲಾಯಿತು.**

# ಕೋವಿಡ್ ಲಸಿಕೆಯಿಂದಲೂ ಹೃದಯ ಸಂಬಂಧಿ ಕಾಯಿಲೆಗಳ ಹೆಚ್ಚಳ: ಡಾ. ಎ.ಗೌತಮ್

**ಹಾವೇರಿ, ಜೂ.13:** ಇತ್ತೀಚಿನ ದಿನಗಳಲ್ಲಿ ಬದಲಾದ ಜೀವನಶೈಲಿಯಿಂದಾಗಿ ಹೃದಯ ಸಂಬಂಧಿ ಕಾಯಿಲೆಗಳು ಹೆಚ್ಚಾಗುತ್ತಿವೆ. ಇದರ ಜೊತೆಯಲ್ಲಿ ಕೋವಿಡ್ ಲಸಿಕೆಯಿಂದಲೂ ಸಮಸ್ಯೆ ಉಲ್ಬಣಿಸುತ್ತಿರುವುದು ಹಲವು ಸಂಶೋಧನೆಗಳಿಂದ ಕಂಡುಬಂದಿದೆ ಎಂದು ದಾವಣಗೆರೆಯ ಎಸ್.ಎಸ್. ನಾರಾಯಣ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಹೃದಯ ರೋಗ ತಜ್ಞ ಡಾ.ಗೌತಮ್ ಎ. ಹೇಳಿದ್ದಾರೆ.

ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 15–20 ವರ್ಷಗಳ ಹಿಂದೆ, ಒಂದೆರೆಡು ಮಂದಿಯಲ್ಲಿ ಮಾತ್ರ ಹೃದಯ ಸಂಬಂಧಿ ಕಾಯಿಲೆ ಕಾಣಿಸಿಕೊಳ್ಳುತ್ತಿತ್ತು. ಆದರೆ, ಈಗ ಪ್ರಮಾಣ ಹೆಚ್ಚಾಗಿದೆ. ಸಣ್ಣ ವಯಸ್ಸಿನಲ್ಲೂ ಹೃದಯ ಕಾಯಿಲೆ ಬರುತ್ತಿದೆ. ಕೋವಿಡ್ ಲಸಿಕೆಯೂ ರಕ್ತನಾಳಗಳಲ್ಲಿ ಹೆಪ್ಪು ಗಟ್ಟುವಿಕೆ ಸಮಸ್ಯೆಯನ್ನು ತಂದೊಡುತ್ತಿರುವುದು ಗೊತ್ತಾಗಿದೆ. ಇದುವೇ ಹೃದಯ ಸಂಬಂಧಿ ಕಾಯಿಲೆಗೆ ದಾರಿ ಆಗುತ್ತಿದೆ. ಕೋವಿಡ್ ಲಸಿಕೆ ಪಡೆದಿರುವ ಮಧುಮೇಹಿ ರೋಗಿಗಳಲ್ಲಿ, ಹೃದಯ ಕಾಯಿಲೆ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದೆ. ಯುವಜನತೆಯಲ್ಲಿಯೂ ಸಮಸ್ಯೆ ಹೆಚ್ಚಾಗಿದೆ. ಲಕ್ಷಣಗಳು ಗೋಚರಿಸಿದರೆ, ತಜ್ಞವೈದ್ಯರ ಬಳಿ ತೋರಿಸುವುದು ಉತ್ತಮ ಎಂದು ಹೇಳಿದರು.

# ಕೆಎಸ್‌ಆರ್‌ಟಿಸಿ ಬಸ್‌ಗೆ ಲಾರಿ ಡಿಕ್ಕಿ ಇಬ್ಬರು ಪ್ರಯಾಣಿಕರ ಸಾವು

**ಬಾಗಲಕೋಟೆ, ಜೂ.13:** ಮುಂದೆ ಹೋಗುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ಹಿಂದಿನಿಂದ ಲಾರಿ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಪ್ರಯಾಣಿಕರು ಮೃತಪಟ್ಟಿರುವ ಘಟನೆ ಬಾಗಲಕೋಟೆ ಜಿಲ್ಲೆಯ ಬೀಳಗಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಶನಿವಾರ ಬೆಳಗ್ಗೆ ನಡೆದಿದೆ. ಬಾಗಲಕೋಟೆಯ ನಿವಾಸಿ ರಾಣಿ ದೇಸಾಯಿ (35) ಹಾಗೂ ನರಗುಂದ ನಿವಾಸಿ ಶಿವಕುಮಾರ್ (25) ಮೃತಪಟ್ಟವರು. ಬೆಳಗ್ಗೆ 11.30 ರ ಸುಮಾರಿನಲ್ಲಿ ರಾಷ್ಟ್ರೀಯ ಹೆದ್ದಾರಿ ಅಗನವಾಡಿ ಬಳಿ ಕೆಎಸ್‌ಆರ್‌ಟಿಸಿ ಬಸ್‌ಪ್ರಯಾಣಿಕರನ್ನು ಕರೆದುಕೊಂಡು ಹೋಗುತ್ತಿದ್ದಾಗ ಹಿಂದಿನಿಂದ ಅತಿ ವೇಗವಾಗಿ ಬಂದ ಲಾರಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಬಸ್‌ನಲ್ಲಿದ್ದ ಇಬ್ಬರು ಪ್ರಯಾಣಿಕರು ಮೃತಪಟ್ಟಿದ್ದು, ನಾಲ್ವರು ಗಾಯಗೊಂಡಿದ್ದಾರೆ. ಸುದ್ದಿ ತಿಳಿದು ಬೀಳಗಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಮುಂದಿನ ಕ್ರಮಕೈಗೊಂಡಿದ್ದಾರೆ.

# ಆಲದಹಳ್ಳಿ ಈಚಲಳ್ಳದ ಪರಂಪೋಕ್ (ಸರಕಾರಿ ಜಾಗ) ಒತ್ತವರಿ ತೆರವು– ಎಡಿಸಿ ಜುಬೇರ್



**ಬಳ್ಳಾರಿ, ಜೂ.13:** ಇಲ್ಲಿಗೆ ಸಮೀಪದ ಆಲದಹಳ್ಳಿ ಗ್ರಾಮದ ಸರ್ವೇ ನಂ 38/ಎ ಗೆ ಸಂಬಂಧಿಸಿದ ಈಚಲಹಳ್ಳದ ಪರಂಪೋಕ್ ನ 3.28 ಎಕರೆ ಜಮೀನನ್ನು ಜಿಲ್ಲಾಡಳಿತ ವಶಕ್ಕೆ ಪಡೆದುಕೊಂಡಿದೆ.

ಎಡಿಸಿ ಮಹಮ್ಮದ್ ಝುಬೇರ ಅವರ ನೇತೃತ್ವದಲ್ಲಿ ಡಿಡಿಎಲ್ ಆರ್. ಪ್ರಮೋದ್, ಎಡಿಎಲ್ ಆರ್ ಬಳ್ಳಾರಪ್ಪ ಮೊದಲಾದವರ ತಂಡ ಜೆಸಿಬಿ ಮೂಲಕ ಒತ್ತವರಿ ಮಾಡಿದ್ದನ್ನು ತೆರವು ಮಾಡಿ. ಇದು ಸರ್ಕಾರಿ ಜಮೀನು ಎಂದು ಫಲಕ ಹಾಕಿದರು. ಈ ಜಮೀನಿಗೆ ಸಂಬಂಧ ಪಟ್ಟಂತೆ ನಗರದ ಕಾಂಗ್ರೆಸ್ ಮುಖಂಡ ತಮ್ಮ ಪಟ್ಟಾ ಜಮೀನಿನಲ್ಲಿ ಫಾರಂ ಹೌಸ್ ಕಟ್ಟಿ ಅದರೊಂದಿಗೆ 22 ಸೇಂಟ್ಸ್ ಈಚಲಳ್ಳದ ಜಮೀನನ್ನು ಒತ್ತುವರಿ ಮಾಡಿ ಕಾಂಪೌಂಡ್ ಕಟ್ಟಿದ್ದರು. ಅದನ್ನು ತೆರವು ಗೊಳಿಸಲಾಗಿದೆ. ಒಂದಿಷ್ಟು ಕಟ್ಟಡದ ಭಾಗವನ್ನು ತಾವೇ ತೆರವುಗೊಳಿಸುವುದಾಗಿ ಜಿಲ್ಲಾಡಳಿತಕ್ಕೆ ತಿಳಿಸಿದರಂತೆ. ಇದೇ ರೀತಿ ಅನೇಕ ರಾಜಕೀಯ ಮುಖಂಡರು ಉದ್ಯಾನವನಗಳನ್ನು ಸಹ ಅತಿಕ್ರಮಿಸಿ ನಿವೇಶನ ಮಾಡಿಕೊಂಡಿದ್ದಾರಂತೆ. ಅದರ ಬಗ್ಗೆ ದೂರುಗಳು ಬಂದಿದ್ದು ಜಿಲ್ಲಾಡಳಿತ ಅವುಗಳ ಪರಿಶೀಲನೆ ನಡೆಸಿದೆಯಂತೆ.

ಅತಿಕ್ರಮಣವೆಲ್ಲ ಬೇನಾಮಿ ಹೆಸರಲ್ಲಿ ಬಹುತೇಕವಾಗಿ ಪಾಲಿಕೆಯಲ್ಲಿ ಅಧಿಕಾರ ನಡೆಸಿದವರಿಂದ ಆಗಿದೆ ಎನ್ನಲಾಗುತ್ತಿದೆ. ಬರುವ ದಿನಗಳಲ್ಲಿ ಅವುಗಳು ಸಹ ಹೊರಬರಲಿವೆ ಎಂಬ ಮಾಹಿತಿ ಇದೆ.

# ಅಮೆರಿಕದ ಒಪ್ಪಂದಕ್ಕೆ ಸಹಿ ಹಾಕುವುದು ಸನ್ನಿಹಿತವಾಗಿಲ್ಲ: ಇರಾನ್

**ಟೆಹ್ರಾನ್/ವಾಷಿಂಗ್ಟನ್, ಜೂ.13:** ಒಪ್ಪಂದದ ಸಮಯದ ಸುತ್ತ ಅನಿಶ್ಚಿತತೆ ಮುಂದುವರೆದಿರುವುದರಿಂದ, ಮುಂಬರುವ ದಿನಗಳಲ್ಲಿ ಅದು ಇನ್ನೂ ಸಂಭವಿಸಬಹುದು, ಆದರೂ ಅಮೆರಿಕದೊಂದಿಗೆ ಚೌಕಟ್ಟಿನ ಒಪ್ಪಂದಕ್ಕೆ ಸಹಿ ಹಾಕುವುದು ಭಾನುವಾರ ನಡೆಯುವುದಿಲ್ಲ ಎಂದು ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮಾಯಿಲ್ ಬಘೈ ಹೇಳಿದ್ದಾರೆ.

ಇರಾನಿನ ರಾಜ್ಯ ಮಾಧ್ಯಮದೊಂದಿಗೆ ಮಾತನಾಡಿದ ಬಘೈ, ಪ್ರಗತಿ ಸಾಧಿಸಲಾಗಿದ್ದರೂ, ಪ್ರಕ್ರಿಯೆಯು ಅಸ್ಥಿರವಾಗಿದೆ ಎಂದರು. "ಇದು ನಾಳೆ ಆಗುವುದಿಲ್ಲ, ಆದರೆ ಮುಂಬರುವ ದಿನಗಳಲ್ಲಿ ಅದು ಸಂಭವಿಸಬಹುದು" ಎಂದು ಅವರು ಹೇಳಿದರು, ಇನ್ನೊಂದು ಬದಿಯ "ಅಸಂಗತತೆ" ಎಂದು ಅವರು ವಿವರಿಸಿದ್ದರಿಂದ, ಮಾತುಕತೆಗಳ ಕುರಿತು ಪ್ರತಿಕ್ರಿಯಿಸುವಾಗ ಎಚ್ಚರಿಕೆಯ ಅಗತ್ಯವಿದೆ ಎಂದು ಹೇಳಿದರು. ಮಾತುಕತೆಯಲ್ಲಿ ಭಾಗಿಯಾಗಿರುವ ವಿವಿಧ ಪಾಲುದಾರರಿಂದ ವ್ಯತಿರಿಕ್ತ ಸಂಕೇತಗಳ ನಡುವೆ ಅವರ ಹೇಳಿಕೆಗಳು ಬಂದಿವೆ. ಮಧ್ಯವರ್ತಿಯಾಗಿ ಕಾರ್ಯನಿರ್ವಹಿಸುತ್ತಿರುವ ಪಾಕಿಸ್ತಾನ, 24 ಗಂಟೆಗಳ ಒಳಗೆ ಸಂಭಾವ್ಯ ಚೌಕಟ್ಟನ್ನು ಅಂತಿಮಗೊಳಿಸಬಹುದು ಎಂದು ಈ ಹಿಂದೆ ಸೂಚಿಸಿದೆ, ಪ್ರಧಾನಿ ಶೆಹಬಾಜ್ ಷರೀಫ್ ಈ ಪ್ರದೇಶವು "ಹಿಂದಿಗಿಂತಲೂ ಹೆಚ್ಚು ಶಾಂತಿ ಒಪ್ಪಂದಕ್ಕೆ ಹತ್ತಿರವಾಗಿದೆ" ಎಂದು ಹೇಳಿದ್ದಾರೆ.

ಮಾತುಕತೆಗಳ ಬಗ್ಗೆ ಪರಿಚಿತವಾಗಿರುವ ಮೂಲವೊಂದು ಅಂತರರಾಷ್ಟ್ರೀಯ ಮಾಧ್ಯಮಗಳಿಗೆ ತಿಳಿಸಿದ್ದು, ಮರುದಿನವೇ ಎಲೆಕ್ಟ್ರಾನಿಕ್ ಸಹಿ ನಡೆಯಬಹುದು, ಇದು ಒಪ್ಪಂದವು ಸನ್ನಿಹಿತವಾಗಿದೆ ಎಂಬ ಕೆಲವು ಭಾಗಗಳಲ್ಲಿನ ನಿರೀಕ್ಷೆಗಳನ್ನು ಪ್ರತಿಬಿಂಬಿಸುತ್ತದೆ. ಆದಾಗ್ಯೂ, ಇರಾನಿನ ಅಧಿಕಾರಿಗಳು ವೇಗವರ್ಧಿತ ಸಮಯದ ಮಿತಿಯನ್ನು ವಿರೋಧಿಸಿದ್ದಾರೆ, ಭಾನುವಾರ ಯಾವುದೇ ಅಂತಿಮ ಸಹಿ ನಿಗದಿಯಾಗಿಲ್ಲ ಎಂದು ಒತ್ತಿ ಹೇಳಿದ್ದಾರೆ. ಹೊರಹೊಮ್ಮುತ್ತಿರುವ ದಾಖಲೆಯು ಅಂತಿಮ ಒಪ್ಪಂದವಲ್ಲ, ಬದಲಾಗಿ ಭಿನ್ನಾಭಿಪ್ರಾಯದ ಪ್ರಮುಖ ಅಂಶಗಳು ಮತ್ತು ಒಮ್ಮುಖದ ಕ್ಷೇತ್ರಗಳನ್ನು ವಿವರಿಸುವ ಜ್ಞಾಪಕಪತ್ರವಾಗಿದೆ ಎಂದು ಬಘೈ ಸ್ಪಷ್ಟಪಡಿಸಿದ್ದಾರೆ, ಇದು ಯುದ್ಧವನ್ನು ಕೊನೆಗೊಳಿಸುವತ್ತ ದಾರಿ ಮಾಡಿಕೊಡುವ ಉದ್ದೇಶವನ್ನು ಹೊಂದಿದೆ. ಮತ್ತೊಂದೆಡೆ, ಒಪ್ಪಂದವು ಹತ್ತಿರದಲ್ಲಿದೆ ಎಂದು ಯುನೈಟೆಡ್ ಸ್ಟೇಟ್ಸ್ನ ಅಧಿಕಾರಿಗಳು ಹೆಚ್ಚುತ್ತಿರುವ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ, ಅಂತಿಮ ವಿವರಗಳು ಸ್ಪಷ್ಟವಾಗಿಲ್ಲದಿದ್ದರೂ ಸಹ ಒಪ್ಪಂದವು ಪೂರ್ಣಗೊಳ್ಳುವ ಹಂತದಲ್ಲಿದೆ ಎಂದು ಶ್ವೇತಭವನವು ವಿವರಿಸಿದೆ. ಚೌಕಟ್ಟು ಪ್ರಾದೇಶಿಕ ಭದ್ರತಾ ವ್ಯವಸ್ಥೆಗಳು ಮತ್ತು ಆರ್ಥಿಕ



ನಿರ್ಬಂಧಗಳು ಸೇರಿದಂತೆ ಪ್ರಮುಖ ಸಮಸ್ಯೆಗಳನ್ನು ಪರಿಹರಿಸುವ ನಿರೀಕ್ಷೆಯಿದೆ, ಆದರೂ ಎರಡೂ ಕಡೆಯ ನಡುವೆ ಗಮನಾರ್ಹ ತಾಂತ್ರಿಕ ಮತ್ತು ರಾಜಕೀಯ ಅಂತರಗಳು ಇನ್ನೂ ಉಳಿದಿವೆ ಎಂದು ನಂಬಲಾಗಿದೆ. ಇರಾನ್ ಮತ್ತು ಒಮಾನ್ "ಶೀಘ್ರದಲ್ಲೇ" ಹಾರ್ಮುಜ್ ಜಲಸಂಧಿಯ ಭವಿಷ್ಯದ ಕುರಿತು ಜಂಟಿ ಹೇಳಿಕೆಯನ್ನು ಬಿಡುಗಡೆ ಮಾಡುವ ನಿರೀಕ್ಷೆಯಿದೆ ಎಂದು ಇರಾನಿನ ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ ಹೇಳಿದ್ದಾರೆ.

ಜಲಮಾರ್ಗದ ಪುನರಾರಂಭವು ಯುಎಸ್ ಮತ್ತು ಇರಾನ್ ನಡುವಿನ ನಿರೀಕ್ಷಿತ ಒಪ್ಪಂದದ ಒಂದು ಭಾಗವಾಗಿದೆ ಎಂದು ನಿರೀಕ್ಷಿಸಲಾಗಿದೆ.

ಫೆಬ್ರವರಿಯಲ್ಲಿ ಅಮೆರಿಕ ಮತ್ತು ಇಸ್ರೇಲ್ ಯುದ್ಧವನ್ನು ಆರಂಭಿಸಿದಾಗಿನಿಂದ ಈ ಜಲಸಂಧಿಯನ್ನು ಇರಾನ್ ಪರಿಣಾಮಕಾರಿಯಾಗಿ ಮುಚ್ಚಿದೆ. ಸೌದಿ ಅರೇಬಿಯಾ ಮತ್ತು ಕುವೈತ್‌ನಂತಹ ತೈಲಸಮೃದ್ಧ ದೇಶಗಳಿಂದ ಪ್ರಪಂಚದ ಉಳಿದ ಭಾಗಗಳಿಗೆ ಕಚ್ಚಾ ತೈಲವನ್ನು ಸಾಗಿಸಲು ಇದು ಮುಖ್ಯ ಮಾರ್ಗವಾಗಿದೆ.

ಇರಾನ್ ಮತ್ತು ಒಮಾನ್ ಎರಡೂ ಜಲಸಂಧಿಯಲ್ಲಿ ವಿಶೇಷ ಆರ್ಥಿಕ ವಲಯಗಳನ್ನು (ಇಇಚ) ಹೊಂದಿವೆ.ವಿಶ್ವಸಂಸ್ಥೆಯ ಪ್ರಕಾರ, ಒಂದು ರಾಜ್ಯವು ತನ್ನ ಇಇಚ ನಲ್ಲಿರುವ ನೀರಿನ ನೈಸರ್ಗಿಕ ಸಂಪನ್ಮೂಲಗಳನ್ನು ಅನ್ವೇಷಿಸಲು, ಶೋಷಿಸಲು, ಸಂರಕ್ಷಿಸಲು ಮತ್ತು ನಿರ್ವಹಿಸಲು "ಸಾರ್ವಭೌಮ ಹಕ್ಕುಗಳನ್ನು" ಹೊಂದಿದೆ. ಆದಾಗ್ಯೂ, ಯುನೈಟೆಡ್ ನೇಷನ್ಸ್ ಕನ್ವೆನ್ಷನ್ ಆನ್ ದಿ ಲಾ ಆಫ್ ದಿ ಸೀ ಅಡಿಯಲ್ಲಿ, "ಕರಾವಳಿ ಅಥವಾ ಭೂಕುಸಿತವಾಗಿರುವ ಎಲ್ಲಾ ರಾಜ್ಯಗಳ ಹಡಗುಗಳು ಪ್ರಾದೇಶಿಕ ಸಮುದ್ರದ ಮೂಲಕ ಮುಗ್ಧ ಸಾಗಣೆಯ ಹಕ್ಕನ್ನು ಆನಂದಿಸುತ್ತವೆ." ನಿರ್ದಿಷ್ಟ ರೂಪರೇಖೆಯ ಸನ್ನಿವೇಶಗಳನ್ನು ಹೊರತುಪಡಿಸಿ, ಕರಾವಳಿ ರಾಜ್ಯವು

ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಮುಂದಿನ 24 ಗಂಟೆಗಳಲ್ಲಿ ಆರಂಭಿಕ ಶಾಂತಿ ಒಪ್ಪಂದಕ್ಕೆ ಸಹಿ ಹಾಕಬಹುದು ಎಂದು ಹೇಳಿದ್ದರು. ಮೂರು ತಿಂಗಳಿಗಿಂತ ಹೆಚ್ಚಿನ ಕಾಲದ ಸಂಘರ್ಷವನ್ನು ಕೊನೆಗೊಳಿಸುವ ಗುರಿಯನ್ನು ಹೊಂದಿರುವ ಒಂದು ಹೆಗ್ಗುರುತು ಒಪ್ಪಂದದ ಅಂಚಿನಲ್ಲಿ ಅಮೆರಿಕ ಮತ್ತು ಇರಾನ್ ಇವೆ. "ನಾವು ಹಿಂದೆಂದಿಗಿಂತಲೂ ಹೆಚ್ಚು ಶಾಂತಿ ಒಪ್ಪಂದಕ್ಕೆ ಹತ್ತಿರವಾಗಿದ್ದೇವೆ" ಎಂದು ಷರೀಫ್ ಬರೆದಿದ್ದಾರೆ.

"ಮುಂದಿನ 24 ಗಂಟೆಗಳಲ್ಲಿ ಅಂತಿಮೀಕರಣದ ನಿರೀಕ್ಷೆಯೊಂದಿಗೆ, ಪಾಕಿಸ್ತಾನವು ಶಾಂತಿ ಒಪ್ಪಂದದ ಎಲೆಕ್ಟ್ರಾನಿಕ್ ಸಹಿಗಾಗಿ ತಕ್ಷಣವೇ ತಯಾರಿ ನಡೆಸುತ್ತಿದೆ, ನಂತರ ಮುಂದಿನ ವಾರ ತಾಂತ್ರಿಕ ಮಟ್ಟದ ಮಾತುಕತೆಗಳು ನಡೆಯಲಿವೆ.


"ಪ್ರಾದೇಶಿಕ ಸಮುದ್ರದ ಮೂಲಕ ವಿದೇಶಿ ಹಡಗುಗಳ ಮುಗ್ಧ ಸಾಗಣೆಗೆ ಅಡ್ಡಿಯಾಗಬಾರದು" ಎಂದು ಅದು ಹೇಳುತ್ತದೆ. ಅದು "ಮುಗ್ಧವಲ್ಲದ ಸಾಗಣೆಯನ್ನು ತಡೆಯಲು ತನ್ನ ಪ್ರಾದೇಶಿಕ ಸಮುದ್ರದಲ್ಲಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬಹುದು" ಎಂದು UNCLOS ವಿವರಿಸುತ್ತದೆ.

# ನೆತನ್ಯಾಹು ಶಾಂತಿ ಒಪ್ಪಂದಕ್ಕೆ ಸಹಿ ನಿರೀಕ್ಷೆ: ಟ್ರಂಪ್

**ವಾಷಿಂಗ್ಟನ್, ಜೂ. 13:** ಇರಾನ್ ಜೊತೆ ಶಾಂತಿ ಒಪ್ಪಂದಕ್ಕೆ ಕೆಲವೇ ದಿನಗಳಲ್ಲಿ ಸಹಿ ಹಾಕಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರಿಗೆ ತಿಳಿಸಿದ್ದಾರೆ ಎಂದು ಅಮೆರಿಕದ ಹಿರಿಯ ಅಧಿಕಾರಿಯೊಬ್ಬರು ಆಕ್ಸಿಯಾಸ್ ಉಲ್ಲೇಖಿಸಿದ್ದಾರೆ.

"ಇದು ಒಪ್ಪಂದ. ಇದು ಒಂದು ಉತ್ತಮ ಒಪ್ಪಂದ, ಮತ್ತು ಈ ಯುದ್ಧವನ್ನು ಕೊನೆಗೊಳಿಸುವ ಸಮಯ ಬಂದಿದೆ" ಎಂದು ಟ್ರಂಪ್ ನೆತನ್ಯಾಹು ಅವರಿಗೆ ದೂರವಾಣಿ ಕರೆಯಲ್ಲಿ ತಿಳಿಸಿದರು. ವಾಷಿಂಗ್ಟನ್ ಮತ್ತು ಟೆಹ್ರಾನ್ ಎರಡೂ ಅಧಿಕಾರಿಗಳು ಒಪ್ಪಂದವು ನಿಕಟವಾಗಿದೆ ಎಂದು ಹೇಳಿದಾಗ ಈ ಸಂಭಾಷಣೆ ನಡೆಯಿತು, ಆದರೆ ಇನ್ನೂ ಅಂತಿಮಗೊಂಡಿಲ್ಲ.


ಅಮೆರಿಕದ ಅಧಿಕಾರಿಗಳ ಪ್ರಕಾರ, ಟ್ರಂಪ್ ಒಪ್ಪಂದದೊಂದಿಗೆ ಮುಂದುವರಿಯುವುದನ್ನು ತಡೆಯಲು ಸಾಧ್ಯವಿಲ್ಲ ಎಂದು ನೆತನ್ಯಾಹು ಗುರುತಿಸಿದಂತೆ ಕಾಣುತ್ತದೆ. ಕರೆಯ ಸಮಯದಲ್ಲಿ, ಇರಾನ್ನ ಪರಮಾಣು ಕಾರ್ಯಕ್ರಮದ ಸುತ್ತಲಿನ ಕಳವಳಗಳನ್ನು ಪರಿಹರಿಸುವ ಅಂತಿಮ ಒಪ್ಪಂದವನ್ನು ಖಚಿತಪಡಿಸಿಕೊಳ್ಳಲು ಅವರು ಟ್ರಂಪ್ ಅವರನ್ನು ನಂಬುತ್ತಾರೆ ಎಂದು ಇಸ್ರೇಲ್ ನಾಯಕ ಟ್ರಂಪ್ಗೆ ತಿಳಿಸಿದ್ದಾರೆ ಎಂದು



ವರದಿಯಾಗಿದೆ. ಈ ಬೆಳವಣಿಗೆಯು ನೆತನ್ಯಾಹು ಅವರ ಹಿಂದಿನ ನಿಲುವಿಗಿಂತ ಗಮನಾರ್ಹ ಬದಲಾವಣೆಯನ್ನು ಸೂಚಿಸುತ್ತದೆ. ಸಂಘರ್ಷದ ಆರಂಭದಿಂದಲೂ, ಯುದ್ಧವು ಟೆಹ್ರಾನ್‌ನಲ್ಲಿ ಆಡಳಿತ ಬದಲಾವಣೆಯನ್ನು ತರಲು ಸಹಾಯ ಮಾಡುತ್ತದೆ ಎಂದು ಅವರು ವಾದಿಸಿದ್ದರು. ಈಗ, ತಿಂಗಳುಗಳಲ್ಲಿ ಚುನಾವಣೆಗಳು ನಿರೀಕ್ಷಿತವಾಗಿರುವುದರಿಂದ, ಟ್ರಂಪ್ ಅವರ ಶಾಂತಿ ಷರತ್ತುಗಳನ್ನು ಒಪ್ಪಿಕೊಳ್ಳುವ ಮೂಲಕ ಇಸ್ರೇಲ್ ಅನ್ನು "ಸಾಮಂತ ರಾಜ್ಯ" ವನ್ನಾಗಿ ಪರಿವರ್ತಿಸಿದ್ದಾರೆ ಎಂದು ಅವರ ರಾಜಕೀಯ ಪ್ರತಿಸ್ಪರ್ಧಿಗಳು ಆರೋಪಿಸಿದ್ದಾರೆ. ಈ ವಾರದ ಆರಂಭದಲ್ಲಿ ನೆತನ್ಯಾಹು ಇರಾನಿನ ಇಂಧನ ಮತ್ತು ಮೂಲಸೌಕರ್ಯ ಸೌಲಭ್ಯಗಳ ಮೇಲೆ ಪ್ರಮುಖ ದಾಳಿಗಳನ್ನು ಯೋಜಿಸಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ, ಆದರೆ ಟ್ರಂಪ್ ಕೊನೆಯ ಕ್ಷಣದಲ್ಲಿ ಆ ಕ್ರಮವನ್ನು ನಿಲ್ಲಿಸಿದರು. ಒಪ್ಪಂದವನ್ನು ಪರಿಣಾಮಕಾರಿಯಾಗಿ ತಲುಪಲಾಗಿದೆ ಎಂದು ಟ್ರಂಪ್ ಅವರ ಸಾರ್ವಜನಿಕ ಘೋಷಣೆ ನೆತನ್ಯಾಹು ಅವರನ್ನು ಅಚ್ಚರಿಗೊಳಿಸಿತು ಎಂದು ವರದಿಯಾಗಿದೆ. ಇಸ್ರೇಲಿ ನಾಯಕರು ಟ್ರಂಪ್ ಅವರನ್ನು ಸಾರ್ವಜನಿಕವಾಗಿ ಟೀಕಿಸುವುದನ್ನು ತಪ್ಪಿಸಿದ್ದರೂ, ಅಧಿಕಾರಿಗಳು ಪ್ರಸ್ತಾವಿತ ಒಪ್ಪಂದದ ಬಗ್ಗೆ ಇನ್ನೂ ಸಂಶಯ ವ್ಯಕ್ತಪಡಿಸಿದ್ದಾರೆ. ಒಂದು ಕಳವಳವೆಂದರೆ ಇರಾನ್ ತನ್ನ ಪರಮಾಣು ಕಾರ್ಯಕ್ರಮದಲ್ಲಿ ಅರ್ಥಪೂರ್ಣ ರಿಯಾಯಿತಿಗಳನ್ನು ವಿಳಂಬ ಮಾಡುತ್ತಾ ತೈಲ ಮಾರಾಟದ ಮೂಲಕ ತನ್ನ ಆರ್ಥಿಕತೆಯನ್ನು ಸ್ಥಿರಗೊಳಿಸಲು ಈ ಒಪ್ಪಂದವನ್ನು ಬಳಸಿಕೊಳ್ಳಬಹುದು. ಅಮೆರಿಕದ ಹಿತಾಸಕ್ತಿಗಳನ್ನು ಆಧರಿಸಿದ ಒಪ್ಪಂದವನ್ನು ಟ್ರಂಪ್ ಅನುಸರಿಸುತ್ತಿದ್ದಾರೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹೇಳಿದರು ಆದರೆ ಇರಾನ್ನ ಪರಮಾಣು ಕಾರ್ಯಕ್ರಮ, ಕ್ಷಿಪಣಿಗಳು ಮತ್ತು ಪ್ರಾದೇಶಿಕ ಪ್ರಾಕ್ಸಿ ಗುಂಪುಗಳಿಗೆ ಸಂಬಂಧಿಸಿದಂತೆ ಹಂಚಿಕೆಯ ತತ್ವಗಳನ್ನು ರಕ್ಷಿಸಬೇಕೆಂದು ಇಸ್ರೇಲ್ ನಿರೀಕ್ಷಿಸುತ್ತದೆ ಎಂದು ಒತ್ತಿ ಹೇಳಿದರು. ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಪಡೆಯುವುದನ್ನು ತಡೆಯಲು ಇಸ್ರೇಲ್ ಸ್ವತಂತ್ರವಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯವನ್ನು ಉಳಿಸಿಕೊಂಡಿದೆ ಎಂದು ಕ್ಯಾಟ್ಜ್ ಹೇಳಿದರು. ಲೆಬನಾನ್ ಒಳಗೊಂಡ ಕದನ ವಿರಾಮವು ಹಿಜ್ಬುಲ್ಲಾ ವಿರುದ್ಧದ ಭವಿಷ್ಯದ ಕಾರ್ಯಾಚರಣೆಗಳನ್ನು ಮಿತಿಗೊಳಿಸಬಹುದು ಎಂದು ಇಸ್ರೇಲಿ ಅಧಿಕಾರಿಗಳು ಚಿಂತಿತರಾಗಿದ್ದಾರೆ. ಮುಂದಿನ ಕೆಲವು ದಿನಗಳಲ್ಲಿ ಇರಾನ್ ಜೊತೆ ಚೌಕಟ್ಟು ಒಪ್ಪಂದಕ್ಕೆ ಸಹಿ ಹಾಕುವ ನಿರೀಕ್ಷೆಯಿದೆ ಎಂದು ಅಮೆರಿಕದ ಹಿರಿಯ ಆಡಳಿತ ಅಧಿಕಾರಿಯೊಬ್ಬರು ಹೇಳಿದ್ದನ್ನು ನ್ಯೂಯಾರ್ಕ್ ಟೈಮ್ಸ್ ಉಲ್ಲೇಖಿಸಿದೆ, ಆದರೂ ಚರ್ಚೆಗಳು ಇನ್ನೂ ಪೂರ್ಣಗೊಂಡಿಲ್ಲ. ಯಶಸ್ಸಿನ ಸಾಧ್ಯತೆಗಳು ಶೇ.75 ರಿಂದ ಶೇ.80 ರಿಂದ 85 ಕ್ಕೆ ಏರಿದೆ ಎಂದು ಅಧಿಕಾರಿ ಅಂದಾಜಿಸಿದ್ದಾರೆ. ಪ್ರಸ್ತಾವಿತ ತಿಳುವಳಿಕೆ ಒಪ್ಪಂದವು 60 ದಿನಗಳ ಕದನ ವಿರಾಮವನ್ನು ಸ್ಥಾಪಿಸುತ್ತದೆ ಮತ್ತು ನಿರ್ಬಂಧಗಳ ಪರಿಹಾರ ಮತ್ತು ಇರಾನ್ನ ಪರಮಾಣು ಕಾರ್ಯಕ್ರಮದ ಕುರಿತು ಹೆಚ್ಚಿನ ಮಾತುಕತೆಗಳನ್ನು ಪ್ರಾರಂಭಿಸುತ್ತದೆ. ಅಮೆರಿಕದ ಅಧಿಕಾರಿಯ ಪ್ರಕಾರ, ಈ ಒಪ್ಪಂದವು ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುತ್ತದೆ ಮತ್ತು ಇರಾನಿನ ಬಂದರುಗಳ ಮೇಲಿನ ಅಮೆರಿಕದ ದಿಗ್ಬಂಧನವನ್ನು ಕೊನೆಗೊಳಿಸುತ್ತದೆ.

# 300 ಕೋಟಿ ಡಾಲರ್ ಇರಾನಿನ ಆಸ್ತಿ ವರ್ಗಾವಣೆ ವರದಿ ನಿರಾಕರಿಸಿದ ಯುಎಇ

**ದುಬೈ, ಜೂನ್ 13:** ಶನಿವಾರ ಯುಎಇ ವಿದೇಶಾಂಗ ಸಚಿವಾಲಯದ ಹೇಳಿಕೆಯ ಪ್ರಕಾರ, ಇರಾನ್‌ನ 300 ಕೋಟಿ ಡಾಲರ್ ಮೌಲ್ಯದ ಘನೀಕರಿಸಿದ ಆಸ್ತಿಯ ಒಂದು ಭಾಗವನ್ನು ವರ್ಗಾಯಿಸಲಾಗಿದೆ ಎಂದು ಹೇಳುವ ಮಾಧ್ಯಮ ವರದಿಗಳನ್ನು ಯುನೈಟೆಡ್ ಅರಬ್ ಎಮಿರೇಟ್ಸ್ ತಿರಸ್ಕರಿಸಿದೆ. "ಯುಎಇಯಿಂದ ಇಸ್ಲಾಮಿಕ್ ಗಣರಾಜ್ಯ ಇರಾನ್ಗೆ 3 ಬಿಲಿಯನ್ ಡಾಲರ್ಗೆ ಸಂಬಂಧಿಸಿದ ಆರೋಪಗಳು ಸೇರಿದಂತೆ ಹಣವನ್ನು ವರ್ಗಾಯಿಸಲಾಗಿದೆ ಎಂದು ಆರೋಪಿಸಿ ಕೆಲವು ಅಂತರರಾಷ್ಟ್ರೀಯ ಮಾಧ್ಯಮಗಳು ಪ್ರಕಟಿಸಿದ ವರದಿಗಳನ್ನು ಯುನೈಟೆಡ್ ಅರಬ್ ಎಮಿರೇಟ್ಸ್ ಸ್ಪಷ್ಟವಾಗಿ ನಿರಾಕರಿಸಿದೆ" ಎಂದು ಸಚಿವಾಲಯ ತಿಳಿಸಿದೆ. ಈ ಹೇಳಿಕೆಗಳನ್ನು "ಸಂಪೂರ್ಣವಾಗಿ ಸುಳ್ಳು ಮತ್ತು ಆಧಾರರಹಿತ" ಎಂದು ಸಚಿವಾಲಯ ವಿವರಿಸಿದೆ, ಯಾವುದೇ ಘನೀಕರಿಸಿದ ಇರಾನಿನ ಹಣವನ್ನು ಯುಎಇ ಮೂಲಕ ಅನ್ಲಾಕ್ ಮಾಡಲಾಗಿಲ್ಲ, ವರ್ಗಾಯಿಸಲಾಗಿಲ್ಲ ಅಥವಾ ಸುಗಮಗೊಳಿಸಲಾಗಿಲ್ಲ ಎಂದು ಅದು ಹೇಳಿದೆ. ಅಧಿಕೃತ ಮೂಲಗಳನ್ನು ಅವಲಂಬಿಸುವಂತೆ ಮತ್ತು ಪರಿಶೀಲಿಸದ ಮಾಹಿತಿ ಅಥವಾ ಆಧಾರರಹಿತ ಆರೋಪಗಳನ್ನು ಪ್ರಕಟಿಸುವುದನ್ನು ಅಥವಾ ಪ್ರಸಾರ



ಮಾಡುವುದನ್ನು ತಪ್ಪಿಸುವಂತೆ ಅದು ಮಾಧ್ಯಮ ಸಂಸ್ಥೆಗಳನ್ನು ಒತ್ತಾಯಿಸಿದೆ. ಯುನೈಟೆಡ್ ಅರಬ್ ಎಮಿರೇಟ್ಸ್ ಇರಾನ್‌ಗೆ ಶತಕೋಟಿ ಡಾಲರ್‌ಗಳ ಹಣವನ್ನು ಬಿಡುಗಡೆ ಮಾಡಲು ಒಪ್ಪಿಕೊಂಡಿದೆ ಎಂದು ಮಾಧ್ಯಮ ವರದಿಗಳು ಸೂಚಿಸಿದ ನಂತರ ಈ ಸ್ಪಷ್ಟೀಕರಣ ಬಂದಿದೆ. ವಾಸ್ತವವಾಗಿ ಸಂಘರ್ಷದ ಉತ್ತುಂಗದಲ್ಲಿ ಇರಾನ್ನ ಪ್ರಾಥಮಿಕ ಪ್ರಾದೇಶಿಕ ಗುರಿಗಳಲ್ಲಿ ಒಂದಾಗಿದ್ದ ಯುಎಇಯನ್ನು ಇರಾನಿನ ಪಡೆಗಳು ಗುರಿಯಾಗಿಸಿಕೊಂಡಿಲ್ಲ ಎಂಬ ಕಾರಣಕ್ಕೆ ಈ ಪ್ರಕರಣ ಹೊರಹೊಮ್ಮಿದೆ. ಏತನ್ಮಧ್ಯೆ, ಇರಾನ್ ಇತ್ತೀಚೆಗೆ ಕುವೈತ್ ಮತ್ತು ಬಹ್ರೇನ್ ಕಡೆಗೆ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ನಡೆಸಿತು.

# ಹಡಗುಗಳ ಮೇಲೆ ಇರಾನಿನ ಡ್ರೋನ್ ದಾಳಿ ವಿಫಲ

**ವಾಷಿಂಗ್ಟನ್, ಜೂನ್ 13:** ಹಾರ್ಮುಜ್ ಜಲಸಂಧಿಯನ್ನು ಸಾಗಿಸುವ ವಾಣಿಜ್ಯ ಹಡಗುಗಳನ್ನು ಹೊಡೆಯಲು ಇರಾನ್ ಮಾಡಿದ ಎಲ್ಲಾ ಪ್ರಯತ್ನಗಳನ್ನು ತಟಸ್ಥಗೊಳಿಸಲಾಗಿದೆ ಎಂದು ಅಮೆರಿಕ ಸೆಂಟ್ರಲ್ ಕಮಾಂಡ್ ಶನಿವಾರ ಮುಂಜಾನೆ ಹೇಳಿದೆ.

ನಿರ್ಣಾಯಕ ವ್ಯಾಪಾರದ ಚಾಕ್ಪಾಯಿಂಟ್ ಸಂಚರಣೆಗೆ ಮುಕ್ತವಾಗಿದೆ ಎಂದು CENTCOM ಹೇಳಿದೆ. "ಹಾರ್ಮುಜ್ ಜಲಸಂಧಿಯನ್ನು ಸಾಗಿಸುವ ವಾಣಿಜ್ಯ ಹಡಗುಗಳನ್ನು ಹೊಡೆಯುವ ಪ್ರಯತ್ನದಲ್ಲಿ ಇರಾನ್ ಬಹು ಏಕಮುಖ ದಾಳಿ ಡ್ರೋನ್‌ಗಳನ್ನು ಉಡಾಯಿಸಿತು. ಇತ್ತೀಚಿನ ಗಂಟೆಗಳಲ್ಲಿ ಯುಎಸ್ ಪಡೆಗಳು ಅವೆಲ್ಲವನ್ನೂ ಹೊಡೆದುರುಳಿಸಿವೆ ಮತ್ತು ಜಲಸಂಧಿಯ ಮೂಲಕ ಸಂಚಾರವು ಯಾವುದೇ ಅಡೆತಡೆಯಿಲ್ಲದೆ ಮುಂದುವರೆದಿದೆ. ಅಂತರರಾಷ್ಟ್ರೀಯ ವ್ಯಾಪಾರ ಕಾರಿಡಾರ್ ಸಾಗಣೆಗೆ ಮುಕ್ತವಾಗಿದೆ" ಎಂದು ಹೇಳಿಕೆ ತಿಳಿಸಿದೆ. ಪಶ್ಚಿಮ ಏಷ್ಯಾ ಮತ್ತು ಕೊಲ್ಲಿ ಪ್ರದೇಶದಲ್ಲಿ ವೇಗವಾಗಿ ಬೆಳೆಯುತ್ತಿರುವ ಪರಿಸ್ಥಿತಿಯ ನಡುವೆ, ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಶುಕ್ರವಾರ, ಇರಾನ್‌ನ ರಾಜ್ಯ ಪ್ರಸಾರಕ ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ ಬಾನುಲಿ ಪ್ರಕಾರ, ಅಮೆರಿಕ ಮತ್ತು ಇರಾನ್ ನಡುವಿನ ಒಡಂಬಡಿಕೆ ಟೆಹ್ರಾನ್‌ನ ಪರಮಾಣು ಕಾರ್ಯಕ್ರಮ, ನಿರ್ಬಂಧಗಳ ಪರಿಹಾರ ಮತ್ತು ಹಾರ್ಮುಜ್ ಜಲಸಂಧಿಯ ಸ್ಥಿತಿ ಸೇರಿದಂತೆ ಹಲವಾರು ಸಮಸ್ಯೆಗಳನ್ನು ಪರಿಹರಿಸುತ್ತದೆ ಎಂದು ಹೇಳಿದರು. ಹಾರ್ಮುಜ್ ಜಲಸಂಧಿಯು ಇರಾನ್ ಮತ್ತು ಒಮಾನ್ನಗಳ ಸಾರ್ವಭೌಮತ್ವದ ಅಡಿಯಲ್ಲಿಯೇ ಉಳಿದಿದೆ ಎಂದು ಅರಘ್ಚಿ ಮತ್ತಷ್ಟು ಹೇಳಿದ್ದಾರೆ, "ಹಾರ್ಮುಜ್ ಜಲಸಂಧಿಯ ಭವಿಷ್ಯವು ಹಿಂದಿನಂತೆ ಇರುವುದಿಲ್ಲ" ಎಂದು ಹೇಳಿದರು ಮತ್ತು ಇರಾನ್ ಮತ್ತು ಒಮಾನ್ ಶೀಘ್ರದಲ್ಲೇ ಅದರ ನಿರ್ವಹಣೆಯ ಕುರಿತು ಜಂಟಿ ಹೇಳಿಕೆಯನ್ನು ನೀಡಲಿವೆ ಎಂದು ಸೂಚಿಸಿದರು. ಐಆರ್‌ಐಬಿ ಪ್ರಕಾರ, ಒಪ್ಪಂದವು ಎರಡು ಹಂತಗಳನ್ನು ಒಳಗೊಂಡಿದೆ ಮತ್ತು ಪರಮಾಣು ಸಮಸ್ಯೆಯನ್ನು ಮೊದಲ ಹಂತದಲ್ಲಿ ಚರ್ಚಿಸಲಾಗಿಲ್ಲ ಮತ್ತು ಎರಡನೇ ಹಂತಕ್ಕೆ ಮುಂದೂಡಲಾಗಿದೆ ಎಂದು ಅರಘ್ಚಿ ಹೇಳಿದರು. ತಿಳುವಳಿಕೆ ಒಪ್ಪಂದದ ನಿಬಂಧನೆಗಳನ್ನು ಪೂರೈಸದಿದ್ದರೆ, ಅಂತಿಮ ಒಪ್ಪಂದಕ್ಕೆ ಸಹಿ ಹಾಕಲಾಗುವುದಿಲ್ಲ ಎಂದು ಅವರು ಹೇಳಿದರು. "ಒಪ್ಪಂದದಲ್ಲಿ ಉಲ್ಲೇಖಿಸಲಾದ ಮೊದಲ ವಿಷಯವೆಂದರೆ ಯುಎಸ್ ನೌಕಾ ದಿಗ್ಬಂಧನವನ್ನು ತೆಗೆದುಹಾಕುವುದು" ಎಂದು ಅರಘ್ಚಿ ಹೇಳಿದರು.

"ಅಂತರರಾಷ್ಟ್ರೀಯ ಕಾನೂನಿನ ಪ್ರಕಾರ, ಹಾರ್ಮುಜ್ ಜಲಸಂಧಿಯಿಂದ ಟೋಲ್ಗಳನ್ನು ಸಂಗ್ರಹಿಸಲು ಸಾಧ್ಯವಿಲ್ಲ, ಆದರೆ ಸೇವಾ ಶುಲ್ಕವನ್ನು ಸಂಗ್ರಹಿಸಲಾಗುತ್ತದೆ. ಇರಾನ್‌ಗೆ ಪರಿಹಾರವನ್ನು ಪಾವತಿಸಲು ಸಹ ಯೋಜಿಸಲಾಗಿದೆ" ಎಂದು ಇರಾನ್ ವಿದೇಶಾಂಗ ಸಚಿವರು ಹೇಳಿದ್ದನ್ನು ಐಆರ್‌ಐಬಿ ಉಲ್ಲೇಖಿಸಿದೆ.

# ರಾಜ್ಯದ ಕೈತಪ್ಪಿದ ಅಂತಾರಾಷ್ಟ್ರೀಯ ಪಂದ್ಯಗಳ ಮರಳಿ ತರಲು ಬಿಸಿಸಿಐ ಜತೆ ಮಾತುಕತೆ: ವೆಂಕಟೇಶ ಪ್ರಸಾದ್

ಬೆಳಗಾವಿ, ಜೂ.13: ಹಿಂದಿನ ಆಡಳಿತಾವಧಿಯಲ್ಲಿ ನಡೆದ ಕೆಲವು ಅಹಿತಕರ ಘಟನೆಗಳಿಂದಾಗಿ ರಾಜ್ಯದಲ್ಲಿ ಕೈತಪ್ಪಿಹೋಗಿದ್ದ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯಗಳು ಹಾಗೂ ಐಪಿಎಲ್ ಉದ್ಘಾಟನಾ ಪಂದ್ಯಗಳನ್ನು ಕರ್ನಾಟಕಕ್ಕೆ ಮರಳಿ ತರಲು ಬಿಸಿಸಿಐ ಜೊತೆ ಈಗಾಗಲೇ ಮಾತುಕತೆ ನಡೆಸಲಾಗಿದೆ ಎಂದು ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ ಪ್ರಸಾದ್ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಶನಿವಾರ ಮಾತನಾಡಿದ ಅವರು, ಬಿಸಿಸಿಐನಿಂದ ಪೂರ್ಣ ಸಹಕಾರದ ಭರವಸೆ ಸಿಕ್ಕಿದೆ. ಬರುವ ದಿನಗಳಲ್ಲಿ ಮತ್ತೆ ರಾಜ್ಯದಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯಗಳು ಹೆಚ್ಚಿನ ಪ್ರಮಾಣದಲ್ಲಿ ನಡೆಯಲಿವೆ ಎಂದರು.

ರಾಜ್ಯದಲ್ಲಿ ಕ್ರಿಕೆಟ್ ಅಭಿವೃದ್ಧಿಪಡಿಸಲು



ಮತ್ತು ಮೂಲಸೌಕರ್ಯ ಬಲಪಡಿಸಲು ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳೊಂದಿಗೆ ಈಗಾಗಲೇ ಪ್ರಾಥಮಿಕ ಚರ್ಚೆ ನಡೆಸಲಾಗಿದೆ. ಸರ್ಕಾರದಿಂದಲೂ ಪೂರ್ಣ ಬೆಂಬಲದ ಭರವಸೆ ಸಿಕ್ಕಿದೆ. ಗ್ರಾಮೀಣ ಭಾಗದ ಯುವ ಆಟಗಾರರಿಗೆ ಉತ್ತಮ ತರಬೇತಿ ಮತ್ತು ಆಧುನಿಕ ಸೌಲಭ್ಯಗಳನ್ನು ಒದಗಿಸುವ ಮೂಲಕ, ಮರೆಯಾಗಿರುವ ಸ್ಥಳೀಯ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ನಮ್ಮ ಪ್ರಮುಖ ಉದ್ದೇಶವಾಗಿದೆ ಎಂದರು.

## ಗ್ರಾಮೀಣ ಭಾಗದಲ್ಲಿ ಕ್ರಿಕೆಟ್ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ

ಕರ್ನಾಟಕದ ಗ್ರಾಮೀಣ ಭಾಗಗಳಲ್ಲಿ ಕ್ರಿಕೆಟ್ ಮೂಲಸೌಕರ್ಯಗಳನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸುವುದು ಮತ್ತು ಬೆಳಗಾವಿ ಜಿಲ್ಲೆಯ ಕ್ರಿಕೆಟ್ ಕ್ರೀಡಾಂಗಣದ ನವೀಕರಣ ಕಾಮಗಾರಿಗೆ ಮೊದಲ ಆದ್ಯತೆ ನೀಡಲಾಗುವುದು. ರಾಜ್ಯಾದ್ಯಂತ ಕ್ರಿಕೆಟ್ ಮೂಲಸೌಕರ್ಯಗಳನ್ನು ಪುನರ್ನಿರ್ಮಿಸಲು ನಮ್ಮ ಹೊಸ ಸಮಿತಿ ಬದ್ಧವಾಗಿದೆ.

ಈ ನಿಟ್ಟಿನಲ್ಲಿ ಬೆಳಗಾವಿ, ಹುಬ್ಬಳ್ಳಿ, ಶಿವಮೊಗ್ಗ ಹಾಗೂ ತುಮಕೂರು ಸೇರಿದಂತೆ ಪ್ರಮುಖ ಪ್ರಾದೇಶಿಕ ಕೇಂದ್ರಗಳನ್ನು ಹಂತ ಹಂತವಾಗಿ ಮೇಲ್ದರ್ಜೆಗೇರಿಸಲಾಗುವುದು. ಈ ಭಾಗಗಳಲ್ಲಿ ನಿರಂತರವಾಗಿ ಗುಣಮಟ್ಟದ ಕ್ರಿಕೆಟ್ ಪಂದ್ಯಗಳನ್ನು ಆಯೋಜಿಸುವ ಮೂಲಕ ಸ್ಥಳೀಯ ಕ್ರಿಕೆಟ್ ಪ್ರೇಮಿಗಳಿಗೆ ಹತ್ತಿರವಾಗಲಿದ್ದೇವೆ ಎಂದು ಪ್ರಸಾದ್ ಹೇಳಿದರು.

## ಕೆಎಸ್‌ಸಿಎ ಪದಾಧಿಕಾರಿಗಳ ಜತೆ ಪ್ರಿಯಾಂಕ್ ಖರ್ಗೆ ಚರ್ಚೆ

ಸಿಲಿಕಾನ್ ಸಿಟಿ ಬೆಂಗಳೂರಲ್ಲಿ ನಡೆಯಲಿರುವ ವಿವಿಧ ಕ್ರಿಕೆಟ್ ಪಂದ್ಯಾವಳಿಗಳನ್ನು ಅತ್ಯಂತ ಸುಗಮವಾಗಿ ಮತ್ತು ಯಾವುದೇ ಅಡೆತಡೆಗಳಿಲ್ಲದೆ ನಡೆಸಲು ಭದ್ರತಾ ವ್ಯವಸ್ಥೆಗಳ ಕುರಿತು ಸಚಿವ ಪ್ರಿಯಾಂಕ್ ಖರ್ಗೆ ಮಹತ್ವದ ಸಮಾಲೋಚನೆ ನಡೆಸಿದ್ದಾರೆ. ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಹಾಗೂ ಇತರ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ, ಕ್ರಮಗಳ ಬಗ್ಗೆ ಚರ್ಚಿಸಿದರು. ಬೆಂಗಳೂರು ನಗರ ಕ್ರೀಡಾ ಲೋಕದಲ್ಲಿ ಯಾವಾಗಲೂ ಅತ್ಯಂತ ಪ್ರಮುಖ ಮತ್ತು ನೆಚ್ಚಿನ ತಾಣವಾಗಿ ಗುರುತಿಸಿಕೊಂಡಿದೆ. ಇಲ್ಲಿಗೆ ಬರುವ ಕ್ರೀಡಾಭಿಮಾನಿಗಳಿಗೆ ಮತ್ತು ಆಟಗಾರರಿಗೆ ಯಾವುದೇ ಕೊರತೆಯಾಗದಂತೆ ಜಾಗತಿಕ



ಮಟ್ಟದ ವಿಶ್ವದರ್ಜೆಯ ಸೌಲಭ್ಯ ಹಾಗೂ ಸುರಕ್ಷಿತ ಅನುಭವವನ್ನು ಒದಗಿಸಲು ನಮ್ಮ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ಸಚಿವರು ಈ ಸಂದರ್ಭದಲ್ಲಿ ಭರವಸೆ ನೀಡಿದ್ದಾರೆ. ಇದೇ ವೇಳೆ ಕಲ್ಯಾಣ ಕರ್ನಾಟಕ ಭಾಗದ ಕ್ರೀಡಾಸಕ್ತರಿಗೂ ಸಚಿವರು ಸಿಹಿ ಸುದ್ದಿ ನೀಡಿದ್ದಾರೆ.

# ಬ್ಯಾಡ್ಮಿಂಟನ್: ಭಾರತದ ಏಷ್ಯನ್ ಗೇಮ್ಸ್ ತಂಡದಲ್ಲಿ ಸಿಂಧು, ಸಾತ್ವಿಕ್, ಚಿರಾಗ್‌ಗೆ ಸ್ಥಾನ

**ನವದೆಹಲಿ, ಜೂ.13:** ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿವಿ ಸಿಂಧು ಮತ್ತು ಹಾಲಿ ಪುರುಷರ ಡಬಲ್ಸ್ ಚಾಂಪಿಯನ್ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ–ಚಿರಾಗ್ ಶೆಟ್ಟಿ ಸೆಪ್ಟೆಂಬರ್ 19 ರಿಂದ ಅಕ್ಟೋಬರ್ 4 ರವರೆಗೆ ಜಪಾನ್ನ ಐಚಿ–ನಗೋಯಾದಲ್ಲಿ ನಡೆಯಲಿರುವ 2026 ರ ಏಷ್ಯನ್ ಕ್ರೀಡಾಕೂಟಕ್ಕೆ ಭಾರತದ 20 ಸದಸ್ಯರ ಬ್ಯಾಡ್ಮಿಂಟನ್ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. 2023 ರ ಹ್ಯಾಂಗ್‌ಝೌನಲ್ಲಿ ಬೆಳ್ಳಿ ಪದಕ ಗೆದ್ದ ಭಾರತೀಯ ಪುರುಷರ ತಂಡದ ಭಾಗವಾಗಿರುವ ಲಕ್ಷ್ಯ ಸೇನ್, ಎಚ್‌ಎಸ್ ಪ್ರಣಯ್ ಮತ್ತು ಮಾಜಿ ವಿಶ್ವ ನಂ. 1 ಕಿಡಾಂಬಿ ಶ್ರೀಕಾಂತ್ ಕೂಡ ಜಪಾನ್‌ಗೆ ತೆರಳುವ ತಂಡದ ಭಾಗವಾಗಿದ್ದಾರೆ. ಈ ವರ್ಷದ ಆರಂಭದಲ್ಲಿ ನಡೆದ ಥಾಮಸ್ ಕಪ್‌ನಲ್ಲಿ ಕಂಚಿನ ಪದಕ ಗೆದ್ದ 20 ನೇ ಆವೃತ್ತಿಯ ಏಷ್ಯನ್ ಗೇಮ್ಸ್‌ನ ಭಾರತದ ಪುರುಷರ ತಂಡವು ಹೆಚ್ಚಿನದನ್ನು ಉಳಿಸಿಕೊಂಡಿದೆ. ಆ ಥಾಮಸ್ ಕಪ್ ಅಭಿಯಾನದ ಪ್ರಮುಖ ಸದಸ್ಯ ಆಯುಷ್ ಶೆಟ್ಟಿ ಮತ್ತು ತರುಣ್ ಮನ್ನೆಪಲ್ಲಿ ಕೂಡ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಭಾರತದ ಮಹಿಳಾ ತಂಡವನ್ನು ಅನುಭವಿ ಪಿ.ವಿ. ಸಿಂಧು ಮುನ್ನಡೆಸಲಿದ್ದು, ತನ್ವಿ ಶರ್ಮಾ ಮತ್ತು ಉನ್ನತಿ ಹೂಡಾ ಅವರಂತಹ ಉದಯೋನ್ಮುಖ ಯುವ ಆಟಗಾರ್ತಿಯರಿಂದ ಪೂರಕವಾಗಿದೆ. ದೇವಿಕಾ ಸಿಹಾಗ್ ಮತ್ತು ಇಶಾರಾಣಿ ಬರುವಾ ಕೂಡ ಮಹಿಳಾ ತಂಡದಲ್ಲಿದ್ದಾರೆ. ಭಾರತದ ಏಷ್ಯನ್ ಗೇಮ್ಸ್



ಬ್ಯಾಡ್ಮಿಂಟನ್ ತಂಡವು ಪುರುಷರು, ಮಹಿಳೆಯರು ಮತ್ತು ಮಿಶ್ರ ಡಬಲ್ಸ್ ವಿಭಾಗಗಳಲ್ಲಿ ಸ್ಥಾಪಿತ ಡಬಲ್ಸ್ ಸಂಯೋಜನೆಗಳನ್ನು ಸಹ ಒಳಗೊಂಡಿದೆ. ಸಾತ್ವಿಕ್–ಚಿರಾಗ್ ಜೊತೆಗೆ, ಉದಯೋನ್ಮುಖ ಪುರುಷರ ಡಬಲ್ಸ್ ಜೋಡಿ ಹರಿಹರನ್ ಅಂಶಕರುಣನ್ ಮತ್ತು ಎಂ.ಆರ್. ಅರ್ಜುನ್ ಕೂಡ ಜಪಾನ್ಗೆ ಪ್ರಯಾಣ ಬೆಳೆಸಲಿದ್ದಾರೆ. 2023 ರ ಏಷ್ಯನ್ ಗೇಮ್ಸ್‌ನಲ್ಲಿ ಭಾರತದ ಬೆಳ್ಳಿ ವಿಜೇತ ಪುರುಷರ ತಂಡದ ಭಾಗವಾಗಿದ್ದರು. ಟ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಅವರು ಸಿಮ್ರಾನ್ ಸಿಂಘಿ ಮತ್ತು ಕವಿಪ್ರಿಯಾ ಸೆಲ್ವಂ ಜೋಡಿಯೊಂದಿಗೆ ಭಾರತದ ಮಹಿಳಾ ಡಬಲ್ಸ್ ಸವಾಲನ್ನು ಮುನ್ನಡೆಸಲಿದ್ದಾರೆ. ಧ್ರುವ್ ಕಪಿಲಾ ಮತ್ತು ತನಿಶಾ ಕ್ರಾಸ್ಟೊ ಮಿಶ್ರ ಡಬಲ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಭಾರತವು ಎಲ್ಲಾ ಐದು ವಿಭಾಗಗಳಲ್ಲಿ ಪ್ರಾತಿನಿಧ್ಯವನ್ನು ನೀಡಲಿದೆ ಮತ್ತು ಹಿಂದೆ ಕಾಂಟಿನೆಂಟಲ್ ಶೋಪೀಸ್ನಲ್ಲಿ 13 ಪದಕಗಳನ್ನು ಗೆದ್ದಿರುವ 2026 ರ ಏಷ್ಯನ್ ಗೇಮ್ಸ್ಗೆ ಮುನ್ನಡೆಯಲಿದೆ. 2023 ರ ಏಷ್ಯನ್ ಕ್ರೀಡಾಕೂಟವು ಭಾರತದ ಅತ್ಯಂತ ಯಶಸ್ವಿ ಬ್ಯಾಡ್ಮಿಂಟನ್ ಅಭಿಯಾನವನ್ನು ಒಂದು ಚಿನ್ನ, ಒಂದು ಬೆಳ್ಳಿ ಮತ್ತು ಕೇವಲ ಒಂದು ಕಂಚಿನೊಂದಿಗೆ ಗುರುತಿಸಿದೆ. ಭಾರತದ ಅತ್ಯಧಿಕ ಬ್ಯಾಡ್ಮಿಂಟನ್ ಪದಕಗಳ ಸಂಖ್ಯೆ 1982 ರ ನವದೆಹಲಿ ಏಷ್ಯನ್ ಕ್ರೀಡಾಕೂಟದಲ್ಲಿ ಬಂದಿತು, ಅಲ್ಲಿ ದೇಶವು ಐದು ಕಂಚಿನ ಪದಕಗಳನ್ನು ಗಳಿಸಿತು.

**ಏಷ್ಯನ್ ಗೇಮ್ಸ್ ಬ್ಯಾಡ್ಮಿಂಟನ್ ತಂಡ:**

**ಪುರುಷರ ತಂಡ:** ಲಕ್ಷ್ಯ ಸೇನ್, ಆಯುಷ್ ಶೆಟ್ಟಿ, ಎಚ್ ಎಸ್ ಪ್ರಣಯ್, ಕಿಡಾಂಬಿ ಶ್ರೀಕಾಂತ್, ತರುಣ್ ಮನ್ನೆಪಲ್ಲಿ, ಸಾತ್ವಿಕ್ ಸಾಯಿರಾಜ್ ರಂಕಿರೆಡ್ಡಿ, ಚಿರಾಗ್ ಶೆಟ್ಟಿ, ಹರಿಹರನ್ ಅಂಶಕರುಣನ್, ಎಂಆರ್ ಅರ್ಜುನ್, ಧ್ರುವ ಕಪಿಲ

**ಮಹಿಳಾ ತಂಡ:** ಪಿವಿ ಸಿಂಧು, ಉನ್ನತಿ ಹೂಡಾ, ದೇವಿಕಾ ಸಿಹಾಗ್, ತನ್ವಿ ಶರ್ಮಾ, ಇಶಾರಾಣಿ ಬರುವಾ, ಟ್ರೀಸಾ ಜಾಲಿ, ಗಾಯತ್ರಿ ಗೋಪಿಚಂದ್ ಪುಲ್ಲೇಲ, ಕವಿಪ್ರಿಯಾ ಸೆಲ್ವಂ, ಸಿಮ್ರಾನ್ ಸಿಂಘಿ, ತನಿಶಾ ಕ್ರಾಸ್ಟೊ

**ವೈಯಕ್ತಿಕ ಘಟನೆಗಳು:**

**ಪುರುಷರ ಸಿಂಗಲ್ಸ್:** ಲಕ್ಷ್ಯ ಸೇನ್, ಆಯುಷ್ ಶೆಟ್ಟಿ

**ಮಹಿಳೆಯರ ಸಿಂಗಲ್ಸ್:** ಪಿವಿ ಸಿಂಧು, ಉನ್ನತಿ ಹೂಡಾ

**ಪುರುಷರ ಡಬಲ್ಸ್:** ಸಾತ್ವಿಕ್ ಸಾಯಿರಾಜ್ ರಂಕಿರೆಡ್ಡಿ/ಚಿರಾಗ್ ಶೆಟ್ಟಿ; ಹರಿಹರನ್ ಅಂಶಕರುಣನ್/ಎಂಆರ್ ಅರ್ಜುನ್

**ಮಹಿಳೆಯರ ಡಬಲ್ಸ್:** ಟ್ರೀಸಾ ಜಾಲಿ/ಗಾಯತ್ರಿ ಗೋಪಿಚಂದ್ ಪುಲ್ಲೇಲ; ಕವಿಪ್ರಿಯಾ ಸೆಲ್ವಂ/ಸಿಮ್ರಾನ್ ಸಿಂಘಿ

# ಬ್ರೆಜಿಲ್‌ನ ವಿಶ್ವಕಪ್‌ನ ಆರಂಭಿಕ ಪಂದ್ಯದಿಂದ ಹೊರಗುಳಿದ ನೇಮರ್

**ನ್ಯೂಜೆರ್ಸಿ, ಜೂ.13:** ಶನಿವಾರ ಇಲ್ಲಿ ಮೊರಾಕೊ ವಿರುದ್ಧ ನಡೆಯಲಿರುವ ಈಖಈಂ ವಿಶ್ವಕಪ್ 2026 ರ ಬ್ರೆಜಿಲ್‌ನ ಆರಂಭಿಕ ಪಂದ್ಯದಿಂದ ನೇಮರ್ ಹೊರಗುಳಿಯಲಿದ್ದಾರೆ ಎಂದು ಕಾರ್ಲೊ ಅನ್ಸೆಲೋಟಿ ದೃಢಪಡಿಸಿದ್ದಾರೆ. ರಿಯೊ 2016 ರ ಒಲಿಂಪಿಕ್ ಚಿನ್ನದ ಪದಕ ವಿಜೇತರು ಕಾಲಿನ ಗಾಯದಿಂದ ಹೊರಗುಳಿದಿದ್ದಾರೆ ಮತ್ತು ತಂಡದೊಂದಿಗೆ ಇನ್ನೂ ಪೂರ್ಣ ತರಬೇತಿಗೆ ಮರಳಿಲ್ಲ. olympics.com ಪ್ರಕಾರ, ಜೂನ್ 20 ರಂದು ಹೈಟಿ ವಿರುದ್ಧದ ಬ್ರೆಜಿಲ್ನ ಎರಡನೇ ಗುಂಪು ಪಂದ್ಯಕ್ಕೆ ಅವರ ಲಭ್ಯತೆ ಅನುಮಾನದಲ್ಲಿದೆ ಎಂದು ಅನ್ಸೆಲೋಟಿ ಮಾಧ್ಯಮಗಳಿಗೆ ತಿಳಿಸಿದರು. "ಸಾಧ್ಯವಾದಷ್ಟು ಬೇಗ ಚೇತರಿಸಿಕೊಳ್ಳಲು ನೇಮರ್ ತುಂಬಾ ಶ್ರಮಿಸುತ್ತಿದ್ದಾರೆ" ಎಂದು ಅನ್ಸೆಲೋಟಿ ಮಾಧ್ಯಮಗಳಿಗೆ ತಿಳಿಸಿದರು. "ಅವರು ಚೇತರಿಸಿಕೊಂಡು ಮುಂದಿನ ವಾರ ಗುಂಪಿಗೆ ಸೇರುತ್ತಾರೆ ಎಂಬ ನಿರೀಕ್ಷೆಯಿದೆ. ನಾವು ನೇಮರ್ಗೆ ಕರೆ ಮಾಡಿದಾಗ, ಅವರ ತಾಂತ್ರಿಕ ಗುಣಮಟ್ಟಕ್ಕಾಗಿ ಮಾತ್ರವಲ್ಲ, ಅವರ ಅನುಭವ ಮತ್ತು ಈ ಗುಂಪಿನಲ್ಲಿರುವ ಯುವ ಆಟಗಾರರಿಗೆ ಅವರು ನೀಡಬಹುದಾದ ಮಾದರಿಗಾಗಿಯೂ ನಾವು ಅವರನ್ನು ಕರೆಯುತ್ತೇವೆ."

